ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 14 ಗುರುವಾರ 2023

ಸಂಪುಟ: 44 | ಸಂಚಿಕೆ: 150 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕಾವೇರಿ ನದಿ ನೀರು ಬಿಕ್ಕಟ್ಟು

ನಮ್ಮಲ್ಲೇ ನೀರಿಲ್ಲ...

● ಸರ್ವಪಕ್ಷ ಸಭೆಯ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ವಿವರಣೆ
● ವಸ್ತುಸ್ಥಿತಿ ವಿವರಿಸಿ ಪ್ರಧಾನಿ ಮೋದಿಗೆ ಮತ್ತೊಮ್ಮೆ ಪತ್ರ ಬರೆಯಲು ನಿರ್ಧಾರ
● ಪ್ರಸ್ತುತ ತಮಿಳುನಾಡಿಗೆ ನೀರು ಬಿಡುವ ಪರಿಸ್ಥಿತಿ ಇಲ್ಲವೇ ಇಲ್ಲ; ಸ್ಪಷ್ಟೋಕ್ತಿ



ಬೆಂಗಳೂರು: ಕಳೆದ 123 ವರ್ಷಗಳಲ್ಲೇ ರಾಜ್ಯ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ತೀವ್ರ ಮಳೆ ಕೊರತೆಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ. ಈ ಸಂಬಂಧ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಅವರು ಬುಧವಾರ ಹೇಳಿದ್ದಾರೆ.

ತಮಿಳುನಾಡಿಗೆ ಇನ್ನೂ 15 ದಿನ ನಿತ್ಯ 5 ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಕಾವೇರಿ ನದಿ ನೀರು ನಿರ್ವಹಣಾ ಸಮಿತಿ ಸೂಚಿಸಿರುವ ಹಿನ್ನೆಲೆಯಲ್ಲಿ ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿತ್ತು. ವಿಧಾನಸೌಧದಲ್ಲಿ ನಡೆದ ಸರ್ವಪಕ್ಷ ಸಭೆ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ, ರಾಜ್ಯದಲ್ಲಿ ಬರ ಇದೆ. ಈ ಬಾರಿ ಹೆಚ್ಚಿನ ಪ್ರಮಾಣದಲ್ಲಿ ಮಳೆ ಕೊರತೆಯಾಗಿದೆ. ಡ್ಯಾಂಗಳಲ್ಲಿ ನೀರಿಲ್ಲ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗುವ ಸಾಧ್ಯತೆ ಇದೆ. ಇಂತಹ ಸಂದಿಗ್ಧ ಸ್ಥಿತಿಯಲ್ಲಿ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದರು.

ತಮಿಳುನಾಡಿಗೆ ನಿತ್ಯ 5000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಸಮಿತಿ(CWRC) ಆದೇಶ ನೀಡಿದೆ. ಇದನ್ನು ಮರು ಪರಿಶೀಲನೆ ಮಾಡುವಂತೆ ಮನವಿ ಮಾಡಲು ನಿರ್ಧರಿಸಿದ್ದೇವೆ. ವಸ್ತುಸ್ಥಿತಿ ವಿವರಿಸಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮತ್ತೆ ಪತ್ರ ಬರೆಯುತ್ತೇವೆ ಎಂದು ಸಿಎಂ ತಿಳಿಸಿದರು. ನೀರು ಬಿಡಬೇಕಾ ಬೇಡವಾ ಎಂಬ ಬಗ್ಗೆ ಕಾನೂನು ತಜ್ಞರ ಜತೆ ಚರ್ಚೆ ಮಾಡಲಾಗುವುದು ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರು ▶ 6ನೇ ಪುಟಕ್ಕೆ



“ ರಾಜ್ಯ ಸರ್ಕಾರ ಯಾವುದೇ ನಿರ್ಧಾರ ತೆಗೆದುಕೊಂಡರೂ ಅದಕ್ಕೆ ಬದ್ಧ. ಆದರೆ, 2018ರಲ್ಲೇ ಸುಪ್ರೀಂ ಕೋರ್ಟ್ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಅಂತಿಮ ತೀರ್ಪು ನೀಡಿರುವುದರಿಂದ ಈ ವಿಷಯದಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಎಳೆದು ತಂದು ರಾಜಕೀಯ ಮಾಡುವುದು ಬೇಡ.

–ಪ್ರತಾಪ್ ಸಿಂಹ, ಮೈಸೂರು–ಕೊಡಗು ಸಂಸದ



“ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಬಿಡಬಾರದು. ಪ್ರಧಾನಿ ಬಳಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯುವುದಾಗಿ ಮುಖ್ಯಮಂತ್ರಿಗಳು ಹೇಳಿದ್ದಾರೆ. ಆದರೆ, ಉಭಯ ರಾಜ್ಯದವರನ್ನು ಕರೆದು ಪ್ರಧಾನಿ ಮೋದಿ ಚರ್ಚೆ ಮಾಡುವರೇ? ಅಥವಾ ಕರ್ನಾಟಕ ಮಾತ್ರ ಇಲ್ಲಿನ ಪರಿಸ್ಥಿತಿಯನ್ನು ಪ್ರಧಾನಿಯವರಿಗೆ ತಿಳಿಸುವುದಾ? ಎಂಬುದರ ಬಗ್ಗೆ ಕ್ಲಾರಿಟಿ ಇಲ್ಲ.

– ಸುಮಲತಾ, ಮಂಡ್ಯ ಸಂಸದೆ




ರಾಜ್ಯದಲ್ಲಿ 195 ತಾಲೂಕು ಬರಪೀಡಿತ

● ನೈಸರ್ಗಿಕ ವಿಕೋಪ ಕುರಿತ ಸಂಪುಟ ಉಪ ಸಮಿತಿ ಘೋಷಣೆ
● ಕೂಡಲೇ ಕುಡಿಯುವ ನೀರು ಸೇರಿದಂತೆ ತುರ್ತು ಪರಿಹಾರಕ್ಕೆ 909 ಕೋಟಿ ಬಿಡುಗಡೆ ● ನರೇಗಾ ಯೋಜನೆ ಅಡಿ ನೂರರಿಂದ 150 ಮಾನವ ದುಡಿಯುವ ದಿನಗಳ ಏರಿಕೆ

ಬೆಂಗಳೂರು, ಸೆ.13(ಕೆಎಂಶಿ)– ಮುಂಗಾರು ಮಳೆಯ ವೈಫಲ್ಯದಿಂದ ರಾಜ್ಯದ ಬಹುತೇಕ ಭಾಗ ಬರಪೀಡಿತವೆಂದು ರಾಜ್ಯ ಸರ್ಕಾರ ಘೋಷಣೆ ಮಾಡಿದೆ. ಕುಡಿಯುವ ನೀರು ಹಾಗೂ ಇತರೆ ತುರ್ತು ಪರಿಹಾರಕ್ಕಾಗಿ 909 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿರುವ ಸರ್ಕಾರ, ನರೇಗಾ ಯೋಜನೆಯಡಿ ನೂರು ದಿನದಿಂದ 150 ಮಾನವ ದುಡಿಯುವ ದಿನಗಳಿಗೆ ಹೆಚ್ಚಿಸಲಾಗಿದೆ.

ಕಂದಾಯ ಸಚಿವ ಕೃಷ್ಣಭೈರೇಗೌಡ ಅವರ ಅಧ್ಯಕ್ಷತೆಯಲ್ಲಿ ನಡೆದ ನೈಸರ್ಗಿಕ ವಿಕೋಪ ಕುರಿತ ಸಂಪುಟ ಉಪ ಸಮಿತಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕಂದಾಯ ಸಚಿವ ಕೃಷ್ಣಭೈರೇಗೌಡ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ, ಮೊದಲ ಹಂತದಲ್ಲಿ ರಾಜ್ಯದ 195 ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಿದ್ದೇವೆ ಎಂದರು.



ಇದರ ಬೆನ್ನಲ್ಲೇ ಸಮರೋಪಾದಿಯಲ್ಲಿ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿರುವ ಸರ್ಕಾರ, ಹೆಚ್ಚಿನ ನೆರವು ಕೋರಲು ಮುಂದಿನ ಎಂಟು–ಹತ್ತು ದಿನಗಳಲ್ಲಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ಪ್ರಕೃತಿ ವಿಕೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ನಿಯಮಗಳ ಅಡಿಯಲ್ಲಿ 161 ತಾಲೂಕುಗಳು ಬರಪೀಡಿತವಾಗಿವೆ. ಆದರೆ, ಮಳೆ ಕೊರತೆಯಿಂದ ಇನ್ನೂ 34 ▶ 6ನೇ ಪುಟಕ್ಕೆ

ಬಿಜೆಪಿ ಟಿಕೆಟ್ ಹೆಸರಲ್ಲಿ ಕೋಟಿ ಕೋಟಿ ವಂಚನೆ

ಹಿಂದೂ ಕಾರ್ಯಕರ್ತೆ ಚೈತ್ರಾ ಕುಂದಾಪುರ ಸೇರಿ 6 ಮಂದಿ 10 ದಿನ ಸಿಸಿಬಿ ಕಸ್ಟಡಿಗೆ



ಬೆಂಗಳೂರು: ಉಡುಪಿ ಜಿಲ್ಲೆಯ ಬೈಂದೂರು ಕ್ಷೇತ್ರದ ಬಿಜೆಪಿ ಟಿಕೆಟ್ ನೀಡುವುದಾಗಿ ನಂಬಿಸಿ ಉದ್ಯಮಿ ಗೋವಿಂದ ಬಾಬು ಪೂಜಾರಿ ಎಂಬುವವರಿಗೆ ಕೋಟ್ಯಾಂತರ ರೂಪಾಯಿ ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹಿಂದೂ ಕಾರ್ಯಕರ್ತೆ ಚೈತ್ರಾ ಕುಂದಾಪುರ ಸೇರಿದಂತೆ ಆರು ಆರೋಪಿಗಳನ್ನು ಸೆಪ್ಟೆಂಬರ್ 23ರವರೆಗೆ ಸಿಸಿಬಿ ಕಸ್ಟಡಿಗೆ ಆದೇಶಿಸಲಾಗಿದೆ.

ಪ್ರಕರಣ ಸಂಬಂಧ ಕರಾವಳಿ ಮೂಲದ ಹಿಂದೂ ಕಾರ್ಯಕರ್ತೆ ಚೈತ್ರಾ ಕುಂದಾಪುರ ಸೇರಿದಂತೆ ಶ್ರೀಕಾಂತ್, ರಮೇಶ್, ಗಗನ್, ▶ 5ನೇ ಪುಟಕ್ಕೆ

ಕೇರಳದ ಕೋಯಿಕ್ಕೋಡ್‌ನಲ್ಲಿ ನಿಫಾ ವೈರಸ್‌ನಿಂದ ಇಬ್ಬರು ಸಾವು



ಬೆಂಗಳೂರು: ಕೇಂದ್ರ ಆರೋಗ್ಯ ಸಚಿವಾಲಯ ಮತ್ತು ಕೇರಳ ಆರೋಗ್ಯ ಇಲಾಖೆ ನಿಫಾ ವೈರಸ್‌ನಿಂದ ಕೋಯಿಕ್ಕೋಡ್‌ನಲ್ಲಿ ಇಬ್ಬರು ಸಾವಿಗೀಡಾಗಿರುವುದನ್ನು ದೃಢಪಡಿಸಿದ ನಂತರ, ಕರ್ನಾಟಕ ಆರೋಗ್ಯ ಇಲಾಖೆ ಇದೀಗ ಕೇರಳದ ಗಡಿ ಪ್ರದೇಶಗಳು ಮತ್ತು ಅಲ್ಲಿಂದ ಪ್ರಯಾಣಿಸುವ ಜನರನ್ನು ತಪಾಸಣೆಗೆ ಒಳಪಡಿಸಲು ಯೋಜಿಸುತ್ತಿದೆ.

ಸೆಪ್ಟೆಂಬರ್ 13 ರಂದು ಕೇರಳದ ಗಡಿಗಳಲ್ಲಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಆರೋಗ್ಯ ಅಧಿಕಾರಿಗಳೊಂದಿಗೆ ರಾಜ್ಯವು ವಿಡಿಯೋ ಕಾನ್ಫರೆನ್ಸ್ ನಡೆಸಲಿದೆ. ಇವುಗಳಲ್ಲಿ ಕೊಡಗು, ಚಾಮರಾಜನಗರ, ಮೈಸೂರು ಮತ್ತು ದಕ್ಷಿಣ ಕನ್ನಡ ಸೇರಿವೆ. ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತ ಡಿ. ರಂದೀಪ್ ಮಾತನಾಡಿ, ನಿಫಾ ವೈರಸ್‌ನ ಲಕ್ಷಣಗಳು ಕಂಡುಬರುವ ಯಾವುದೇ ಪ್ರಕರಣಗಳನ್ನು ಪರಿಶೀಲಿಸಲು ರಾಜ್ಯವು ಈ ಪ್ರದೇಶಗಳಲ್ಲಿನ ಸಮುದಾಯ ಆರೋಗ್ಯ ಕೇಂದ್ರಗಳು (ಸಿಎಚ್‌ಸಿ) ಮತ್ತು ಸಾರ್ವಜನಿಕ ಆರೋಗ್ಯ ಕೇಂದ್ರಗಳಿಗೆ (ಪಿಎಚ್‌ಸಿ) ಆದೇಶಿಸುತ್ತದೆ. ಕ್ರಿಯಾ ಯೋಜನೆ ರೂಪಿಸಿ ಸಲಹೆ ಸೂಚನೆಯನ್ನೂ ನೀಡಲಾಗುವುದು ಎಂದರು.

ಕ್ರಿಯಾ ಯೋಜನೆ ಕೇವಲ ಗಡಿ ಜಿಲ್ಲೆಗಳಿಗೆ ಸೀಮಿತವಾಗಿರದೆ, ಇಡೀ ರಾಜ್ಯಕ್ಕೆ, ವಿಶೇಷವಾಗಿ ಸಾರಿಗೆ ಕ್ಷೇತ್ರಗಳಿಗೆ ಸೀಮಿತವಾಗಿರುತ್ತದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. 2021ರಲ್ಲಿ ಕೋಯಿಕ್ಕೋಡ್‌ನಲ್ಲಿ ಕೊನೆಯದಾಗಿ ನಿಫಾ ವೈರಸ್ ಕಾಣಿಸಿಕೊಂಡಿದ್ದು, ಮೈಸೂರು, ಮಂಗಳೂರು, ಚಾಮರಾಜನಗರ ಮತ್ತು ಕೊಡಗಿನಲ್ಲಿ ತೀವ್ರ ಕಟ್ಟೆಚ್ಚರ ವಹಿಸಲಾಗಿತ್ತು. ಆ ಸಮಯದಲ್ಲಿ, ಕರ್ನಾಟಕದಲ್ಲಿ ಕೆಲವು ಶಂಕಿತ ಪ್ರಕರಣಗಳು ಪತ್ತೆಯಾಗಿದ್ದರೂ, ದೃಢಪಟ್ಟಿರಲಿಲ್ಲ.

ರಾಜ್ಯದ ಗಡಿ ಜಿಲ್ಲೆಗಳಲ್ಲಿ ಕಟ್ಟೆಚ್ಚರ!

ಕರ್ನಾಟಕ ಸಮಗ್ರ ರೋಗ ಕಣ್ಗಾವಲು ಕಾರ್ಯಕ್ರಮದ (ಐಡಿಎಸ್‌ಪಿ) ಮಾಜಿ ಯೋಜನಾ ನಿರ್ದೇಶಕ ಡಾ ರಮೇಶ್ ಕೆ. ಕೌಲ್‌ಗುಡ್ ಮಾತನಾಡಿ, ಕೊರೊನಾವೈರಸ್, ನಿಫಾ ವೈರಸ್, ರೇಬಿಸ್ ಅಥವಾ ಕ್ಯಾಸನೂರು ಫಾರೆಸ್ಟ್ ಡಿಸೀಸ್ (ಕೆಎಫ್‌ಡಿ) ಸೇರಿದಂತೆ ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ರೋಗಗಳು ಹೆಚ್ಚುತ್ತಲೇ ಇವೆ ಎಂದರು. ಝೂನೋಟಿಕ್, ಪರಿಸರ ಮತ್ತು ಮಾನವ–ಸಂಬಂಧಿತ ರೋಗಗಳ ಕಡೆಗೆ ಕಣ್ಗಾವಲು ಹೆಚ್ಚಿಸುವ ಅವಶ್ಯಕತೆಯಿದೆ. ಎಲ್ಲಾ ಇಲಾಖೆಗಳು (ಆರೋಗ್ಯ, ಪಶುವೈದ್ಯಕೀಯ ಮತ್ತು ಪರಿಸರ) ಝೂನೋಟಿಕ್ (ಪ್ರಾಣಿಯಿಂದ ಮನುಷ್ಯರಿಗೆ– ಮನುಷ್ಯರಿಂದ ಪ್ರಾಣಿಗಳಿಗೆ ಹರಡುವ) ಕಾಯಿಲೆಗಳ ಸಂಭವವನ್ನು ತೊಡೆದುಹಾಕಲು ಮತ್ತು ಎಲ್ಲಾ ರೋಗಗಳಿಂದ ರಕ್ಷಿಸಲ್ಪಟ್ಟ ಆವಾಸಸ್ಥಾನವನ್ನು ತೊಡೆದುಹಾಕಲು ಕಾರ್ಯತಂತ್ರಗಳನ್ನು ರೂಪಿಸಲು ಒಗ್ಗೂಡಿ ಕೆಲಸ ಮಾಡಬೇಕು ಎಂದು ಹೇಳಿದರು.

ಬಿಜೆಪಿ–ಜೆಡಿಎಸ್ ಮೈತ್ರಿ ಚರ್ಚೆ ನಡೆದಿದೆ; ಮೋದಿ, ಶಾ ನಿರ್ಧಾರ ಅಂತಿಮ



ನವದೆಹಲಿ: ಲೋಕಸಭಾ ಚುನಾವಣೆ–2024ಕ್ಕೆ ಬಿಜೆಪಿ–ಜೆಡಿಎಸ್ ಮೈತ್ರಿ ಚರ್ಚೆ ನಡೆದಿದೆ, ಮೋದಿ, ಅಮಿತ್ ಶಾ ಈ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಯಡಿಯೂರಪ್ಪ ಹೇಳಿದ್ದಾರೆ.

ನರೇಂದ್ರ ಮೋದಿ, ಅಮಿತ್ ಶಾ ಮನಸ್ಸಿನಲ್ಲೇನಿದೆ ಎಂಬುದು ನಮಗೆ ತಿಳಿದಿಲ್ಲ. ಚರ್ಚೆಗಳು ಇನ್ನೂ ನಡೆಯುತ್ತಿವೆ ಎಂದು ಮಾಧ್ಯಮಗಳ ಪ್ರಶ್ನೆಗೆ ಯಡಿಯೂರಪ್ಪ ಪ್ರತಿಕ್ರಿಯೆ ನೀಡಿದ್ದಾರೆ. ಸ್ಥಾನ ಹಂಚಿಕೆ ಬಗ್ಗೆ ಚರ್ಚೆ ನಡೆಸುವುದು ಕೇಂದ್ರ ನಾಯಕರಿಗೆ ಬಿಟ್ಟ ವಿಷಯವಾಗಿದೆ, ಈ ಬಗ್ಗೆ ತಾವು ಹೇಳುವುದು ಏನಿಲ್ಲ, ಸಲಹೆಯನ್ನೂ ನೀಡುವುದಿಲ್ಲ ಎಂದು ಯಡಿಯೂರಪ್ಪ ಹೇಳಿದ್ದಾರೆ.

ಮಾಜಿ ಸಿಎಂ ಯಡಿಯೂರಪ್ಪ ಬಿಜೆಪಿಯ ಸಂಸದೀಯ ಮಂಡಳಿ ಸದಸ್ಯರಾಗಿದ್ದು, ಕೇಂದ್ರ ಚುನಾವಣಾ ಸಮಿತಿಯ ಸಭೆಯಲ್ಲಿ ಚುನಾವಣೆ ತಯಾರಿಗೆ ಸಂಬಂಧಿಸಿದ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ಬಂದಿಳಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 25–26 ಸ್ಥಾನಗಳಲ್ಲಿ ಬಿಜೆಪಿ ಗೆಲ್ಲುವ ಗುರಿ ಹೊಂದಿದ್ದೇವೆ ಇದಕ್ಕಾಗಿ ಜಿಲ್ಲಾ ಮಟ್ಟದ ಕಾರ್ಯಕರ್ತರ ಸಭೆ ರಾಜ್ಯಾದ್ಯಂತ ನಡೆಯಲಿದೆ ಎಂದು ಬಿಎಸ್‌ವೈ ತಿಳಿಸಿದ್ದಾರೆ.

ಇದೇ ವೇಳೆ ಇಂಡಿಯಾ ಮೈತ್ರಿಕೂಟದ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಬಿಎಸ್‌ವೈ, ಮೋದಿ ಎದುರು ಅವರೆಲ್ಲಾ ಜ್ಹೀರೋ, ಕೇಂದ್ರದಲ್ಲಿ ನಮಗೆ ಸ್ಪಷ್ಟ ಬಹುಮತ ಸಿಗಲಿದೆ, ಮೋದಿ ಮತ್ತೊಮ್ಮೆ ಪ್ರಧಾನಿಯಾಗಲಿದ್ದಾರೆ ಎಂದು ಹೇಳಿದ್ದಾರೆ.

ಬೆಂಗಳೂರಲ್ಲಿ ದಕ್ಷಿಣ ಭಾರತ ರಾಜ್ಯಗಳ ಪೋಲೀಸ್ ಮಹಾನಿರ್ದೇಶಕರ ಸಮನ್ವಯ ಸಮ್ಮೇಳನ

ಹೊಸ ಹೊಸ ಅಪರಾಧ ಕೃತ್ಯಗಳ ಪತ್ತೆ, ನಿಯಂತ್ರಣಕ್ಕೆ ಸಮನ್ವಯ ಬಹಳ ಅವಶ್ಯ

● ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ
● ಪೋಲೀಸ್ ಪಡೆಗಳ ಕಾರ್ಯದ ಬಗ್ಗೆ ಶ್ಲಾಘನೆ



ಬೆಂಗಳೂರು,ಸೆ.13(ಕೆಎಂಶಿ)–ತನಿಖಾ ಸಂಸ್ಥೆಗಳು ಅಪರಾಧಿಗಳಿಗಿಂತ ಒಂದು ಹೆಜ್ಜೆ ಮುಂದಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ದಕ್ಷಿಣ ಭಾರತ ರಾಜ್ಯಗಳ ಪೋಲೀಸ್ ಮಹಾನಿರ್ದೇಶಕರ ಸಮನ್ವಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಗಲಿರುಳು ಎನ್ನದೇ ಕಾರ್ಯನಿರ್ವಹಿಸುವ ಪೋಲೀಸ್ ಪಡೆಗಳ ಕಾರ್ಯವನ್ನು ಶ್ಲಾಘಿಸಿದರು. ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೋಲೀಸರು ಕ್ರಿಯಾತ್ಮಕವಾಗಿರಬೇಕು. ಕಳೆದ ಹಲವು ವರ್ಷಗಳಲ್ಲಿ ಸೈಬರ್ ದಾಳಿಗಳು ವಿವಿಧ ರೀತಿಯಲ್ಲಿ ಹೆಚ್ಚಾಗುತ್ತಿದ್ದು, ಆನ್‌ಲೈನ್ ಮೂಲಕ ಮೋಸ ಮಾಡುವುದು ಅಧಿಕವಾಗಿದೆ. ಇದು ವ್ಯಕ್ತಿಗತವಾಗಿ ಹಾನಿಯಲ್ಲದೇ ರಾಷ್ಟ್ರೀಯ ಭದ್ರತೆಗೂ ಅಪಾಯಕಾರಿಯಾಗಿದೆ ಎಂದರು.

“ ಪ್ರತಿ ರಾಜ್ಯವೂ ನಿರ್ದಿಷ್ಟ ಅಪರಾಧವನ್ನು ತಡೆಗಟ್ಟಲು ಒಂದು ಯಶಸ್ವಿ ಮಾದರಿಯ ಕಾರ್ಯತಂತ್ರವನ್ನು ರೂಪಿಸಿರಬಹುದು. ಈ ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ನಾವು ಪರಸ್ಪರರಿಂದ ಹಲವು ವಿಚಾರಗಳನ್ನು ಅರಿತುಕೊಳ್ಳಬಹುದಾಗಿದೆ ಹಾಗೂ ಇತರೆಡೆಗಳಲ್ಲಿ ಯಶಸ್ವಿಯಾದ ಕ್ರಮಗಳನ್ನು ಅನುಸರಿಸಲು ಸಾಧ್ಯವಾಗುತ್ತದೆ. ಈ ತಿಳಿವಳಿಕೆಯ ಹಂಚಿಕೆಯು ಅಪರಾಧಿಗಳ ಕಾರ್ಯತಂತ್ರವನ್ನು ಭೇದಿಸಲು ಸಹಕಾರಿಯಾಗಲಿದೆ. ಆದರೆ ಅಪರಾಧ ತಡೆಗಟ್ಟಲು ಅಂತರರಾಜ್ಯ ಸಮನ್ವಯ ಸಾಧಿಸಲು ಸದೃಢ ನಾಯಕತ್ವ, ಪರಿಣಾಮಕಾರಿ ಸಂವಹನ ಮತ್ತು ಬದ್ಧತೆ ಅತೀ ಅಗತ್ಯವಾಗಿದೆ. ರಾಜ್ಯ ಸರ್ಕಾರಗಳು ಜಂಟಿ ಕಾರ್ಯಾಚರಣೆಗಾಗಿ ಟಾಸ್ಕ್‌ಫೋರ್ಸ್‌ಗಳು, ಜಂಟಿ ತರಬೇತಿ ಕಾರ್ಯಕ್ರಮಗಳು ಹಾಗೂ ಕಾನೂನು ರಕ್ಷಣೆಯ ಸಂಸ್ಥೆಗಳ ನಡುವೆ ಸಭೆಗಳನ್ನು ನಡೆಸುವ ಮೂಲಕ ಸಮನ್ವಯವನ್ನು ಆದ್ಯತೆಯ ಮೇರೆಗೆ ಕೈಗೊಳ್ಳಬೇಕಾಗಿದೆ. –ಸಿದ್ದರಾಮಯ್ಯ, ಮುಖ್ಯಮಂತ್ರಿ

ಅತ್ಯಾಧುನಿಕ ವಿಧಿವಿಜ್ಞಾನ ಸಾಧನಗಳು ಸೈಬರ್ ಅಪರಾಧಿಗಳನ್ನು ಮಟ್ಟಹಾಕಲು ಸಹಾಯಕವಾಗಿವೆ. 2003ರಲ್ಲಿ ಸೈಬರ್ ಅಪರಾಧಗಳ ಪೋಲೀಸ್ ಠಾಣೆಯನ್ನು ತೆರೆದ ಮೊದಲ ರಾಜ್ಯ ಕರ್ನಾಟಕ. ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸೈಬರ್ ಅಪರಾಧ ತಡೆಗಾಗಿ ಸಿಇಎನ್ ಪೋಲೀಸ್ ಠಾಣೆಗಳನ್ನು ▶ 5ನೇ ಪುಟಕ್ಕೆ

ಸೆ.23, 24 ಕೊಡಗು ಮಾಡೆಲ್ ಶಾಲೆಯಲ್ಲಿ ವಿಜ್ಞಾನ ಮೇಳ



ಮೈಸೂರು,ಸೆ.13–ಮೈಸೂರಿನ ವಿದ್ಯಾಶಂಕರ ನಗರದಲ್ಲಿರುವ ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ ಮೈಸೂರು ಪೂರ್ವಕ್ಕೆ ಸೇರಿದ ಕೊಡಗು ಮಾಡೆಲ್ ಶಾಲೆಯಲ್ಲಿ ಸೆಪ್ಟೆಂಬರ್ 23 ಮತ್ತು 24ರಂದು ವಿಜ್ಞಾನ ಮೇಳ ಏರ್ಪಡಿಸಲಾಗಿದೆ.

ಸೆ.23ರಂದು ಬೆಳಗ್ಗೆ 10 ಗಂಟೆಗೆ 'ಸ್ಟಾರ್ ಆಫ್ ಮೈಸೂರ್' ಮತ್ತು 'ಮೈಸೂರು ಮಿತ್ರ' ಪತ್ರಿಕೆಗಳ ವ್ಯವಸ್ಥಾಪಕ ಸಂಪಾದಕ ವಿಕ್ರಂ ಮುತ್ತಣ್ಣ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಡೆಪ್ಯೂಟಿ ಸಿಇಓ ಎಸ್.ಪ್ರವೀಣ್‌ಕುಮಾರ್ ಮತ್ತು ಕೊಡಗು ಮಾಡೆಲ್ ಸ್ಕೂಲ್ ಅಧ್ಯಕ್ಷ ಪುಲಿಯಂಡ ಎಸ್.ದೇವಯ್ಯ ಅವರು ಮೇಳವನ್ನು ಉದ್ಘಾಟಿಸಲಿದ್ದಾರೆ.

10 ಮತ್ತು 12ನೇ ತರಗತಿ ನಂತರ ಮುಂದೇನು? ಎಂಬುದರ ಬಗ್ಗೆ 9ರಿಂದ 12ನೇ ತರಗತಿವರೆಗಿನ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಸೆ.23ರಂದು ಮಧ್ಯಾಹ್ನ 2.30ಕ್ಕೆ ಶೈಕ್ಷಣಿಕ ತರಬೇತುದಾರ ಶಂಕರ್ ಬೆಳ್ಳೂರು ಅವರು ವೃತ್ತಿ ಮಾರ್ಗದರ್ಶನ ನೀಡಲಿದ್ದಾರೆ. 8ರಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಪೇಪರ್ ಮೈಕ್ರೋಸ್ಕೋಪ್‌ಗಳನ್ನು ಸಿದ್ಧಪಡಿಸಿ ವೀಕ್ಷಣೆ ಮಾಡುವ ವಿನೂತನ ವಿಧಾನವನ್ನು ಸಿಎಸ್‌ಐಆರ್ ನಿವೃತ್ತ ವಿಜ್ಞಾನಿ ಕೊಳ್ಳೇಗಾಲ ಶರ್ಮಾ ಅವರು ನಡೆಸಿಕೊಡಲಿದ್ದಾರೆ. ಈ ಮೇಳವು ಮಕ್ಕಳಲ್ಲಿ ಸೃಜನಶೀಲತೆ ಮತ್ತು ವೈಜ್ಞಾನಿಕ ಮನೋಧರ್ಮವನ್ನು ಬೆಳೆಸುವ ವೇದಿಕೆಯಾಗಿದೆ. ವಿದ್ಯಾರ್ಥಿಗಳು ತಮ್ಮ ವೈಜ್ಞಾನಿಕ ಕೌಶಲ್ಯವನ್ನು ಈ ಮೇಳದಲ್ಲಿ ಪ್ರದರ್ಶಿಸಬಹುದಾಗಿದೆ. ವಿಜ್ಞಾನ ಮೇಳದಲ್ಲಿ ಎಲ್ಲಾ ಮಕ್ಕಳು ಹಾಗೂ ಪೋಷಕರು ಭಾಗವಹಿಸಬಹುದಾಗಿದ್ದು, ಆಸಕ್ತಿ ಹೊಂದಿರುವ ಪೋಷಕರು ಮತ್ತು ವಿದ್ಯಾರ್ಥಿಗಳು ಮುಂಚಿತವಾಗಿಯೇ ನೋಂದಾಯಿಸಿಕೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ. ನೋಂದಾವಣೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆಗಳು 6363647704 ಅಥವಾ 9845304360 ಅನ್ನು ಸಂಪರ್ಕಿಸಬಹುದಾಗಿದೆ.

ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥ ಪ್ರೊ.ವೆಂಕಟೇಶ್ ಅಮಾನತಿಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥ ಪ್ರೊ ವೆಂಕಟೇಶ್ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ದಲಿತ ವಿದ್ಯಾರ್ಥಿಗಳ ಒಕ್ಕೂಟದ ವತಿಯಿಂದ ರೌಂಡ್ ಕ್ಯಾಂಟೀನ್ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು,ಸೆ.13(ಜಿಎ)–ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥ ಪ್ರೊ ವೆಂಕಟೇಶ್ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ಮತ್ತು 2ನೇ ವರ್ಷದ ಪಿಜಿ ಪರೀಕ್ಷೆಗಳನ್ನು ಮುಂದೂಡಬೇಕೆಂದು ಒತ್ತಾಯಿಸಿ ದಲಿತ ವಿದ್ಯಾರ್ಥಿಗಳ ಒಕ್ಕೂಟದ ವತಿಯಿಂದ ಮಾನಸಗಂಗೋತ್ರಿಯ ರೌಂಡ್ ಕ್ಯಾಂಟೀನ್ ಬಳಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಪಿಜಿ ಪರೀಕ್ಷೆಗಳನ್ನು ಪ್ರಕಟಿಸಲಾಗಿದೆ. ಆದರೆ, ಪರೀಕ್ಷೆಗಳ ನಡುವೆ ಸಮಯಾವಕಾಶ ನೀಡಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಲು ಸರಿಯಾದ ಸಮಯಾವಕಾಶ ಸಿಗುತ್ತಿಲ್ಲ. ಹೀಗಾಗಿ ಕೂಡಲೇ ಪರೀಕ್ಷೆಗಳನ್ನು ಮುಂದೂಡಬೇಕು ಎಂದು ಒತ್ತಾಯಿಸಿದರು. ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥ ಪ್ರೊ.ವೆಂಕಟೇಶ್ ಅವರಿಂದ ದೌರ್ಜನ್ಯಕ್ಕೆ ಒಳಗಾಗಿ ಆತ್ಮಹತ್ಯೆಗೆ ಮುಂದಾಗಿದ್ದ ಗಗನ್ ಎಂಬ ವಿದ್ಯಾರ್ಥಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ವೆಂಕಟೇಶ್ ಅವರನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಈ ವೇಳೆ ಪ್ರತಿಭಟನಾ ಸ್ಥಳಕ್ಕಾಗಮಿಸಿದ ಕುಲಸಚಿವೆ ಶೈಲಜ ಹಾಗೂ ಪರೀಕ್ಷಾಂಗ ವಿಭಾಗದ ರಿಜಿಸ್ಟ್ರಾರ್ ಮಹಾದೇವಯ್ಯ, ಪ್ರತಿಭಟನಾಕಾರರ ಅಹವಾಲು ಆಲಿಸಿದರು. ಪರೀಕ್ಷೆಯನ್ನು ಮುಂದೂಡುವ ಬಗ್ಗೆ ಪರಿಶೀಲನೆ ನಡೆಸಿ, ಈ ಬಗ್ಗೆ ನಾಳೆ ಹೊಸದಾಗಿ ಪರೀಕ್ಷಾ ವೇಳಾಪಟ್ಟಿ ಸಿದ್ಧಪಡಿಸಲಾಗುವುದು ಮತ್ತು ಪ್ರೊವೆಂಕಟೇಶ್ ಅವರ ಅಮಾನತು ವಿಚಾರಕ್ಕೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸಮಿತಿ ರಚಿಸಲಾಗಿದ್ದು, ತನಿಖೆ ನಂತರ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಪ್ರತಿಯೊಂದು ಕಾರ್ಯಕ್ಕೂ ಭಗವಂತನೇ ಸಾಕ್ಷಿ



ಮೈಸೂರು,ಸೆ.13–ಲೋಕದಲ್ಲಿ ಏನೆಲ್ಲಾ ಕಾರ್ಯಗಳು ನಡೆದರೂ ಅದಕ್ಕೆ ಭಗವಂತನೇ ಕಾರಣ, ಅವನೇ ಸಾಕ್ಷಿ ಎಂದು ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಕೆ.ಅನಂತರಾಮು, ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಶ್ರಾವಣ ಮಾಸದ 25ನೇ ದಿನದ ಪ್ರವಚನ ನೀಡುತ್ತಾ ತಿಳಿಸಿದರು. ಸೂರ್ಯ, ಚಂದ್ರ ಮತ್ತು ಅಗ್ನಿಯನ್ನೇ ನೇತ್ರಗಳನ್ನಾಗಿ ಹೊಂದಿರುವ ಶಿವನು ಸರ್ವ ಲೋಕೈಕ ಸಾಕ್ಷಿ.

ಶಿವತತ್ವ ಚಿಂತಾಮಣಿಯಲ್ಲಿ ಕಾಮದಹನ ಲೀಲೆಯಲ್ಲಿ ಶಿವನ ಕೋಪಕ್ಕೆ ಸಿಲುಕಿ ಭಸ್ಮವಾಗಿರುವ ಮನ್ಮಥನನ್ನು ಕುರಿತು ರತಿ ದುಃಖಕ್ಕೀಡಾಗುತ್ತಾಳೆ. ಆವುಗೆಯ ಬೆಂಕಿ ರತಿಯ ಒಡಲಿನಲ್ಲಿ ಬೇಯುತ್ತಿರುತ್ತದೆ. ಗಿರಿಜೆ ಮತ್ತು ದೇವತೆಗಳನ್ನು ಪರಿಪರಿಯಾಗಿ ಬೇಡಿಕೊಳ್ಳುತ್ತಿರುತ್ತಾಳೆ. ಶಿವನನ್ನು ಕುರಿತು ಲೋಕದ ವಿಷವನ್ನೇ ನುಂಗಿರುವ ಭಗವಂತನೇ, ನನ್ನ ಬದುಕಿಗೆ ಏಕೆ ವಿಷವಿಟ್ಟಿರುವೆ ಕಾಪಾಡು ಎಂದು ಮೊರೆಯಿಡುತ್ತಿರುತ್ತಾಳೆ. ಈ ಪ್ರಸಂಗದಿಂದ ಗಿರಿಜೆಗೆ ಐದು ಬಗೆಯ ದುಃಖಗಳು ಆವರಿಸುತ್ತವೆ. ಲೋಕೋಪಕಾರಕ್ಕಾಗಿ ಬಂದ ಕಾಮನ ದಹನವಾದದ್ದು, ಶಿವನು ತಪಸ್ಸು ಭಂಗವಾದಾಗ ತನ್ನನ್ನು ಗಮನಿಸಲಿಲ್ಲವೆಂಬುದು, ಶಿವ ಮತ್ತೆ ಅಂತರ್ಧ್ಯಾನಿಯಾದದ್ದು, ಅಷ್ಟು ಕಾಲ ತಾನು ಮಾಡಿದ ತಪಸ್ಸು ವ್ಯರ್ಥವಾದದ್ದು, ರತಿಯ ಗೋಳಾದ ದೃಶ್ಯಗಳು ಗಿರಿಜೆಯನ್ನು ಬಾಧಿಸುತ್ತಿರುತ್ತವೆ ಎಂದರು. ವಿದ್ವಾನ್ ಕೃ. ರಾಮಚಂದ್ರ ಕಾವ್ಯ ವಾಚನ ಮಾಡಿದರು. ಸಾಮೂಹಿಕ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಭಕ್ತಾದಿಗಳು ಹಾಗೂ ಆಧ್ಯಾತ್ಮಿಕ ಜಿಜ್ಞಾಸುಗಳು ಪಾಲ್ಗೊಂಡಿದ್ದರು.

ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಕೆಲಸ ಯಾವ ಸರ್ಕಾರಕ್ಕೂ ಕಮ್ಮಿ ಇಲ್ಲ

ಕೆ.ಆರ್. ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅಭಿಮತ



ಮೈಸೂರು, ಸೆ.13(ಜಿಎ)–ಸರ್ಕಾರ ಮಾಡದ ಕೆಲಸವನ್ನು ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಮಾಡುತ್ತಿದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಅಭಿಪ್ರಾಯಪಟ್ಟರು.

ಡಾ.ಶಿವರಾತ್ರಿ ರಾಜೇಂದ್ರ ಶ್ರೀಗಳ 108ನೇ ಜಯಂತಿ ಅಂಗವಾಗಿ ಮೈಸೂರು ಶರಣ ಮಂಡಳಿ ವತಿಯಿಂದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಿಗೆ 'ರಾಜೇಂದ್ರ ಶ್ರೀಗಳ ಸೇವಾ ರತ್ನ ಪ್ರಶಸ್ತಿ' ಪ್ರದಾನ ಮಾಡಲಾಯಿತು.

ಈ ವೇಳೆ ಮಾತನಾಡಿದ ಅವರು, ಅನ್ನ ದಾಸೋಹ, ಅಕ್ಷರ ದಾಸೋಹ, ಎಲ್ಲಕ್ಕಿಂತ ಹೆಚ್ಚಾಗಿ ವಿದ್ಯಾರ್ಥಿ ನಿಲಯಗಳ ಸ್ಥಾಪನೆಯನ್ನು ರಾಜೇಂದ್ರ ಶ್ರೀಗಳು ಕೈಗೊಂಡರು. ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಸಮಸ್ಯೆ ಎದುರಾದಾಗ ಮಠದಲ್ಲಿನ ವಸ್ತುಗಳನ್ನೂ ಮಾರಾಟ ಮಾಡಿದ ಸಾಕಷ್ಟು ಉದಾಹರಣೆಗಳಿವೆ. ಇಂದಿನ ವಾಣಿಜ್ಯೀಕರಣಗೊಂಡಿರುವ ಶಿಕ್ಷಣ ವ್ಯವಸ್ಥೆಯಲ್ಲಿ ಸರ್ಕಾರ ಮಾಡದ ಕೆಲಸವನ್ನು ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಮಾಡಿದೆ. ಇದಕ್ಕೆ ರಾಜೇಂದ್ರ ಶ್ರೀಗಳು ಮುಖ್ಯ ಕಾರಣಕರ್ತರಾಗಿದ್ದರು ಎಂದರು.

ಅವರ ಪರಿಪಾಠ ಈಗಲೂ ಮುಂದುವರಿದಿದ್ದು, ಮೈಸೂರಿನ ಹಿರಿಮೆ ಗರಿಮೆಯಲ್ಲಿ ಸುತ್ತೂರು ಮಠವೂ ಸೇರಿದೆ. ಶರಣ ಮಂಡಳಿಯಿಂದ ಪ್ರಶಸ್ತಿ ಪುರಸ್ಕೃತರಾದವರು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ಬೇರೆಯವರಿಗೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರೊ.ಎ.ಆರ್. ಗಂಗಾಧರ್, ಡಾ.ವಿ.ಲಕ್ಷ್ಮೀನಾರಾಯಣ್, ಬಿ.ಎಸ್. ತುಳಸಿರಾಮು, ಕೆ.ಬಿ.ಕುಮಾರ್, ಎಚ್.ಎಸ್.ವೀರೇಶ್, ಎಸ್.ಮೂರ್ತಿ ಅವರಿಗೆ 'ರಾಜೇಂದ್ರ ಶ್ರೀಗಳ ಸೇವಾ ರತ್ನ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಉದ್ಯಮಿ ಎ.ಪಿ.ನಾಗೇಶ್, ಮಂಗಳೂರು ವಿವಿ ಸಿಂಡಿಕೇಟ್ ಸದಸ್ಯ ಪ್ರೊ. ಕೆ.ಸಿ. ಮಹದೇಶ್, ಮಂಡಳಿ ಅಧ್ಯಕ್ಷ ಮೂಗೂರು ನಂಜುಂಡಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಸೆ.17ರಂದು ಶ್ರೀ ವಿಶ್ವಕರ್ಮ ಜಯಂತಿ



ಮೈಸೂರು,ಸೆ.13–ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೆ.17ರಂದು ಬೆಳಗ್ಗೆ 11 ಗಂಟೆಗೆ ಶ್ರೀ ವಿಶ್ವಕರ್ಮ ಜಯಂತಿಯನ್ನು ಕರ್ನಾಟಕ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತಿಯಲ್ಲಿ, ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಗೌರವ ಉಪಸ್ಥಿತಿಯಲ್ಲಿ, ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ್ ಪ್ರಸಾದ್ ಹಾಗೂ ಸುಮಲತಾ ಅಂಬರೀಶ್ ಭಾಗವಹಿಸಲಿದ್ದಾರೆ. ಸಮಾರಂಭದ ಅತಿಥಿಗಳಾಗಿ ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಅನಿಲ್‌ಕುಮಾರ್.ಸಿ, ರವಿಶಂಕರ್.ಡಿ, ಜಿ.ಡಿ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ತಿನ ಶಾಸಕರಾದ ಮರಿತಿಬ್ಬೇಗೌಡ, ಹೆಚ್. ವಿಶ್ವನಾಥ್, ಡಾ. ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ಸಿ.ಎನ್.ಮಂಜೇಗೌಡ, ಉಪ ಮೇಯರ್ ಡಾ.ಜಿ.ರೂಪ ಹಾಗೂ ಮುಖ್ಯ ಭಾಷಣಕಾರರಾಗಿ ಮುಕ್ತ ವಿಶ್ವವಿದ್ಯಾನಿಲಯದ ಇತಿಹಾಸ ಮತ್ತು ಪುರಾತತ್ವ ವಿಭಾಗದ ಶೆಲ್ವಪಿಳ್ಳೆ ಅಯ್ಯಂಗಾರ್ ಅವರು ಭಾಗವಹಿಸುವರು.

ನಾಳೆ ಹಲವೆಡೆ ವಿದ್ಯುತ್ ವ್ಯತ್ಯಯ



ಮೈಸೂರು, ಸೆ.13– ಸೆಪ್ಟೆಂಬರ್ 15ರಂದು ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ನಿರ್ವಹಣಾ ಕೆಲಸದ ನಿಮಿತ್ತ ಬೆಳಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ಮದ್ದೂರು, ಮದ್ದೂರುಹುಂಡಿ, ಚುಂಚರಾಯನಹುಂಡಿ, ಎಸ್ ಕಲ್ಲಹಳ್ಳಿ, ಸೋಲಿಗರ ಕಾಲೋನಿ, ಗುಮ್ಮಚನಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ವಿ.ವಿ ಮೊಹಲ್ಲಾ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲಾವಿದನ ಕೈಯ್ಯಲ್ಲಿ ಅರಳಿದ ಅಭಿಮನ್ಯು, ಅಂಬಾರಿ...!





ಮೈಸೂರು, ಸೆ.13(ಜಿಎ)–ಮೈಸೂರಿನ ಕಲಾವಿದನ ಕೈಯಲ್ಲಿ ಅರಳಿದ ಅಂಬಾರಿ ಹೊರುವ ಅಭಿಮನ್ಯು ಮತ್ತು ಚಿನ್ನದ ಅಂಬಾರಿಯ ಕಲಾಕೃತಿ ಕಣ್ಮನ ಸೆಳೆಯುತ್ತಿದೆ.

ಮೈಸೂರಿನ ಕುಕ್ಕರಹಳ್ಳಿಯ ಕಲಾವಿದ ಮಂಜು ಅವರು ತಮ್ಮ ಆರ್ಟ್ ಜೋನ್ ಸಂಸ್ಥೆ ವತಿಯಿಂದ ದಸರಾ ಮಹೋತ್ಸವದಲ್ಲಿ ಎಲ್ಲರ ಗಮನ ಸೆಳೆಯುವ ಅಂಬಾರಿ ಹೊರುವ ಅಭಿಮನ್ಯು ಮತ್ತು ಅಂಬಾರಿಯ ಆಕೃತಿಗಳನ್ನು ರೂಪಿಸಿದ್ದು, ಎಲ್ಲರ ಆಕರ್ಷಿಸುತ್ತಿದೆ.

ತುಮಕೂರು ಮೂಲದ ವ್ಯಕ್ತಿಯೊಬ್ಬರು ಮಂಜು ಅವರಿಗೆ ಈ ರೀತಿಯ ಆಕೃತಿಗಳನ್ನು ಮಾಡಿಕೊಡುವಂತೆ ಬೇಡಿಕೆ ಸಲ್ಲಿಸಿದ್ದು, ಅದರಂತೆ ಕಳೆದ 11 ದಿನಗಳಿಂದ ಕಲಾವಿದ ಮಂಜು ಸೇರಿದಂತೆ 6 ಮಂದಿಯ ತಂಡವೂ ಪಿಒಪಿ, ಸಿಮೆಂಟ್, ಕಬ್ಬಿಣ, ಇಟ್ಟಿಗೆ ಮತ್ತು ರಾಸಾಯನಿಕ ಪದಾರ್ಥಗಳನ್ನು ಬಳಸಿಕೊಂಡು ಅದ್ಭುತವಾಗಿ ಆಕೃತಿಗಳನ್ನು ರೂಪಿಸಿದ್ದು, ಸೆ.14ರಂದು ತುಮಕೂರಿಗೆ ರವಾನಿಸಲಿದ್ದಾರೆ.

ಕಲಾವಿದ ಮಂಜು ಮಾತನಾಡಿ, ತುಮಕೂರಿನ ವ್ಯಕ್ತಿಯೊಬ್ಬರು ತಮ್ಮ ಮಗನ ಶಾಲೆಯಲ್ಲಿ ಪ್ರದರ್ಶನಕ್ಕೆ ಇಡಲು ಈ ರೀತಿ ಆಕೃತಿ ಮಾಡಿಕೊಡುವಂತೆ ಕೇಳಿದ್ದರು. 2 ಲಕ್ಷ ರೂ. ವೆಚ್ಚದಲ್ಲಿ ಇವುಗಳನ್ನು ಮಾಡಲಾಗಿದೆ. ಎತ್ತುಗಳ ಆಕೃತಿಯನ್ನು ಮಳವಳ್ಳಿಯ ಪೆಟ್ರೋಲ್ ಬಂಕ್‌ಗಳಲ್ಲಿ ಅಲಂಕಾರಕ್ಕೆ ಬಳಸಲು ಮಾಡಲಾಗಿದೆ ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮೆಲ್ಲಹಳ್ಳಿ ಶಾಲೆಯಲ್ಲಿ ವಲಯ ಮಟ್ಟದ ಪ್ರತಿಭಾ ಕಾರಂಜಿ



ಮೈಸೂರು: ಶಿಕ್ಷಕರು ಮಕ್ಕಳಿಗೆ ಬರೀ ಪಠ್ಯ ವಸ್ತುವನ್ನು ಕಲಿಸಲು ಸೀಮಿತವಾಗದೆ, ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ವಿಚಾರಗಳನ್ನು ಸಹ ಕಲಿಸಬೇಕು. ಅವರಲ್ಲಿ ಸುಪ್ತವಾಗಿ ಹುದುಗಿರುವ ಪ್ರತಿಭೆಯ ವಿಕಾಸಕ್ಕೂ ಶ್ರಮಿಸಬೇಕು ಎಂದು ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ. ಸತೀಶ್ ಜವರೇಗೌಡ ಕರೆ ನೀಡಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಮೆಲ್ಲಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ 'ಮೆಲ್ಲಹಳ್ಳಿ ವಲಯ ಮಟ್ಟದ ಪ್ರತಿಭಾ ಕಾರಂಜಿ' ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಒಂದಲ್ಲ ಒಂದು ರೀತಿಯ ಪ್ರತಿಭೆಯಿರುತ್ತದೆ. ಅದು ಅರಳಲು ಶಿಕ್ಷಕರು ಪೂರಕ ವಾತಾವರಣ ಕಲ್ಪಿಸಬೇಕು ಎಂದರು.

ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಹೋಬಳಿ ಕಾರ್ಯದರ್ಶಿ ಕುಮಾರ್ ಮಾತನಾಡಿ, ವಿದ್ಯಾರ್ಥಿಗಳು ಎಲ್ಲಾ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಸೋಲು–ಗೆಲುವಿನ ಬಗ್ಗೆ ಚಿಂತಿಸಬಾರದು. ಸ್ಪರ್ಧಾ ಮನೋಭಾವದಿಂದ ಪಾಲ್ಗೊಳ್ಳುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಬೇಕು ಎಂದು ನುಡಿದರು.

ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಂಚಪ್ಪ ಅಧ್ಯಕ್ಷತೆ ವಹಿಸಿದ್ದರು. ಸದಸ್ಯರಾದ ಶಂಕರ್ ಮತ್ತು ನೀಲಾ, ಮೆಲ್ಲಹಳ್ಳಿ ಕ್ಲಸ್ಟರ್ ಸಿ.ಆರ್.ಪಿ. ದೀಪು, ನಿಕಟಪೂರ್ವ ಸಿ.ಆರ್.ಪಿ. ಲೋಕೇಶ್ ಪುರಿಗಾಲಿ, ಮುಖ್ಯ ಶಿಕ್ಷಕಿ ಪಿ.ಎನ್.ವೀಣಾ ಉಪಸ್ಥಿತರಿದ್ದರು. ಗ್ರಾಪಂ ಅಧ್ಯಕ್ಷೆ ನಾಗರತ್ನ ಚಂದ್ರಕುಮಾರ್ ಸ್ಪರ್ಧೆಗಳ ನಡುವೆ ಆಗಮಿಸಿ, ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ನೀರಿನ ಮಟ್ಟ

ಕೆಆರ್‌ಎಸ್ ಅಣೆಕಟ್ಟು	ಕಬಿನಿ ಅಣೆಕಟ್ಟು	ಹಾರಂಗಿ ಅಣೆಕಟ್ಟು
ಗರಿಷ್ಠ ಮಟ್ಟ 124.80 ಅಡಿ	ಗರಿಷ್ಠ ಮಟ್ಟ 2284.00 ಅಡಿ	ಗರಿಷ್ಠ ಮಟ್ಟ 2859.00 ಅಡಿ
ಇಂದಿನ ಮಟ್ಟ 97.74 ಅಡಿ	ಇಂದಿನ ಮಟ್ಟ 2776.08 ಅಡಿ	ಇಂದಿನ ಮಟ್ಟ 2858.52 ಅಡಿ
ಹಿಂದಿನ ವರ್ಷದ ಮಟ್ಟ 124.64 ಅಡಿ	ಹಿಂದಿನ ವರ್ಷದ ಮಟ್ಟ 2283.40 ಅಡಿ	ಹಿಂದಿನ ವರ್ಷದ ಮಟ್ಟ 2857.83 ಅಡಿ
ನಿನ್ನೆಯ ಮಟ್ಟ 97.97 ಅಡಿ	ನಿನ್ನೆಯ ಮಟ್ಟ 2276.00 ಅಡಿ	ನಿನ್ನೆಯ ಮಟ್ಟ 2858.46 ಅಡಿ

ಮಹಿಳಾ ಠಾಣೆ ಇನ್ಸ್‌ಪೆಕ್ಟರ್ ಮಮತಾರಿಂದ ಆಸಕ್ತ ಮಹಿಳೆಯರಿಗೆ ಉಪಯುಕ್ತ ಮಾಹಿತಿ



ಮೈಸೂರು,ಸೆ.13–ಮಹಿಳಾ ಪೊಲೀಸ್ ಠಾಣೆಯ ಸೇವೆಗಳು ಮತ್ತು ಕಾರ್ಯ ಚಟುವಟಿಕೆಗಳ ಕುರಿತು ಮೈಸೂರಿನ ಜೆಎಸ್‌ಎಸ್ ರೇಡಿಯೋ 91.2 ಎಫ್.ಎಂ. ಕೇಂದ್ರವು ಆಯೋಜಿಸಿದ್ದ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮದಲ್ಲಿ ಮೈಸೂರು ಮಹಿಳಾ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಶ್ರೀಮತಿ ವಿ.ಡಿ. ಮಮತಾ ಅವರು ಪಾಲ್ಗೊಂಡು, ಕೇಳುಗರ ಪ್ರಶ್ನೆಗಳಿಗೆ ಉತ್ತರಿಸಿದರು.

ಮಹಿಳಾ ಪೊಲೀಸ್ ಠಾಣೆಯ ಪ್ರಮುಖ ಉದ್ದೇಶಗಳು, ಕಾರ್ಯ ಚಟುವಟಿಕೆಗಳು ಹಾಗೂ ಸಾಮಾನ್ಯ ಪೊಲೀಸ್ ಠಾಣೆಗೂ, ಮಹಿಳಾ ಪೊಲೀಸ್ ಠಾಣೆಗೂ ಇರುವ ವ್ಯತ್ಯಾಸಗಳು, ನಿರ್ಗತಿಕ ಅಥವಾ ಮನೆಯಿಂದ ದೂಡಲ್ಪಟ್ಟ ಮಹಿಳೆಯರಿಗೆ ಸೇವಾ ಸಂಪರ್ಕಗಳು, ದೂರು ದಾಖಲಿಸುವ ನಿಯಮಗಳು, ಪ್ರಕ್ರಿಯೆಗಳು, ಮಹಿಳಾ ದೌರ್ಜನ್ಯ ತಡೆಗೆ ಹಾಗೂ ರಕ್ಷಣೆಗೆ ಇರುವ ಕಾನೂನು ಸುವ್ಯವಸ್ಥೆಗಳ ಕುರಿತು ಕಾರ್ಯಕ್ರಮದಲ್ಲಿ ಸುದೀರ್ಘವಾಗಿ ಮಾಹಿತಿ ಹಂಚಿಕೊಂಡರು.

ಸಾರ್ವಜನಿಕರ ಕರೆಗಳಿಗೆ ಪ್ರತಿಕ್ರಿಯಿಸಿ, ಅವರಿಗೆ ಸಾಂತ್ವನದ ಮಾತುಗಳನ್ನು ಹೇಳಿ, ಕೌಟುಂಬಿಕ ಕಲಹಗಳ ನಿವಾರಣೆಗೆ ಇರುವ ಮಾರ್ಗಗಳ ಕುರಿತು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಮೈಸೂರು, ಪಿರಿಯಾಪಟ್ಟಣ, ಶ್ರೀರಂಗಪಟ್ಟಣ ಹಾಗೂ ಹೆಚ್.ಡಿ. ಕೋಟೆ ಒಳಗೊಂಡಂತೆ 10ಕ್ಕೂ ಹೆಚ್ಚು ಮಹಿಳೆಯರು ತಮ್ಮ ಸಮಸ್ಯೆಗಳನ್ನು ಹೇಳಿ, ಸಲಹೆಗಳನ್ನು ಪಡೆದರು. ಕಾರ್ಯಕ್ರಮವನ್ನು ಸಂಯೋಜಕ ಶಿವಕುಮಾರ್ ನಡೆಸಿಕೊಟ್ಟರು. ಸಹಾಯಕ ರಮೇಶ್ ಮತ್ತು ಕನ್ಯಾಕುಮಾರಿ ಹಾಜರಿದ್ದರು.

ಸೆ.16, ಶ್ರೀ ಶರಣ ನುಲಿಯ ಚಂದಯ್ಯ ಜಯಂತಿ

ಮೈಸೂರು,ಸೆ.13–ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೆ.16ರಂದು ಮಧ್ಯಾಹ್ನ 12 ಗಂಟೆಗೆ ಶ್ರೀ ಶರಣ ನುಲಿಯ ಚಂದಯ್ಯನವರ 916ನೇ ಜಯಂತಿ ಕಾರ್ಯಕ್ರಮವನ್ನು ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತಿಯಲ್ಲಿ ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ರೇಷ್ಮೆ ಸಚಿವ ಕೆ.ವೆಂಕಟೇಶ್ ಉಪಸ್ಥಿತಿಯಲ್ಲಿ ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ್ ಪ್ರಸಾದ್ ಹಾಗೂ ಸುಮಲತಾ ಅಂಬರೀಶ್ ಭಾಗವಹಿಸಲಿದ್ದಾರೆ. ಸಮಾರಂಭದ ಅತಿಥಿಗಳಾಗಿ ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಅನಿಲ್ ಕುಮಾರ್, ರವಿಶಂಕರ್, ಜಿ.ಡಿ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ತಿನ ಶಾಸಕರಾದ ಮರಿತಿಬ್ಬೇಗೌಡ, ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ಸಿ.ಎನ್.ಮಂಜೇಗೌಡ, ಉಪ ಮೇಯರ್ ಡಾ.ಜಿ.ರೂಪ ಹಾಗೂ ಮುಖ್ಯ ಭಾಷಣಕಾರರಾಗಿ ನಳರಾಜ್ ಭಾಗವಹಿಸುವರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.9.2023 ಗುರುವಾರ, ಮಳೆ ನಕ್ಷತ್ರ: ಉತ್ತರಾ 14.09.2023 ರಿಂದ 27.09.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ಅಮಾವಾಸ್ಯೆ, ನಕ್ಷತ್ರ: ಪುಬ್ಬ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

- **ಶ್ರೀ ಕಲಾನಿಕೇತನ ಕಾಲೇಜ್ ಆಫ್ ವಿಷುಯಲ್ ಆರ್ಟ್ :** ಎಂ.ಎಲ್. ಪವನ್‌ಕುಮಾರ್ ಅವರಿಂದ ಸ್ಥಿರ ಚಿತ್ರಣ ಕಲಾ ಪ್ರದರ್ಶನ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ಬೆಳಗ್ಗೆ 10 ರಿಂದ.
- **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್:** ಶ್ರೀ ವೀರಭದ್ರೇಶ್ವರ ಸ್ವಾಮಿಯ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಆವರಣ, ಡಿ.ಬನುಮಯ್ಯ ರಸ್ತೆ, ಕೆಆರ್ ಮೊಹಲ್ಲಾ, ಬೆಳಗ್ಗೆಯಿಂದ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ ಮತ್ತು ಮಹಿಳೆಯರಲ್ಲಿ ಋತುಬಂಧ ಸಮಸ್ಯೆಗಳು ಕುರಿತು ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.
- **ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ :** ಬಿಸಿಎ ಮತ್ತು ಹೈಟೆಕ್ ಕಂಪ್ಯೂಟರ್ ಲ್ಯಾಬೋರೇಟರಿ ಉದ್ಘಾಟನಾ ಸಮಾರಂಭ, ಉದ್ಘಾಟನೆ : ರಾಜವಂಶಸ್ಥ ಶ್ರೀ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಮುಖ್ಯ ಅತಿಥಿಗಳು : ಪ್ರಾಧ್ಯಾಪಕ ಡಾ. ಡಿ.ಎಸ್. ಗುರು, ಗೌರವ ಅತಿಥಿಗಳು : ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್‌ನ ಟ್ರಸ್ಟಿಗಳು ಮತ್ತು ಸದಸ್ಯರು, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.
- **ಶ್ರೀ ಉತ್ತರಾದಿ ಮಠ, ರೋಗ ಮೋಚನ ಶ್ರೀ ಧನ್ವಂತರಿ ಸನ್ನಿಧಾನ:** ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀ ಪಾದಂಗಳವರ ಆಜ್ಞೆ ಹಾಗೂ ಅನುಗ್ರಹದಿಂದ ಶ್ರೀ ಧನ್ವಂತರಿ ಜಯಂತಿ ಪ್ರಯುಕ್ತ ಸಪ್ತ ರಾತ್ರೋತ್ಸವ, ಬೆಳಗ್ಗೆ ಶ್ರೀ ಧನ್ವಂತರಿ ದೇವರಿಗೆ ಗೆಜ್ಜೆವಸ್ತ್ರ ಅಲಂಕಾರ, ಸಂಜೆ ಅಶ್ವ ವಾಹನೋತ್ಸವ, ಶ್ರೀ ಭಗವದ್ಗೀತಾ ಅಭಿಯಾನ, ಪಂಡಿತ್ ಬಾದರಾಯಣಾಚಾರ್ಯ ಅವರಿಂದ ಭಗವದ್ಗೀತೆ ಅಧ್ಯಾಯ–11 ಕುರಿತು ಉಪನ್ಯಾಸ, ಸ್ಥಳ: ರೋಗ ಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಉತ್ತರಾದಿ ಮಠ, ಸಂಜೆ 6ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಮೊಬೈಲ್ ಬಳಸೋಣ ಬನ್ನಿ–ಪ್ರಪಂಚಕ್ಕೆ ಬೆಳಕಿಂಡಿಯಾದ ಸಾಧನದ ಸದುಪಯೋಗ ಕುರಿತ ಬಾನುಲಿ ಸರಣಿ. ಪ್ರಸ್ತುತಿ–ಮೈಸೂರಿನ ಎನ್.ರವಿಶಂಕರ್, 6.40 ಪದ ಸಂಸ್ಕೃತಿ, ಪ್ರಸ್ತುತಿ–ಕೆ.ಎಲ್ ಪದ್ಮಿನಿ ಹೆಗಡೆ, 7.15 ಭಾವಗೀತೆ, 8.30 ಹಾಡು ಹೇಳಿದ ಕಥೆ, ಪ್ರಸ್ತುತಿ–ಮೈಸೂರು ಉಮೇಶ್, 10.00 ಡಿ.ಕೆ.ಪಟ್ಟಮ್ಮಾಳ್–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆ–ಹೆಚ್.ಎ. ನಳಿನಿ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 4.00 ಜನಪದ ಸಂಗೀತ, 4.30 ವಿಜ್ಞಾನ ಭಾರತಿ–2023ಕ್ಕೆ ಹೊಸ ತಂತ್ರಜ್ಞಾನ ಪ್ರವೃತ್ತಿಗಳು ಕುರಿತು ಮಾತನಾಡುತ್ತಾರೆ ಪಿ.ಚಂದ್ರಶೇಖರ್, ನಿಸರ್ಗದಲ್ಲಿ ಪರಾಗ ಸ್ಪರ್ಶಕಗಳ ಪ್ರಾಮುಖ್ಯತೆ ಕುರಿತು ಮಾತನಾಡುತ್ತಾರೆ ಡಾ.ಎನ್.ನಂದಿನಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಹನಿ ನೀರಾವರಿ ಪ್ರಾಮುಖ್ಯತೆ ಕುರಿತು ಸಂವಾದದಲ್ಲಿ ಭಾಗವಹಿಸುತ್ತಾರೆ ಪಾಂಡುರಂತ ವಿಠಲ ಜೋಶಿ ಹಾಗೂ ಕೃಷಿಕ ರಮೇಶ್, ಪ್ರಸ್ತುತಿ–ಎನ್.ಕೇಶವ ಮೂರ್ತಿ, 7.45 ಗಣೇಶ ಚತುರ್ಥಿಯ ಸಂಬಂಧವಾಗಿ ವಿಶೇಷ ಸಂಗೀತ ವೈವಿಧ್ಯ, ಪ್ರಸ್ತುತಿ–ಶಾರದಾ ಕಲಾ ಕೇಂದ್ರದ ವಿದ್ಯಾರ್ಥಿಗಳು. ಸಂಗೀತ ನಿರ್ದೇಶನ–ವಿದುಷಿ ರೇಖಾ ವೆಂಕಟೇಶ್, 8.00 ಯುವವಾಣಿ, 10.00 ಪಶು ಸಂಪತ್ತು ಮಾಲಿಕೆಯಲ್ಲಿ ನಾಟಕ "ಎಚ್ಚರ ಇದು ರೇಬೀಸ್", ರಚನೆ–ಡಾ. ಕೆ.ಎಂ.ನಾಗರಾಜ್ ಹಾಗೂ ಡಾ.ಟಿ.ಶಶಿಧರ, ನಿರ್ದೇಶನ ಹಾಗೂ ನಿರ್ಮಾಣ–ಪ್ರಭುಸ್ವಾಮಿ ಮಳಿಮಠ

- **ಶ್ರೀ ಸುತ್ತೂರು ಮಠ (ಮೈಸೂರು):** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಕೆ.ಅನಂತರಾಮು ಅವರಿಂದ ಲಕ್ಕಣ್ಣ ದಂಡೇಶ ವಿರಚಿತ ಶಿವತತ್ವ ಚಿಂತಾಮಣಿ ಕುರಿತು ಪ್ರವಚನ, ವಿದ್ವಾನ್ ಕೃ.ರಾಮಚಂದ್ರ ಅವರಿಂದ ವಾಚನ, ಸ್ಥಳ: ಮಠದ ಆವರಣ, ಸಂಜೆ 6.30ಕ್ಕೆ.
- **ಚಿನ್ಮಯ ಮಿಷನ್ :** ಪಂಡಿತ್ ಕೃಷ್ಣರಾವ್ ಪ್ರಕಾಶ್ ಅವರಿಂದ ಪತಂಜಲಿಯ ಯೋಗ ಸೂತ್ರಗಳು – ಸಮಾಧಿ ಪಾದ ಕುರಿತು ಉಪನ್ಯಾಸ, ಸ್ಥಳ: ಶ್ರೀ ಚಿನ್ಮಯ ಮಿಷನ್, ಆಶ್ರಮದ ದತ್ತ ಸನ್ನಿಧಿ, ಯಜ್ಞಶಾಲೆ, ಶ್ರೀ ಚಿನ್ಮಯ ಮಿಷನ್, ಗೋಕುಲಂ, ಸಂಜೆ 6ಕ್ಕೆ.
- **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

ಶ್ರೀ ಸುತ್ತೂರು ಕ್ಷೇತ್ರ, ನಂಜನಗೂಡು ತಾಲೂಕು

- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ:** ಶ್ರಾವಣಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಮ್ಮುಖ: ಮುಡುಕುತೊರೆ ಶ್ರೀ ತೋಪಿನಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಅಧ್ಯಕ್ಷತೆ: ಮೈಸೂರು ಉಪವಿಭಾಗಾಧಿಕಾರಿ ಕೆ.ಆರ್.ರಕ್ಷಿತ್, ಸಮಾರೋಪ ಭಾಷಣ: ಅಪರ ಪೊಲೀಸ್ ಅಧೀಕ್ಷಕಿ ಡಾ.ನಂದಿನಿ, ಸಂಜೆ 6ಕ್ಕೆ.

ಇಲ್ಲಿ ಅಭಿವೃದ್ಧಿ ಅಧಿಕಾರಿಗಳೇ ನಗರಪಾಲಿಕೆ ವಲಯ ಕಚೇರಿಯ ವಲಯಾಧಿಕಾರಿಗಳು!

ಮೈಸೂರು,ಸೆ. 13 (ಆರ್‌ಕೆ) – ಮೈಸೂರು ಮಹಾ ನಗರಪಾಲಿಕೆ ಎರಡು ವಲಯ ಕಚೇರಿಗಳಲ್ಲಿ ಕೆಎಎಸ್ ಅಧಿಕಾರಿಗಳು ನಿರ್ವಹಿಸಬೇಕಾದ ವಲಯಾಧಿಕಾರಿ ಹುದ್ದೆಯನ್ನು ಅಭಿವೃದ್ಧಿ ಅಧಿಕಾರಿಗಳು ನಿರ್ವಹಿಸುತ್ತಿದ್ದಾರೆ. ಒಟ್ಟು 9 ವಲಯ ಕಚೇರಿಗಳ ಪೈಕಿ ರಾಜ್ಯ ಸರ್ಕಾರ 7ಕ್ಕೆ ಮಾತ್ರ ಕೆಎಎಸ್ ಅಧಿಕಾರಿಗಳನ್ನು ಮಂಜೂರು ಮಾಡಿದೆ. ಮತ್ತೆ ಎರಡನ್ನು ಮರೆತಿರುವುದರಿಂದ ಈ ಅವಾಂತರಕ್ಕೆ ಕಾರಣ ಎಂದು ಹೇಳಲಾಗಿದೆ.

ಮೈಸೂರು ಪಾಲಿಕೆಯಲ್ಲಿ ವಲಯ ಕಚೇರಿಗಳು ಆರಂಭವಾದಾಗಿನಿಂದಲೂ ಶಾರದಾದೇವಿನಗರದಲ್ಲಿರುವ ವಲಯ ಕಚೇರಿ 3 ಮತ್ತು ಉದಯಗಿರಿಯಲ್ಲಿರುವ ವಲಯ ಕಚೇರಿ–8ರಲ್ಲಿ ಅಭಿವೃದ್ಧಿ ಅಧಿಕಾರಿಗಳೇ ಪ್ರಭಾರ ವಲಯಾಧಿಕಾರಿಗಳು. ವಲಯ ಕಚೇರಿ–3ರಲ್ಲಿ ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ ಪ್ರಭಾರ ವಲಯಾಧಿಕಾರಿಯಾಗಿದ್ದರೆ, ವಲಯ ಕಚೇರಿ–8ರಲ್ಲಿ ಅಭಿವೃದ್ಧಿ ಅಧಿಕಾರಿ ನಾಗೇಶ್‌ರಿಗೆ ವಲಯಾಧಿಕಾರಿಯ ಪ್ರಭಾರ ವಹಿಸಲಾಗಿದೆ.

ಹಿನ್ನೆಲೆ: ಕೇಂದ್ರ ಪುರಸ್ಕೃತ ಜೆ–ನರ್ಮ್ ಯೋಜನೆಯನ್ನು ಮೊಟ್ಟ ಮೊದಲು ಮೈಸೂರಿಗೆ ಪರಿಚಯಿಸಿದಾಗ 2007ರಲ್ಲಿ ಮೈಸೂರು ಮಹಾ ನಗರಪಾಲಿಕೆಯ ಪ್ರಭಾರ ಆಯುಕ್ತರಾಗಿದ್ದ ಅಂದಿನ ಜಿಲ್ಲಾಧಿಕಾರಿ ಪಿ.ಮಣಿವಣ್ಣನ್ ಮೈಸೂರು ನಗರದ 9 ಕಡೆ ವಲಯ ಕಚೇರಿಗಳನ್ನು ಆರಂಭಿಸಿದ್ದರು. ಆಗ ಮೈಸೂರಿನ ಸಯ್ಯಾಜಿ ರಾವ್ ರಸ್ತೆಯ ಪ್ರಧಾನ ಕಚೇರಿ ಮೂಲಕವೇ ಎಲ್ಲವೂ ನಿರ್ವಹಣೆ ಆಗುತ್ತಿತ್ತು. ಜೆ–ನರ್ಮ್‌ನಡಿ ಹಲವು ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕಾಗಿದ್ದರಿಂದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಪಾಲಿಕೆ ಆಡಳಿತವನ್ನು ವಿಕೇಂದ್ರೀಕರಣಗೊಳಿಸುವಂತೆ ಅಂದಿನ ಸರ್ಕಾರ ಆದೇಶ ನೀಡಿದ್ದ ಹಿನ್ನೆಲೆಯಲ್ಲಿ 9 ವಲಯ ಕಚೇರಿಗಳನ್ನು ಸ್ಥಾಪಿಸಲಾಗಿತ್ತು. ಹಾಗೂ ಅವುಗಳಿಗೆ ಮುಖ್ಯಸ್ಥರಾಗಿ ಕೆಎಎಸ್ ಅಧಿಕಾರಿಗಳನ್ನು ಸಹಾಯಕ ಆಯುಕ್ತರು (Assistance Commissioner) ಅಥವಾ ವಲಯಾಧಿಕಾರಿ (Zonal Officer)ಗಳನ್ನಾಗಿ ನಿಯೋಜಿಸುವಂತೆ ಸರ್ಕಾರ ಆದೇಶ ಹೊರಡಿಸಿತ್ತಾದರೂ, ಕೇವಲ 7 ಕೆಎಎಸ್ ಅಧಿಕಾರಿಗಳ ಹುದ್ದೆ ಮಂಜೂರು ಮಾಡಿತ್ತು.

ಕೆಎಎಸ್ ಅಧಿಕಾರಿಗಳು ನಿರ್ವಹಿಸಬೇಕಾದ ಹುದ್ದೆ



ವಲಯ ಕಚೇರಿಗಳು ಆರಂಭವಾದಾಗಿನಿಂದ ಈವರೆವಿಗೂ ಎರಡು ಪಾಲಿಕೆ ವಲಯ ಕಚೇರಿಗಳಲ್ಲಿ ಕೆಎಎಸ್ ಅಧಿಕಾರಿಗಳಿಲ್ಲದಿರುವುದರ ಬಗ್ಗೆ ಕಳೆದ 16 ವರ್ಷಗಳಿಂದಲೂ ಹಿರಿಯ ಅಧಿಕಾರಿಗಳಾಗಲೀ, ಜನಪ್ರತಿನಿಧಿಗಳಾಗಲೀ ಚಕಾರ ಎತ್ತದೇ ಇರುವುದು ಅಚ್ಚರಿಯಾಗಿದೆ. ಇದರಿಂದಾಗಿ ಸಾರ್ವಜನಿಕರ ಕುಂದು–ಕೊರತೆ, ಸೇವೆಗಳು ಸಮರ್ಪಕವಾಗಿ ಜನಸಾಮಾನ್ಯರಿಗೆ ಸಿಗುತ್ತಿಲ್ಲ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ.

ಮತ್ತೊಂದೆಡೆ ಇಂಜಿನಿಯರ್‌ಗಳನ್ನೇ ವಲಯ ಆಯುಕ್ತರನ್ನಾಗಿ ನೇಮಕ ಮಾಡಿ ಜವಾಬ್ದಾರಿ ನೀಡಿದ ಘಟನೆಗಳು ನಡೆದಿವೆ. ಇವರು ಕೆಎಎಸ್ ಅಧಿಕಾರಿಗಳಂತೆ ಪರಿಣಾಮಕಾರಿಯಾಗಿ ಸಾರ್ವಜನಿಕರ ಕೆಲಸಗಳನ್ನು ನಿರ್ವಹಿಸಲು ಸಾಧ್ಯವೇ? ಎಂದು ಪ್ರಶ್ನಿಸುತ್ತಿರುವ ಸಾರ್ವಜನಿಕರು ಸರ್ಕಾರ ಉಳಿದ 2 ವಲಯ ಕಚೇರಿಗಳಿಗೂ ವಲಯ ಆಯುಕ್ತರ ಹುದ್ದೆಗೆ ಕೆಎಎಸ್ ಅಧಿಕಾರಿಗಳನ್ನು ಮಂಜೂರು ಮಾಡಬೇಕು ಎಂದು ಆಗ್ರಹಿಸುತ್ತಿದ್ದಾರೆ. ಖಾತಾ, ಕಂದಾಯ, ನಕ್ಷೆ ಅನುಮೋದನೆ, ಜನನ–ಮರಣ ಪತ್ರ, ತೆರಿಗೆ ಪಾವತಿ, ಟ್ರೇಡ್ ಲೈಸೆನ್ಸ್, ಸ್ವಚ್ಛತೆ, ನಾಗರಿಕ ಸೌಲಭ್ಯ ಸೇರಿದಂತೆ ಹಲವು ಸೇವೆಗಳನ್ನು ವಿಕೇಂದ್ರೀಕರಣ ಮಾಡಿ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಬೇಕೆಂಬ ಉದ್ದೇಶದಿಂದ ಪಾಲಿಕೆ 9 ವಲಯ ಕಚೇರಿಗಳನ್ನು ಆರಂಭಿಸಲಾಗಿದೆಯಾದರೂ, ನಿರೀಕ್ಷಿತ ಮಟ್ಟದಲ್ಲಿ ಸೇವೆ ವಿಕೇಂದ್ರೀಕರಣ ಸಂಕಲ್ಪ ಸಾಕಾರವಾಗುತ್ತಿಲ್ಲ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.

ಅಪಘಾತಕ್ಕೆ ಕಾರಣವೆನ್ನಲಾದ ಎಲ್‌ಇಡಿ ಜಾಹೀರಾತು ಫಲಕ ಇನ್ನೂ ತೆರವು ಮಾಡಿಲ್ಲ

ಈ ಜಾಹೀರಾತು ಫಲಕ ತೆರವುಗೊಳಿಸುವುದಾಗಿ ಎರಡು ತಿಂಗಳ ಹಿಂದೆ ಮೇಯರ್ ಘೋಷಿಸಿದ್ದರು


ಮೈಸೂರು,ಸೆ.13(ಆರ್‌ಕೆ)– ವಾಹನ ಚಾಲಕರ ಗಮನ ಸೆಳೆದು ರಸ್ತೆ ಅಪಘಾತಕ್ಕೆ ಕಾರಣವಾಗುತ್ತಿರುವ ಮೈಸೂರು ನಗರದ ಎಲ್‌ಇಡಿ ಜಾಹೀರಾತು ಫಲಕಗಳನ್ನು ತೆರವುಗೊಳಿಸುತ್ತೇವೆಂದು ಮೇಯರ್ ಹೇಳಿಕೆ ನೀಡಿ 2 ತಿಂಗಳು ಕಳೆದರೂ ಮೈಸೂರು ನಗರ ಪಾಲಿಕೆಯು ಯಾವುದೇ ಕ್ರಮ ಕೈಗೊಂಡಿಲ್ಲ.

ಪ್ರಮುಖ ರಸ್ತೆಗಳಲ್ಲೇ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳು ಎಲ್‌ಇಡಿ ಫಲಕಗಳನ್ನು ಅಳವಡಿಸಿ ಬಣ್ಣಬಣ್ಣದ ಅತ್ಯಾಕರ್ಷಕ ಜಾಹೀರಾತುಗಳನ್ನು ಬಿತ್ತರಿಸುತ್ತಿದ್ದು, ವಾಹನ ಚಾಲಕರ ದೃಷ್ಟಿ ಅದರೆಡೆಗೆ ಬೀರುವುದರಿಂದ ಸಂಚಾರ ದಟ್ಟಣೆ ಇರುವೆಡೆ ಅಪಘಾತಗಳು ಸಂಭವಿಸುತ್ತಿವೆ ಎಂದು ಸಾರ್ವಜನಿಕರು ದೂರು ನೀಡಿದ್ದ ಹಿನ್ನೆಲೆಯಲ್ಲಿ ಮೇಯರ್ ಶಿವಕುಮಾರ್ ಅಂತಹ ಎಲ್‌ಇಡಿ ಅಡ್ವರ್ಟೈಸಿಂಗ್ ಹೋರ್ಡಿಂಗ್ಸ್‌ಗಳನ್ನು ತೆರವುಗೊಳಿಸುತ್ತೇವೆ ಎಂದು ತಿಳಿಸಿದ್ದರು.

ಆ ವಿಷಯದಲ್ಲಿ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಸಹ ಪೂರಕವಾಗಿ ಚಿಂತಿಸಿ ಸಂಚಾರಕ್ಕೆ ತೊಂದರೆಯಾಗುವ ಹಾಗೂ ಅಪಘಾತಕ್ಕೆ ಕಾರಣವಾದಲ್ಲಿ ಎಲ್‌ಇಡಿ ಜಾಹೀರಾತು ಫಲಕಗಳನ್ನು ತೆರವುಗೊಳಿಸಿ ಎಂದು ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು.

ಈ ಹಿನ್ನೆಲೆಯಲ್ಲಿ ತೆರವುಗೊಳಿಸುತ್ತೇವೆಂದು ಮೇಯರ್ ಹೇಳಿಕೆ ನೀಡಿದ್ದರಾದರೂ ಆ ಸಂಬಂಧ ಕಾರ್ಯೋನ್ಮುಖರಾಗದೇ ಮೌನ ವಹಿಸಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಮೇಯರ್, ನಗರ ಪಾಲಿಕೆ ಆಯುಕ್ತರು ಅಧಿಕಾರಿಗಳೊಂದಿಗೆ ತೆರಳಿ ಎಲ್‌ಇಡಿ ಹೋರ್ಡಿಂಗ್ಸ್‌ಗಳಿಂದ ಆಗುತ್ತಿರುವ ತೊಂದರೆ ಬಗ್ಗೆ ಖುದ್ದು ಪರಿಶೀಲನೆ ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಮೈಸೂರು ಚೆಲುವಾಂಬ ಪಾರ್ಕ್ ಎದುರಿನ ವಿವೇಕಾನಂದ ರಸ್ತೆಯಲ್ಲಿ ಟೊಳ್ಳಾಗಿದ್ದ ಗುಲ್‌ಮೊಹರ್ ಮರಗಳ ತೆರವು





ಮೈಸೂರು,ಸೆ.13(ಪಿಎಂ)– ಮೈಸೂರಿನ ಚೆಲುವಾಂಬ ಉದ್ಯಾನವನದ ಎದುರಿನ ವಿವೇಕಾನಂದ ರಸ್ತೆಯಲ್ಲಿ ಟೊಳ್ಳಾಗಿ ಮಳೆ–ಗಾಳಿ ಸಂದರ್ಭದಲ್ಲಿ ನೆಲಕ್ಕುರುಳುವ ಅಪಾಯದ ಸ್ಥಿತಿಯಲ್ಲಿದ್ದ ಮೂರು ಗುಲ್‌ಮೊಹರ್ ಮರಗಳನ್ನು ಬುಧವಾರ ತೆರವುಗೊಳಿಸಲಾಯಿತು.

ಯಾದವಗಿರಿಯ ಆಕಾಶವಾಣಿ ವೃತ್ತದ (ತರಾಸು ವೃತ್ತ) ಸಮೀಪ ಒಂಟಿಕೊಪ್ಪಲು ಬಡಾವಣೆಯಲ್ಲಿ ಹಾದು ಹೋಗಿರುವ ವಿವೇಕಾನಂದ ರಸ್ತೆಬದಿಯಲ್ಲಿದ್ದ ಈ ಮರಗಳನ್ನು ನಗರಪಾಲಿಕೆ ತೋಟಗಾರಿಕೆ ವಿಭಾಗದ ವತಿಯಿಂದ ತೆರವು ಮಾಡಲಾಯಿತು. ಬುಡಮಟ್ಟದಲ್ಲಿ ಈ ಮರಗಳನ್ನು ಕತ್ತರಿಸಲಾಗಿದ್ದು, ಮುಂದಿನ ಹಂತದಲ್ಲಿ ಬುಡ ತೆರವುಗೊಳಿಸಿ, ಬೇರೆ ಜಾತಿಯ ಸಸಿಗಳನ್ನು ತೋಟಗಾರಿಕೆ ವಿಭಾಗ ನೆಡಲಿದೆ. ಅಲ್ಲದೆ, ಟೊಳ್ಳಾಗಿದ್ದ ಇದೇ ಜಾತಿ ಮರವೊಂದರ ಕೊಂಬೆಯನ್ನೂ ಇದೇ ರಸ್ತೆಯಲ್ಲಿ ತೆರವು ಮಾಡಲಾಗಿದೆ. ಜೊತೆಗೆ ಇದೇ ರಸ್ತೆಯ ಬದಿಯಲ್ಲಿ ಇನ್ನೂ ಮೂರು ಗುಲ್‌ಮೊಹರ್ ಮರಗಳು ಟೊಳ್ಳಾಗಿರುವುದನ್ನು ಪಾಲಿಕೆ ತೋಟಗಾರಿಕೆ ವಿಭಾಗ ಗುರುತಿಸಿದ್ದು, ಇವುಗಳನ್ನು ನಾಳೆ (ಸೆ.14) ಬುಡಮಟ್ಟದಲ್ಲಿ ತೆರವು ಮಾಡಲಿದೆ. ಇದರ ಜೊತೆಗೆ ಇಲ್ಲಿನ ಇನ್ನು ಮೂರು ಗುಲ್‌ಮೊಹರ್ ಮರಗಳ ಟೊಳ್ಳು ಕೊಂಬೆಗಳನ್ನು ಕತ್ತರಿಸಲಾಗುತ್ತಿದೆ.

'ಈಗಾಗಲೇ ಇಂಟರ್‌ಲಾಕ್ ಫುಟ್‌ಪಾತ್‌ನಲ್ಲಿ ಈಗ ತೆರವುಗೊಳಿಸಿರುವ ಮರಗಳ ಬುಡದ ಜಾಗದಲ್ಲಿ ಅವುಗಳ ಬೆಳವಣಿಗೆಗೆ ಪೂರಕ ವಾತಾವರಣ ಕಲ್ಪಿಸಲು ಮಣ್ಣಿನ ಭಾಗ ಉಳಿಸಲಾಗಿದೆ. ಈಗ ತೆರವುಗೊಳಿಸಿರುವ ಮರಗಳ ಬುಡವನ್ನೂ ತೆಗೆಸಿ, ಅಲ್ಲಿ ಸಸಿಗಳನ್ನು ನೆಡಲಾಗುವುದು. ಒಟ್ಟಾರೆ ಇಲ್ಲಿ 13ರಿಂದ 14 ಮಹೋಗಾನಿ ಸಸ್ಯಗಳನ್ನು ನೆಡಲು ಉದ್ದೇಶಿಸಲಾಗಿದೆ. ಇದೇ ವಿವೇಕಾನಂದ ರಸ್ತೆಯಲ್ಲಿ ಬುಡ ಭದ್ರವಿಲ್ಲದ ಇನ್ನು ಅನೇಕ ಗುಲ್‌ಮೊಹರ್ ಮರಗಳನ್ನು ಗುರುತಿಸಿದ್ದು, ಶೀಘ್ರದಲ್ಲಿ ತೆರವು ಮಾಡಲಾಗುವುದು. ಅರಣ್ಯ ಇಲಾಖೆ ಅನುಮತಿಯೊಂದಿಗೆ ಈ ಕಾರ್ಯಾಚರಣೆ ನಡೆಯುತ್ತಿದೆ' ಎಂದು ಪಾಲಿಕೆ ತೋಟಗಾರಿಕೆ ವಿಭಾಗದ ಅಧಿಕಾರಿಗಳು 'ಮಿತ್ರ'ನಿಗೆ ತಿಳಿಸಿದರು. ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಪಾಲಿಕೆ ಆಯುಕ್ತ ಅಶಾದ್ ಉರು ರೆಹಮಾನ್ ಷರೀಫ್, ಮರಗಳನ್ನು ಕಡಿಯಲು ಪಾಲಿಕೆ ಆದ್ಯತೆ ನೀಡುವುದಿಲ್ಲ. ಆದರೆ ಬುಡ ಭದ್ರವಿಲ್ಲದೆ, ಮಳೆ–ಗಾಳಿ ಸಂದರ್ಭದಲ್ಲಿ ಅನಾಹುತಕ್ಕೆ ಕಾರಣವಾಗಬಹುದಾದ ಮರಗಳನ್ನು ತೆರವು ಮಾಡುವುದು ಅನಿವಾರ್ಯ. ಅರಣ್ಯ ಇಲಾಖೆ ಅನುಮತಿಯೊಂದಿಗೆ ನಡೆಯುವ ನಿರಂತರ ಪ್ರಕ್ರಿಯೆ ಇದು ಎಂದರು.

ಮೊನ್ನೆ ಪ್ರಗತಿ ಪರಿಶೀಲನೆ ಸಭೆಯಲ್ಲಿ ಟೊಳ್ಳಾಗಿ ನೆಲಕ್ಕುರುಳುವ ಅಪಾಯದಲ್ಲಿರುವ ಮರಗಳನ್ನು ತೆರವುಗೊಳಿಸಲು ಆದೇಶ ಮಾಡಲಾಗಿತ್ತು. ಆ ಪ್ರಕಾರ ಈ ಮರಗಳನ್ನು ತೆರವು ಮಾಡಲಾಗಿದೆ. ಅರಣ್ಯ ಇಲಾಖೆ ಅನುಮತಿ ಇದ್ದರೂ ಬಾಕಿ ಉಳಿಸಿರುವ ಮರ ಮತ್ತು ಕೊಂಬೆಗಳನ್ನು ಶೀಘ್ರ ತೆರವುಗೊಳಿಸಲು ಆದೇಶಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕಾರುಗಳಿಗೆ 6 ಏರ್‌ಬ್ಯಾಗ್ ಕಡ್ಡಾಯ ಇಲ್ಲ

ಕೇಂದ್ರ ಸಚಿವ ನಿತಿನ್ ಗಡ್ಕರಿ ಸ್ಪಷ್ಟನೆ





ನವದೆಹಲಿ: ಸರ್ಕಾರ ಕಾರುಗಳಿಗೆ ಆರು ಏರ್‌ಬ್ಯಾಗ್‌ಗಳನ್ನು ಕಡ್ಡಾಯಗೊಳಿಸುವುದಿಲ್ಲ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಪ್ರಯಾಣಿಕರ ಸುರಕ್ಷತೆಗಾಗಿ 2023ರ ಅಕ್ಟೋಬರ್‌ನಿಂದ ಆರು ಏರ್‌ಬ್ಯಾಗ್‌ಗಳ ಸುರಕ್ಷತಾ ಮಾನದಂಡವನ್ನು ಜಾರಿಗೆ ತರಲು ಸರ್ಕಾರ ಕಳೆದ ವರ್ಷ ಪ್ರಸ್ತಾಪಿಸಿತ್ತು.

ನಾವು ಕಾರುಗಳಿಗೆ ಆರು ಏರ್‌ಬ್ಯಾಗ್‌ಗಳ ನಿಯಮವನ್ನು ಕಡ್ಡಾಯಗೊಳಿಸಲು ಬಯಸುವುದಿಲ್ಲ ಎಂದು ಗಡ್ಕರಿ ದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಸ್ಪಷ್ಟಪಡಿಸಿದ್ದಾರೆ. ಕಳೆದ ವರ್ಷ, ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯದ ಪ್ರಕಟಣೆಯಲ್ಲಿ ಮೋಟಾರು ವಾಹನದ ಪ್ರಯಾಣಿಕರ ಸುರಕ್ಷತೆ ಹೆಚ್ಚಿಸಲು, ಕೇಂದ್ರ ಮೋಟಾರು ವಾಹನಗಳ ನಿಯಮಗಳಿಗೆ(CMVR) ತಿದ್ದುಪಡಿ ಮಾಡುವ ಮೂಲಕ ಸುರಕ್ಷತಾ ವೈಶಿಷ್ಟ್ಯಗಳನ್ನು ಹೆಚ್ಚಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿತ್ತು. ಏಪ್ರಿಲ್ 1, 2021ರಂದು ಮತ್ತು ನಂತರ ತಯಾರಿಸಲಾದ ವಾಹನಗಳಲ್ಲಿ ಎರಡೂ ಮುಂಭಾಗದ ಆಸನಗಳಿಗೆ ಏರ್‌ಬ್ಯಾಗ್‌ಗಳನ್ನು ಕಡ್ಡಾಯಗೊಳಿಸಲಾಗಿದೆ.

ನಕ್ಕರೆ ಅದೇ ಸ್ವರ್ಗ

ಭಿಕ್ಷುಕ : "ಸರ್, 10 ರೂಪಾಯಿ ಕೊಡಿ. ಟೀ ಕುಡಿಯಬೇಕು"
ನಿಂಗ : "ಒಂದು ಟೀಗೆ 5 ರೂಪಾಯಿ ಸಾಕು ಅಲ್ವಾ"
ಭಿಕ್ಷುಕ : "ಜತೆಗೆ ನನ್ನ ಲವರ್ ಕೂಡಾ ಇದ್ದಾಳೆ ಸರ್!"
ನಿಂಗ : "ನೀನು ಬದುಕುತ್ತಿರೋದೆ ಭಿಕ್ಷೆ ಬೇಡಿ, ಆದ್ರೂ ಲವ್ವಾ?"
ಭಿಕ್ಷುಕ : "ಲವ್ ಮಾಡಿದ ಮೇಲೇನೇ ನಾನು ಭಿಕ್ಷೆ ಬೇಡ್ತಾ ಇರೋದು ಸರ್!"

ಮೈಸೂರು ಮಿತ್ರ
ಗುರುವಾರ, 14 ಸೆಪ್ಟೆಂಬರ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಸುಲಭವಾದ ಕೆಲಸ ಮಾಡುವುದು ಸಾಧನೆ ಎನಿಸಿಕೊಳ್ಳುವುದಿಲ್ಲ. ಕಷ್ಟಗಳ ಸುಳಿಯಲ್ಲೂ ಕಠಿಣ ಕೆಲಸ ನಿರ್ವಹಿಸಿ ಜಯಿಸುವುದು ನಿಜವಾದ ಸಾಧನೆ.
–ಥಿಯೋಡರ್ ರುಬಿನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕೂತು ತಿನ್ನುವವನಿಗೆ ಕುಡಿಕೆ ಹಣವೂ ಸಾಲದು

ನಿಮ್ಮ ಪತ್ರಗಳು

ಮೈಸೂರು ನಗರ ಪಾಲಿಕೆಯನ್ನು ಮೇಲ್ದರ್ಜೆಗೇರಿಸುವುದು ಅನಿವಾರ್ಯ

ಮಾನ್ಯರೆ,

ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾದ ಅಶಾದ್ ಉರ್ ರೆಹಮಾನ್ ಷರೀಫ್ ಹಾಗೂ ಮೇಯರ್ ಶಿವಕುಮಾರ್ ನಡುವೆ ಮೈಸೂರು ಮಹಾನಗರ ಪಾಲಿಕೆಯನ್ನು ಬೃಹತ್ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೆ ಏರಿಸುವ ವಿಷಯ ಇಟ್ಟುಕೊಂಡು ಕಳೆದ ಆಗಸ್ಟ್ 31ಕ್ಕೆ ಕರೆಯಲಾಗಿದ್ದ ಕೌನ್ಸಿಲ್ ಸಭೆಯನ್ನು ಆಯುಕ್ತರು ಏಕಾಏಕಿ ಮುಂದೂಡಿದ ವಿಚಾರಕ್ಕೆ ಸಂಬಂಧಿಸಿದಂತೆ, ಜಟಾಪಟಿ ನಡೆದಿರುವುದು ಸ್ಥಳೀಯ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ಪಡೆದಿದೆ. ಈ ಬಗ್ಗೆ ಮಾಧ್ಯಮದವರೊಂದಿಗೆ ತಮ್ಮ ಅಸಮಾಧಾನ ತೋಡಿಕೊಂಡಿರುವ ಮೇಯರ್ ಶಿವಕುಮಾರ್, ಕರ್ನಾಟಕ ಪುರಸಭೆ ಕಾಯ್ದೆ 1976ರ ಪ್ರಕಾರ ಕೌನ್ಸಿಲ್ ಸಭೆಯನ್ನು ಮುಂದೂಡುವ ಅಧಿಕಾರ ಮೇಯರ್ ಅವರಿಗೆ ಮಾತ್ರ ಇರುತ್ತದೆಯೇ ಹೊರತು ಆಯುಕ್ತರಿಗೆ ಇಲ್ಲವೆಂದು ಹೇಳಿ, ತಮ್ಮ ಹಕ್ಕು ದಮನ ಮಾಡಿದ ಪಾಲಿಕೆಯ ಆಯುಕ್ತರನ್ನು ಅವರ ಸ್ಥಾನದಿಂದ ವಿಮುಕ್ತಿಗೊಳಿಸಬೇಕೆಂದು ಆಗ್ರಹಿಸಿದ್ದಾರೆ.

ಮತ್ತೊಂದು ವಿಶೇಷ ಎಂದರೆ, ಈಗಾಗಲೇ ಮಹಾನಗರ ಪಾಲಿಕೆಯ ಚುನಾಯಿತ ಸದಸ್ಯರ ಅವಧಿ ಮುಗಿದಿರುವುದರಿಂದ, ಇದು ಮೇಯರ್ ಅವರ ಕೊನೆಯ ಕೌನ್ಸಿಲ್ ಸಭೆಯಾಗಿತ್ತು. ಜನಪರವಾಗಿರುವ ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಮಾಡದಂತೆ ವ್ಯವಸ್ಥಿತ ತಂತ್ರ ರೂಪಿಸಿ, ಅದರಲ್ಲಿ ಕಾಂಗ್ರೆಸ್‌ನವರು ಯಶಸ್ವಿಯಾಗಿದ್ದಾರೆ ಎಂದು ಮೇಯರ್ ಆಪಾದಿಸಿದ್ದಾರೆ.

ಹಾಗೆಯೇ ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಕುರಿತಂತೆ, ಸಲಹಾ ಸಮಿತಿಯ ಸಭೆಯಲ್ಲಿ ಕಾಂಗ್ರೆಸ್ ಕಾರ್ಪೋರೇಟರ್‌ಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆಂದು ಆರೋಪಿಸಿದ್ದಾರೆ. ಆಡಳಿತದ ಹಲವಾರು ವಿಚಾರಗಳಲ್ಲಿ ಮೇಯರ್ ಹಾಗೂ ಆಯುಕ್ತರ ನಡುವೆ ಆಗಾಗ ಜಟಾಪಟಿ ನಡೆದಿರುವುದನ್ನು ನಾವು ನೋಡಿದ್ದೇವೆ. ವಾಸ್ತವವಾಗಿ ಮೇಯರ್ ಹುದ್ದೆ ಅಲಂಕಾರಿಕವಾಗಿದ್ದು, ಪಾಲಿಕೆಯ ಆಯುಕ್ತರಿಗೆ ಹೆಚ್ಚಿನ ಅಧಿಕಾರಗಳಿವೆ. ಸಾಮಾನ್ಯವಾಗಿ ಐಎಎಸ್ ಅಧಿಕಾರಿಗಳನ್ನು ಪಾಲಿಕೆಯ ಆಯುಕ್ತರನ್ನಾಗಿ ನೇಮಿಸುವ ಪರಿಪಾಠವಿದೆ. ಕೆಲವೊಮ್ಮೆ ಹಿರಿಯ ಕೆಎಎಸ್ ಅಧಿಕಾರಿಗಳು ಸಹ ಪಾಲಿಕೆಯ ಆಯುಕ್ತರಾಗಿ ಕಾರ್ಯ ನಿರ್ವಹಿಸಿದ್ದಾರೆ. ಆದರೆ, ಚುನಾಯಿತ ಪ್ರತಿನಿಧಿಯಾದ ಮೇಯರ್ ಹುದ್ದೆ ಕೇವಲ ನಾಮಕಾವಸ್ತೆಯ ಹುದ್ದೆಯಾಗಿರುವುದು ವಿಪರ್ಯಾಸವಾಗಿದೆ. ಮಹಾನಗರದ ಪ್ರಥಮ ಪ್ರಜೆಯಾಗಿರುವ ಮೇಯರ್ ಅವರನ್ನು ಉಪೇಕ್ಷಿಸುವ ಚಾಳಿ ಮೊದಲಿನಿಂದಲೂ ನಡೆಯುತ್ತಲೇ ಇದೆ. ದಸರಾ ಸಂದರ್ಭಗಳಲ್ಲಿ ಸಹ ಮೇಯರ್ ಅವರು ಆಟಕ್ಕುಂಟು ಲೆಕ್ಕಕ್ಕೆ ಇಲ್ಲ ಅನ್ನುವ ಸ್ಥಿತಿಯಲ್ಲಿ ಇರುತ್ತಾರೆ. ದಸರಾ ಮೆರವಣಿಗೆಯಲ್ಲಿ ಕುದುರೆ ಸವಾರಿ ಮಾಡುವ ಒಂದೇ ಒಂದು ಅವಕಾಶ ಅವರಿಗಿದ್ದರೂ, ಕೆಲವೊಮ್ಮೆ ಅದಕ್ಕೂ ಸಂಚಕಾರ ಬರುತ್ತದೆ. ಇದರ ಬಗ್ಗೆ ಹಲವಾರು ಮಾಜಿ ಮೇಯರ್‌ಗಳು ಬಹಿರಂಗವಾಗಿಯೇ ತಮ್ಮ ಅಸಮಾಧಾನ ಹೊರಹಾಕಿದ್ದಾರೆ. ಸುಗಮ ಆಡಳಿತ ದೃಷ್ಟಿಯಿಂದ, ಬೃಹತ್ ಮೈಸೂರು ಮಹಾನಗರ ಪಾಲಿಕೆಯ ರಚನೆಗೆ ಎಲ್ಲಾ ಪುರಪಿತೃಗಳು ಪಕ್ಷಭೇದ ಮರೆತು ಸಹಕರಿಸಬೇಕಾಗಿದೆ. ಏಕೆಂದರೆ, ಬೆಂಗಳೂರಿನ ಹಾಗೆ ಮೈಸೂರು ಸಹ ದಿನೇ ದಿನೇ ಬೆಳೆಯುತ್ತಿರುವುದು ಒಂದು ಕಡೆಯಾದರೆ, ಹಲವಾರು ಸಮಸ್ಯೆಗಳ ಆಗರವಾಗುತ್ತಿದೆ. ಇದಕ್ಕಾಗಿ ಮೈಸೂರು ಮಹಾನಗರ ಪಾಲಿಕೆಯನ್ನು ಮೇಲ್ದರ್ಜೆಗೆ ಏರಿಸುವುದು ಅನಿವಾರ್ಯವಾಗಿದೆ. ಇದನ್ನು ರಾಜಕೀಯ ಪಕ್ಷಗಳ ನಾಯಕರು ಅರಿತು, ಮೈಸೂರಿನ ಯೋಜನಾಬದ್ಧ ಬೆಳವಣಿಗೆಗೆ ಸಹಕರಿಸಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಅಪಾಯಕಾರಿ ಮರ ತೆರವುಗೊಳಿಸಿ



ಮಾನ್ಯರೆ,

ಮೈಸೂರಿನ ವಿದ್ಯಾರಣ್ಯಪುರಂನ ಸುಬ್ರಮಣ್ಯಸ್ವಾಮಿ ದೇವಸ್ಥಾನದ ರಸ್ತೆ, 7ನೇ ಮುಖ್ಯರಸ್ತೆ, ಮನೆ ಸಂಖ್ಯೆ 371ರ ಎದುರು ಅಗಾಧವಾದ ಮರವೊಂದು ಬುಡದ ಸಮೇತ ಶಿಥಿಲಾವಸ್ಥೆಯಲ್ಲಿದೆ. ಈ ರಸ್ತೆಯಲ್ಲಿ ಬಹಳಷ್ಟು ಶಾಲಾ ಮಕ್ಕಳು, ಸುಬ್ರಮಣ್ಯಸ್ವಾಮಿ ದೇವಸ್ಥಾನದ ಭಕ್ತಾದಿಗಳು, ಹಿರಿಯ ನಾಗರಿಕರು ಹಾಗೂ ಜನಸಾಮಾನ್ಯರು ಓಡಾಡುತ್ತಿರುತ್ತಾರೆ. ಯಾವುದೇ ರೀತಿ ಅನಾಹುತವಾಗುವುದಕ್ಕೂ ಮೊದಲು ಸಂಬಂಧಪಟ್ಟ ನಗರಪಾಲಿಕೆ ಅಧಿಕಾರಿಗಳು, ಅರಣ್ಯಾಧಿಕಾರಿಗಳು ಅಥವಾ ತೋಟಗಾರಿಕೆ ಅಧಿಕಾರಿಗಳು ತಕ್ಷಣವೇ ಕ್ರಮ ಕೈಗೊಳ್ಳಬೇಕಾಗಿ ಮನವಿ.–ಡಾ. ಎಂ.ಸಿ.ಚಂದನ್, ವಿದ್ಯಾರಣ್ಯಪುರಂ, ಮೈಸೂರು.

ಬರಪೀಡಿತ ಪರಿಹಾರದ ಫಲಾನುಭವಿಗಳು ಯಾರಾಗಬೇಕು?

ಮಾನ್ಯರೆ,

ರಾಜ್ಯದಲ್ಲಿ ವಾಡಿಕೆ ಮಳೆಗಿಂತ ಕಡಿಮೆ ಮಳೆ ಆಗಿರುವ 62 ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಮೊದಲ ಹಂತದಲ್ಲಿ ಮುಂದಿನ ಸಚಿವ ಸಂಪುಟದಲ್ಲಿ ಘೋಷಿಸಲು ನಿರ್ಧರಿಸಲಾಗಿದೆಯೆಂದು ಮೈಸೂರಿನ ಕಾರ್ಯಕ್ರಮ ಒಂದರಲ್ಲಿ ಮುಖ್ಯಮಂತ್ರಿಗಳು (ಸೆ.12ರ ಪತ್ರಿಕೆಯ ಸುದ್ದಿ) ತಿಳಿಸಿರುವುದು ಸ್ವಾಗತಾರ್ಹ. ಬರಪೀಡಿತ ಪ್ರದೇಶವೆಂದು ಘೋಷಿಸಿದಾಗ ರೈತರಿಗೆ ಇದರ ಫಲ ನೇರವಾಗಿ ಸಿಗುವುದೇ? ಎಂಬುದು ಪ್ರಶ್ನೆ. ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುವುದರಿಂದ ಸಂತುಷ್ಟರಾಗುವುದು ಗುತ್ತಿಗೆದಾರರು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮಾತ್ರ!, ಬರಪರಿಹಾರದ ಉದ್ದೇಶವೇನೆಂದರೆ; ನೀರಿನ ಕೊರತೆಯಿಂದ ಬೆಳೆಗಳ ಮೇಲೆ ಆಗುವ ದುಷ್ಪರಿಣಾಮವನ್ನು ಕಡಿಮೆ ಮಾಡುವುದು, ಜಲಮೂಲಗಳನ್ನು ಸಂರಕ್ಷಿಸುವುದು, ಜನ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಆಹಾರ, ಮೇವಿನ ಸಮಸ್ಯೆ ಆಗದಂತೆ ನೋಡಿಕೊಳ್ಳುವುದು ಮತ್ತು ದುಡಿಯುವ ಕೈಗಳಿಗೆ ಕೆಲಸ ಕೊಡುವುದು.

ಅನುಷ್ಠಾನಗೊಳ್ಳುವ ಯೋಜನೆಗಳೆಲ್ಲವೂ ಸರಿಯೇ, ಆದರೆ ಬರದಿಂದ ಸಂಕಷ್ಟಕ್ಕೆ ಬಲಿ ಆಗಿರುವ ಅನ್ನದಾತನಿಗೆ ಯೋಜನೆಯ ಫಲ ತಲುಪುವುದು ಎಷ್ಟು? ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ ಮಾತ್ರಕ್ಕೆ ಉಪಯೋಗವಾಗದು, ನೀರಿನ ಕೊರತೆಯಿಂದ ಬೆಳೆ ಸಿಗದ ಹಾಗೂ ಇಳುವರಿಯು ಸರಾಸರಿಗಿಂತ ಕಡಿಮೆ ಆಗಿರುವ ಜಮೀನಿಗೆ ಪ್ರತೀ ಎಕರೆಗೆ ಇಂತಿಷ್ಟು ಮೊತ್ತ ನಿಗದಿ ಮಾಡಿ ನೇರ ರೈತರ ಖಾತೆಗೆ ಜಮೆ ಮಾಡುವುದರಿಂದ ಮುಂದಿನ ಮಳೆಗಾಲದವರೆಗೂ ನಮ್ಮ ರೈತರು ಉಸಿರಾಡಬಹುದು. ಇಲ್ಲದಿದ್ದರೆ ಅವರ ಜೀವನ ಬದುಕಿದ್ದರೂ ಸತ್ತಂತೆಯೇ! ಬರ ಪರಿಹಾರದ ಫಲವನ್ನು ಉಳ್ಳವರೇ ಉಣ್ಣುವುದು ಯಾವ ನ್ಯಾಯ?.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬರ ಪರಿಹಾರಕ್ಕಾಗಿ ನೀಡುವ ವಿಶೇಷ ಅನುದಾನವು ಅರ್ಹರಿಗೆ ಸಿಕ್ಕಾಗ ಮಾತ್ರ ನಮ್ಮ ಅನ್ನದಾತ ಸೆಟೆದು ನಿಲ್ಲುವನು. ತಲೆ ತಲಾಂತರಗಳಿಂದ ಅವನು ಬೆಳೆಯುತ್ತಿರುವುದು ನೋವುಗಳನ್ನೇ!. ತಾನು ನೋವುಂಡು ಪ್ರಪಂಚಕ್ಕೇ ಅನ್ನ ನೀಡುವ ದೇವರು ಎಂದು ಸುಖ ಪಡುವನೋ?!.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.



ಪರದಂಡ ಸುಬ್ರಮಣಿ ಕಾವೇರಪ್ಪ
ಅಧ್ಯಕ್ಷರು, ಅಖಿಲ ಕೊಡವ ಸಮಾಜ
ಮೊ. 9008496136

ಪ್ರಸ್ತುತ

ಕೇಂದ್ರ ಸರ್ಕಾರದ ಕ್ಷೇತ್ರ ಮರು ವಿಂಗಡಣೆ (2026–27)ಯಲ್ಲಿ

ಕೊಡಗು ಲೋಕಸಭಾ ಕ್ಷೇತ್ರಕ್ಕಾಗಿ ಹಕ್ಕೊತ್ತಾಯ–ಒಂದು ಮುನ್ನೋಟ





ಕೇಂದ್ರ ಸರ್ಕಾರದ ಡಿಲಿಮಿಟೇಷನ್ ಕಾಯ್ದೆ 2002ರ(33) ನಿಬಂಧನೆಗಳಿಗೆ ಅನುಸಾರವಾಗಿ 2026–27ರ ಜನ ಗಣತಿಯ ನಂತರ ಅಸ್ತಿತ್ವಕ್ಕೆ ಬರಲಿರುವ ಡಿಲಿಮಿಟೇಷನ್ ಕಮೀಷನ್ ಲೋಕಸಭಾ ಮತ್ತು ವಿಧಾನಸಭಾ ಕ್ಷೇತ್ರಗಳ ಮರು ವಿಂಗಡಣೆಯ ಅಧಿಕಾರ ಹೊಂದಿರುತ್ತದೆ. ಹೀಗೆ ಪ್ರತಿ 25 ವರ್ಷಗಳಿಗೊಮ್ಮೆ ಕ್ಷೇತ್ರ ಮರು ವಿಂಗಡಣೆ ಮಾಡಲಾಗುತ್ತದೆ. ಕೇಂದ್ರ ಸರ್ಕಾರದ ಅಧೀನದಲ್ಲಿ ಬರುವ ಈ ಡಿಲಿಮಿಟೇಷನ್ ಕಮೀಷನ್ ಹಾಲಿ 543 ಲೋಕಸಭಾ ಕ್ಷೇತ್ರಗಳನ್ನು 848 ಸ್ಥಾನಗಳಿಗೆ ಹೆಚ್ಚಿಸುವ ಗುರಿ ಹೊಂದಿದೆ.

ಈ ನಿಟ್ಟಿನಲ್ಲಿ ಕೊಡಗಿನಲ್ಲಿ ಕೊಡವ ಭಾಷಾ ಅಲ್ಪಸಂಖ್ಯಾತರ (Linguistic Minority) ಕೋಟಾದಡಿ ಪ್ರತ್ಯೇಕ ಲೋಕಸಭಾ ಸ್ಥಾನ ಲಭಿಸುವ ಸಂದರ್ಭ ಒದಗಿ ಬಂದಲ್ಲಿ ಆಯ್ಕೆಯಾಗುವ ಕೊಡವ ಭಾಷಿಕ ಅಭ್ಯರ್ಥಿಗಳು ರಾಜ್ಯಸಭಾ ಸದಸ್ಯತ್ವ ಗಳಿಸಲು ಕೂಡ ಅರ್ಹರಾಗಿರುತ್ತಾರೆ.

ಕೊಡಗಿನಿಂದ ಭಾರತ ದೇಶದ ರಕ್ಷಣಾ ವ್ಯವಸ್ಥೆಗೆ, ಕ್ರೀಡಾ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ಲಭಿಸಿದೆ. ಕೊಡವ ಭಾಷಿಕ ಮೂಲ ನಿವಾಸಿಗಳ ಮತ್ತು ಇತರ ಸಮುದಾಯಗಳ ಜನರ ನಿಷ್ಕಲ್ಮಶ ರಾಷ್ಟ್ರಪ್ರೇಮ ಹಾಗೂ ಕೊಡುಗೆ ಪ್ರಶ್ನಾತೀತವಾದರೂ ಪ್ರತ್ಯೇಕ ಲೋಕಸಭಾ ಸ್ಥಾನ ಹೊಂದಲು ಸಂವಿಧಾನದಡಿಯಲ್ಲಿ ಅವಕಾಶಗಳು ಇಲ್ಲವಾಯಿತು.

ಅತ್ಯಂತ ಸೂಕ್ಷ್ಮ ಬುಡಕಟ್ಟಿನ ಮೂಲದ ಕೊಡವರು ಮತ್ತು ಕೊಡವ ಸಂಸ್ಕೃತಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ಒಟ್ಟಾರೆ 19 ಮೂಲನಿವಾಸಿ ಸಮುದಾಯಗಳ ಜನಸಂಖ್ಯೆ ಅತ್ಯಂತ ವೇಗವಾಗಿ ಕುಸಿಯುತ್ತಿರುವುದು, ಇದರ ಯುವ ಜನಾಂಗ ಕೃಷಿಯಿಂದಲೇ ಬದುಕು ಸಾಗಿಸಲಾಗದೆ ನಗರಗಳತ್ತ ಮುಖ ಮಾಡಿರುವುದು ಹಾಗೂ ತದನಂತರ ಕೃಷಿ ಭೂಮಿ ಮಾರಾಟ ಮಾಡಿ ನಗರಗಳಲ್ಲೇ ಶಾಶ್ವತವಾಗಿ ನೆಲೆಸುತ್ತಿರುವುದರಿಂದ ಕೊಡಗಿನಲ್ಲಿ ಕೊಡವ ಭಾಷಿಕರ ಸಂಖ್ಯೆ ಗಣನೀಯವಾಗಿ ಕಡಿಮೆಯಾಗುತ್ತಿದೆ.

ಕೊಡವ ಭಾಷಿಕ ಮೂಲನಿವಾಸಿಗಳ ಬಗ್ಗೆ ವಿಶೇಷ ಅಧ್ಯಯನ ನಡೆಸಿದ ಶ್ರೀ ಬಾಚರಣಿಯಂಡ ಅಪ್ಪಣ್ಣನವರ ಪ್ರಕಾರ 21 ಕೊಡವ ಭಾಷಿಕ ಸಮುದಾಯಗಳಲ್ಲಿ ಈಗ 19 ಸಮುದಾಯಗಳು ಮಾತ್ರವೇ ಅಸ್ತಿತ್ವದಲ್ಲಿರುವುದು ಕಂಡುಬಂದಿದೆ.

ಸದ್ಯದ ಪರಿಸ್ಥಿತಿಯಲ್ಲಿ ಕೊಡವ ಭಾಷಿಕರು ಈ ಬಾರಿಯ ಲೋಕಸಭಾ ಚುನಾವಣೆಗೆ ಅಭ್ಯರ್ಥಿಗಳು ಯಾರಾಗಬಹುದೆಂದು ಚಿಂತಿಸುವ ಬದಲು ತಮ್ಮೆಲ್ಲರ ಅಸ್ತಿತ್ವ ಉಳಿಸಿಕೊಳ್ಳಲು ಮುಂದೆ ಬರಲಿರುವ ಡಿಲಿಮಿಟೇಷನ್ ಕಮೀಷನ್ (2026)ನ ಮುಂದೆ ಕೊಡಗಿಗೆ ಪ್ರತ್ಯೇಕ ಲೋಕಸಭಾ ಸ್ಥಾನದ ಜೊತೆಗೆ ಒಂದು ವಿಧಾನಸಭಾ ಸ್ಥಾನವನ್ನು ಕೊಡವ ಭಾಷಿಕರಿಗೆ ಮೀಸಲಿಡುವಂತೆ, ಒಗ್ಗಟ್ಟಾಗಿ ಇತರ ಭಾಷಿಕ ಸಮುದಾಯಗಳ ಸಹಕಾರದೊಂದಿಗೆ ಚಿಂತನೆ, ಪ್ರಸ್ತಾಪ ಮಾಡಬೇಕಾದ ಅವಶ್ಯಕತೆ ಅತ್ಯಂತ ಅನಿವಾರ್ಯ, ಅವಶ್ಯಕವಾಗಿದೆ.

ಹಿಂದೆ ಕೊಡಗು ರಾಜ್ಯವಾಗಿದ್ದ ಕಾಲದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲರಿಂದ ಲೋಕಸಭೆಯಲ್ಲಿ ಕೊಡಗು 'ರಾಮರಾಜ್ಯ' ವೆಂಬ ಪ್ರಶಂಸೆಗೆ ಪಾತ್ರವಾಗಿದ್ದುದನ್ನು ಈ ಸಂದರ್ಭದಲ್ಲಿ ಸ್ಮರಿಸಬೇಕಾಗುತ್ತದೆ (1947–1950).

ಕರ್ನಾಟಕ ರಾಜ್ಯದೊಂದಿಗೆ (ಅಂದಿನ ಮೈಸೂರು) ವಿಲೀನವಾದಂದಿನಿಂದ ಕಳೆದ ಸುಮಾರು 7 ದಶಕಗಳಿಂದಲೂ ಕೊಡಗು ಹಾಗೂ ಕೊಡವರು ಹಿನ್ನಡೆ ಅನುಭವಿಸಿದ್ದೇ ಹೆಚ್ಚು.

ಇತರ ಭಾಷಾ ಅಲ್ಪಸಂಖ್ಯಾತರು (ಉದಾಹರಣೆಗೆ ಪಾರ್ಸಿ ಸಮುದಾಯದವರು) ಮಾತ್ರವಲ್ಲದೆ ನಿಧಾನವಾಗಿ ಅಳಿವಿನಂಚಿಗೆ ಸರಿಯುತ್ತಿರುವ ಕೊಡವ ಭಾಷಿಕರು, ಕರ್ನಾಟಕದ ಒಟ್ಟಾರೆ ಜನಸಂಖ್ಯೆಯಲ್ಲಿ ಕೇವಲ 0.25% ಅಷ್ಟೇ ಎಂಬುವುದನ್ನು ಮನಗಂಡು ಕನಿಷ್ಠ ಭಾಷಾ ಅಲ್ಪಸಂಖ್ಯಾತರೆಂಬ ದೃಷ್ಟಿಯಿಂದಲೂ ನಮ್ಮ ಭಾಷೆ, ನೆಲ, ಜಲ, ಪರಿಸರ, ಸಂಸ್ಕೃತಿಯ ಉಳಿವಿಗಾಗಿ ಹೋರಾಡುವ ಅನಿವಾರ್ಯ ಪರಿಸ್ಥಿತಿ ತಲುಪಿದ್ದಾರೆ. ಅಲ್ಲದೆ ರಾಜಕೀಯವಾಗಿ ತಮ್ಮನ್ನು ದೇಶದ ಮುಂದೆ ಶಕ್ತಿಯುತವಾಗಿ ಬಿಂಬಿಸಲು, ತಮ್ಮೆಲ್ಲಾ ಹಕ್ಕುಗಳನ್ನು ಮಂಡಿಸಿ, ಅವುಗಳನ್ನು ದಕ್ಕಿಸಿಕೊಳ್ಳಲು ಹಾಗೂ ತಮ್ಮೆಲ್ಲರ ಅಭ್ಯುದಯಕ್ಕಾಗಿ ಶ್ರಮಿಸಬಲ್ಲ ಕೊಡವ ಭಾಷಿಕ ಲೋಕಸಭಾ ಅಭ್ಯರ್ಥಿಯೊಬ್ಬರನ್ನು ಆಯ್ಕೆ ಮಾಡುವ ಸಂದರ್ಭ ಒದಗಿ ಬರುವವರೆಗೆ ಶ್ರಮಿಸಬೇಕಾಗಿದೆ.

12ನೇ ಜುಲೈ 2002ರಲ್ಲಿ ಜಸ್ಟೀಸ್ ಕುಲದೀಪ್ ಸಿಂಗ್ ನೇತೃತ್ವದ ಡಿಲಿಮಿಟೇಷನ್ ಕಮೀಷನ್‌ನ ಸಂದರ್ಭದಲ್ಲಿ ಕೂಡ ಕೊಡಗಿಗೆ ಭಾಷಾ ಅಲ್ಪಸಂಖ್ಯಾತರಡಿ ಲೋಕಸಭಾ ಸ್ಥಾನ ಗಳಿಸಲು ಪೂರಕ ಪರಿಸ್ಥಿತಿ ನಿರ್ಮಾಣವಾಗಿತ್ತು. ಆದರೆ ನಮ್ಮೆಲ್ಲರ ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ ಅದು ಈಡೇರಲೇ ಇಲ್ಲ.

ಮುಂದೆ 2026ರ ಡಿಲಿಮಿಟೇಷನ್ ಕಮೀಷನ್‌ಗಿಂತ ಮುಂಚೆ ಈ ದಿಸೆಯಲ್ಲಿ ನಾವುಗಳು ಸಾಗಬೇಕಾಗಿರುವ ಹಾದಿ ಹಾಗೂ ಸದ್ಯ ನಾವಿರುವ ಪರಿಸ್ಥಿತಿಗಳನ್ನು ಅವಲೋಕಿಸಿ ಈ ಕೆಳಕಂಡಂತೆ ಅರ್ಥೈಸಲಾಗಿದೆ.

1. ಕೊಡವ ಭಾಷೆ ಕರ್ನಾಟಕದಲ್ಲಿ ಅಧಿಕೃತ ಅಲ್ಪಸಂಖ್ಯಾತರ ಭಾಷೆಗಳ ಪಟ್ಟಿಯಲ್ಲಿ ಇಲ್ಲ. ಇದರ ಅರ್ಥ ಕರ್ನಾಟಕದಲ್ಲಿ ವಿಲೀನಗೊಂಡ ಕೊಡಗು ರಾಜ್ಯದ ಕೊಡವ ಭಾಷಿಕರನ್ನು (ಅದರಲ್ಲೂ ಕೊಡವರನ್ನು) ಸರ್ಕಾರ ಗುರುತಿಸಿಯೇ ಇಲ್ಲದಿರುವ ದುರದೃಷ್ಟಕರ ಪರಿಸ್ಥಿತಿ ಇದೆ.

2. ಕರ್ನಾಟಕದಲ್ಲಿ ವಿಲೀನಗೊಂಡ ಕೊಡಗು ಕಳೆದ 7 ದಶಕಗಳಿಂದ ತನ್ನ ಆದಿಮ ಸಂಜಾತ ಬುಡಕಟ್ಟು ಮತ್ತು ದ್ರಾವಿಡ ನೆಲೆಗಟ್ಟಿನ ಪ್ರಾಚೀನ ಕೊಡವ ಭಾಷೆಯನ್ನು ಎಷ್ಟರ ಮಟ್ಟಿಗೆ ಮೂಲೆಗುಂಪು ಮಾಡಲಾಗಿದೆ ಎಂದರೆ ಕರ್ನಾಟಕದಲ್ಲಿ ಉರ್ದು, ತಮಿಳು, ತೆಲುಗು, ಮಲೆಯಾಳಂ, ಗುಜರಾತಿ, ಲಂಬಾಣಿ, ಹಿಂದಿ, ಮರಾಠಿ, ತುಳು ಮತ್ತು ಕೊಂಕಣಿ ಭಾಷೆಗಳನ್ನು ರಾಜಕೀಯ ಪ್ರೇರಿತ ಅಲ್ಪಸಂಖ್ಯಾತ ಭಾಷೆಗಳಾಗಿ ಘೋಷಿಸಲಾಗಿದೆ. ಆದರೆ ಕೊಡವ ಭಾಷೆಯನ್ನು ಹೊರಗಿಡಲಾಗಿದೆ.

3. ಕರ್ನಾಟಕದ ಅಧಿಕೃತ ಅಲ್ಪಸಂಖ್ಯಾತ ಭಾಷಾ ಪಟ್ಟಿಯಿಂದ ಹೊರಗುಳಿದಿರುವ ಕೊಡವ ಭಾಷೆ ಯಾವುದೇ ಕಾರಣಕ್ಕೂ ಏನೇ ಹೋರಾಟ ಮಾಡಿದರೂ 8ನೇ ಶೆಡ್ಯೂಲ್‌ಗೆ ಸೇರ್ಪಡೆಯಾಗಲು ಸಾಧ್ಯವಿಲ್ಲ.

ನಮ್ಮ ನೆರೆಯ ರಾಜ್ಯಗಳ ಅಧಿಕೃತ ಭಾಷೆಗಳನ್ನು ಕರ್ನಾಟಕ ರಾಜ್ಯದಲ್ಲಿ ಅಲ್ಪಸಂಖ್ಯಾತರ ಭಾಷೆ ಎಂದು ಪರಿಗಣಿಸಿ, ಅವನತಿಯತ್ತ ಸಾಗುತ್ತಿರುವ ಕೊಡವ ಭಾಷಿಕ ಸಮುದಾಯಗಳು ಮತ್ತು ಕೊಡವ ಭಾಷೆಯ ಅಸ್ತಿತ್ವವನ್ನು ರಕ್ಷಿಸುವ ಜವಾಬ್ದಾರಿಯನ್ನು ಇಲ್ಲಿಯವರೆಗೆ ಕರ್ನಾಟಕ ರಾಜ್ಯವನ್ನಾಳಿದ ಸರಕಾರಗಳು ಸಂಪೂರ್ಣವಾಗಿ ನಿರ್ಲಕ್ಷಿಸಿರುವುದು ಸಂವಿಧಾನಬದ್ಧವಾಗಿಲ್ಲವೆಂಬ ಅಭಿಪ್ರಾಯ ಕೊಡವ ಭಾಷಿಕರಲ್ಲಿ ದಟ್ಟವಾಗಿ ಮೂಡಿದೆ.

4. 2026ರ ಜನಗಣತಿಯ ನಂತರ ಬರುವ ಡಿಲಿಮಿಟೇಷನ್ ಕಮೀಷನ್‌ನ ಮುಂದೆ ನಾವುಗಳು ಕೊಡವ ಭಾಷಾ ಅಲ್ಪಸಂಖ್ಯಾತರ ಆಧಾರದಲ್ಲಿ ಸಮರ್ಥವಾಗಿ ನಮ್ಮ ವಾದವನ್ನು ಮಂಡಿಸುವಲ್ಲಿ ವಿಫಲರಾದಲ್ಲಿ ಕೊಡವ ಭಾಷಿಕ ಸಮುದಾಯಗಳ ಜನರು ಉದ್ಯೋಗ, ಜೀವನೋಪಾಯ ಅರಸಿ ಬೆಂಗಳೂರು, ಮೈಸೂರು, ಮಂಗಳೂರಿನಂತಹ ಮಹಾನಗರಗಳಲ್ಲಿ, ಮೇಲಾಗಿ ದೇಶಾದ್ಯಂತ ರಕ್ಷಣಾ ಪಡೆಗಳಲ್ಲಿ ಸೇವೆ ಸಲ್ಲಿಸುತ್ತಾ ಇನ್ನು ಚದುರಿ ಹೋಗುವುದರಲ್ಲಿ ಸಂಶಯವಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಕ್ಕೆ ನಮ್ಮ ಸ್ಪಷ್ಟ ನಿಲುವನ್ನು ಸಲ್ಲಿಸಬೇಕಾಗಿರುವುದು ಕೊಡವ ಭಾಷಿಕರ ಆದ್ಯ ಕರ್ತವ್ಯವಾಗಿದೆ.

ಈ ನೆಲೆಗಟ್ಟಿನಲ್ಲಿ ಹೋರಾಡಲು ಈಗಿನಿಂದಲೇ ವೇದಿಕೆಯೊಂದನ್ನು ಸಿದ್ಧಪಡಿಸಿ ಹೋರಾಟದ ರೂಪುರೇಷೆಗಳನ್ನು ಸಿದ್ಧಪಡಿಸುವ ಕಾರ್ಯ ಆದ್ಯತೆ ಮೇರೆಗೆ ಮುಂದಿನ ದಿನಗಳಲ್ಲಿ ತುರ್ತಾಗಿ ನಡೆಯಬೇಕಿದೆ.

5. ಈಗಿನ ಕೊಡವ ಭಾಷಿಕ ಯುವ ಜನಾಂಗ ಉದ್ಯೋಗ ನಿಮಿತ್ತ ನಗರಗಳಲ್ಲಿ ವಾಸಿಸುತ್ತಿದ್ದು, ನಿಧಾನಕ್ಕೆ ಕೃಷಿ ಭೂಮಿಯತ್ತ ತಮ್ಮ ಆಸಕ್ತಿ ಕಳೆದುಕೊಂಡು ಪ್ರವಾಸೋದ್ಯಮ ಹಾಗೂ ಹೊರರಾಜ್ಯಗಳಿಂದ ಜನರು ಬಂದು ನೆಲೆಯೂರುತ್ತಿರುವ ಕಾರಣದಿಂದ, ಹೆಚ್ಚುತ್ತಿರುವ ರಿಯಲ್ ಎಸ್ಟೇಟ್ ದರಗಳಿಂದ ಉತ್ತೇಜನಗೊಂಡು ಭೂಮಿ ಮಾರುತ್ತಿದ್ದಾರೆ. ಇದೇ ತರಹದ ಪರಿಸ್ಥಿತಿಗೆ ಗೋವಾ ಕೂಡಾ ಒಳಗಾಗಿತ್ತು. ಇಂದು ಅಲ್ಲಿನ ಆದಿಮ ಸಂಜಾತ ಜನರ ಪರಿಸ್ಥಿತಿ ಎಲ್ಲಿಗೆ ತಲುಪಿದೆ ಎಂಬ ಬಗ್ಗೆ ನಮ್ಮ ಯುವ ಜನರಿಗೆ ತಿಳಿಹೇಳಬೇಕಾಗಿದೆ.

ಪೋರ್ಚುಗೀಸ್ ಕಾಲದಲ್ಲಿ ನಿರ್ಮಾಣಗೊಂಡ ಬೆಲೆ ಕಟ್ಟಲಾಗದ ಸಾಂಸ್ಕೃತಿಕ ವೈಭವಕ್ಕೆ ಸಾಕ್ಷಿಯಾದ ಗೋವಾದ ಭವ್ಯ ಸೌಧಗಳು ದೊಡ್ಡ ದೊಡ್ಡ ಕೈಗಾರಿಕೋದ್ಯಮಿಗಳ, ಭೂಮಾಫಿಯಾಗಳ ಪಾಲಾಗಿರುವುದು ಕಂಡುಬರುತ್ತದೆ. ಹೀಗೆ ಆಸ್ತಿ ಮನೆ ಮಾರಿ ವಿದೇಶಗಳಲ್ಲಿ ಹೋಗಿ ನೆಲೆ ನಿಂತು, ಅಲ್ಲಿ ನಾನಾ ಕಾರಣಗಳಿಂದ ಗೋವನ್ನರನ್ನು ಹೊರಗಟ್ಟಿದಾಗ ಇತ್ತ ಸ್ವದೇಶಕ್ಕೂ ಬರಲಾಗದೆ, ಅತ್ತ ವಿದೇಶಗಳಲ್ಲೂ ಇರಲಾಗದ ಅತಂತ್ರ ಸ್ಥಿತಿ ನಮ್ಮ ಕಣ್ಣ ಮುಂದಿದೆ. ಈ ಪರಿಸ್ಥಿತಿ ಕೊಡಗಿನ ಐನ್‌ಮನೆ (ಬಲ್ಯ ಮನೆ)ಗಳಿಗೆ ಬಾರದಿರುವಂತೆ ಎಚ್ಚರಿಕೆ ವಹಿಸಬೇಕಾಗಿದೆ.


6. ಈ ವಿಷಯದಲ್ಲಿ ನೆರೆಯ ಕೇರಳ ರಾಜ್ಯವನ್ನು ನಾವು ನೋಡಿ ಕಲಿಯಬೇಕಾಗುವಂತಹದ್ದು ಬಹಳಷ್ಟಿದೆ. ಕೇರಳಿಗರು ಹೊರದೇಶಗಳಲ್ಲಿ ದುಡಿಯುತ್ತಿದ್ದರೂ, ತಮ್ಮ ಮನೆ, ಜಮೀನುಗಳನ್ನು ಮಾರಿದ್ದು ತುಂಬಾ ಕಡಿಮೆ. ಈ ದಿನಕ್ಕೂ ಅಧಿಕ ಖಾಲಿ ಮನೆ, ಹವೇಲಿಗಳು ಕೇರಳದಲ್ಲಿವೆ. ಆದರೆ ಅದನ್ನು ನೋಡಿಕೊಳ್ಳಲು ಅಗತ್ಯ ನೌಕರರ ವ್ಯವಸ್ಥೆ, ವಿದೇಶದಲ್ಲಿದ್ದರೂ ತಂತ್ರಜ್ಞಾನದ ಫಲವಾಗಿ ಕೇರಳಿಗರು ಸಿಸಿ ಕ್ಯಾಮರಾಗಳನ್ನು ಅಳವಡಿಸಿ ತಮ್ಮ ಜಮೀನು, ಮನೆಗಳ ಮೇಲೆ ನಿಗಾ ಇಟ್ಟಿರುತ್ತಾರೆ. ಕೇರಳಿಗರಿಗೆ ಮುಂದೊಂದು ದಿನ ತಾಯ್ನಾಡು, ತಮ್ಮ ನೆಲ ಬೇಕೇ ಬೇಕೆಂಬುದು ಚೆನ್ನಾಗಿ ತಿಳಿದಿದೆ.

7. ಸದ್ಯ ಹೆಚ್ಚಿನ ಖಾಸಗಿ ಕಂಪನಿಗಳಲ್ಲಿ ಕೈತುಂಬಾ ಸಂಬಳ ಪಡೆಯುತ್ತಿರುವ ಕೊಡವ ಭಾಷಿಕ ಯುವ ಜನಾಂಗಕ್ಕೆ ಮುಂದೆ ಹಲವಾರು ಉದ್ಯೋಗಗಳನ್ನು ಆಪೋಶನ ತೆಗೆದುಕೊಳ್ಳಲು ಹೊರಟಿರುವ **ಆರ್ಟಿಫಿಶಿಯಲ್ ಇಂಟೆಲಿಜೆನ್ಸ್** (ಎಐ)ನ ಬಗ್ಗೆ ತಿಳಿಹೇಳಬೇಕು. ಒಂದು ಸಮೀಕ್ಷೆಯ ಪ್ರಕಾರ ಬರಲಿರುವ ವರ್ಷಗಳಲ್ಲಿ ತಂತ್ರಜ್ಞಾನದ ಫಲವಾಗಿ ಸಾವಿರ... ಸಾವಿರ ಉದ್ಯೋಗಗಳು ಕಣ್ಮರೆಯಾಗಲಿವೆ. ಆ ಸಂದರ್ಭದಲ್ಲಿ ಕೊಡಗಿಗೆ ವಾಪಸು ಬಂದು ನೋಡಿದಾಗ ಹಳ್ಳಿಗಳೆಲ್ಲಾ ನಗರಗಳಾಗಿರುತ್ತವೆ. ಇರುವ ಕೃಷಿ ಭೂಮಿ, ಕಾಫಿ ತೋಟಗಳೂ ತಂತ್ರಜ್ಞಾನದ ಫಲವಾಗಿ ಹೆಚ್ಚಿನ ಉತ್ಪಾದಕತೆ (productivity) ಹೊಂದಿರುತ್ತವೆ. ಮುಂದೆ ತನ್ನ ತಾಯ್ನೆಲದಲ್ಲಿಯೇ ಬದುಕು ಕಟ್ಟಿಕೊಳ್ಳಲು ಕೃಷಿಗೆ ಸರಕಾರದಿಂದ ಮತ್ತಷ್ಟು ಉತ್ತೇಜನಗಳು ಸಿಗಲಿವೆ ಎಂಬುದನ್ನು ತಿಳಿಹೇಳಬೇಕು.

ಅಂತಿಮವಾಗಿ ಕೊಡಗು, ಕೊಡವ ಭಾಷಿಕರ ಸಂಸ್ಕೃತಿ, ದೇವರ ಕಾಡುಗಳು, ಕೈಮರಗಳು, ಮಂದ್‌ಯಾನಿ, ಐನ್‌ಮನೆಗಳು, ಪ್ರಕೃತಿಯನ್ನು ಹತ್ತಿಕ್ಕಿದೆ, ಇಲ್ಲಿನ ಮರಕಾಡುಗಳ ಮಧ್ಯೆ ನಾವು ಬೆಳೆಯುತ್ತಿರುವ ಬೆಳೆಗಳಾದ ಕಾಫಿ, ಏಲಕ್ಕಿ, ಕರಿಮೆಣಸು, ಭತ್ತದ ಗದ್ದೆಗಳು, ಅದಕ್ಕೆ ಪೂರಕವಾಗಿರುವ ನಮ್ಮ ಪುತ್ತರಿ, ಕೈಲ್ ಪೋಳ್ದ್‌ನಂತಹ ಹಬ್ಬಗಳು, ನಮ್ಮ ಪ್ರಕೃತಿಯೊಂದಿಗಿನ ಸಂಬಂಧ ಒಂದಕ್ಕೊಂದು ಪೂರಕ. ಪಶ್ಚಿಮ ಘಟ್ಟಗಳ ಮಧ್ಯೆ ಶತಮಾನಗಳಿಂದ ಬದುಕಿ ಬಂದಿರುವ ನಮ್ಮ ಜೀವನ ಶೈಲಿ ಇವೆಲ್ಲವೂ ಉಳಿಯಬೇಕಾದರೆ **ಮೊದಲು ನಮ್ಮ ಆಡುಭಾಷೆಯಾದ ಕೊಡವ ಭಾಷೆಯನ್ನು ಅಲ್ಪಸಂಖ್ಯಾತ ಭಾಷೆಗಳ ಪಟ್ಟಿಗೆ ಸೇರಿಸಿ ನಮ್ಮ ಆಶೋತ್ತರಗಳನ್ನು ಸಂರಕ್ಷಿಸುವ ಸಮರ್ಥ ಕೊಡವ ಭಾಷಿಕ ಅಭ್ಯರ್ಥಿಯನ್ನು ಲೋಕಸಭೆಗೆ ಆಯ್ಕೆ ಮಾಡಿ ಕಳಿಸುವುದರಲ್ಲಿ ಅಡಗಿದೆ**. ಆ ಗುರಿ ಮುಟ್ಟಬೇಕಾದರೆ ನಮ್ಮ ಮಧ್ಯೆ ಇರಬಹುದಾದಂತಹ ಮಾನಸಿಕ ಕಂದಕಗಳನ್ನು ಮುಚ್ಚಿ, ಯುವ ಜನಾಂಗವನ್ನು ಗುರಿಯಾಗಿಸಿಕೊಂಡು ಅವರಿಗೆ ನಾಳಿನ ಸುಂದರ ಕನಸುಗಳನ್ನು ಕಟ್ಟಿಕೊಡುವಲ್ಲಿ ನಾವೆಲ್ಲರೂ ಒಂದಾಗಬೇಕಿದೆ.

ಮೈಸೂರು ವಿವಿಗೆ ಶೀಘ್ರ ಕುಲಪತಿ ನೇಮಕಕ್ಕೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

ಮೈಸೂರು, ಸೆ.13(ಎಸ್‌ಪಿಎನ್)–ಕಳೆದ ಮೂರು ತಿಂಗಳಿಂದ ಮೈಸೂರು ವಿವಿಯಲ್ಲಿ ಕುಲಪತಿ ಇಲ್ಲದೆ ವಿವಿ ಕಾರ್ಯ ಚಟುವಟಿಕೆ ಸ್ಥಗಿತಗೊಂಡು ಇಲ್ಲಿನ ಶೈಕ್ಷಣಿಕ ಚಟುವಟಿಕೆಗಳಿಗೆ ಹಿನ್ನೆಡೆಯಾಗುತ್ತಿದ್ದು, ಕೂಡಲೇ ಕುಲಪತಿಗಳ ನೇಮಕ ಮಾಡುವಂತೆ ಒತ್ತಾಯಿಸಿ ಎಬಿವಿಪಿ ಪದಾಧಿಕಾರಿಗಳು ಮೈಸೂರು ವಿವಿ ಕ್ರಾಫರ್ಡ್ ಹಾಲ್ ಮುಂಭಾಗ ಬುಧವಾರ ಪ್ರತಿಭಟನೆ ನಡೆಸಿದರು. ರಾಜ್ಯ ಸರ್ಕಾರದ ವಿರುದ್ಧ ವಿವಿಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, ಮೈಸೂರು ವಿವಿ



ದೇಶದ ಪ್ರತಿಷ್ಠಿತ ವಿವಿಗಳಲ್ಲಿ ಒಂದಾಗಿದೆ. ಇಂತಹ ವಿವಿಯಲ್ಲಿ ಕಳೆದ 3 ತಿಂಗಳಿಂದ ಕುಲಪತಿ ಹುದ್ದೆಯನ್ನು ಖಾಲಿ ಉಳಿಸಿಕೊಂಡು, ಶೈಕ್ಷಣಿಕ ಚಟುವಟಿಕೆಗಳ ನಡೆಸಿಕೊಂಡು ಬರುತ್ತಿರುವುದು ಸರ್ಕಾರದ ಶಿಕ್ಷಣ ವಿರೋಧಿ ನೀತಿಗೆ ಸಾಕ್ಷಿಯಾಗಿದೆ. ಕುಲಪತಿಗಳ ನೇಮಕಾತಿ ವಿಳಂಬದಿಂದಾಗಿ ಅನೇಕ ಸಮಸ್ಯೆಗಳು ಎದುರಾಗುತ್ತಿವೆ ಎಂದು ಆರೋಪಿಸಿದರು. ರಾಜ್ಯ ಸರ್ಕಾರ ಮೈಸೂರು ವಿವಿಗೆ ಕೂಡಲೇ ಕುಲಪತಿ ನೇಮಕ ಮಾಡುವಂತೆ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಮೈಸೂರು ಘಟಕದ ಪದಾಧಿಕಾರಿಗಳು ಒತ್ತಾಯಿಸಿ, ಕುಲಸಚಿವೆ ಡಾ.ಶೈಲಜಾ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ವೇಳೆ ಎಬಿವಿಪಿ ಕಾರ್ಯದರ್ಶಿ ಐಶ್ವರ್ಯ, ವಿಭಾಗ ಸಂಚಾಲಕ ಶ್ರೇಯಸ್, ಸಹ ಸಂಚಾಲಕ ಪ್ರಜ್ವಲ್, ಕಾರ್ಯಕರ್ತರಾದ ದತ್ತ ಸುದರ್ಶನ್, ಸುಭಾಷ್, ಪ್ರಜ್ವಲ್, ಶ್ರೇಯಸ್, ಆದರ್ಶ, ಸಿರಿ, ಶ್ರೀಕಂಠ, ದಿನೇಶ್, ಆಕಾಶ್, ಪ್ರಣತಿ, ಹರ್ಷ, ಸುಪ್ರೀತ್ ಇದ್ದರು.

ನಾಳೆ ಶ್ರೀನಿವಾಸ ಕಲ್ಯಾಣ ಹರಿಕಥೆ

ಮೈಸೂರು,ಸೆ.13–ಮೈಸೂರಿನ ಚಂಪಕ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್ ವತಿಯಿಂದ ದಟ್ಟಗಳ್ಳಿ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ಚಂಪಕ ದೇವಾಲಯ ಕಲಾ ಉತ್ಸವ ಭಾದ್ರಪದ ಅಂಕ ಅಂಗವಾಗಿ ಸೆ.15ರಂದು ಸಂಜೆ 6.30ಕ್ಕೆ 'ಶ್ರೀನಿವಾಸ ಕಲ್ಯಾಣ' ಹರಿಕಥೆಯನ್ನು ವಿದುಷಿ ಬೇಲೂರು ವಸಂತಲಕ್ಷ್ಮಿ ನಡೆಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಗುರುವಾರ 14 ಸೆಪ್ಟೆಂಬರ್ 2023

ಮಣ್ಣಿನ ಮಕ್ಕಳಿಂದ ನೀರಿನ ಅನ್ಯಾಯವಾಯ್ತು ಎಂದ ಮೊಯಿಲಿ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ

ಅಸತ್ಯ ಹೇಳಿ ಜನರ ದಿಕ್ಕು ತಪ್ಪಿಸುತ್ತಿದ್ದಾರೆಂದು ಆಕ್ರೋಶ



ಬೆಂಗಳೂರು, ಸೆ.13(ಕೆಎಂಶಿ)–ರಾಜ್ಯ ನೀರಾವರಿಗೆ ಮಣ್ಣಿನ ಮಕ್ಕಳಿಂದ ಅನ್ಯಾಯವಾಗಿದೆ ಎಂದು ಹೇಳಿದ್ದ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ ಅವರ ವಿರುದ್ಧ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೆಲಮಂಗಲದಲ್ಲಿ ನಡೆದ ಸಭೆಯೊಂದರಲ್ಲಿ ಭಾಷಣ ಮಾಡಿದ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ, ಮಣ್ಣಿನ ಮಕ್ಕಳಿಂದ ಕಾವೇರಿಗೆ ದ್ರೋಹ ಆಗಿದೆ ಅಂತ ಹಸಿ ಸುಳ್ಳು ಹೇಳಿದ್ದಾರೆ. ಆದರೆ, ತಮ್ಮಿಂದ ಏನು ಆಗಿದೆ ಎನ್ನುವುದನ್ನು ಹೇಳಬೇಕಿತ್ತು. ಆದರೆ, ಬರೀ ಅಸತ್ಯವನ್ನೇ ಹೇಳಿ ಜನರ ಹಾದಿ ತಪ್ಪಿಸಿದ್ದಾರೆ ಎಂದು ಕುಮಾರಸ್ವಾಮಿ ಹೇಳಿದರು.

ಇವರಿಂದ ನೀರಾವರಿಯಲ್ಲಿ ರಾಜ್ಯಕ್ಕೆ ನ್ಯಾಯ ಸಿಕ್ಕಿದ್ದು ಏನೂ ಇಲ್ಲ. ಆಗಿರುವುದೆಲ್ಲ ಅನ್ಯಾಯವೇ. ಹಿಂದೆ ಮುಖ್ಯಮಂತ್ರಿಯಾಗಿದ್ದ ಧರ್ಮಸಿಂಗ್, ಉಪ ಮುಖ್ಯಮಂತ್ರಿ ಆಗಿದ್ದ ಸಿದ್ದರಾಮಯ್ಯ ಅವರನ್ನು ಕಾವೇರಿ ವಿಷಯದಲ್ಲಿ ದಾರಿ ತಪ್ಪಿಸಿದ್ದು ಇದೇ ವೀರಪ್ಪ ಮೊಯಿಲಿ ಎಂದು ಕುಮಾರಸ್ವಾಮಿ ಟೀಕಾ ಪ್ರಹಾರ ನಡೆಸಿದರು.

ಈ ಮಹಾನುಭಾವರು 2 ವರ್ಷ ಮುಖ್ಯಮಂತ್ರಿ ಆಗಿದ್ದರು. ಈ ವ್ಯಕ್ತಿ ಅಧಿಕಾರ ಕಳೆದುಕೊಂಡು ಮನೆಗೆ ಹೋಗುವಾಗ ಬೊಕ್ಕಸವನ್ನು ದಿವಾಳಿ ಮಾಡಿದ್ದರು. ಸರಕಾರಿ ನೌಕರರಿಗೆ ಸಂಬಳ ಕೊಡಲಿಕ್ಕೂ ಹಣ ಇರಲಿಲ್ಲ. ಆಗ ಪಶ್ಚಿಮ ಬಂಗಾಳದ ಪಿಯರ್‌ಲೆಸ್ ಸಂಸ್ಥೆಗೆ ರಾಜ್ಯವನ್ನು ಒತ್ತೆ ಇಟ್ಟು ಸಾಲ ತಂದವರು ಇವರು. ಇಂಥವರು ಮಣ್ಣಿನಮಕ್ಕಳಿಂದ ನೀರಾವರಿಗೆ ಅನ್ಯಾಯ ಆಗಿದೆ ಎಂದು ಸುಳ್ಳು ಹೇಳಿದ್ದಾರೆ ಎಂದು ಕಿಡಿಕಾರಿದರು.

ಓಹೋ.. ಇವರು ಕವಿ ಸರ್ವೋತ್ತಮರು, ಮಹಾಕವಿಗಳು. ನಮ್ಮ ಕುವೆಂಪು ಅವರಿಗಿಂತ ಮಹಾನ್ ಕವಿಗಳು.. ರಾಮಾಯಣವನ್ನು ಮಹಾನ್ವೇಷಣೆ ಮಾಡಿ ಮಹಾ ಕಾವ್ಯ ಬರೆದ ಮಹಾನುಭಾವರು. ಸರಸ್ವತಿ ಸಮ್ಮಾನ್ ಪುರಸ್ಕಾರ ಪಡೆದ ಸರಸ್ವತಿ ಪುತ್ರರು. ಇಂಥ ಸರಸ್ವತಿ ಪುತ್ರರ ಬಾಯಲ್ಲಿ ಸುಳ್ಳು ಬರ ಬಹುದೇ? ಎಂದು ಕುಮಾರಸ್ವಾಮಿ, ವೀರಪ್ಪ ಮೊಯಿಲಿ ಅವರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು. ಕಾವೇರಿ ಟ್ರಿಬ್ಯುನಲ್ ರಚಿಸುವಾಗ ಈ ಮಹಾನುಭಾವನ ಕೊಡುಗೆ ಏನು? ಅದರ ರಚನೆ ವಿರುದ್ಧ ದೇವೇಗೌಡರು ಹೋರಾಟ ನಡೆಸುತ್ತಿದ್ದಾಗ ಇವರ ಪಾತ್ರ ಏನಾಗಿತ್ತು? 1962ರಿಂದ ಕಾವೇರಿ ನೀರಿನ ಹಕ್ಕಿಗಾಗಿ ಜೀವನ ಮೀಸಲಿಟ್ಟ ಆ ಮಣ್ಣಿನಮಗನ ಹೋರಾಟದ ಫಲ ಏನೆಂಬುದು ಇವರಿಗೆ ಗೊತ್ತಿಲ್ಲವೇ? ಹಾರಂಗಿ, ಹೇಮಾವತಿ, ಕಬಿನಿ ಜಲಾಶಯಗಳು ಹೇಗೆ ನಿರ್ಮಾಣ ಆದವು? ಇವರ ಸಾಧನೆ ಏನು? ಎಂದು ಮಾಜಿ ಮುಖ್ಯಮಂತ್ರಿ ಅವರು ಖಾರವಾಗಿ ಪ್ರಶ್ನಿಸಿದರು.

ರಾಜ್ಯದ ನೀರಾವರಿಗೆ ಇಷ್ಟೆಲ್ಲಾ ಕೊಡುಗೆ ನೀಡಿದ ದೇವೇಗೌಡರನ್ನು ಚುನಾವಣೆಯಲ್ಲಿ ಸೋಲಿಸಿ ಮನೆಗೆ ಕಳಿಸಿದರಲ್ಲ...? ಹಾಗಾದರೆ, ಇವರ ಕೊಡುಗೆ ಏನು ಎಂಬ ಬಗ್ಗೆ ಸತ್ಯ ಹೇಳಬೇಕೇ ವಿನಾ ಸುಳ್ಳು ಹೇಳಬಾರದಲ್ಲವೇ ಇವರಿಂದ ನಾವು ಪಾಠ ಹೇಳಿಸಿಕೊಳ್ಳಬೇಕಾ? ಪಾಪ.. ಇವರನ್ನು ಕರೆಸಿ ಕೂರಿಸಿಕೊಂಡು ಸರಕಾರ ಸಲಹೆ ಪಡೆದುಕೊಳ್ಳಲಿ. ನಮಗಿಂತ ಅವರೇ ಒಳ್ಳೆಯ ಸಲಹೆ ಕೊಡುತ್ತಾರೆ. ನಮ್ಮನ್ನು ಕರೆದರೆ ಉಪಯೋಗ ಏನು? ಈ ಸರಕಾರಕ್ಕೆ ನಾಡಿನ ಜನರ ಹಿತ ರಕ್ಷಣೆಯ ತಿಳಿವಳಿಕೆಯೂ ಇಲ್ಲ, ಕಾಳಜಿಯೂ ಇಲ್ಲ. ಜನರ ಹಿತರಕ್ಷಣೆ ಮಾಡುವ ತಾಕತ್ತು ಇಲ್ಲ, ದಮ್ಮೂ ಇಲ್ಲ. ಹೀಗಾದರೆ, ರೈತರ ಬೆಳೆಗಳಿಗೆ, ಬೆಂಗಳೂರಿಗೆ ಕುಡಿಯುವ ನೀರು ಎಲ್ಲಿಂದ ತಂದುಕೊಡುತ್ತಾರೆ? ಎಂದು ಪ್ರಶ್ನಿಸಿದರು.

ತಮಿಳುನಾಡಿನಲ್ಲಿ ಎಷ್ಟು ಎಕರೆ ಬೆಳೆ ಬೆಳೆದಿದ್ದಾರೆ. ಎಷ್ಟು ನೀರಾವರಿ ಭೂಮಿಯನ್ನು ವಿಸ್ತರಣೆ ಮಾಡಿಕೊಂಡಿದ್ದಾರೆ. ಈವರೆಗೆ ಎಷ್ಟು ನೀರು ನೀಡಲಾಗಿದೆ. ಈ ಎಲ್ಲಾ ಮಾಹಿತಿ ರಾಜ್ಯ ಸರಕಾರಕ್ಕೆ ಇದೆಯಾ? ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ಹಾಗೂ ಜಲ ನಿಯಂತ್ರಣ ಸಮಿತಿಗೆ ಇವರು ಮಾಹಿತಿ ಕೊಟ್ಟಿದ್ದಾರೆಯೇ ಎಂದು ಅವರು ಕೇಳಿದರು.

ಹಿಂದೆ ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ರಚನೆ ಮಾಡು ವಾಗಲೇ ನಾವು ಉಗ್ರವಾಗಿ ಪ್ರತಿಭಟಿಸಿದ್ದೆವು. ಆದರೆ, ಕಾಂಗ್ರೆಸ್ ಸರಕಾರ ಗಳು ಮಾಡಿದ್ದೇನು? ನಿರಂತರವಾಗಿ ರಾಜ್ಯದ ಹಿತ ಕಡೆಗಣಿಸಿದವು. ಈಗ ನೋಡಿದರೆ ಸಂಕಷ್ಟ ಸೂತ್ರದ ಬಗ್ಗೆಯೇ ಚಕಾರ ಎತ್ತದೆ ತಮಿಳುನಾಡಿಗೆ ನೀರು ಹರಿಸುತ್ತಿದೆ. ಪದೇಪದೆ ಕರ್ನಾಟಕದ ಮೇಲೆ ದಬ್ಬಾಳಿಕೆ ಮಾಡುವ ಕೆಲಸ ಆಗುತ್ತಿದೆ ಎಂದು ಅವರು ಕಿಡಿಕಾರಿದರು.

ಒಂದನೇ ಪುಟದಿಂದ

ನಿಯಂತ್ರಣಕ್ಕೆ ಸಮನ್ವಯ ಬಹಳ ಅವಶ್ಯ

ರಾಜ್ಯ ಹೊಂದಿದೆ. ಇಂಥ ಪ್ರಕರಣಗಳನ್ನು ನಿರ್ವಹಿಸಲೆಂದೇ ಸೈಬರ್ ಠಾಣೆಯ ಅಧಿಕಾರಿಗಳು ವಿಶೇಷ ತರಬೇತಿ ಪಡೆದಿದ್ದಾರೆ ಎಂದರು. ನಮ್ಮ ದೇಶದ ಬುನಾದಿ ಹಾಗೂ ಸಮಾಜದ ಸಂರಚನೆಗೆ ಸವಾಲಾಗಿರುವ ಆಂತರಿಕ ಭದ್ರತಾ ವಿಷಯಗಳು ತಮ್ಮ ಸಂಪೂರ್ಣ ಗಮನ ಮತ್ತು ಸಹಯೋಗ ಅಗತ್ಯ ಎಂದರು. ಕಾನೂನು ಸುವ್ಯವಸ್ಥೆ ಕಾಪಾಡುವುದು, ಸಾರ್ವಜನಿಕ ವ್ಯವಸ್ಥೆ ಹಾಗೂ ತಮ್ಮ ಪ್ರದೇಶದ ಪ್ರತಿಯೊಬ್ಬರ ಸುರಕ್ಷತೆ ಹಾಗೂ ಭದ್ರತೆಯ ಜವಾಬ್ದಾರಿಯನ್ನು ಹೊತ್ತಿರುವ ಪೊಲೀಸ ರಿಂದ ಅಚಲ ಬದ್ಧತೆ, ಸಮರ್ಪಣೆ ಹಾಗೂ ಕರ್ತವ್ಯ ಪರತೆಯನ್ನು ನಿರೀಕ್ಷಿಸಲಾಗುತ್ತದೆ. ಇತ್ತೀಚಿನ ದಿನ ಗಳಲ್ಲಿ ಸಾಂಪ್ರದಾಯಿಕ ಅಪರಾಧಿ ಚಟುವಟಿಕೆಗಳಿಂದ ಹಿಡಿದು ಡಿಜಿಟಲ್ ವಲಯದ ಬೆದರಿಕೆಗಳನ್ನೂ ದೇಶ ಎದುರಿಸುತ್ತಿದೆ. ಆಧುನಿಕ ಸಮಾಜದ ಸಂಕೀರ್ಣತೆ ಗಳೂ ಕೂಡ ಹೊಸ ಮಾದರಿಯ ಅಪರಾಧಗಳನ್ನು ಹೆಚ್ಚಿಸಿವೆ. ಇದರಿಂದಾಗಿ ಪೊಲೀಸ್ ತಂತ್ರಗಾರಿಕೆ ಯಲ್ಲಿಯೂ ನಿರಂತರವಾಗಿ ಮಾರ್ಪಾಡು ಮಾಡ ಬೇಕಾದ ಅವಶ್ಯಕತೆ ಇದೆ. ಕಾನೂನು ಪಾಲಕರಾಗಿ ತಾವುಗಳು ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡು ವವರಿಂದ, ಶಾಂತಿ ಕದಡು ವವರಿಗಿಂತ ಒಂದು ಹೆಜ್ಜೆ ಮುಂದಿರಬೇಕಲ್ಲದೇ ಶೀಘ್ರವಾಗಿ ಹೊಂದಿ ಕೊಂಡು ನವೀನ ಮಾದರಿಯನ್ನು ಅಳವಡಿಸಿಕೊಳ್ಳಬೇಕು. ಮಾದಕವಸ್ತು ನಿಯಂತ್ರಣದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಅತ್ಯುತ್ತಮ ಕೆಲಸ ಮಾಡಿದ್ದು, ಅಂತರರಾಷ್ಟ್ರೀಯ ಮಾದಕವಸ್ತು ಜಾಲವನ್ನು ಪತ್ತೆ ಹಚ್ಚಲಾಗಿದೆ. ಡಾರ್ಕ್‌ವೆಬ್ ಮೂಲಕ ನಡೆಸುವ ಡ್ರಗ್ಸ್ ಜಾಲವನ್ನೂ ಭೇದಿಸಲಾಗಿದೆ. ರಾಜ್ಯದಲ್ಲಿ ನಕ್ಸಲ್ ಚಟುವಟಿಕೆಗಳನ್ನು ನಿಗ್ರಹಿಸಲಾಗಿದ್ದರೂ, ಕರ್ನಾಟಕ, ಕೇರಳ ಹಾಗೂ ತಮಿಳುನಾಡು ರಾಜ್ಯಗಳ ನಡುವೆ ಈ ಸಮಸ್ಯೆಯನ್ನು ಮಟ್ಟಹಾಕಲು ಹೆಚ್ಚಿನ ಸಹಕಾರ ಅಗತ್ಯ. ಭಯೋತ್ಪಾದನಾ ಚಟುವಟಿಕೆಗಳು ರಾಜ್ಯ ದಲ್ಲಿಯೂ ನಡೆದಿದ್ದು, ಇವುಗಳ ನಿಗ್ರಹಕ್ಕೆ ಮಾಹಿತಿ ಸಂಗ್ರಹಣೆ, ಸಮನ್ವಯ, ಸಹಕಾರ ಹಾಗೂ ಭಯೋ ತ್ಪಾದನಾ ಸಂಘಟನೆಗಳ ವಿರುದ್ಧ ಕ್ರಮ ಅಗತ್ಯ ಎಂದರು.

ಅಂತರ ರಾಜ್ಯ ಅಪರಾಧಿಗಳು ಹಾಗೂ ಗ್ಯಾಂಗ್ ಗಳ ಮೇಲೆ ನಿಗಾ ಅಗತ್ಯವೆಂದ ಮುಖ್ಯಮಂತ್ರಿಗಳು, ಈ ಕುರಿತು ವಿವಿಧ ರಾಜ್ಯಗಳ ನಡುವೆ ಸಮನ್ವಯ ಹಾಗೂ ಸಹಕಾರವಿದ್ದರೆ ಅಪರಾಧಿಗಳನ್ನು ಮಟ್ಟ ಹಾಕುವುದು ಸುಲಭ. ಜೈಲುಗಳಲ್ಲಿ ತೀವ್ರಗಾಮಿಗಳ ಪ್ರತ್ಯೇಕತೆಗೆ ಕ್ರಮ ಕೈಗೊಳ್ಳುವುದು ಅವಶ್ಯಕ ಎಂದ ಮುಖ್ಯಮಂತ್ರಿಗಳು, ಪೊಲೀಸ್ ಅಧಿಕಾರಿಗಳಿಗೆ ತಂತ್ರಜ್ಞಾನದ ಬಳಕೆ, ತರಬೇತಿ, ಸಾಮರ್ಥ್ಯ ವರ್ಧನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.

ದಕ್ಷಿಣ ಭಾರತ ರಾಜ್ಯಗಳ ಡಿಜಿಪಿಗಳ ಸಮ್ಮೇಳನ ದಲ್ಲಿ ಸಂತೋಷದಿಂದ ಭಾಗವಹಿಸುತ್ತಿದ್ದೇನೆ. ಈ ಸಮ್ಮೇಳನ ಅಪರಾಧ ಪತ್ತೆ ಮತ್ತು ನಿಯಂತ್ರಣದಲ್ಲಿ ದಕ್ಷಿಣ ಭಾರತ ರಾಜ್ಯಗಳ ನಡುವೆ ಇನ್ನಷ್ಟು ಹೆಚ್ಚಿನ ಸಹಕಾರ ಮತ್ತು ಸಮನ್ವಯ ಏರ್ಪಡಿಸಿಕೊಳ್ಳಲು ನೆರವಾಗುತ್ತದೆ ಎನ್ನುವ ನಂಬಿಕೆ ನನಗಿದೆ. ಅಪರಾಧ ಜಗತ್ತಿಗೆ ಗಡಿಗಳಿಲ್ಲ. ಮಿತಿಯೂ ಇಲ್ಲ. ಅಪರಾಧಗಳನ್ನು ಸಮರ್ಪಕವಾಗಿ ನಿಗ್ರಹಿಸಲು ನಾನಾ ರಾಜ್ಯಗಳ ನಡುವೆ ಮಾಹಿತಿ, ಸಂಪನ್ಮೂಲ ಮತ್ತು ತಂತ್ರಗಾರಿಕೆ ಯನ್ನು ಪರಸ್ಪರ ವಿನಿಮಯ ಮಾಡಿಕೊಳ್ಳುವುದು ಅನಿವಾರ್ಯವಾಗಿದೆ. ಅಪರಾಧ ಜಗತ್ತಿಗೆ ಗಡಿಗಳು ಇಲ್ಲದಿರುವಾಗ ಇದನ್ನು ನಿಗ್ರಹಿಸುವುದರಲ್ಲೂ ಭದ್ರತಾ ಪಡೆಗಳು, ತನಿಖಾ ಸಂಸ್ಥೆಗಳ ನಡುವೆ ಗಡಿಗಳು ಇರಬಾರದು. ದಕ್ಷಿಣ ಭಾರತ ತನ್ನ ಸಾಂಸ್ಕೃತಿಕ ವೈವಿ ಧ್ಯತೆ, ಭಿನ್ನ ಭಾಷೆಗಳು ಮತ್ತು ಭೌಗೋಳಿಕತೆ ಕಾರಣ ದಿಂದ ಅಪರಾಧ ನಿಗ್ರಹದಲ್ಲಿ ಹಲವು ಸವಾಲು ಗಳನ್ನು ಮುಂದಿಡುತ್ತಿದೆ. ಮಾದಕ ವಸ್ತು ಕಳ್ಳಸಾಗಣೆ, ಮಾನವ ಕಳ್ಳ ಸಾಗಣೆ, ಸಂಘಟಿತ ಅಪರಾಧ, ಸೈಬರ್ ಕ್ರೈಂ ಸಮಾಜದ ಮತ್ತು ಸಮುದಾಯದ ಶಾಂತಿ ಮತ್ತು ಸುರಕ್ಷತೆಗೆ ಅಪಾಯವನ್ನು ತಂದೊಡ್ಡುತ್ತಿದೆ. ಈ ಅಪ ರಾಧಗಳೆಲ್ಲಾ ರಾಜ್ಯಗಳ ಗಡಿ ದಾಟಿಯೂ ಕಾರ್ಯಾಚರಣೆ ಮಾಡುತ್ತಿರುವುದರಿಂದ ಇವುಗಳ ನಿಗ್ರಹದಲ್ಲೂ ಅಂತರ ರಾಜ್ಯ ಪೊಲೀಸ್ ತಂಡಗಳ ನಡುವೆ ಸಮನ್ವಯ ಮತ್ತು ಸಹಕಾರ ಅಗತ್ಯ. ವಿವಿಧ ಕಾನೂನು ರಕ್ಷಣೆಯ ಸಂಸ್ಥೆಗಳು ನಿರಂತರವಾಗಿ ಅಪರಾಧಿಗಳನ್ನು ಮಟ್ಟಹಾಕಲು ಜೊತೆಯಾಗಿ ಕೆಲಸ ಮಾಡುತ್ತಿವೆ ಎಂಬ ವಿಷಯವೇ ಅವರನ್ನು ಎದೆಗುಂದಿಸಬಹುದು. ಇದರೊಂದಿಗೆ ಅಂತರರಾಜ್ಯ ಸಮನ್ವಯವು ಅಪರಾಧ ತಡೆಗಟ್ಟುವಲ್ಲಿನ ಉತ್ತಮ ಹಾಗೂ ವಿನೂತನ ಮಾದರಿ ಗಳನ್ನು ಹಂಚಿಕೊಳ್ಳಲು ವೇದಿಕೆಯಾಗಲಿದೆ ಎಂದರು.

ಸಿಸಿಬಿ ಕಸ್ಟಡಿಗೆ

ಪ್ರಜ್ವಲ್, ಧನರಾಜ್ ನನ್ನು ಬಂಧಿಸಿದ್ದ ಬೆಂಗಳೂರು ಸಿಸಿಬಿ ಪೊಲೀಸರು, ಇಂದು ಬೆಂಗಳೂರಿನ 1ನೇ ಎಸಿಎಂಎಂ ಕೋರ್ಟ್‌ಗೆ ಹಾಜರುಪಡಿಸಿತ್ತು. ಈ ವೇಳೆ ಆರೋಪಿಗಳನ್ನು 14 ದಿನಗಳ ಕಾಲ ಸಿಸಿಬಿ ಕಸ್ಟಡಿಗೆ ನೀಡುವಂತೆ ಪೊಲೀಸರು ಮನವಿ ಮಾಡಿದರು. ಆದರೆ ಕೋರ್ಟ್ ಆರೂ ಮಂದಿ ಆರೋಪಿಗಳನ್ನು 10 ದಿನಗಳ ಕಾಲ ಸಿಸಿಬಿ ಕಸ್ಟಡಿಗೆ ನೀಡಿದೆ.

ಆರೋಪಿಗಳು ಉದ್ಯಮಿ ಗೋವಿಂದ ಬಾಬು ಪೂಜಾರಿಗೆ ಬಿಜೆಪಿ ಟಿಕೆಟ್ ಕೊಡಿಸುವುದಾಗಿ 5 ಕೋಟಿ ರೂ. ಪಡೆದು ವಂಚಿಸಿದ್ದಾರೆ ಎಂದು ಆರೋಪಿಸಲಾಗಿದೆ.

ನಾವು ಭಾರತೀಯರು ಎಂದು ಎದೆಯುಬ್ಬಿಸಿ ಹೇಳ ಬೇಕಾದರೆ ಮತ್ತೊಮ್ಮೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ತರಬೇಕು

'ನಮೋ ಬ್ರಿಗೇಡ್' ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಬಲವಾದ ಪ್ರತಿಪಾದನೆ

- ಪ್ರಧಾನಿ ಮೋದಿಯ ಎರಡೂ ಅವಧಿ ಸಾಧನೆ ಸಾಲು.. ಸಾಲು..
- 'ಭಾರತ'ವನ್ನು ಜಗತ್ತಿನ್ನೆಲೆಡೆ ಮುಟ್ಟಿಸಿದವರು ನರೇಂದ್ರ ಮೋದಿ





ಮೈಸೂರು, ಸೆ.13(ಎಸ್‌ಪಿಎನ್)– ಮುಂದೆಯೂ ನಾವು ಭಾರತೀಯರು ಎಂದು ಎದೆಯುಬ್ಬಿಸಿ, ಗರ್ವದಿಂದ ಹೇಳಬೇಕಾದರೆ 2024ರಲ್ಲಿ ನಡೆಯುವ ಲೋಕಸಭಾ ಚುನಾವಣೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮತ್ತೊಮ್ಮೆ ಅಧಿಕಾರಕ್ಕೆ ತರಲು ನಾವು–ನೀವೆಲ್ಲರೂ ಸಂಕಲ್ಪ ಮಾಡಬೇಕು ಎಂದು ನಮೋ ಬಿಗ್ರೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಕರೆ ನೀಡಿದರು.

ಮೈಸೂರಿನ ಟಿ.ಕೆ.ಬಡಾವಣೆಯ ಶ್ರೀ ಕೃಷ್ಣಧಾಮದಲ್ಲಿ ಚಾತುರ್ಮಾಸ್ಯ ಸಮಿತಿಯಿಂದ ಉಡುಪಿಯ ಪೇಜಾವರ ಮಠದ ಪೀಠಾಧ್ಯಕ್ಷರಾದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರ 36ನೇ ಚಾತುರ್ಮಾಸ್ಯ ವ್ರತ ಸಂಕಲ್ಪ ಅಂಗವಾಗಿ ನಡೆದ ಪ್ರವಚನ ಮಾಲೆಯಲ್ಲಿ ಭಾಗವಹಿಸಿ, ಮಾತನಾಡಿದರು.

ಪ್ರಧಾನಿ ಮೋದಿ, ಕಳೆದ 2 ಅವಧಿಯ ತಮ್ಮ ಸರ್ಕಾರದಲ್ಲಿ ಭಾರತದ ಅಭಿವೃದ್ಧಿಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅದರಲ್ಲಿ ನಮಾಮಿ ಗಂಗೆ, ಕಾಶಿ ವಿಶ್ವನಾಥ್ ಕಾರಿಡಾರ್, ಜಮ್ಮು ಮತ್ತು ಕಾಶ್ಮೀರದಲ್ಲಿ ಜಾರಿಯಲ್ಲಿದ್ದ 370ನೇ ವಿಧಿ ರದ್ದು ಮತ್ತು ಅಲ್ಲಿನ ಅಭಿವೃದ್ಧಿಗೆ ಒತ್ತು ಹಾಗೂ ಭಾರತೀಯ ಸೈನ್ಯವನ್ನು ಇಂದಿನ ಸನ್ನಿವೇಶಕ್ಕೆ ತಕ್ಕಂತೆ ಸಜ್ಜುಗೊಳಿಸಿರುವುದು ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳಿಗೆ ಮೋದಿ ಕೊಡುಗೆ ಅಪಾರ ಎಂದರು.

ವಿಜ್ಞಾನಿಗಳ ಸಾಧನೆ ಮರೆಯಲು ಅಸಾಧ್ಯ: ಇಸ್ರೋ ವಿಜ್ಞಾನಿಗಳು ಚಂದ್ರನ ದಕ್ಷಿಣ ಧ್ರುವದಲ್ಲಿ ವಿಕ್ರಂ ರೋವರ್ ಇಳಿಸಿ, ಬಾಹ್ಯಾಕಾಶ ಕ್ಷೇತ್ರದಲ್ಲೂ ಬಹುದೊಡ್ಡ ಸಾಧನೆ ಮಾಡಿದ್ದಾರೆ, ಅಲ್ಲದೆ, ಸೂರ್ಯನ ಅಧ್ಯಯನಕ್ಕಾಗಿ ಆದಿತ್ಯ ಎಲ್1 ಉಪಗ್ರಹವನ್ನು ಕಳುಹಿಸಲಾಗಿದೆ. ಇದಕ್ಕೂ ಮೊದಲು ಕೊರೊನಾ ನಿರ್ಮೂಲನೆಗಾಗಿ ಜಗತ್ತಿಗೆ 4 ವ್ಯಾಕ್ಸಿನ್‌ಗಳನ್ನು ತಯಾರಿಸಿ, ನೀಡಲಾಗಿತ್ತು. ಈ ವಿಷಯಗಳಲ್ಲಿ ಭಾರತೀಯ ವಿಜ್ಞಾನಿಗಳ ಸಾಧನೆಯನ್ನು ನಾವು ಎಷ್ಟು ಕೊಂಡಾಡಿದರೂ ಸಾಲದು ಎಂದರು.

ಜಗತ್ತಿಗೆ 'ಭಾರತ' ಎಂಬ ಪದ ಮುಟ್ಟಿದೆ: ಜಿ 20 ಸಭೆಯಲ್ಲಿ 'ಭಾರತ' ಪದವನ್ನು ಗಟ್ಟಿಯಾಗಿ ಜಗತ್ತಿನ ಬೇರೆ ರಾಷ್ಟ್ರಗಳಿಗೂ ತಲುಪಿಸಿದ ಕೀರ್ತಿ ಮೋದಿ ಅವರಿಗೆ ಸಲ್ಲುತ್ತದೆ. 'ಇಂಡಿಯಾ' ಎಂಬ ಪದ ನಮ್ಮ ನೆಲದ್ದಲ್ಲ. ಆದರೆ, 'ಭಾರತ' ಎಂಬ ಪದ ಈ ನೆಲಕ್ಕೆ ಹೊಂದಾಣಿಕೆ ಆಗುವ ಪದವಾಗಿದೆ. ಹಾಗಾಗಿ ಈ ಹೆಸರಿಗೆ ಕೆಲವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಆದರೆ, ಪ್ರಧಾನಿ ಮೋದಿ, ಜಿ 20 ಸಭೆಯಲ್ಲಿ ತಮ್ಮ ಹೆಸರಿನ ಮುಂದೆ 'ಪ್ರೈಮ್ ಮಿನಿಸ್ಟರ್ ಆಫ್ ಭಾರತ್' ಎಂದು ನಮೂದಿಸುವ ಮೂಲಕ ಇಡೀ ಜಗತ್ತಿನಲ್ಲಿ 'ಇಂಡಿಯಾ' ಬದಲು 'ಭಾರತ' ಎಂಬ ಪದದಿಂದಲೇ ನಮ್ಮ ದೇಶವನ್ನು ಗುರುತಿಸುವಂತೆ ಮಾಡಿದ್ದಾರೆ ಎಂದು ಹೇಳಿದರು.

ಪಾಕಿಸ್ತಾನ, ಅಫ್ಘಾನಿಸ್ತಾನದ ಪರಿಸ್ಥಿತಿ!: ಸ್ವಾತಂತ್ರ್ಯಕ್ಕೂ ಮೊದಲು ಭಾರತದ ಜೊತೆಗಿದ್ದ ಪಾಕಿಸ್ತಾನ, ಅಫ್ಘಾನಿಸ್ತಾನದ ಪರಿಸ್ಥಿತಿ ಹೇಗಿತ್ತು. ಇಂದು ಆ ರಾಷ್ಟ್ರಗಳ ಪರಿಸ್ಥಿತಿ ಹೇಗಿದೆ. ಎಂಬುದರ ಬಗ್ಗೆ ತುಲನೆ ಮಾಡಬೇಕು. ಅಂದರೆ, ಅಲ್ಲಿನ ಪ್ರಜೆಗಳು ಒಪ್ಪತ್ತಿನ ಊಟಕ್ಕೂ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಾಗಾಗಿ ಪಾಕಿಸ್ತಾನ, ಅಫ್ಘಾನಿಸ್ತಾನ ಭಾರತದ ಜೊತೆಗೆ ಇರುವ ತನಕ ಆ ದೇಶಗಳ ಪರಿಸ್ಥಿತಿ ಚೆನ್ನಾಗಿತ್ತು ಎಂದು ಕೆಲವು ಘಟನೆಗಳನ್ನು ಉದಾಹರಿಸಿ ತಿಳಿಸಿದರು.

ಭಾರತ ಅನೇಕ ಬಾರಿ ಬೇರೆಯವರ ಆಕ್ರಮಣಕ್ಕೆ ಒಳಗಾಗಿದೆ. ಅದರಲ್ಲಿ ಡಚ್ಚರು, ಫ್ರೆಂಚರು, ಪೋರ್ಚಗೀಸರು, ಆಂಗ್ಲರು ಸೇರಿದಂತೆ ಇನ್ನು ಅನೇಕರು. ನಮ್ಮ ದೇಶದ ಮೇಲೆ ಆಕ್ರಮಣ ಮಾಡಿದವರು ಭಾರತೀಯರಲ್ಲಿ ಒಬ್ಬರಾಗಿದ್ದಾರೆ. ಆದರೆ, ಕೆಲವೊಂದು ಸಮುದಾಯ ಇಂದಿಗೂ ಬೆರೆತ್ತಿಲ್ಲ ಎಂದು ಕೆಲವು ಘಟನೆಗಳನ್ನು ಎಳೆಎಳೆಯಾಗಿ ಬಿಡಿಸಿಟ್ಟರು.

ಚಿಕಾಗೊ ಭಾಷಣ ತಿಳಿದುಕೊಳ್ಳುತ್ತಿಲ್ಲ: ಇಂದಿನ ಕಾಲೇಜು ವಿದ್ಯಾರ್ಥಿಗಳು 1893ರ ಸೆ.11ರ ವಿಶೇಷತೆ ಬಗ್ಗೆ ತಿಳಿದುಕೊಳ್ಳುತ್ತಿಲ್ಲ. ಅಂದರೆ ಸ್ವಾಮಿ ವಿವೇಕಾನಂದರು ಅಮೆರಿಕಾದ ಚಿಕಾಗೊದಲ್ಲಿ ಸರ್ವ ಧರ್ಮ ಸಮ್ಮೇಳನದಲ್ಲಿ ಭಾಗವಹಿಸಿ ಅವರು ಮಾಡಿದ ಮೂರೂವರೆ ನಿಮಿಷಗಳ ಐತಿಹಾಸಿಕ ಭಾಷಣದ ಬಗ್ಗೆ ನಮ್ಮ ತರುಣರು ಅರಿತಿಲ್ಲ ಎಂದು ಮಂಗಳೂರು ಕಾಲೇಜಿನ ಘಟನೆಯೊಂದನ್ನು ಉಲ್ಲೇಖಿಸಿ ಬೇಸರ ವ್ಯಕ್ತಪಡಿಸಿದರು.

ಆರ್ಯ–ದ್ರಾವಿಡ ಸಿದ್ಧಾಂತ: ಇತ್ತೀಚೆಗೆ ಕೆಲ ಎಡಪಂಥೀಯರು ಆರ್ಯರು–ದ್ರಾವಿಡರ ಕುರಿತಾದ ಸಿದ್ಧಾಂತಗಳನ್ನು ಮಂಡಿಸುತ್ತಿದ್ದಾರೆ. ಆರ್ಯರು ಭಾರತದ ಮೇಲೆ ದಾಳಿ ನಡೆಸಿ, ದ್ರಾವಿಡರನ್ನು ದಕ್ಷಿಣಕ್ಕೆ ಓಡಿಸಿದ್ದಾರೆ. ಹಾಗಾಗಿ ಭಾರತದ ಮೂಲ ನಿವಾಸಿಗಳು ದ್ರಾವಿಡರೇ ಹೊರತು ಆರ್ಯರಲ್ಲ. ಅವರು, ಇರಾಕ್ ಕಡೆಯಿಂದ ಬಂಧವರು ಎನ್ನುವ ವಿಚಾರ ಮಂಡಿಸುತ್ತಿದ್ದಾರೆ. ಇದು ಅಪ್ಪಟ ಸುಳ್ಳು, ಆರ್ಯರೂ ಈ ನೆಲದ ಮೂಲ ನಿವಾಸಿಗಳೇ. ಈ ಅಂಶವನ್ನು ಘಂಟಾಘೋಷವಾಗಿ ಹೇಳಬಹುದು. ತಮಿಳುನಾಡಿನಲ್ಲಿ ಇತ್ತೀಚೆಗೆ ಸನಾತನ ಧರ್ಮದ ಆಚರಣೆಯೇ ಬೇರೆ, ಹಿಂದೂ ಧರ್ಮವೇ ಬೇರೆ ಎಂಬ ವಾದವನ್ನು ಎಂ.ಕೆ.ಸ್ಟಾಲಿನ್ ನೇತೃತ್ವದ ಸರ್ಕಾರದ ಕೆಲ ಮಂತ್ರಿಗಳು ಮಂಡಿಸುತ್ತಿದ್ದಾರೆ ಎಂದರು.

ಸ್ವಾಮಿ ವಿವೇಕಾನಂದರು ಜೀವಿತಾವಧಿಯಲ್ಲಿ ಹಿಂದೂ ಧರ್ಮದ ಬಗ್ಗೆ ಮಾತನಾಡುತ್ತಿದ್ದರು. ನಂತರ ಪ್ರಧಾನಿ ನರೇಂದ್ರ ಮೋದಿ ಆಳ್ವಿಕೆಯಲ್ಲಿ ಹಿಂದೂಗಳಿಗೆ ಪೂರಕವಾದ ವಾತಾವರಣವನ್ನು ಈ ನೆಲದಲ್ಲಿ ಕಾಣುತ್ತಿದ್ದೇವೆ. ಪ್ರಯಾಗ್ ರಾಜ್‌ನಲ್ಲಿ ಶ್ರೀರಾಮಮಂದಿರ, ವಾರಾಣಾಸಿಯಲ್ಲಿ ಕಾಶಿ ವಿಶ್ವನಾಥ ಕಾರಿಡಾರ್, ಮಥುರಾದಲ್ಲಿ ಶ್ರೀಕೃಷ್ಣನ ಮಂದಿರ, ಗಂಗಾನದಿ ಸ್ವಚ್ಛತೆಗಾಗಿ ನಮಾಮಿ ಗಂಗೆ ಹೆಸರಿನಲ್ಲಿ ಯೋಜನೆ ಜಾರಿಗೊಳಿಸಿರುವುದೇ ಮೋದಿಯವರ ಸಾಧನೆಗಿಡಿದ ಕೈಗನ್ನಡಿ. ಹಾಗಾಗಿ, 2024ರ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ಮೋದಿ ನೇತೃತ್ವದ ಸರ್ಕಾರವನ್ನು ಮತ್ತೊಮ್ಮೆ ಕೇಂದ್ರದಲ್ಲಿ ಅಧಿಕಾರಕ್ಕೆ ತರಲು ನಾವು–ನೀವು ಸಿದ್ದರಾಗಬೇಕು ಎಂದು ತಿಳಿಸಿದರು.

ಅಂಬೇಡ್ಕರ್ ಅವರನ್ನು ಪ್ರೀತಿಸುವವರು, ಇಷ್ಟಪಡದವರು, ಒಮ್ಮೆ ಅವರ ಜೀವನ ಚರಿತ್ರೆಯನ್ನು ಚೆನ್ನಾಗಿ ಓದಿಕೊಂಡರೆ, ಈ ನೆಲದ ಪರಂಪರೆಯನ್ನು ಅವರಷ್ಟು ಗಟ್ಟಿಯಾಗಿ ಹೇಳಿದ ಮತ್ತೊಬ್ಬ ವ್ಯಕ್ತಿ ಇಲ್ಲ ಎಂದು ಕೆಲ ಘಟನೆಗಳನ್ನು ಉಲ್ಲೇಖಿಸಿ ತಿಳಿಸಿದರು. ಇದಕ್ಕೂ ಮುನ್ನ ಉಡುಪಿ ಪೇಜಾವರ ಅಧೋಕ್ಷಜ ತೀರ್ಥ ಪೀಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ಶ್ರೀಮದ್ರಾಮಾಯಣ ಕುರಿತು ಪ್ರವಚನ ನೀಡಿದರು. ಅಂತೆಯೇ ಹಿಂದೂಸ್ತಾನ ಗಾಯನ ನಡೆಸಿಕೊಟ್ಟರು.

ಮೈಸೂರು ಸಂಗೀತ ವಿವಿಯಲ್ಲಿ ಆನ್‌ಲೈನ್ ಕೋರ್ಸ್ ಆರಂಭಿಸಲು ನಿರ್ಧಾರ



ಮೈಸೂರು,ಸೆ.13(ಆರ್‌ಕೆ)–ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದಲ್ಲಿ ಆನ್‌ಲೈನ್ ಕೋರ್ಸ್‌ಗಳನ್ನು ಆರಂಭಿಸಲು ತಜ್ಞರ ಸಮಿತಿ ನಿರ್ಧರಿಸಿದೆ.

ವಿಶ್ವವಿದ್ಯಾನಿಲಯ ಕಾಯ್ದೆಯಲ್ಲಿ ಅವಕಾಶವಿರುವುದರಿಂದ ಹಾಗೂ ಯುಜಿಸಿ ಅನುಮತಿ ಇರುವ ಕಾರಣ ಕರ್ನಾಟಕ ರಾಜ್ಯವಲ್ಲದೆ, ದೇಶದ ವಿವಿಧ ರಾಜ್ಯಗಳು ಹಾಗೂ ವಿದೇಶದಲ್ಲಿ ನೆಲೆಸಿರುವ ಕನ್ನಡ ಕಲಾಸಕ್ತರಿಗೆ ಸಂಗೀತ ಮತ್ತು ಪ್ರದರ್ಶಕ ಕಲೆಗಳಲ್ಲಿ ಸರ್ಟಿಫಿಕೇಟ್, ಡಿಪ್ಲೊಮಾ, ಪದವಿ ಹಾಗೂ ಸ್ನಾತ ಕೋತ್ತರ ಪದವಿ ಕೋರ್ಸ್‌ಗಳನ್ನು ಆನ್‌ಲೈನ್‌ನಲ್ಲಿ ಪಡೆಯಲು ಅವಕಾಶ ಕಲ್ಪಿಸಲು ಸಂಗೀತ ವಿವಿ ಕುಲಪತಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ತಜ್ಞರ ಸಮಿತಿ ಸದಸ್ಯರು ಆನ್‌ಲೈನ್ ಕೋರ್ಸ್ ಆರಂಭಿಸಲು ನಿರ್ಧರಿಸಿದ್ದಾರೆ.

ಸಮಿತಿ ಸದಸ್ಯರಾದ ಖ್ಯಾತ ಸಂಗೀತ ನಿರ್ದೇಶಕ ಹಂಸಲೇಖ, ಚಲನಚಿತ್ರ ನಿರ್ದೇಶಕ ಮತ್ತು ಸಾಹಿತಿ ಬಿ.ಸುರೇಶ್, ಖ್ಯಾತ ವಯಲಿನ್ ವಾದಕರಾದ ಪದ್ಮಭೂಷಣ ವಿದ್ವಾನ್ ಎಲ್.ಸುಬ್ರಹ್ಮಣ್ಯ, ಹಂಪಿಯ ಕನ್ನಡ ವಿವಿ ವಿಶ್ರಾಂತ ಕುಲಪತಿ ಹಾಗೂ ಜಾನಪದ ಲೋಕದ ಕಾರ್ಯಾಧ್ಯಕ್ಷ ಪ್ರೊ.ಈ.ಚಿ.ಬೋರಲಿಂಗಯ್ಯ, ಪಾಂಡಿಚೇರಿ ವಿವಿ ವಿಶ್ರಾಂತ ಸಹಕುಲಪತಿ ಪ್ರೊ.ಬಾಲಸುಬ್ರಹ್ಮಣ್ಯ, ಖ್ಯಾತ ನಾಟಕಕಾರ ಕೆ.ವೈ.ನಾರಾಯಣ ಸ್ವಾಮಿ, ಕರ್ನಾಟಕ ಸಂಗೀತ ಪ್ರಾಧ್ಯಾಪಕ ಸಿ.ಎ.ಶ್ರೀಧರ್ ಹಾಗೂ ಪ್ರಸಿದ್ಧ ನೃತ್ಯ ನಿರ್ದೇಶಕ ಸೈಯ್ಯದ್ ಸಲಾ ಉದ್ದಿನ್ ಪಾಷ ಅವರಿದ್ದಾರೆ.

ಮೈಸೂರಿನ ಡಾ.ಗಂಗೂಬಾಯಿ ಸಂಗೀತ ವಿಶ್ವವಿದ್ಯಾನಿಲಯದಲ್ಲಿ ಸಭೆ ನಡೆಸಿದ ತಜ್ಞರು, ಸಮ್ಮಿಶ್ರ ಬೋಧನಾ ವಿಧಾನ ಅಳವಡಿಸಿಕೊಂಡು ಸಂಗೀತ, ನೃತ್ಯ, ನಾಟಕ ಹಾಗೂ ಜಾನಪದ ವಿಷಯಗಳಲ್ಲಿ ಸರ್ಟಿಫಿಕೇಟ್ ಡಿಪ್ಲೊಮಾ ಮತ್ತು ಪದವಿ ಕೋರ್ಸ್‌ಗಳನ್ನು ಆನ್‌ಲೈನ್‌ನಲ್ಲಿ ನೀಡುವುದು ಸೂಕ್ತ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಅಲ್ಪಾವಧಿ ಕೋರ್ಸ್‌ಗಳಾದ ಎಡಿಟಿಂಗ್, ಮೀಡಿಯಾ ಅಡ್ವರ್ಟೈಸಿಂಗ್, ಸ್ಕ್ರಿಪ್ಟ್ ರೈಟಿಂಗ್, ಡೈರೆಕ್ಷನ್ ಮುಂತಾದ ವಿಷಯಗಳಲ್ಲೂ ಆನ್‌ಲೈನ್ ತರಗತಿ ಆರಂಭಿಸುವಂತೆಯೂ ಸಮಿತಿ ಸದಸ್ಯರು ಸಲಹೆ ನೀಡಿದರು.

ನಮ್ಮಲ್ಲೇ ಇರುವ ಶ್ರೇಷ್ಠ ಗಾಯಕರು, ನೃತ್ಯ ಪರಿಣಿತರನ್ನು ಬಳಸಿಕೊಂಡು ಪಠ್ಯಕ್ರಮಕ್ಕನುಗುಣವಾಗಿ ಕ್ರೆಡಿಟ್ ಸಿಸ್ಟಂ ಆಧಾರದಲ್ಲಿ ಪ್ರೊಫೆಸರ್ ಆಫ್ ಪ್ರಾಕ್ಟೀಸ್‌ಗಳಿಂದ ಪಾಠ–ಪ್ರವಚನ ನೀಡಲು ಸಭೆ ನಿರ್ಧರಿಸಿತು.

ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ವಿಶ್ವವಿದ್ಯಾನಿಲಯದಲ್ಲಿ ಜಾನಪದ ನೃತ್ಯ ಮತ್ತು ಜಾನಪದ ಸಂಗೀತ ವಿಷಯದ ಎಂ.ಎ. ಕೋರ್ಸ್ ಆರಂಭಿಸುವ ಜೊತೆಗೆ ಈಗಿರುವ 10 ಕಾಲೇಜುಗಳ ಸಂಯೋಜನೆ (ಅಫಿಲಿಯೇಷನ್) ಜೊತೆಗೆ ಇತರ 20 ಕಾಲೇಜುಗಳಿಂದ ಅಫಿಲಿಯೇಷನ್ ಕೋರಿ ಮನವಿ ಬಂದಿದ್ದು, ಅವುಗಳು ಒದಗಿಸಿರುವ ಮೂಲ ಸೌಲಭ್ಯಗಳನ್ನು ಖುದ್ದು ಪರಿಶೀಲಿಸಿ ಅರ್ಹ ಸಂಸ್ಥೆಗಳಿಗೆ ಸಂಯೋಜನೆ ನೀಡಲಾಗುವುದು ಎಂದು ಸಂಗೀತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ತಿಳಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ವಿಶ್ವವಿದ್ಯಾನಿಲಯದ ಪ್ರಭಾರ ಕುಲಸಚಿವೆ ಶೈಲಜಾ, ಸಮಿತಿ ಸದಸ್ಯರಿಗೆ ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು.

ಚಂದ್ರಬಾಬು ನಾಯ್ಡುಗೆ ಬಿಗ್ ರಿಲೀಫ್: ವಿಚಾರಣೆಗೆ ಮಧ್ಯಂತರ ತಡೆಯಾಜ್ಞೆ

ಹೈದಾಬಾದ್: ಬಹುಕೋಟಿ ಕೌಶಲ್ಯಾಭಿವೃದ್ಧಿ ಹಗರಣ ಸಂಬಂಧ ಮಾಜಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ವಿರುದ್ಧದ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ಆಂಧ್ರ ಪ್ರದೇಶ ಹೈಕೋರ್ಟ್ ಬುಧವಾರ ತಡೆಯಾಜ್ಞೆ ನೀಡಿದೆ.

ಸಿಐಡಿ ಸಲ್ಲಿಸಿರುವ ಚಂದ್ರಬಾಬು ನಾಯ್ಡು ಅವರ ಕಸ್ಟಡಿ ಅರ್ಜಿಯನ್ನು ಸೆ.18ರ ಸೋಮವಾರದವರೆಗೆ ವಿಚಾರಣೆ ನಡೆಸದಂತೆ ವಿಜಯವಾಡ ನ್ಯಾಯಾಲಯಕ್ಕೆ ಸೂಚಿಸಿದೆ. ಮುಂದಿನ ಸೋಮವಾರದವರೆಗೆ ಅವರನ್ನು ಕಸ್ಟಡಿಗೆ ತೆಗೆದುಕೊಳ್ಳದಂತೆ ಸಿಐಡಿಗೆ ಸೂಚಿಸಿದ್ದು, ಮುಂದಿನ ವಿಚಾರಣೆಯನ್ನು ಸೆ.19ಕ್ಕೆ ಮುಂದೂಡಿದೆ. ಪ್ರಕರಣದಲ್ಲಿ ತಮ್ಮ ನ್ಯಾಯಾಂಗ ಬಂಧನ ಹಾಗೂ ಪ್ರಕರಣವನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ನಾಯ್ಡು ಅವರು ಮಂಗಳವಾರ ಹೈಕೋರ್ಟ್‌ಗೆ ಮೊರೆ ಹೋಗಿದ್ದರು.

ಕಾನೂನು ಮಾಪನಶಾಸ್ತ್ರ ಇಲಾಖೆ ಸಿಬ್ಬಂದಿ ನೇಮಕಕ್ಕೆ ತಿಂಗಳಲ್ಲಿ ಕ್ರಮ



ಬೆಂಗಳೂರು,ಸೆ.13(ಕೆಎಂಶಿ)– ಕಾನೂನು ಮಾಪನ ಶಾಸ್ತ್ರ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯನ್ನು ಸರಿದೂಗಿಸುವ ನಿಟ್ಟಿನಲ್ಲಿ ಶೀಘ್ರ ಖಾಲಿ ಇರುವ ಸಿಬ್ಬಂದಿ ನೇಮಕಕ್ಕೆ ಕ್ರಮಕೈಗೊಳ್ಳಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ವಿಕಾಸಸೌಧದಲ್ಲಿ ಕಾನೂನು ಮಾಪನ ಶಾಸ್ತ್ರ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ನಂತರ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕಾನೂನು ಮಾಪನ ಶಾಸ್ತ್ರ ಇಲಾಖೆಯಲ್ಲಿ ಒಟ್ಟು 500 ಹುದ್ದೆಗಳಲ್ಲಿ 200 ಜನರು ಮಾತ್ರ ಕರ್ತವ್ಯ ನಿರ್ವಹಿಸುತ್ತಿದ್ದು;ಇನ್ನೂ 300 ಹುದ್ದೆಗಳು ಖಾಲಿ ಇವೆ. ಹೀಗೆ ಖಾಲಿ ಇರುವ ಹುದ್ದೆಗಳನ್ನು ಕೆಪಿಎಸ್ಸಿ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ತಿಂಗಳೊಳಗೆ ನೇಮಕ ಮಾಡಿಕೊಳ್ಳಲಾಗುವುದು. ಇಲಾಖೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನಿಯಮಾನುಸಾರ ಬಡ್ತಿ ನೀಡಲಾಗುವುದು ಎಂದರು.

ದೈನಂದಿನ ವ್ಯವಹಾರದಲ್ಲಿನ ತೂಕ ಮತ್ತು ಅಳತೆಯಲ್ಲಿ ನಿಖರತೆಯನ್ನು ಕಾಪಾಡುವ ಮೂಲಕ ಗ್ರಾಹಕರ ಹಿತರಕ್ಷಣೆ ಮಾಡುತ್ತಿರುವ ಕಾನೂನು ಮಾಪನಶಾಸ್ತ್ರ ಇಲಾಖೆಯ ಸದೃಢಗೊಳಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ಹೇಳಿದರು.

500 ಕೋಟಿ ರಾಜಸ್ವ ಸಂಗ್ರಹ ಗುರಿ: ಕಾನೂನು ಮಾಪನಶಾಸ್ತ್ರ ಇಲಾಖೆಯ ಮೂಲಕ 100 ಕೋಟಿ ರಾಜಸ್ವ ಸಂಗ್ರಹಿಸಲಾಗುತ್ತಿದೆ. ಪ್ರಸಕ್ತ ವರ್ಷ 500 ಕೋಟಿ ರಾಜಸ್ವ ಸಂಗ್ರಹ ಗುರಿ ಹೊಂದಲಾಗಿದೆ ಎಂದು ಸಚಿವ ಕೆ.ಹೆಚ್.ಮುನಿಯಪ್ಪ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕರ್ನಾಟಕ ಗೆಜೆಟಿಯರ್‌ಗೆ ರೋಹಿಣಿ ಸಿಂಧೂರಿ ಚೀಫ್ ಎಡಿಟರ್



ಬೆಂಗಳೂರು: ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿಗೆ ಕೊನೆಗೂ ಸರ್ಕಾರ ಹುದ್ದೆ ನೀಡಿದೆ. ಕರ್ನಾಟಕ ಗೆಜೆಟಿಯರ್ ಇಲಾಖೆಗೆ ಮುಖ್ಯ ಸಂಪಾದಕರ ಹುದ್ದೆಗೆ ರೋಹಿಣಿ ಸಿಂಧೂರಿ ಅವರನ್ನು ವರ್ಗಾವಣೆ ಮಾಡಲಾಗಿದೆ. ಕಳೆದ ಕೆಲ ತಿಂಗಳ ಹಿಂದೆ ರೋಹಿಣಿ ಸಿಂಧೂರಿ ಹಾಗೂ ಐಪಿಎಸ್ ಅಧಿಕಾರಿ ರೂಪಾ ಮೌದ್ಗಿಲ್ ನಡುವೆ ಕಿತ್ತಾಟ ನಡೆದಿತ್ತು. ಈ ವೇಳೆ ಇಬ್ಬರಿಗೂ ಸರ್ಕಾರ ಹುದ್ದೆಯನ್ನು ನೀಡದೆ ವರ್ಗಾವಣೆ ಮಾಡಿತ್ತು. ಕಳೆದ ಆರು ತಿಂಗಳಿನಿಂದ ಸರ್ಕಾರ ರೋಹಿಣಿ ಸಿಂಧೂರಿಗೆ ಯಾವುದೇ ಹುದ್ದೆ ನೀಡಿರಲಿಲ್ಲ.

ಈಗಾಗಲೇ ಹಲವು ಐಎಎಸ್ ಅಧಿಕಾರಿಗಳ ವರ್ಗಾವಣೆ ಮಾಡಿರುವ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮತ್ತೆ ಕೆಲ ಅಧಿಕಾರಿಗಳನ್ನು ವರ್ಗಾವಣೆ ಮಾಡಿದೆ. ಇದರಲ್ಲಿ ರೋಹಿಣಿ ಸಿಂಧೂರಿಗೂ ಹುದ್ದೆ ನೀಡಿದೆ. ಇದೀಗ ರೋಹಿಣಿ ಸಿಂಧೂರಿಗೆ ಕರ್ನಾಟಕ ಗೆಜೆಟಿಯರ್ ಇಲಾಖೆಗೆ ಮುಖ್ಯ ಸಂಪಾದಕರಾಗಿ ವರ್ಗಾವಣೆ ಮಾಡಿದೆ.

'ಮಾನಸಯಾನ'ದಲ್ಲಿ ಮಿಂದೆದ್ದ ಮಾನಸಗಂಗೋತ್ರಿಯ ಯುವಪಡೆ; ಕೊಡಗಿನ ಬೆಡಗಿ ನಟಿ ನಿಧಿ ಸುಬ್ಬಯ್ಯರ ಮಾತಿನ ಕಚಗುಳಿ!





ಮೈಸೂರು ಮಾನಸಗಂಗೋತ್ರಿಯ ಕ್ಲಾಕ್ ಟವರ್ ಆವರಣದಲ್ಲಿ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಮಾನಸಯಾನ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಟಿ ನಿಧಿ ಸುಬ್ಬಯ್ಯ ಉದ್ಘಾಟಿಸಿದರು. ಬಲಚಿತ್ರದಲ್ಲಿ ವಿದ್ಯಾರ್ಥಿಗಳು ನೃತ್ಯ ಪ್ರದರ್ಶನ ನೀಡುತ್ತಿರುವುದು.

ಮೈಸೂರು,ಸೆ.13(ಪಿಎಂ)– ಕೊಡಗಿನ ಬೆಡಗಿ ನಟಿ ನಿಧಿ ಸುಬ್ಬಯ್ಯರ ಮಾತಿನ ಕಚಗುಳಿಯೊಂದಿಗೆ ಆರಂಭಗೊಂಡ ಮಾನಸಯಾನ–2023 ಸಾಂಸ್ಕೃತಿಕ ಕಾರ್ಯಕ್ರಮವು ಅಬ್ಬರದ ಮ್ಯೂಸಿಕ್, ಡ್ಯಾನ್ಸ್‌ನೊಂದಿಗೆ ಮಾನಸಗಂಗೋತ್ರಿಯ ಯುವ ಪಡೆಯಲ್ಲಿ ಮಿಂಚಿನ ಸಂಚಲನ ಉಂಟು ಮಾಡಿತು.

ಇಂತಹ ಪುಳಕದ ಸನ್ನಿವೇಶಕ್ಕೆ ಮಾನಸಗಂಗೋತ್ರಿಯ ಕ್ಲಾಕ್ ಟವರ್ ಆವರಣ ಸಂಗೀತದ ಅಲೆಗಳಲ್ಲಿ ತೇಲುವಂತಾಗಿತ್ತು. ಮೈಸೂರು ವಿವಿಯ ವಿದ್ಯಾರ್ಥಿ ಒಕ್ಕೂಟದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಈ ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಇಂತಹ ಸಂಭ್ರಮದ ವಾತಾವರಣ ಕಳೆಗಟ್ಟುವ ಮೂಲಕ ಗಂಗೋತ್ರಿಯ ಯುವಪಡೆ ಹುಚ್ಚೆದ್ದು ಕುಣಿಯಿತು.

ವಿವಿಧ ವಿಭಾಗಗಳ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕುಣಿದು ಕುಪ್ಪಳಿಸಿ, ಪ್ರೇಕ್ಷಕರ ಸಾಲಿನಲ್ಲಿದ್ದ ತಮ್ಮ ಸಹಪಾಠಿಗಳೂ ತಾವಿದ್ದಲ್ಲೇ ಕುಣಿದು ಸಂಭ್ರಮಿಸುವಂತೆ ಮಾಡಿದರು.

ಇದಕ್ಕೂ ಮುನ್ನ ಕಾರ್ಯಕ್ರಮ ಉದ್ಘಾಟಿಸಿದ ಕನ್ನಡ ಚಲನಚಿತ್ರರಂಗದ ಖ್ಯಾತ ನಟಿ ನಿಧಿ ಸುಬ್ಬಯ್ಯ ತಮ್ಮ ಭಾಷಣ ಆರಂಭಿಸುತ್ತಿದ್ದಂತೆ ಯುವಪಡೆ ಅಭಿಮಾನದ ಹರ್ಷೋದ್ಗಾರದ ಕೇಳಿ ಬಂದಿತು. ಇದರಿಂದ ಹರ್ಷಚಕಿತರಾದ ನಿಧಿ ಸುಬ್ಬಯ್ಯ, ಈಗ ನನಗೆ ನನ್ನ ವಿದ್ಯಾರ್ಥಿಜೀವನ ನೆನಪಾಗುತ್ತಿದೆ. ಇದೇ ಮೈಸೂರಿನ ಮಾನಸಗಂಗೋತ್ರಿ ಆವರಣದಲ್ಲೇ ಇರುವ ಜೆಸಿ ಕಾಲೇಜಿನಲ್ಲಿ ನಾನು ಓದಿದ್ದು. ಮೈಸೂರಿನಲ್ಲಿ ಓದುವುದು ನಿಜಕ್ಕೂ ವೆರಿ ಲಕ್ಕಿ ಎಂದು ಸಂತಸ ವ್ಯಕ್ತಪಡಿಸಿದರು.

ಮೈಸೂರ್ ಇಸ್ ದಿ ಬೆಸ್ಟ್ ಸಿಟಿ. ನಿಮ್ಮಂತೆಯೇ ನನ್ನ ವಿದ್ಯಾರ್ಥಿಜೀವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಎಂಜಾಯ್ ಮಾಡುತ್ತಿದ್ದೆ. ನಿಮ್ಮ ಅಭಿಮಾನ ನನ್ನಲ್ಲಿ ತುಂಬ ಎನರ್ಜಿ ತರುತ್ತಿದೆ. ನನ್ನ ಮೂವೀಸ್ ನೋಡಿ ಸಪೋರ್ಟ್ ಮಾಡಿ ಎಂದು ಕೋರಿದರು.

ಡೈಲಾಗ್ ಹೇಳಬೇಕಾ ಎಂದು ಕೇಳಿ, 'ನಿಮ್ಮನ್ನೆಲ್ಲಾ ಉದ್ಧಾರ ಮಾಡುವುದು ಬಿಟ್ಟು ನನ್ಗೇನ್ ಬೇರೆ ಕೆಲ್ಸ ಇಲ್ವಾ, ಗಂಡ್ ಮಕ್ಳು ಸಹವಾಸ ಹಗಲೆಲ್ಲಾ ಉಪವಾಸ' ಎಂದು ಪಂಚರಂಗಿ ಚಿತ್ರದ ಸಂಭಾಷಣೆ ಹೇಳುವ ಮೂಲಕ ಮುಗುಳ್ನಕ್ಕು ಕಚಗುಳಿ ಇಟ್ಟರು.

ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಸುಶ್ರುತ್‌ಗೌಡ ಮಾತನಾಡಿ, ಮೈಸೂರು ವಿವಿ ಅತ್ಯಂತ ಪ್ರತಿಷ್ಠಿತ ವಿವಿ. ಇಲ್ಲಿ ವ್ಯಾಸಂಗ ಮಾಡಿದ ಅದೆಷ್ಟೋ ಮಂದಿ ವೈದ್ಯರು, ವಿಜ್ಞಾನಿಗಳಾಗಿದ್ದಾರೆ. ಇನ್ನು ಅನೇಕರು ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ನನ್ನ ತಂದೆ ಡಾ.ವಿಷ್ಣುಮೂರ್ತಿಯವರು ಇದೇ ವಿವಿಯಲ್ಲಿ ವಿದ್ಯಾಭ್ಯಾಸ ಮಾಡಿ, 45 ವರ್ಷಗಳ ಹಿಂದೆ ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆಯ ಸ್ಥಾಪನೆ ಮಾಡಿದರು. ನಮ್ಮ ಆಸ್ಪತ್ರೆಯು ಗ್ರಾಮೀಣ ಜನತೆಗೆ ಆರೋಗ್ಯ ಸೇವೆ ಒದಗಿಸಲು ಆದ್ಯತೆ ನೀಡುತ್ತಿದೆ ಎಂದರು.

ನಾನು ಸ್ವಲ್ಪ ವರ್ಷ ಅಮೇರಿಕದಲ್ಲಿದ್ದೆ. ಅಲ್ಲಿ ಉನ್ನತ ವ್ಯಾಸಂಗ ಮಾಡಿ ವಾಪಸ್ಸು ಬಂದೆ. ಆಗ ಸೂಪರ್ ಸ್ಪೆಷಾಲಿಟಿ ಸೇವೆಗಳು ಗ್ರಾಮೀಣ ಜನರಿಗೆ ಸುಲಭವಾಗಿ ದೊರೆಯುತ್ತಿಲ್ಲ ಎಂಬ ನೋವು ಕಾಡಿತು. ಹಳ್ಳಿ ಜನತೆಯ ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸಲು ಉಚಿತವಾಗಿ 40 ಆರೋಗ್ಯ ಶಿಬಿರ ಏರ್ಪಡಿಸಿದೆ. ಅಲ್ಲದೆ, 8ರಿಂದ 10 ಸಾವಿರ ಮಂದಿಗೆ ಉಚಿತವಾಗಿ ಸೂಪರ್ ಸ್ಪೆಷಾಲಿಟಿ ಸೌಲಭ್ಯ ಕಲ್ಪಿಸಿಕೊಟ್ಟೆ ವಿದ್ಯಾರ್ಥಿಗಳು ಮೊಬೈಲ್ ಅನ್ನು ಗೀಳು ಮಾಡಿಕೊಳ್ಳಬಾರದು. ಮದ್ಯದಿಂದ ದೂರವಿದ್ದು, ವ್ಯಾಯಾಮವನ್ನು ಜೀವನಶೈಲಿಯಾಗಿ ಅಳವಡಿಸಿಕೊಳ್ಳಬೇಕು ಎಂದು ನಿಧಿ ಸುಬ್ಬಯ್ಯ ಸಲಹೆ ನೀಡಿದರು.

ಶಾಸಕ ಗಣೇಶ್ ಪ್ರಸಾದ್ ಮಾತನಾಡಿ, ಜ್ಞಾನ ಮತ್ತು ಶಿಕ್ಷಣ ಗಳಿಸಲು ಪರಿಶ್ರಮ ಅಗತ್ಯ. ವಿದ್ಯಾರ್ಥಿ ಹಂತದಲ್ಲೇ ಭವಿಷ್ಯದ ಜೀವನದ ಗುರಿ ನಿಗದಿ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಇದೇ ವೇಳೆ ಗಿರೀಶ್ ಬೆಂಡರವಾಡಿ ಅವರ 'ವಿಶ್ವಗುರು ಅಣ್ಣ ಬಸವಣ್ಣ' ಶೀರ್ಷಿಕೆಯ ಧ್ವನಿ ಸುರಳಿ ಬಿಡುಗಡೆ ಮಾಡಲಾಯಿತು.

ತಡವಾಯ್ತು: ಸಂಜೆ 4ಕ್ಕೆ ನಿಗದಿಯಾಗಿದ್ದ ಈ ಕಾರ್ಯಕ್ರಮ ಉದ್ಘಾಟನೆಗೊಂಡಿದ್ದು ಮಾತ್ರ ರಾತ್ರಿ 7ಕ್ಕೆ. ಇಷ್ಟು ತಡವಾದರೂ ಸಾಂಸ್ಕೃತಿಕ ಕಾರ್ಯಕ್ರಮ ಆರಂಭಕ್ಕೂ ಒಂದು ತಾಸು ತಡ ಮಾಡಲಾಯಿತು. ವಿದ್ಯಾರ್ಥಿಗಳ ಭಾಷಣ, ಸುದೀರ್ಘ ನಿರೂಪಣೆ, ಸಾಲು ಸಾಲು ಸನ್ಮಾನದಲ್ಲೇ ಕಾರ್ಯಕ್ರಮ ಕಳೆದು ಹೋಯಿತು. ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯ ಕುಮಾರ್, ಮುಖಂಡ ಹರೀಶ್ ಮೊಗಣ್ಣ, ಕಾರ್ಯಕ್ರಮ ಸಂಯೋಜಕರಾದ ಅಭಿಷೇಕ್ ಪಾಳ್ಯಗಾರ್, ಕವಿರಾಜ್ ಇದ್ದರು.

ಕೆಆರ್‌ಎಸ್‌ನಿಂದ ತಮಿಳುನಾಡಿಗೆ ನೀರು ಬಿಡಬಾರದು: ಹಿತರಕ್ಷಣಾ ಸಮಿತಿ ನಿರ್ಣಯ

ರೈತರಿಂದ ರಸ್ತೆ ತಡೆ, ಭಿಕ್ಷಾ ಪಾತ್ರೆ ಹಿಡಿದು ಪ್ರತಿಭಟನೆ



ಮಂಡ್ಯ, ಸೆ.13(ಮೋಹನ್‌ರಾಜ್)– ಕೆಆರ್‌ಎಸ್ ಅಣೆಕಟ್ಟೆಯಿಂದ ತಮಿಳುನಾಡಿಗೆ 15 ದಿನಗಳ ಕಾಲ ನಿತ್ಯ ಐದು ಸಾವಿರ ಕ್ಯೂಸೆಕ್ ನೀರು ಬಿಡಬೇಕೆಂದು ರಾಜ್ಯ ಸರ್ಕಾರಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ಸೂಚನೆಯನ್ನು ತಿರಸ್ಕರಿಸಬೇಕು. ಯಾವುದೇ ಕಾರಣಕ್ಕೂ ನೀರು ಬಿಡಬಾರದೆಂದು ಮಂಡ್ಯ ಜಿಲ್ಲಾ ರೈತ ಹಿತಾರಕ್ಷಣಾ ಸಮಿತಿ ನಿರ್ಣಯ ಕೈಗೊಂಡಿದೆ.

ಬುಧವಾರ ನಗರದ ಸರ್‌ಎಂವಿ ಪ್ರತಿಮೆ ಎದುರು ರೈತರು, ಕನ್ನಡಪರ ಹೋರಾಟಗಾರರು ಮತ್ತು ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಧರಣಿಯಲ್ಲಿ ಪಾಲ್ಗೊಂಡು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರೈತರಿಗೆ ನಿರಂತರ ಅನ್ಯಾಯ ಆಗುತ್ತಿರುವ ಬಗ್ಗೆ ಬೇಸರ ವ್ಯಕ್ತಪಡಿಸಿ, ರಾಜ್ಯ ಸರ್ಕಾರ ಸರ್ವಪಕ್ಷದ ಸಭೆಯಲ್ಲಿ ತಮಿಳುನಾಡಿಗೆ ಹನಿ ನೀರು ಬಿಡದಿರುವ ತೀರ್ಮಾನ ಕೈಗೊಳ್ಳಬೇಕು. ಸಂಕಷ್ಟದ ಸ್ಥಿತಿಯಲ್ಲಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ಪರಿಹಾರ ರೂಪಿಸಬೇಕು. ರಾಜ್ಯದ ಸಂಸದರು ಕೇಂದ್ರ ಸರ್ಕಾರ ಮತ್ತು ಪ್ರಧಾನ ಮಂತ್ರಿಗಳ ಮೇಲೆ ಒತ್ತಡ ತಂದು ತಮಿಳುನಾಡಿಗೆ ನೀರು ಹರಿಸುವುದನ್ನು ತಡೆಹಿಡಿಯುವ ಪ್ರಯತ್ನ ಮಾಡಬೇಕು ಎಂದು ನಿರ್ಣಯ ಕೈಗೊಳ್ಳಲಾಯಿತು.

ಅದೇ ರೀತಿ ಕಾವೇರಿ ಕಣಿವೆ ಜಲಾಶಯಗಳಲ್ಲಿನ ನೀರಿನ ಪ್ರಮಾಣ ಅನುಸಾರ ಬೆಳೆ ರಕ್ಷಣೆಗೆ ಸರ್ಕಾರ ಮುಂದಾಗಬೇಕು. ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ಕೇಂದ್ರ ಸರ್ಕಾರ ಶೀಘ್ರ ಸಂಕಷ್ಟ ಸೂತ್ರ ರೂಪಿಸಬೇಕು ಎಂದು ನಿರ್ಣಯ ಮಾಡಲಾಯಿತು. ಸಮಿತಿಯ ಪದಾಧಿಕಾರಿಗಳಾದ ಮಾಜಿ ಸಚಿವ ಎಂ.ಎಸ್.ಆತ್ಮಾನಂದ, ಮಾಜಿ ಶಾಸಕರಾದ ಜಿ.ಬಿ.ಶಿವಕುಮಾರ್, ಕೆ.ಟಿ.ಶ್ರೀಕಂಠೇಗೌಡ, ರೈತ ಮುಖಂಡರಾದ ಸುನಂದಾ ಜಯರಾಂ, ಕೆ.ಬೋರಯ್ಯ, ಅಂಬುಜಮ್ಮ, ಇಂಡುವಾಳು ಚಂದ್ರಶೇಖರ್, ಕೀಲಾರ ಕೃಷ್ಣ, ಎಂ.ವಿ.ಕೃಷ್ಣ, ಕಾರಸವಾಡಿ ಮಹದೇವು, ಎಂ.ಎಲ್. ತುಳಸೀಧರ್ ಇತರರಿದ್ದರು.

ರೈತರ ರಸ್ತೆ ತಡೆ: ಕಾವೇರಿ ಕೊಳ್ಳದ ಜಲಾಶಯಗಳಿಂದ ತಮಿಳುನಾಡಿಗೆ ಮತ್ತೆ ನೀರು ಬಿಡುಗಡೆ ಮಾಡುವಂತೆ ಆದೇಶಿಸಿರುವ ಪ್ರಾಧಿಕಾರದ ವಿರುದ್ಧ ರೈತ ಮುಖಂಡರು ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ರೈತರು ಪ್ರತಿಭಟನೆ ನಡೆಸಿ ವಾಹನ ಸಂಚಾರಕ್ಕೆ ಅಡ್ಡಿಪಡಿಸಿದರು. ರಾಜ್ಯ ಸರ್ಕಾರ ರೈತರ ಹಿತ ಕಾಪಾಡುವ ದೃಢ ನಿರ್ಧಾರ ಮಾಡುವ ಮೂಲಕ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಒತ್ತಾಯಿಸಿದರು. ರೈತ ಸಂಘದ ಮುಖಂಡರಾದ ಜಗದೀಶ್, ಇಂಡವಾಳು ಸಿದ್ದೇಗೌಡ, ಸುರೇಶ್, ನಾಗರಾಜ್ ಗಾಣದಾಳು ಇತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಭಿಕ್ಷಾ ಪಾತ್ರೆ ಹಿಡಿದು ಪ್ರತಿಭಟನೆ: ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ಮಂಡ್ಯ ರಕ್ಷಣಾ ವೇದಿಕೆ ಕಾರ್ಯಕರ್ತರು ಭಿಕ್ಷೆ ಪಾತ್ರೆ ಹಿಡಿದು, ಅರಕಲು ಅಂಗಿ, ಚಡ್ಡಿ ಧರಿಸಿ, ಕೆಲವರು ಅರೆಬೆತ್ತಲೆಯಾಗಿ ಪ್ರತಿಭಟನೆ ನಡೆಸಿದರು.

ಮತ್ತೆ ತಮಿಳುನಾಡಿಗೆ ನೀರು ಬಿಟ್ಟರೇ ರಾಜ್ಯದ ಜನರು ಭಿಕ್ಷೆ ಎತ್ತಬೇಕಾಗುತ್ತದೆ ಎಂದು ಅಣುಕು ಪ್ರದರ್ಶಿಸಿ, ರಾಜ್ಯ



ಸರ್ಕಾರ ಈಗಾಗಲೇ ನಮ್ಮನ್ನ ಬೀದಿಗೆ ನಿಲ್ಲಿಸಿದೆ ಎಂದು ಕಿಡಿಕಾರಿದರು.

ಪ್ರಾಧಿಕಾರದ ಆದೇಶ ನಿರೀಕ್ಷಿಸಿರಲಿಲ್ಲ: ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವಾಸ್ತವ ಪರಿಸ್ಥಿತಿಯನ್ನು ಅರ್ಥ ಮಾಡಿಕೊಳ್ಳದೇ ರಾಜ್ಯದ ವಿರುದ್ಧ ವ್ಯತಿರಿಕ್ತ ಸೂಚನೆ ನೀಡುತ್ತದೆ ಎಂದು ನಿರೀಕ್ಷೆ ಮಾಡಿರಲಿಲ್ಲ ಎಂದು ಶಾಸಕ, ರೈತನಾಯಕ ದರ್ಶನ್ ಪುಟ್ಟಣ್ಣಯ್ಯ ಕಿಡಿಕಾರಿದರು.

ಕೆಆರ್‌ಎಸ್ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡು ಕೃಷಿಗೆ ನೀರು ಕೇಳುತ್ತಿದೆ. ನಾವು ಕುಡಿಯೋದಕ್ಕೆ ನೀರು ಕೇಳುತ್ತಿದ್ದೇವೆ. ವಾಸ್ತವ ಅರ್ಥ ಮಾಡಿಕೊಳ್ಳದೆ ಆದೇಶ ನೀಡಲಾಗುತ್ತಿದೆ. ಕೆಆರ್‌ಎಸ್ ನೀರಿನ ಪರಿಸ್ಥಿತಿ ನೋಡುತ್ತಿದ್ದರೆ ನನಗೆ ಕೋಪ ಬರುತ್ತಿದೆ. ಯಾಕೆ ಅವರಿಗೆ ಇಲ್ಲಿನ ಪರಿಸ್ಥಿತಿ ಅರ್ಥ ಆಗುತ್ತಿಲ್ಲ. ಪ್ರಾಧಿಕಾರದವರು ರಾಜ್ಯದ ಕಾವೇರಿ ಕೊಳ್ಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಬೇಕಿತ್ತು. ಪರಿಶೀಲನೆಗೆ ಬಂದಿದ್ದರೆ ಇಂತಹ ಆದೇಶ ನೀಡುತ್ತಿರಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರದ ಭರವಸೆ, ಮುಷ್ಕರ ತಾತ್ಕಾಲಿಕ ಅಂತ್ಯ: ತಮಿಳುನಾಡಿಗೆ ನೀರು ಬಿಡುವುದಿಲ್ಲ ಎಂದು ಸರ್ಕಾರದ ಭರವಸೆ ನೀಡಿರುವುದರಿಂದ ಹೋರಾಟವನ್ನು ತಾತ್ಕಾಲಿಕವಾಗಿ ಅಂತ್ಯಗೊಳಿಸಿದ್ದೇವೆ ಎಂದು ಜಿಲ್ಲಾ ರೈತ ಸಂಘದ ಅಧ್ಯಕ್ಷ ಕೆಂಪುಗೌಡ ತಿಳಿಸಿದರು. ಶ್ರೀರಂಗಪಟ್ಟಣದ ಕುವೆಂಪು ಪ್ರತಿಮೆ ಮುಂಭಾಗದ ಆವರಣದಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿ, ಯಾವುದೇ ಕಾರಣಕ್ಕೂ ರಾಜ್ಯದ ರೈತರ ಹಿತಾಸಕ್ತಿಯನ್ನು ಕಡೆಗಣಿಸಿ ನೀರು ಬಿಡುವುದಿಲ್ಲ ಎಂಬ ಭರವಸೆಯ ಮೇರೆಗೆ ನಮ್ಮ ನಿಲುವು ಬದಲಿಸಿದ್ದೇವೆ.



ಒಂದು ವೇಳೆ ಸರ್ವೋಚ್ಚ ನ್ಯಾಯಾಲಯದಲ್ಲಿ ವ್ಯತಿರಿಕ್ತ ತೀರ್ಪು ಬಂದರೆ ಹೋರಾಟದ ಸ್ವರೂಪವನ್ನು ಬದಲಾಯಿಸಿಕೊಳ್ಳುತ್ತೇವೆ. ಮುನ್ನೆಚ್ಚರಿಕೆ ಕ್ರಮವಾಗಿ, ಸರ್ಕಾರಿ ವಕೀಲರು ಅಫಿಡವಿಟ್ ಸಲ್ಲಿಸುವುದರ ಮೂಲಕ ನೀರು ಸಂಗ್ರಹಣೆಯ ವಿಷಯದಲ್ಲಿ ಸಮರ್ಥವಾಗಿ ವಾದ ಮಂಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಪ್ರಸನ್ನಗೌಡ, ಕೃಷ್ಣೇಗೌಡ, ಶಂಭುಗೌಡ, ಗೋಪಾಲಗೌಡ, ಮಂಜುನಾಥ್, ಮೋಹನ್‌ಕುಮಾರ್ ಮಂಜುನಾಥ್, ಯಶ್ವಂತ್, ಸ್ವಾಮಿಗೌಡ, ಶಂಕರ್, ಪ್ರಿಯ ರಮೇಶ್ ಸೇರಿದಂತೆ ಇತರರು ಹಾಜರಿದ್ದರು. ಇದೇ ಸಂದರ್ಭದಲ್ಲಿ ಕಾವೇರಿ ನೀರು ನಿರ್ವಹಣೆ ಪ್ರಾಧಿಕಾರದ ನಿರ್ಧಾರದ ವಿರುದ್ಧ ಕಪ್ಪು ಬಟ್ಟೆ ಧರಿಸಿ ಘೋಷಣೆ ಕೂಗಿದರು.

ನಶೆಯಲ್ಲಿದ್ದ ವ್ಯಕ್ತಿಯಿಂದ ಅಡ್ಡಾದಿಡ್ಡಿ ಕಾರು ಚಾಲನೆ

ವಾಹನಗಳು ಜಖಂ, ಅಂಗಡಿ, ಮನೆಗೂ ನುಗ್ಗಿದ ಕಾರು

ಮಂಡ್ಯ, ಸೆ.13– ನಶೆಯಲ್ಲಿದ್ದ ವ್ಯಕ್ತಿಯೋರ್ವ ಅಡ್ಡಾದಿಡ್ಡಿ ಕಾರು ಚಲಾಯಿಸಿದ ಪರಿಣಾಮ ಹಲವು ವಾಹನಗಳಿಗೆ ಗುದ್ದಿ ಅಪಘಾತ ಮಾಡಿರುವ ಘಟನೆ ನಗರದ ಪೇಟೆಬೀದಿಯಲ್ಲಿ ಕಳೆದ ರಾತ್ರಿ 10 ಗಂಟೆ ಸುಮಾರಿನಲ್ಲಿ ಸಂಭವಿಸಿದೆ.

ಬೆಂಗಳೂರು ಮೂಲದ ವ್ಯಕ್ತಿ ಮಂಡ್ಯದ ರೈಲ್ವೆ ನಿಲ್ದಾಣದಿಂದ ಮಹೇಂದ್ರ ಎಸ್‌ಯುವಿ (ಕೆಎ–22 ಪಿ–7753) ಕಾರನ್ನು ಅಡ್ಡಾದಿಡ್ಡಿಯಾಗಿ ಚಲಾಯಿಸಿಕೊಂಡು ಬಂದಿದ್ದು, ನಿಲ್ದಾಣದ ಪಕ್ಕದಲ್ಲಿರುವ ಪೇಟೆ ಬೀದಿಗೆ ನುಗ್ಗಿದ್ದಾನೆ. ಅಲ್ಲಿ ನಿಯಂತ್ರಣ ಕಳೆದುಕೊಂಡು ಆಟೋಗೆ ಗುದ್ದಿದ್ದು, ಬಳಿಕ ಪಕ್ಕದಲ್ಲೇ ಇದ್ದ ವಾಚ್ ಅಂಗಡಿಯೊಳಗೂ ಕಾರನ್ನು ನುಗ್ಗಿಸಿದ್ದಾನೆ. ಈ ಸಂದರ್ಭದಲ್ಲಿ ಜನರು ಕೂಗಿಕೊಂಡಾಗ ರಿವರ್ಸ್ ತೆಗೆದು ಜೈನರ ಬೀದಿಯ ಒಂದನೇ ಕ್ರಾಸ್‌ಗೆ ನುಗ್ಗಿ ಸ್ಕೂಟರ್ ಸೇರಿದಂತೆ ಕೆಲವು ವಾಹನಗಳಿಗೆ ಹಾನಿ ಮಾಡಿದ್ದಾನೆ. ಬಳಿಕ ಟೀ ಅಂಗಡಿಗೆ ಗುದ್ದಿದ ಪರಿಣಾಮ ಅಲ್ಲೇ ಇದ್ದ ಯುವಕನೊಬ್ಬನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ನಂತರ ಹೋಂಡಾ ಆಕ್ಟಿವಾ ಬೈಕ್‌ಗೆ ಡಿಕ್ಕಿ ಹೊಡೆದು, ಖಾಲಿ ಇದ್ದ ಅಂಗಡಿ ಶೆಟರ್‌ಗೆ ಗುದ್ದಿ ವಾಹನ ನಿಂತಿದೆ.

ವಾಹನ ನಿಂತ ಬಳಿಕ ರೊಚ್ಚಿಗೆದ್ದ ಸ್ಥಳೀಯರು ಆತನನ್ನು ಕಾರಿನಿಂದ ಇಳಿಸಿ ಧರ್ಮದೇಟು ಕೊಟ್ಟಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಆತನನ್ನು ವಶಕ್ಕೆ ಪಡೆದಿದ್ದು, ವಿಚಾರಣೆಗೊಳಪಡಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಎಸ್ಪಿ ಯತೀಶ್, ವ್ಯಕ್ತಿಯೋರ್ವ ಕಳೆದ ರಾತ್ರಿ ಪೇಟೆ ಬೀದಿಯಲ್ಲಿ ಅಡ್ಡಾದಿಡ್ಡಿ ಕಾರು ಚಲಾಯಿಸಿ, ನಾಲ್ಕು ಬೈಕ್ ಹಾಗೂ ನಾಲ್ಕು ಅಂಗಡಿಗಳನ್ನು ಜಖಂ ಮಾಡಿದ್ದಾನೆ. ಈ ಸಂಬಂಧ ನಮ್ಮ ಪೊಲೀಸರು ಆತನನ್ನು ವಶಕ್ಕೆ ಪಡೆದು ಕರೆತಂದಾಗ ನಶೆಯಲ್ಲಿದ್ದ ಆತನನ್ನು ವಿಚಾರಣೆ ಮಾಡಲು ಆಗಿಲ್ಲ. ನಶೆ ಇಳಿದ ಬಳಿಕ ಆತನನ್ನು ವಿಚಾರಣೆಗೊಳಪಡಿಸಲಾಗುವುದು ಎಂದರು.

ನಾಲ್ವರು ಖದೀಮರ ಬಂಧನ; 35.86 ಲಕ್ಷ ಮೌಲ್ಯದ ವಸ್ತುಗಳ ವಶ

ಮಂಡ್ಯ, ಸೆ.13– ನಾಲ್ವರು ಖದೀಮರನ್ನು ಬಂಧಿಸಿರುವ ಜಿಲ್ಲಾ ಪೊಲೀಸರು, ಅವರಿಂದ ನಗದು ಸೇರಿ 35.86 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ತಿಳಿಸಿದರು.

ಬುಧವಾರ ನಗರದ ಎಸ್ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಗಮಂಗಲ ತಾಲೂಕಿನ ಚಾಕೇನಹಳ್ಳಿ ಗ್ರಾಮದ ರವಿಕುಮಾರ್ ಅಲಿಯಾಸ್ ರವಿ (42) ಮಂಡ್ಯ ತಾಲೂಕಿನ ಸೂನಗಹಳ್ಳಿ ಗ್ರಾಮದ ಎಸ್.ಆರ್.ಮಂಜುನಾಥ್(36), ವಿಷ್ಣು (31) ಹಾಗೂ ಹೇಮಂತ್ ಕುಮಾರ್(30) ಬಂಧಿತರಾಗಿದ್ದು, ಇವರಲ್ಲಿ ರವಿಕುಮಾರ್ ಈ ಹಿಂದೆ ಶಾಲೆಗಳಲ್ಲಿ ಕಂಪ್ಯೂಟರ್ ಕಳವು ಮಾಡಿದ 18 ಪ್ರಕರಣಗಳಲ್ಲಿ ಆರೋಪಿಯಾಗಿದ್ದಾನೆ. ಅಲ್ಲದೆ ಚಾಕೇನಹಳ್ಳಿ ಗ್ರಾ.ಪಂ. ಚುನಾವಣೆಯಲ್ಲಿ ಸ್ಪರ್ಧಿಸಿ ಸೋತಿದ್ದಾನೆ ಎಂದು ತಿಳಿಸಿದರು.

ಬಂಧಿತರು ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳವು ಮಾಡಿದ್ದ 154 ಗ್ರಾಂ ಚಿನ್ನ, 20 ಕೆ.ಜಿ ಬೆಳ್ಳಿಯ ಪದಾರ್ಥಗಳು, ಅಶೋಕ ಲೇಲ್ಯಾಂಡ್ ವಾಹನ, ಎರಿಟಿಕಾ ಕಾರು, ಯಮಹಾ ಆರ್‌ಎಕ್ಸ್ ಬೈಕ್, ಲ್ಯಾಪ್‌ಟಾಪ್, 8 ಇಲಾತಿ ಹಸುಗಳು, ಎಲ್‌ಪಿಜಿ ಸಿಲಿಂಡರ್, ಆಕ್ಸಿಜನ್ ಸಿಲಿಂಡರ್, ವಾಟರ್ ಟ್ಯಾಂಕ್, ಗ್ಯಾಸ್ ಕಟರ್ ಮತ್ತು 40 ಸಾವಿರ ನಗದನ್ನು ವಶಪಡಿಸಿಕೊಳ್ಳಲಾಗಿದೆ ಎಂದರು. ಕೆ.ಆರ್.ಪೇಟೆ ಟೌನ್ ಪೊಲೀಸ್ ಠಾಣೆಯಲ್ಲಿ 4, ಮಂಡ್ಯ ಪಶ್ಚಿಮ ಠಾಣೆ, ಹಲಗೂರು, ಮಂಡ್ಯ



ಸೆಂಟ್ರಲ್, ಚನ್ನರಾಯಪಟ್ಟಣ ಗ್ರಾಮಾಂತರ, ಚನ್ನಪಟ್ಟಣ ಗ್ರಾಮಾಂತರ, ಮೈಸೂರಿನ ಉದಯಗಿರಿ ಮತ್ತು ಬನ್ನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ತಲಾ ಒಂದು ಪ್ರಕರಣ ಇವರ ಬಂಧನದಿಂದ ಪತ್ತೆಯಾಗಿದೆ ಎಂದರು.

ಕಳೆದ ಆಗಸ್ಟ್‌ನಲ್ಲಿ ಕೆ.ಆರ್.ಪೇಟೆ ಟೌನ್ ಠಾಣಾ ವ್ಯಾಪ್ತಿಯ ಹೊಸಹೊಳಲು– ಆಕ್ಕಿಹೆಬ್ಬಾಳು ಮುಖ್ಯ ರಸ್ತೆಯ ಲೀಲಾ ಬ್ಯಾಂಕರ್ಸ್ ಅಂಡ್ ಜ್ಯುವೆಲರಿ ಶಾಪ್‌ನ ಹಿಂಭಾಗದಲ್ಲಿದ್ದ ವೆಂಟಿಲೇಟರ್ ಸರಳನ್ನು ಗ್ಯಾಸ್ ಕಟರ್‌ನಿಂದ ಕಟ್ ಮಾಡಿ, ಗೋಡೆ ಕೊರೆದು ಬೆಳ್ಳಿ ಪದಾರ್ಥಗಳನ್ನು ಕಳವು ಮಾಡಿದ್ದರು. ಈ ಸಂಬಂಧ ಆರೋಪಿಗಳ ಪತ್ತೆಗಾಗಿ ವಿಶೇಷ ತಂಡ ರಚಿಸಲಾಗಿತ್ತು. ಈ ತಂಡವು ನಾಗಮಂಗಲ ತಾಲೂಕು ಬೆಳ್ಳೂರು ಕ್ರಾಸ್‌ನ ಉಮರ್ ನಗರದ ಬಳಿ ನಾಲ್ವರು ಆರೋಪಿಗಳನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರು ಪಡಿಸಿದ ನಂತರ ಹೆಚ್ಚಿನ ವಿಚಾರಣೆಗಾಗಿ ಪೊಲೀಸ್ ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ಇವರು ಇನ್ನೂ 11 ಪ್ರಕರಣಗಳಲ್ಲಿ ಭಾಗಿಯಾಗಿರುವುದು ಪತ್ತೆಯಾಗಿದೆ ಎಂದು ಹೇಳಿದರು. ನಾಗಮಂಗಲ ಡಿವೈಎಸ್ಪಿ ಲಕ್ಷ್ಮೀನಾರಾಯಣ ಪ್ರಸಾದ್, ಮಾರ್ಗದರ್ಶನದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ದೀಪಕ್, ಜಗದೀಶ್, ಪಿಎಸ್‌ಐಗಳಾದ ಸುನಿಲ್, ಸಿದ್ದಲಿಂಗ ಬಾಣಸೆ ಸಿಬ್ಬಂದಿಗಳಾದ ಚಂದ್ರಶೇಖರ್ ಬಸವರಾಜು, ರಘು, ಜಯವರ್ಧನ್, ಜೀಸನ್, ಉಮೇಶ್, ಅರುಣ್ ಕುಮಾರ್, ಅವಿನಾಶ್, ಮಂಜು, ಪ್ರದೀಪ್, ರವಿಕಿರಣ್, ಲೋಕೇಶ್, ಉಮೇಶ್, ಷರೀಫ್ ಅವರನ್ನೊಳಗೊಂಡ ತಂಡ ಆರೋಪಿಗಳನ್ನು ಬಂಧಿಸಿದೆ ಎಂದ ಎಸ್ಪಿ ಈ ತಂಡವನ್ನು ಶ್ಲಾಘಿಸಿದರು. ಸುದ್ದಿಗೋಷ್ಠಿಯಲ್ಲಿ ಎಎಸ್ಪಿ ಸಿ.ಈ.ತಿಮ್ಮಯ್ಯ, ನಾಗಮಂಗಲ ಡಿವೈಎಸ್ಪಿ ಲಕ್ಷ್ಮೀನಾರಾಯಣ ಪ್ರಸಾದ್ ಉಪಸ್ಥಿತರಿದ್ದರು.

ಎಕ್ಸ್‌ಪ್ರೆಸ್ ವೇ ದರೋಡೆ ನಿಯಂತ್ರಣಕ್ಕೆ ವಿಶೇಷ ತಂಡ ರಚನೆ

ಮಂಡ್ಯ, ಸೆ.13– ಬೆಂಗಳೂರು– ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಪೊಲೀಸರ ಸೋಗಿನಲ್ಲಿ ಇತ್ತೀಚೆಗೆ ನಡೆದಿರುವ ಮೂರು ದರೋಡೆ ಪ್ರಕರಣಗಳನ್ನು ಜಿಲ್ಲಾ ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿದ್ದು, ಪ್ರಕರಣದ ಪತ್ತೆಗಾಗಿ ವಿಶೇಷ ತಂಡ ರಚನೆ ಮಾಡಲಾಗಿದೆ. ಈಗಾಗಲೇ ಓರ್ವ ಆರೋಪಿಯನ್ನು ಸಹ ಬಂಧಿಸಿ, ವಿಚಾರಣೆ ನಡೆಸಲಾಗುತ್ತಿದೆ ಎಂದು ಎಸ್ಪಿ ಎನ್.ಯತೀಶ್ ತಿಳಿಸಿದರು. ಎಕ್ಸ್‌ಪ್ರೆಸ್ ವೇನಲ್ಲಿ ಇತ್ತೀಚೆಗೆ ನಡೆದ 3 ದರೋಡೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಬೆಂಗಳೂರು ಮೂಲದ ಓರ್ವನನ್ನು ವಶಕ್ಕೆ ಪಡೆದಿದ್ದೇವೆ. ಆತನನ್ನು ಸಮಗ್ರ ವಿಚಾರಣೆಗೆ ಒಳಪಡಿಸಿದ್ದು, ಪೊಲೀಸರೆಂದು ಹೇಳಿಕೊಂಡು ದರೋಡೆ ಮಾಡಿರುವ ಬಗ್ಗೆ ಎಲ್ಲಾ ರೀತಿಯಲ್ಲೂ ಮಾಹಿತಿ ಕಲೆ ಹಾಕುತ್ತಿದ್ದು, ಮುಂದೆ ಇಂತಹ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಲು ಸೂಕ್ತ ಕ್ರಮ ಕೈಗೊಂಡಿದ್ದು, ಪ್ರಯಾಣಿಕರು ಈ ರಸ್ತೆಯಲ್ಲಿ ರಾತ್ರಿ ವೇಳೆ ವಾಹನ ನಿಲ್ಲಿಸಬಾರದು ಅವರು ಮನವಿ ಮಾಡಿದರು. ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಎಕ್ಸ್‌ಪ್ರೆಸ್ ವೇ ಹಾಗೂ ಸರ್ವೀಸ್ ರಸ್ತೆ ಮಧ್ಯೆದಲ್ಲಿ ಅಳವಡಿಸಿರುವ ಕಬ್ಬಿಣದ ತಂತಿ ಬೇಲಿಗಳ ಕಳ್ಳತನಕ್ಕೆ ಕಡಿವಾಣ ಹಾಕಲು ಪೊಲೀಸರು ಗಸ್ತು ತಿರುಗುವುದನ್ನು ಹೆಚ್ಚಿಸಿದ್ದೇವೆ ಎಂದರು.

ಎಸ್‌ಬಿಐನ 'ಋಣ ಸಮಾಧಾನ ಯೋಜನೆ' ಅನ್ನದಾತರಿಗೆ ವರದಾನ

ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಸಿ.ಚಂದನ್ ಗೌಡ



ಮೈಸೂರು, ಸೆ.13–ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಋಣ ಸಮಾಧಾನ ಯೋಜನೆ ಅನ್ನದಾತರ ಪಾಲಿಗೆ ವರದಾನವಾಗಿದ್ದು, ಇದರ ಉಪಯೋಗವನ್ನು ಎಲ್ಲಾ ಅನ್ನದಾತರು ಸದ್ಬಳಕೆ ಮಾಡಿಕೊಂಡು ಸಾಲದಿಂದ ಋಣಮುಕ್ತರಾಗಬೇಕೆಂದು ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್ ಗೌಡ ತಿಳಿಸಿದರು.

ಮೈಸೂರಿನಲ್ಲಿ ಎಸ್‌ಬಿಐನ ಉಪ ಪ್ರಧಾನ ವ್ಯವಸ್ಥಾಪಕ ರಾಜೇಶ್ ಕುಮಾರ್ ಚೌದರಿಯವರನ್ನು ಭೇಟಿ ಮಾಡಿದ ಚಂದನ್ ಗೌಡ, ದೀರ್ಘಕಾಲದಿಂದ ಬಾಕಿ ಉಳಿದಿರುವ ಅನುತ್ಪಾದಕ ಸಾಲ ಎಂಬ ಘೋಷಣೆಯಂತೆ ಅನ್ನದಾತರ ಕೃಷಿ ಸಾಲ ಮತ್ತು ಅಡಮಾನ ಸಾಲವನ್ನು ಶೇ.50ರಷ್ಟು ರಿಯಾಯಿತಿಯೊಂದಿಗೆ ಸಾಲ ಮನ್ನಾ ಮಾಡಬೇಕೆಂದು ಮನವಿ ಮಾಡಿದರು.

ಅನ್ನದಾತರಿಗೆ ವರದಾನವಾದ ಋಣ ಸಮಾಧಾನ ಯೋಜನೆ ರಾಜ್ಯ ಸರ್ಕಾರದ ಸಾಲ ಮನ್ನಾ ಯೋಜನೆಗೂ ಮುನ್ನವೇ ಘೋಷಣೆಯಾಗಿದ್ದು, 20 ಲಕ್ಷ ರೂ. ವರೆಗಿನ ದೊಡ್ಡ ಮೊತ್ತದ ಸಾಲವನ್ನು ತೀರಿಸಲು ಈ ಯೋಜನೆ ಅಡಿಯಲ್ಲಿ ಅವಕಾಶವಿದೆ. ಸಂಭಾವ್ಯ ಬಡ್ಡಿ ಮತ್ತು ಖಾತೆಯಲ್ಲಿರುವ ಮೊತ್ತದ ಮೇಲಿನ ಬಡ್ಡಿ ಮೇಲೆ ಶೇ.25ರಿಂದ 50ರಷ್ಟು ರಿಯಾಯಿತಿ ನೀಡುವ ಮಹತ್ವಾಕಾಂಕ್ಷೆಯ ಋಣ ಸಮಾಧಾನ ಯೋಜನೆಯ ಸದಾವಕಾಶವನ್ನು ಎಲ್ಲಾ ಅನ್ನದಾತರು ಉಪಯೋಗಿಸಿಕೊಂಡು ಆದಷ್ಟು ಬೇಗ ಸಾಲದಿಂದ ಋಣಮುಕ್ತರಾಗಬೇಕು ಎಂದರು.

ಆದರೆ ಇತ್ತೀಚಿನ ದಿನಗಳಲ್ಲಿ ಎಸ್‌ಬಿಐನ ಋಣ ಸಮಾಧಾನ ಯೋಜನೆಯ ಪ್ರಚಾರದ ಕೊರತೆಯಿಂದ ಪ್ರತಿ ಜಿಲ್ಲೆಯಲ್ಲೂ ಸಾಲ ಮನ್ನಾ ವ್ಯಾಪ್ತಿಗೆ ಬಾರದ ಸಾವಿರಾರು ಸುಸ್ತಿದಾರರಿದ್ದಾರೆ. ಈ ಯೋಜನೆ ಬಗ್ಗೆ ಬ್ಯಾಂಕಿನವರು ಸರಿಯಾದ ಮಾಹಿತಿ ನೀಡಿದರೇ ದೀರ್ಘಕಾಲದ ಸಾಲ ಇತ್ಯರ್ಥಕ್ಕೂ ಅವಕಾಶವಿದೆ. ಸುಸ್ತಿದಾರ ರೈತರಿಗೆ ಮುದ್ರಣ ತಿಳುವಳಿಕೆ ನೋಟಿಸ್‌ಗಳನ್ನು ತಲುಪಿಸುತ್ತಿಲ್ಲ. ಇತರರಿಂದ ಮಾಹಿತಿ ತಿಳಿದು ಈ ಯೋಜನೆಯ ಮುಖಾಂತರ ಸಾಲ ತೀರಿಸಲು ಹೋದಾಗ ಬ್ಯಾಂಕ್‌ನ ಶಾಖೆಗಳಲ್ಲಿ ಸರಿಯಾದ ಮಾಹಿತಿ ಹಾಗೂ ಸ್ಪಂದನೆ ಸಿಗುತ್ತಿಲ್ಲ ಎಂಬ ದೂರು ಇದೆ. ಇದರಿಂದ ಸಾವಿರಾರು ಅನ್ನದಾತರ ಸಂದಾಯದ ಕನಸು ನನಸಾಗದೇ ಉಳಿದಿದೆ. ಅನ್ನದಾತರಿಗೆ ವರದಾನವಾಗಿರುವ ಈ ಋಣ ಸಮಾಧಾನ ಯೋಜನೆಯನ್ನು ಮುಂದುವರಿಸಬೇಕು ಎಂದರು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ಹೇಮಂತ್, ಸಂಘಟನಾ ಕಾರ್ಯದರ್ಶಿ ಮೂರ್ತಿ, ಕಾರ್ಯಾಧ್ಯಕ್ಷ ಜಗದೀಶ್, ಹುಣಸೂರು ತಾಲೂಕು ಅಧ್ಯಕ್ಷ ಪ್ರತಾಪ್ ಹಾಗೂ ಎಚ್.ಡಿ.ಕೋಟೆ ತಾಲೂಕಿನ ಅಧ್ಯಕ್ಷ ಉಮೇಶ್ ಮತ್ತು ಶಿವಣ್ಣಗೌಡ ಉಪಸ್ಥಿತರಿದ್ದರು.

ಹಂಪಿ ಉತ್ಸವ ಮುಂದೂಡಿಕೆ

ಬೆಂಗಳೂರು: ರಾಜ್ಯದಲ್ಲಿ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ನವೆಂಬರ್‌ನಲ್ಲಿ ನಡೆಯಬೇಕಿದ್ದ ವಿಶ್ವ ವಿಖ್ಯಾತ ಹಂಪಿ ಉತ್ಸವವನ್ನು ಮುಂದಿನ ವರ್ಷ ಜನವರಿ ಅಥವಾ ಫೆಬ್ರವರಿಯಲ್ಲಿ ನಡೆಸಲು ಸರ್ಕಾರ ತೀರ್ಮಾನಿಸಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಉಪಸ್ಥಿತಿಯಲ್ಲಿ ಬುಧವಾರ ನಡೆದ ಸಭೆಯಲ್ಲಿ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ.

ವಿಜಯನಗರ, ಬಳ್ಳಾರಿ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳ ಹೆಚ್ಚಿನ ತಾಲೂಕುಗಳಲ್ಲಿ ಬರ ಪರಿಸ್ಥಿತಿಯಿದೆ. ಇಂತಹ ಸ್ಥಿತಿಯಲ್ಲಿ ಉತ್ಸವ ನಡೆಸುವುದು ಕಷ್ಟ. ಫೆಬ್ರವರಿ ವೇಳೆಗೆ ಪರಿಸ್ಥಿತಿ ನೋಡಿಕೊಂಡು ಉತ್ಸವ ಆಯೋಜಿಸುವುದು ಸೂಕ್ತ ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಗಿದೆ.

ಲಿಬಿಯಾ ಪ್ರವಾಹ: 5 ಸಾವಿರಕ್ಕೂ ಹೆಚ್ಚು ಜನರ ಸಾವು

ಡೆರ್ನಾ: ಲಿಬಿಯಾದ ಪೂರ್ವ ಕರಾವಳಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಸಿಲುಕಿ ಮೃತಪಟ್ಟವರ ಸಂಖ್ಯೆ 5,200ಕ್ಕೂ ಹೆಚ್ಚಾಗಿದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಹೇಳಿದ್ದಾರೆ.

ಡೆರ್ನಾ ಭಾಗದಲ್ಲಿ ಸಾವಿನ ಸಂಖ್ಯೆ ಹೆಚ್ಚಾಗಿದೆ. ಏಳು ಸಾವಿರಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪೂರ್ವ ಲಿಬಿಯಾದ ಆಂಬುಲೆನ್ಸ್ ಮತ್ತು ತುರ್ತು ಕೇಂದ್ರದ ವಕ್ತಾರ ಒಸಾಮಾ ಅಲಿ ಹೇಳಿದ್ದಾರೆ. ಶೋಧ ಮತ್ತು ರಕ್ಷಣಾ ತಂಡಗಳು ಬೀದಿಗಳು, ಕಟ್ಟಡಗಳು ಮತ್ತು ಸಮುದ್ರದಿಂದ ಶವಗಳನ್ನು ಹೊರ ತೆಗೆಯುತ್ತಿದ್ದು, ಸಾವಿನ ಸಂಖ್ಯೆ ಹೆಚ್ಚುವ ಸಾಧ್ಯತೆ ಇದೆ ಎಂದು ಅವರು ಹೇಳಿದ್ದಾರೆ. ಮೆಡಿಟರೇನಿಯನ್ ಚಂಡಮಾರುತ ಭಾನುವಾರ ರಾತ್ರಿ ಡೆರ್ನಾ ಕರಾವಳಿಗೆ ಅಪ್ಪಳಿಸುತ್ತಿದ್ದಂತೆ, ನಗರದ ಹೊರಗಿನ ಅಣೆಕಟ್ಟುಗಳು ಹೊಡೆದು, ಭಾರಿ ಸ್ಫೋಟದ ಶಬ್ದ ಕೇಳಿಸಿತ್ತು ಎಂದು ಡೆರ್ನಾ ನಿವಾಸಿಗಳು ಹೇಳಿದ್ದಾರೆ.

ನೆಲೆ ಕಳೆದುಕೊಂಡ 30 ಸಾವಿರ ಜನರು: ಲಿಬಿಯಾ ನಗರದಲ್ಲಿ ಬುಧವಾರದವರೆಗೆ ಎರಡು ಸಾವಿರಕ್ಕೂ ಹೆಚ್ಚು ಶವಗಳನ್ನು ಅವಶೇಷಗಳಡಿಯಿಂದ ರಕ್ಷಣಾ ಸಿಬ್ಬಂದಿ ಹೊರತೆಗೆದಿದ್ದಾರೆ. ಈ ನಗರದಲ್ಲಿ ಸುಮಾರು 30 ಸಾವಿರ ಜನರು ನಿರಾಶ್ರಿತರಾಗಿದ್ದಾರೆ ಎಂದು ವಿಶ್ವಸಂಸ್ಥೆ ವಲಸಿಗರ ಏಜೆನ್ಸಿ ಅಧಿಕಾರಿಗಳು ಹೇಳಿದ್ದಾರೆ.

ಕಾವೇರಿ ನದಿ ನೀರು ಬಿಕ್ಕಟ್ಟು: ನಮ್ಮಲ್ಲಿ ನೀರಿಲ್ಲ...



ಕಾವೇರಿ ಜಲವಿವಾದ ಸಂಬಂಧ ಬುಧವಾರ ಬೆಂಗಳೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆದಿದ್ದ ಸರ್ವಪಕ್ಷಗಳ ಸಭೆಯಲ್ಲಿ ಸಂಸದರಾದ ಪ್ರತಾಪ್‌ಸಿಂಹ, ಶಿವಕುಮಾರ್ ಉದಾಸಿ, ಪಿ.ಸಿ. ಮೋಹನ್, ಶಾಸಕ ಎ.ಎಸ್. ಪೊನ್ನಣ್ಣ ಇತರರು ಪಾಲ್ಗೊಂಡಿದ್ದರು.

ಒಂದನೇ ಪುಟದಿಂದ

ದೆಹಲಿಗೆ ತೆರಳಿ ಕಾನೂನು ತಂಡದೊಂದಿಗೆ ಚರ್ಚಿಸುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಮಿತಿಯ ಮುಂದೆ ಮತ್ತೊಂದು ಅರ್ಜಿ ಹಾಕುತ್ತೇವೆ. ಸುಪ್ರೀಂಕೋರ್ಟ್‌ಗೆ ವಾಸ್ತವಾಂಶ ತಿಳಿಸುವ ಕೆಲಸ ಮಾಡುತ್ತೇವೆ. ಸೆಪ್ಟೆಂಬರ್ 11 ರ ತನಕ ನಾವು 99 ಟಿಎಂಸಿ ನೀರಿನ ಬದಲು 37 ಟಿಎಂಸಿ ಮಾತ್ರ ಬಿಟ್ಟಿದ್ದೇವೆ. ನಾವೀಗ ಸಂಪೂರ್ಣ ನೀರು ಬಿಡ್ತಿಲ್ಲ. ಬೆಳೆ ಉಳಿಸಿಕೊಳ್ಳಲು ನಮಗೆ 70 ಟಿಎಂಸಿ ಬೇಕು. 30 ಟಿಎಂಸಿ ಕುಡಿಯುವ ನೀರು ಹಾಗೂ 3 ಟಿಎಂಸಿ ಕೈಗಾರಿಕೆಗೆ ಬೇಕು. ನಮ್ಮ ಬಳಿ ಈಗ ಇರುವುದು 53 ಟಿಎಂಸಿ ಮಾತ್ರ ನಾಲ್ಕು ಜಲಾಶಯಗಳಿಂದ ಕೇವಲ 53 ಟಿಎಂಸಿ ನೀರು ಮಾತ್ರ ನಮ್ಮತ್ರ ಇದೆ ಎಂದು ಸಿಎಂ ಸಿದ್ದರಾಮಯ್ಯ ಮಾಹಿತಿ ನೀಡಿದರು.

ಕಾವೇರಿ ನದಿಯ ಒಳಹರಿವು 30 ವರ್ಷಗಳಲ್ಲೇ ಕಡಿಮೆ: ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಕಾವೇರಿ ನದಿಯ ಒಳಹರಿವು 30 ವರ್ಷಗಳಲ್ಲೇ ಅತ್ಯಂತ ಕಡಿಮೆಯಾಗಿದೆ. ನೈರುತ್ಯ ಮಾನ್ಸೂನ್ ಮುಗಿಯುವ ಹಂತದಲ್ಲಿದೆ. ಜಲಾಶಯಗಳಿಗೆ ಒಳ ಹರಿವಿನ ಪ್ರಮಾಣ ಕ್ಷೀಣಿಸುತ್ತಿದ್ದು, ಈಗಿರುವ ನೀರನ್ನು ನಮ್ಮ ಅಗತ್ಯಗಳಿಗೆ ಕಾಯ್ದಿರಿಸಬೇಕಾಗಿದೆ ಎಂದು ಹೇಳಿದ್ದಾರೆ. ಮೂರು ದಶಕಗಳಲ್ಲಿ ಸರಾಸರಿ ಶೇ.54 ರಷ್ಟು ಮಳೆ ಕೊರತೆಯಾಗಿದೆ. ರಾಜ್ಯದಲ್ಲಿ ಬೆಳೆದಿರುವ ಬೆಳೆಗಳಿಗೆ 70.20 ಟಿಎಂಸಿ ನೀರು ಬೇಕು. ಕುಡಿಯುವ ನೀರಿನ ಉದ್ದೇಶಕ್ಕೆ 2024ರ ಸೆಪ್ಟೆಂಬರ್‌ನಿಂದ ಜುಲೈವರೆಗೆ 33 ಟಿಎಂಸಿ, ಕೈಗಾರಿಕೆಗಳ ಬಳಕೆಗೆ 3 ಟಿಎಂಸಿ ಅಗತ್ಯವಿದೆ. ಒಟ್ಟಾರೆ ಕರ್ನಾಟಕಕ್ಕೆ 106.20 ಟಿಎಂಸಿ ನೀರು ಬೇಕು ಎಂದು ವಿವರಿಸಿದರು. ಆದರೆ, ಕಾವೇರಿ ಕಣಿವೆಯ ರಾಜ್ಯದ ನಾಲ್ಕು ಜಲಾಶಯಗಳಲ್ಲಿ ಲಭ್ಯವಿರುವ ಲೈವ್ ಸ್ಟೋರೇಜ್ 53.287 ಟಿಎಂಸಿ ಎಂದು ಡಿಸಿಎಂ ತಿಳಿಸಿದ್ದಾರೆ.

ರಾಜ್ಯದಲ್ಲಿ 195 ತಾಲೂಕು ಬರಪೀಡಿತ

ತಾಲೂಕುಗಳು ಸಾಧಾರಣ ಬರಕ್ಕೆ ತುತ್ತಾಗಿದ್ದರೂ ಇವನ್ನೂ ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆಗೊಳಿಸಿದ್ದೇವೆ.

ಕೇಂದ್ರ ಸರ್ಕಾರ ಈ ಹೆಚ್ಚುವರಿ ತಾಲೂಕುಗಳಿಗೆ ಪರಿಹಾರ ಕಲ್ಪಿಸುತ್ತದೆ ಎಂಬ ಭರವಸೆ ಇದೆ. ಇಲ್ಲದಿದ್ದರೆ, ನಾವೇ ಪರಿಹಾರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುತ್ತೇವೆ. ಇದಲ್ಲದೆ, ಇನ್ನೂ 40 ತಾಲೂಕುಗಳಲ್ಲೂ ಮಳೆಯ ಕೊರತೆ ಇದ್ದು, ರೈತರ ಬೆಳೆ ವಿಫಲವಾಗಿದೆ. ಇಷ್ಟಾದರೂ ಉಪಗ್ರಹ ಸಮೀಕ್ಷೆಯಲ್ಲಿ ಹಸಿರಿನ ವಾತಾವರಣವಿದೆ ಎಂದು ಕೇಂದ್ರದ ವರದಿ ಬಂದಿದೆ. ಆದರೆ, ಇಲ್ಲಿ ಬೆಳೆದಿರುವ ಬೆಳೆ ರೈತರಿಗೆ ಫಸಲು ಕೊಡುವುದು ಅನುಮಾನ.

ಇನ್ನೂ 8–10 ದಿನಗಳ ಕಾಲ ಕಾದು ನೋಡಿ ನಂತರ ಅಧಿಕಾರಿಗಳಿಂದ ಮಾಹಿತಿ ತರಿಸಿ ಈ ಹೆಚ್ಚುವರಿ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸುವುದಾಗಿ ಹೇಳಿದರು.

ಈ ತಾಲೂಕುಗಳಿಗೆ ಸೀಮಿತವಾಗಿ ನಾಲ್ಕು ಕೃಷಿ ಹಾಗೂ ತೋಟಗಾರಿಕೆ ವಿಶ್ವವಿದ್ಯಾಲಯಗಳಿಂದ ಅಧ್ಯಯನ ನಡೆಸಿ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದುಕೊಳ್ಳುವಂತೆ ಸೂಚನೆ ನೀಡಿದ್ದೇವೆ. ಜಿಲ್ಲಾಡಳಿತದಿಂದ ವರದಿ ಬಂದ ಕೂಡಲೇ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು. ಸದ್ಯಕ್ಕೆ ಕುಡಿಯುವ ನೀರಿಗೆ ಎಲ್ಲೂ ಅಭಾವವಿಲ್ಲ. ಆದರೂ ಜಿಲ್ಲಾಧಿಕಾರಿಗಳ ಬಳಿ 489 ಕೋಟಿ ರೂ. ಇದ್ದು, ಅದನ್ನು ಬಳಕೆ ಮಾಡಿಕೊಳ್ಳುವಂತೆ ಆದೇಶ ಮಾಡಿದ್ದೇವೆ. ಇನ್ನು ಕುಡಿಯುವ ನೀರಿಗಾಗಿ ನಮ್ಮ ಇಲಾಖೆಯಲ್ಲಿ 400 ಕೋಟಿ ರೂ. ಮೀಸಲಿಟ್ಟಿದ್ದು, ರಾಸುಗಳಿಗೆ ಮೇವು ಬೆಳೆಯಲು ಬಿತ್ತನೆ ಬೀಜಕ್ಕಾಗಿ ಇಂದು 20 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಕಂದಾಯ ಸಚಿವರು ತಿಳಿಸಿದರು. ಕುಡಿಯುವ ನೀರಿಗಾಗಿ ಕೊಳವೆ ಬಾವಿಗಳು ವಿಫಲವಾದರೆ ಟ್ಯಾಂಕರ್ ಮೂಲಕ ಹಾಗೂ ಖಾಸಗಿ ಕೊಳವೆ ಬಾವಿಗಳಿಂದ ನೀರು ಪಡೆದು ಒದಗಿಸಬೇಕು. ಇದಕ್ಕಾಗಿ ಮುಖ್ಯಮಂತ್ರಿಗಳು ಎಲ್ಲಾ ಸಿಇಓಗಳಿಗೆ ತಲಾ ಒಂದು ಕೋಟಿ ರೂ. ನಿನ್ನೆ ಬಿಡುಗಡೆ ಮಾಡಿದ್ದಾರೆ. ನಾಳೆ ನಡೆಯುವ ಸಂಪುಟ ಸಭೆಯಲ್ಲಿ ಅಧಿಕೃತವಾಗಿ ಬರ ಘೋಷಣೆ ಮಾಡಿದ ನಂತರ ರೈತರಿಗೆ ಬೆಳೆ ಪರಿಹಾರ ಸೇರಿದಂತೆ ಮುಂದಿನ ಕ್ರಮಗಳನ್ನು ಯುದ್ಧೋಪಾದಿಯಲ್ಲಿ ಕೈಗೊಳ್ಳುತ್ತೇವೆ. ಇದಕ್ಕಾಗಿ ಎಷ್ಟೇ ಹಣ ಖರ್ಚಾದರೂ ನೀಡುವುದಾಗಿ ಮುಖ್ಯಮಂತ್ರಿ ಅವರು ಜಿಲ್ಲಾಧಿಕಾರಿಗಳ ಸಭೆಯಲ್ಲಿ ತಿಳಿಸಿರುವುದಾಗಿ ಹೇಳಿದರು.

ಬಿತ್ತ ಸೇರಿದಂತೆ ಈಗಾಗಲೇ ಬಿತ್ತನೆಯಾಗಿರುವ ಬೆಳೆಯ ಕಟಾವು ಮುಗಿದ ನಂತರ ಲಭ್ಯವಾಗುವ ಮೇವನ್ನು ಸಂಗ್ರಹಿಸಿಡಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮಳೆ ಕೊರತೆಯ ಹಿನ್ನೆಲೆಯಲ್ಲಿ ರೈತರಿಗೆ ಸಮರ್ಪಕ ಪ್ರಮಾಣದ ವಿದ್ಯುತ್ ಪೂರೈಸಿದರೆ ಉಳಿದ ಕೃಷಿ ಚಟುವಟಿಕೆಗಳಿಗೆ ಅನುಕೂಲ ವಾಗುತ್ತದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ವಿದ್ಯುತ್ ಕೊರತೆ ಇರುವುದು ನಿಜವಾದರೂ ರೈತರಿಗೆ ಗಣನೀಯ ಪ್ರಮಾಣದಲ್ಲಿ ವಿದ್ಯುತ್ ನೀಡಲಾಗುತ್ತಿದೆ. ಹೆಚ್ಚುವರಿ ವಿದ್ಯುತ್‌ನ್ನು ಹೊರ ರಾಜ್ಯಗಳಿಂದ ಖರೀದಿ ಮಾಡಲು ತೀರ್ಮಾನಿಸಲಾಗಿದೆ. ಆದರೆ ಮಳೆಯ ಕೊರತೆಯಿಂದ ಬೇರೆ ರಾಜ್ಯಗಳಲ್ಲೂ ವಿದ್ಯುತ್ ಕೊರತೆ ಇದೆ ಎಂದು ಹೇಳಿದರು.


ವಿಶೇಷ ಅಧಿವೇಶನಕ್ಕೂ ಮುನ್ನ ಭಾನುವಾರ ಸರ್ವಪಕ್ಷ ಸಭೆ

ನವದೆಹಲಿ: ಸಂಸತ್ ವಿಶೇಷ ಅಧಿವೇಶನಕ್ಕೂ ಮುನ್ನ ಭಾನುವಾರದಂದು ಸರ್ಕಾರ ಸರ್ವಪಕ್ಷ ಸಭೆ ಕರೆದಿದೆ.

ಕೇಂದ್ರ ಸಂಸದೀಯ ಸಚಿವ ಪ್ರಹ್ಲಾದ್ ಜೋಶಿ ಸರ್ವಪಕ್ಷ ಸಭೆಯಲ್ಲಿ ಭಾಗಿಯಾಗುವಂತೆ ವಿಪಕ್ಷಗಳಿಗೆ ಕರೆ ನೀಡಿದ್ದಾರೆ. ಸೆ.18 ರಿಂದ 22 ವರೆಗೆ 5 ದಿನಗಳ ಕಾಲ ಸಂಸತ್‌ನ ವಿಶೇಷ ಅಧಿವೇಶನ ನಡೆಯಲಿದೆ. ಇಂಡಿಯಾ ಮೈತ್ರಿಕೂಟದಲ್ಲಿರುವ 24 ಪಕ್ಷಗಳು ಸಂಸತ್‌ನ ವಿಶೇಷ ಅಧಿವೇಶನದಲ್ಲಿ ಭಾಗಿಯಾಗುವುದಕ್ಕೆ ಒಪ್ಪಿದ್ದು, ಅಧಿವೇಶನದ ಕಾರ್ಯಸೂಚಿ ಇನ್ನಷ್ಟೇ ಬಹಿರಂಗವಾಗಬೇಕಿದೆ.

ಕಳೆದ ತಿಂಗಳು ಮುಕ್ತಾಯಗೊಂಡ ಮುಂಗಾರು ಅಧಿವೇಶನ ಹಳೆಯ ಸಂಸತ್ ಭವನದಲ್ಲಿ ನಡೆದಿತ್ತು. ಈ ಅಧಿವೇಶನ ಹಳೆಯ ಮತ್ತು ಹೊಸ ಸಂಸತ್ ಭವನಗಳಲ್ಲಿ ನಡೆಯುತ್ತದೆ ಎಂಬ ಮಾಹಿತಿ ಲಭ್ಯವಾಗಿದೆ. ವರ್ಷಾಂತ್ಯಕ್ಕೆ ಪಂಚರಾಜ್ಯಗಳ ಚುನಾವಣೆಗಳಿಗೆ ತಯಾರಾಗುತ್ತಿರುವ ಪಕ್ಷಗಳಿಗೆ ವಿಶೇಷ ಅಧಿವೇಶನ ಕರೆದಿರುವುದು ಅಚ್ಚರಿ ಮೂಡಿಸಿದೆ.

ಗೌರಿ–ಗಣೇಶ ಹಬ್ಬ: ಜಯಪುರ ಠಾಣೆಯಲ್ಲಿ ಶಾಂತಿ ಸಭೆ



ಜಯಪುರ, ಸೆ.13– ಗೌರಿ–ಗಣೇಶ ಹಬ್ಬ ಮತ್ತು ಈದ್–ಮಿಲಾದ್ ಹಬ್ಬದ ಅಂಗವಾಗಿ ಜಯಪುರ ಪೊಲೀಸ್ ಠಾಣಾ ಆವರಣದಲ್ಲಿ ಬುಧವಾರ ವಿವಿಧ ಸಮುದಾಯಗಳ ಮುಖಂಡರ ಸಮ್ಮುಖದಲ್ಲಿ ಸರ್ಕಲ್ ಇನ್ಸ್‌ಪೆಕ್ಟರ್ ಸ್ವರ್ಣಾ ನೇತೃತ್ವದಲ್ಲಿ ಶಾಂತಿ ಸಭೆ ನಡೆಯಿತು.

ಇದೇ ತಿಂಗಳ 18ರಂದು ಗೌರಿಗಣೇಶ ಹಬ್ಬವಿದ್ದು, ಗಣಪತಿ ಮೂರ್ತಿ ಪ್ರತಿಷ್ಠಾಪಿಸುವವರು ಕಡ್ಡಾಯವಾಗಿ ಪೊಲೀಸ್ ಠಾಣೆಯಿಂದ ಅನುಮತಿ ಪಡೆಯಬೇಕು. ಮೂರ್ತಿ ವಿಸರ್ಜಿಸುವ ದಿನಾಂಕ ಮತ್ತು ಸಮಯವನ್ನು ಪೊಲೀಸರಿಗೆ ತಿಳಿಸಬೇಕು. ರಾತ್ರಿ 10ಗಂಟೆಯ ಮೇಲೆ ಧ್ವನಿವರ್ಧಕ ಬಳಸಬಾರದು. ಸಾರ್ವಜನಿಕರಿಗೆ ತೊಂದರೆಯುಂಟು ಮಾಡದಂತೆ ಗಣೇಶೋತ್ಸವ ಮಾಡಬೇಕು. ಡಿಜೆ ಸೌಂಡ್ಸ್ ಬಳಸಬಾರದು. ಶಾಂತಿ ಸೌಹಾರ್ದತೆಯಿಂದ ಹಬ್ಬ ಆಚರಿಸಬೇಕು. ಕಾನೂನು ಉಲ್ಲಂಘಿಸುವವರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಸರ್ಕಲ್ ಇನ್ಸ್‌ಪೆಕ್ಟರ್ ತಿಳಿಸಿದರು. ಶಾಂತಿಸಭೆಯಲ್ಲಿ ಜಯಪುರ ಠಾಣಾ ವ್ಯಾಪ್ತಿಯ ಗ್ರಾಮಗಳ ಯಜಮಾನರುಗಳು, ಮುಖಂಡರು, ಗ್ರಾಪಂಗಳ ಸದಸ್ಯರು ಪಾಲ್ಗೊಂಡಿದ್ದರು. ಜಯಪುರ ಠಾಣಾ ಪಿಎಸ್‌ಐ ಸುರೇಶ್ ಬೋಪಣ್ಣ, ಅಪರಾಧ ವಿಭಾಗ ಪಿಎಸ್‌ಐ ಹೇಮಲತಾ, ಪೊಲೀಸ್ ಸಿಬ್ಬಂದಿ ಇದ್ದರು.

ಮೈಸೂರು ಮಿತ್ರ

ಜಾನುವಾರುಗಳ ಚಿಕಿತ್ಸೆಗೆ ಬಳಸುವ 'ಡೈಕ್ಲೋಫಿನಾಕ್' ಔಷಧಿಯಿಂದ ಶೇ.99ರಷ್ಟು ರಣಹದ್ದು ನಾಶ

●ವೈಲ್ಡ್ ಲೈಫ್ ಕನ್ಸರ್ವೇಷನ್ ಫೌಂಡೇಷನ್ ಮುಖ್ಯಸ್ಥ ರಾಜ್‌ಕುಮಾರ್ ಡಿ.ಅರಸ್ ಮಾಹಿತಿ ●ರಣಹದ್ದು ಸಂರಕ್ಷಣೆಗೆ ಸಹಕರಿಸುವಂತೆ ಮನವಿ



ಮೈಸೂರು, ಸೆ.13(ಎಂಟಿವೈ)– ಜಾನುವಾರುಗಳಿಗೆ ಈ ಹಿಂದೆ ಪಶು ವೈದ್ಯಕೀಯ ಚಿಕಿತ್ಸೆ ನೀಡುವಾಗ ಬಳಸುತ್ತಿದ್ದ 'ಡೈಕ್ಲೋಫಿನಾಕ್' ನೋವು ನಿವಾರಕ ಔಷಧಿಯಿಂದಲೇ ಶೇ.99ರಷ್ಟು ರಣಹದ್ದುಗಳು ನಶಿಸಿ ಹೋಗಿದ್ದು, ಅವುಗಳ ಸಂತತಿ ಸಂರಕ್ಷಣೆಗೆ ಎಲ್ಲರೂ ಸಹಕರಿಸಬೇಕು ಎಂದು ವೈಲ್ಡ್‌ಲೈಫ್ ಕನ್ಸರ್ವೇಷನ್ ಫೌಂಡೇಷನ್ ಮುಖ್ಯಸ್ಥ ರಾಜ್‌ಕುಮಾರ್ ಡಿ.ಅರಸ್ ಮನವಿ ಮಾಡಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ ಹಂಗಳ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಅಂತರರಾಷ್ಟ್ರೀಯ ರಣಹದ್ದು ಜಾಗೃತಿ ದಿನದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ರಣಹದ್ದುಗಳ ಸಂರಕ್ಷಣೆ ಕುರಿತು ಮಾತನಾಡಿದ ಅವರು, ಈಗಾಗಲೇ ರಣಹದ್ದುಗಳ ಸಂತತಿ ನಶಿಸಿ ಹೋಗುವ ಹಂತ ತಲುಪಿದೆ. ಶೇ.1ರಷ್ಟು ಮಾತ್ರ ಉಳಿದಿವೆ. ಪರಿಸರದ ಸಮತೋಲನ ಮತ್ತು ಉತ್ತಮ ಪರಿಸರಕ್ಕಾಗಿ ರಣಹದ್ದುಗಳನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಡೈಕ್ಲೋಫಿನಾಕ್ ನೋವು ನಿವಾರಕ ಔಷಧ ಬಳಕೆಯಿಂದ ರಣಹದ್ದುಗಳ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಈ ಬಗ್ಗೆ ಎಲ್ಲರೂ ಎಚ್ಚರಿಕೆ ವಹಿಸಬೇಕು. ಅದರಲ್ಲೂ ರಣಹದ್ದುಗಳ ಸಂರಕ್ಷಣೆ ಕುರಿತು ಬೇರೆಯವರಿಗೂ ಅರಿವು ಮೂಡಿಸಬೇಕು ಎಂದರು.

ವೈಲ್ಡ್‌ಲೈಫ್ ಕನ್ಸರ್ವೇಷನ್ ಫೌಂಡೇಷನ್‌ನ ಡ್ಯಾನಿಯಲ್ ಸುಕುಮಾರ್ ದಾಸ್,ಪ್ರಾಣಿ ಸಂರಕ್ಷಕ ಪ್ರದೀಪ್, ಮಾರ್ಕ್ ಸ್ಟೀವ್, ಜಗದೀಶ್ ಅವರು ಶಾಲಾ ಮಕ್ಕಳಿಗೆ ದಕ್ಷಿಣ ಭಾರತದಲ್ಲಿನ ನಾಲ್ಕು ವಿಧದ ಕೆಂಪುತಲೆ ರಣಹದ್ದು, ಈಜಿಪ್ಟಿಯನ್ ರಣಹದ್ದು, ಬಿಳಿ ಬೆನ್ನಿನ ರಣಹದ್ದು, ಭಾರತೀಯ ರಣಹದ್ದುಗಳ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು. ಈ ರಣಹದ್ದುಗಳನ್ನು ಗುರುತಿಸುವುದು, ಅದರ ಗುಣಲಕ್ಷಣಗಳ ಬಗ್ಗೆ 'ದಕ್ಷಿಣ ಭಾರತದ ರಣಹದ್ದುಗಳು' ಕೈಪಿಡಿಯ ಆಧರಿತ ವಿವರಣೆ ನೀಡಿದರು. ವೈಲ್ಡ್ ಲೈಫ್ ಕನ್ಸರ್ವೇಷನ್ ಫೌಂಡೇಷನ್ ಸಂಸ್ಥೆಯು ಅಳಿವಿನಂಚಿನಲ್ಲಿರುವ ರಣಹದ್ದುಗಳ ಸಂರಕ್ಷಣೆಗಾಗಿ ಬಂಡೀಪುರ ಮತ್ತು ನಾಗರಹೊಳೆ ಹುಲಿಸಂರಕ್ಷಿತ ಪ್ರದೇಶ ವ್ಯಾಪ್ತಿಯ 20 ಗ್ರಾಮಗಳಲ್ಲಿ ಅಂತರರಾಷ್ಟ್ರೀಯ ರಣಹದ್ದು ಜಾಗೃತಿ ದಿನದ ಅಂಗವಾಗಿ ಕಾರ್ಯಕ್ರಮ ನಡೆಸಿ, ರಣಹದ್ದು ಸಂತತಿಗಳ ಸಂರಕ್ಷಣೆ ಕುರಿತಂತೆ ಜಾಗೃತಿ ಮೂಡಿಸುವ ಕಾರ್ಯಕ್ರಮ ನಡೆಸುತ್ತಿದೆ.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರಾದ ನಟರಾಜು, ಗುರುಪ್ರಸಾದ್, ರಾಜು, ಶ್ರೀನಿವಾಸ್ ನಾಯ್ಕ್, ಮಹೇಶ್ ವರ್ಮ, ಸರ್ವಣ್ಣಮ್ಮ, ಸಹನ, ಭಾಗ್ಯ ಮತ್ತಿತರರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಜ್ಞಾನ ಎಷ್ಟು ಮುಖ್ಯವೋ ಉತ್ತಮ ಆರೋಗ್ಯಕ್ಕೆ ದೈಹಿಕ ಚಟುವಟಿಕೆಯೂ ಅಷ್ಟೇ ಮುಖ್ಯ

●ಎಸಿಪಿ ಗಜೇಂದ್ರ ಪ್ರಸಾದ್ ಕಿವಿಮಾತು ●ದಕ್ಷಿಣ ಆಫ್ರಿಕಾದಲ್ಲಿ ನಡೆಯುವ 5ನೇ ಟೆನಿಕಾಯ್ಟ್ ವಿಶ್ವಕಪ್‌ನಲ್ಲಿ ಭಾರತ ಪ್ರತಿನಿಧಿಸುತ್ತಿರುವ ಮಂಡ್ಯದ ಕ್ಯಾತನಹಳ್ಳಿ ಲಿಖಿತಾಗೆ ಅಭಿನಂದನೆ



ಮೈಸೂರು, ಸೆ. 13–ವಿದ್ಯಾರ್ಥಿಗಳಿಗೆ ಜ್ಞಾನ ಎಷ್ಟು ಮುಖ್ಯವೋ ನಿಮ್ಮಗಳ ಸರ್ವಾಂಗೀಣ ಬೆಳವಣಿಗೆ,ಉತ್ತಮ ಆರೋಗ್ಯಕ್ಕೆ ದೈಹಿಕ ಚಟುವಟಿಕೆ ಅತೀ ಮುಖ್ಯ ಎಂದು ಎಸಿಪಿ ಗಜೇಂದ್ರಪ್ರಸಾದ್ ತಿಳಿಸಿದರು. ದಕ್ಷಿಣ ಆಫ್ರಿಕಾದಲ್ಲಿ ನಡೆಯುತ್ತಿರುವ 5ನೇ ಟೆನಿಕಾಯ್ಟ್ (ರಿಂಗ್ ಎಸೆತ) ವಿಶ್ವಕಪ್‌ನಲ್ಲಿ ಭಾರತ ತಂಡಕ್ಕೆ ಆಯ್ಕೆಯಾಗಿರುವ ಮಂಡ್ಯ ಜಿಲ್ಲೆ, ಪಾಂಡವಪುರ ತಾಲೂಕು, ಕ್ಯಾತನಹಳ್ಳಿಯ ಲಿಖಿತಾ ಅವರಿಗೆ ಮೈಸೂರಿನ ಮಂಚೇಗೌಡನಕೊಪ್ಪಲಿನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಅಭಿನಂದನೆ ಸಲ್ಲಿಸಿ, ಪ್ರೋತ್ಸಾಹ ಧನ ನೀಡಲಾಯಿತು.

ಈ ವೇಳೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಎಸಿಪಿ ಗಜೇಂದ್ರ ಪ್ರಸಾದ್ ಪಾಲ್ಗೊಂಡು, ಟೆನಿಕಾಯ್ಟ್ ಅಂತರ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಪಾಲ್ಗೊಳ್ಳುತ್ತಿರುವ ಲಿಖಿತ ಅವರನ್ನು ಸನ್ಮಾನ ಮಾಡುತ್ತಿರುವುದು ಶ್ಲಾಘನೀಯ ಎಂದು ಪ್ರಶಂಸಿಸಿದರು. ಓದುವುದರ ಜೊತೆಗೆ ಕ್ರೀಡೆಯೂ ಅವಶ್ಯಕ. ಕ್ರೀಡೆ ನಮಗೆ ಉಪಯೋಗಕ್ಕೆ ಬಾರದ ಚಟುವಟಿಕೆ ಎಂಬ ಭಾವನೆ ಬಹಳಷ್ಟು ವಿದ್ಯಾರ್ಥಿಗಳಲ್ಲಿದೆ. ಪೋಷಕರು ಕೂಡ ತಮ್ಮ ಮಕ್ಕಳಲ್ಲಿ ಇದನ್ನೇ ತಲೆಗೆ ತುಂಬುತ್ತಾರೆ. ಇದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ಕ್ರೀಡೆಯಲ್ಲೇ ಉತ್ತಮ ಭವಿಷ್ಯ ರೂಪಿಸಿಕೊಂಡವರು ಬಹಳ ಮಂದಿ ಇದ್ದಾರೆ. ಮಾನವ ಸಂಪನ್ಮೂಲದಲ್ಲಿ ಚೀನಾ ದೇಶಕ್ಕೆ ಹತ್ತಿರ ನಮ್ಮ ದೇಶವು ಇದೆ. ಆದರೆ ಕ್ರೀಡೆಯಲ್ಲಿ ನಮ್ಮ ಸಾಧನೆ ಕಡಿಮೆ ಎಂದು ವಿಷಾದಿಸಿದರು.

ಹೆಸರೇ ಕೇಳಿರದಂತಹ ರಾಷ್ಟ್ರಗಳು ಕೂಡ ಈಗ ಕ್ರೀಡೆಯಲ್ಲಿ ಮುಂದಿವೆ. ಆದರೆ ನಮ್ಮಲ್ಲಿ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ಸಿಗುತ್ತಿಲ್ಲ. ಇತ್ತೀಚೆಗಂತೂ ಕ್ರೀಡೆ ಆದಾಯದ ಮೂಲವಾಗಿ ಪರಿಣಮಿಸಿದೆ ಎಂದು ಗಜೇಂದ್ರ ಪ್ರಸಾದ್ ಬೇಸರ ವ್ಯಕ್ತಪಡಿಸಿದರು. ಕ್ಯಾತನಹಳ್ಳಿ ಒಂದು ಪುಟ್ಟ ಗ್ರಾಮ. ಆದರೆ ಅಲ್ಲಿ ಕ್ರೀಡಾಭಿಮಾನ ಹೆಚ್ಚಾಗಿದೆ. ರಾಷ್ಟ್ರ ಮಟ್ಟದಲ್ಲಿ ಈ ಗ್ರಾಮ ಗಮನ ಸೆಳೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ವೇಳೆ ರೈತ ನಾಯಕ ಪುಟ್ಟಣ್ಣಯ್ಯ ಅವರನ್ನು ಸ್ಮರಿಸಿದ ಗಜೇಂದ್ರಪ್ರಸಾದ್, ಅವರು ಕೂಡ ಉತ್ತಮ ಕಬಡ್ಡಿ ಪಟುವಾಗಿದ್ದರು. ಲಿಖಿತಾ ಕೂಡ ಕ್ಯಾತನಹಳ್ಳಿಯವರು ಎಂಬುದು ವಿಶೇಷ ಎಂದು ಸಂತಸ ವ್ಯಕ್ತಪಡಿಸಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ಪ್ರಾಂಶುಪಾಲರಾದ ಶಿವಮಲ್ಲು, ಸಾಹಿತಿಗಳಾದ ಪ್ರಕಾಶ್ ಜಿ. ಹಳ್ಳಿ, ಲಿಖಿತಾರವರ ತಂದೆ, ಕಾಂಗ್ರೆಸ್ ಮುಖಂಡ ಕೇಬಲ್ ನಾಗರಾಜ್, ಕೃಷ್ಣ, ಶ್ವೇತಾ, ಶಿಕ್ಷಕ ವೃಂದ ಹಾಜರಿದ್ದರು.

ಗಣೇಶ ಚತುರ್ಥಿ ಪ್ರಯುಕ್ತ ಸೆ.18ರಂದು ಮಾಂಸ ಮಾರಾಟ ನಿಷೇಧ

ಮೈಸೂರು, ಸೆ.13– ಗಣೇಶ ಚತುರ್ಥಿ ಪ್ರಯುಕ್ತ ಸೆಪ್ಟೆಂಬರ್ 18 ರಂದು ಮೈಸೂರು ಮಹಾನಗರ ಪಾಲಿಕೆಗೆ ಸೇರಿದ ವಿವಿಧ ಮಾಂಸದ ಅಂಗಡಿಗಳನ್ನು, ಕುರಿ, ಮೇಕೆ, ಕೋಳಿ ಮಾಂಸ, ಹಂದಿ ಮಾಂಸ ಮತ್ತು ಮೀನು ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಸರಾ ವಸ್ತುಪ್ರದರ್ಶನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನೀಡಲು ಅರ್ಜಿ ಆಹ್ವಾನ



ಮೈಸೂರು, ಸೆ.13– ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ನಾಡಹಬ್ಬ ಮೈಸೂರು ದಸರಾ ಅಂಗವಾಗಿ ಅಕ್ಟೋಬರ್ 15 ರಿಂದ 2024ರ ಜನವರಿ 12 ರವರೆಗೆ 90 ದಿನಗಳ ದಸರಾ ವಸ್ತುಪ್ರದರ್ಶನವನ್ನು ಆಯೋಜಿಸಲಾಗುತ್ತದೆ. ಈ ಸಂಬಂಧ ಪಿ. ಕಾಳಿಂಗರಾವ್ ಗಾನ ಮಂಟಪದಲ್ಲಿ ಪ್ರತಿದಿನ ಸಂಜೆ 6:30 ರಿಂದ 9:30 ಗಂಟೆವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

ಆಸಕ್ತ ಕಲಾವಿದರು/ಸಂಘ ಸಂಸ್ಥೆಗಳು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ ಅರ್ಜಿಯನ್ನು WWW.Keaonline.inನಲ್ಲಿ ಡೌನ್‌ಲೋಡ್ ಮಾಡಿಕೊಂಡು ಈ ಹಿಂದೆ ಕಾರ್ಯಕ್ರಮಗಳನ್ನು ನಡೆಸಿಕೊಟ್ಟಿರುವ ಬಗೆಗೆ ದೃಢೀಕರಣ ಪತ್ರಗಳು, ಭಾವಚಿತ್ರ ಮತ್ತು ಸಿ.ಡಿ.ಯೊಂದಿಗೆ ಸೆ.25ರ ಸಂಜೆ 4.30 ರೊಳಗೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರವನ್ನು ಕಚೇರಿ ವೇಳೆಯಲ್ಲಿ ಹಾಗೂ ದೂ.ಸಂ: 0821– 2523626 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು: ಕರ್ನಾಟಕ ಸೇನಾಪಡೆ ಪ್ರತಿಭಟನೆ



ಮೈಸೂರು, ಸೆ.13(ಜಿಎ)–ತಮಿಳುನಾಡಿಗೆ ಮತ್ತೆ ಕಾವೇರಿ ನೀರು ಹರಿಸುವಂತೆ ರಾಜ್ಯ ಸರ್ಕಾರಕ್ಕೆ ಆದೇಶ ನೀಡಿರುವ ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಬುಧವಾರ ಜಿಲ್ಲಾ ಪಂಚಾಯತ್ ಕಚೇರಿ ಮುಂಭಾಗ ಕಾವೇರಿ ಪ್ರಾಧಿಕಾರಕ್ಕೆ ಬೀಗ ಹಾಕಿ ಎಂದು ಕರ್ನಾಟಕ ಸೇನಾಪಡೆ ವತಿಯಿಂದ ಬೀಗ ಹಿಡಿದು ಪ್ರತಿಭಟನೆ ನಡೆಸಲಾಯಿತು.

ನಮ್ಮ ದೇಶದ ಒಕ್ಕೂಟದ ವ್ಯವಸ್ಥೆಯಲ್ಲಿ ಎಲ್ಲಾ ರಾಜ್ಯಗಳು ಅಣ್ಣ–ತಮ್ಮಂದಿರಂತಿರಬೇಕು. ಅದು ಬಿಟ್ಟು ತಮಿಳುನಾಡು ಯಾವಾಗಲೂ ನಮ್ಮ ರಾಜ್ಯದ ಮೇಲೆ ಕಾಲು ಕೆರೆದು ಜಗಳಕ್ಕೆ ಬರುತ್ತದೆ ಹಾಗೂ ಸ್ವಲ್ಪವೂ ಮಾನವೀಯತೆ ಇಲ್ಲದಂತೆ ವರ್ತಿಸುತ್ತಿದೆ. ಕಾವೇರಿ ಕಣಿವೆಯ ನೀರಿನ ವಸ್ತುಸ್ಥಿತಿ ತಿಳಿದಿದ್ದರೂ ನಮಗೆ ನೀರು ಕೊಡಿ, ನೀರು ಕೊಡಿ ಎಂದು ಒತ್ತಾಯಿಸುವುದು ಅತ್ಯಂತ ಖಂಡನೀಯ ಎಂದರು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ರಚನೆ ಉದ್ದೇಶ ಕರ್ನಾಟಕ, ತಮಿಳುನಾಡಿಗೂ ನ್ಯಾಯ ಸಿಗಬೇಕೆಂದು. ಆದರೆ, ಈ ಪ್ರಾಧಿಕಾರ ರಚನೆಯಾಗಿರುವುದೇ ತಮಿಳುನಾಡಿಗಾಗಿ ಅನಿಸುತ್ತಿದೆ. ಒಮ್ಮೆಯೂ ನಮ್ಮ ರಾಜ್ಯಕ್ಕೆ ನ್ಯಾಯವೇ ಸಿಕ್ಕಿಲ್ಲ. ಈ ಬಾರಿಯಾದರೂ ರಾಜ್ಯ ಸರ್ಕಾರ ಗಟ್ಟಿಯಾಗಿ ನಿಂತು, ರಾಜ್ಯದ ಎಲ್ಲಾ ಪಕ್ಷಗಳ ನಾಯಕರುಗಳು ಒಂದಾಗಿ ಕೇಂದ್ರ ಸರ್ಕಾರಕ್ಕೆ, ನಮ್ಮ ರಾಜ್ಯದ ನೀರಿನ ವಸ್ತುಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟು, ಯಾವುದೇ ಕಾರಣಕ್ಕೂ ಕಾವೇರಿ ಮಂಡಳಿ ಆದೇಶಕ್ಕೆ ಮಣಿಯಬಾರದು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಸೇನೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಸುರೇಶ್ ಗೋಲ್ಡ್, ಪ್ರಭುಶಂಕರ, ವಿಜಯೇಂದ್ರ ಕೃಷ್ಣಯ್ಯ, ಪ್ರಜೀಶ್, ಮಿನಿ ಬಂಗಾರಪ್ಪ ಅಂಬಾಅರಸ್, ನೇಹಾ, ಪದ್ಮ, ಬಸವರಾಜು, ಒಲಂಪಿಯಾ ರವಿ, ರಾಧಾಕೃಷ್ಣ, ಎಳನೀರು ರಾಮಣ್ಣ, ದರ್ಶನ್ ಗೌಡ, ಹನುಮಂತಯ್ಯ, ಶ್ರೀನಿವಾಸ್ ರಾಜಕುಮಾರ್, ಪ್ರದೀಪ್, ಮಹಾದೇವ ಸ್ವಾಮಿ, ಗುರುಮಲ್ಲಪ್ಪ, ಸುರೇಶ್, ವೆಂಕಟೇಶ್, ಕೃಷ್ಣಮೂರ್ತಿ ಪಾಲ್ಗೊಂಡಿದ್ದರು.

ಪಕ್ಷ ಅವಕಾಶ ನೀಡಿದರೆ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ

ನಿವೃತ್ತ ಎಡಿಜಿಪಿ ಭಾಸ್ಕರ್‌ರಾವ್ ಪ್ರತಿಕ್ರಿಯೆ

ಮೈಸೂರು, ಸೆ.13(ಜಿಎ)–ಪಕ್ಷ ಅವಕಾಶ ನೀಡಿದರೆ, ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ. ಪಕ್ಷದ ನಿರ್ಧಾರವೇ ಅಂತಿಮ ಎಂದು ನಿವೃತ್ತ ಎಡಿಜಿಪಿ, ಬಿಜೆಪಿ ಮುಖಂಡ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷರು ಆದ ಭಾಸ್ಕರ್‌ರಾವ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯಾಧ್ಯಕ್ಷರಾದ ಅಶೋಕ್ ಹಾರನಹಳ್ಳಿ ಅವರು ನನಗೆ ರಾಜ್ಯ ಉಪಾಧ್ಯಕ್ಷ ಸ್ಥಾನ ನೀಡಿದ್ದು, ಜವಾಬ್ದಾರಿ ಹೆಚ್ಚಿದೆ. ವಿಪ್ರ ಸಮುದಾಯದ ಕಡು ಬಡತನದ ರೇಖೆಯಲ್ಲಿರುವ ವಿದ್ಯಾರ್ಥಿಗಳನ್ನು ಗುರುತಿಸಿ ಅವರನ್ನು ಪೋಷಿಸುವ ಗುರಿಯನ್ನು ಹೊಂದಿದ್ದು, ಅದರಂತೆ ಮೈಸೂರಿನ ಪದಾಧಿಕಾರಿಗಳೊಂದಿಗೆ ಕಾರ್ಯನಿರ್ವಹಿಸಲು ಬಂದಿದ್ದೇನೆ ಎಂದರು. ಮೈಸೂರಿನಿಂದ ಲೋಕಸಭಾ ಚುನಾವಣೆಗೆ ಸ್ಪರ್ಧಿಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಬಿಜೆಪಿ ಎಂಬುದು ದೊಡ್ಡ ಪಕ್ಷವಾಗಿದೆ.



ನಾನು ಈವರೆಗೂ ಯಾವುದೇ ಅವಕಾಶಗಳನ್ನು ಕೇಳಿಲ್ಲ. ಪಕ್ಷ ನೀಡುವ ಜವಾಬ್ದಾರಿಯನ್ನು ಶಿಸ್ತಿನಿಂದ ಪಾಲಿಸುತ್ತ ರಾಜಕೀಯ ಮತ್ತು ವಿಪ್ರ ಸಮುದಾಯದ ಸಂಘಟನೆ ಎರಡರಲ್ಲೂ ಆಕ್ಟಿವ್ ಆಗಿ ಇರುತ್ತೇನೆ. ಅದರಂತೆ ಸಂಘಟನೆಯ ದೃಷ್ಟಿಯಿಂದ ಮುಂದಿನ ಡಿಸೆಂಬರ್‌ನಲ್ಲಿ ವಿಪ್ರ ಮಹಿಳಾ ಸಮಾವೇಶವನ್ನು ಆಯೋಜಿಸಲಾಗುತ್ತದೆ ಎಂದು ತಿಳಿಸಿದರು.

ಬ್ರಾಹ್ಮಣ ಸಮುದಾಯವು ಅತ್ಯಂತ ಚಿಕ್ಕ ಸಮುದಾಯವಾಗಿದ್ದು, ನಾವು ಸಿಖ್ ಮತ್ತು ಜೈನ್ ಸಮುದಾಯದವರನ್ನು ಸ್ಫೂರ್ತಿಯಾಗಿಟ್ಟುಕೊಂಡು ಕಾರ್ಯನಿರ್ವಹಿಸುತ್ತೇವೆ. ಸಿಖ್ ಸಮುದಾಯದಲ್ಲಿ ಯಾರೂ ಭಿಕ್ಷೆ ಬೇಡುವುದಿಲ್ಲ. ಹಾಗೇ ಜೈನ್ ಸಮುದಾಯದಲ್ಲಿ ತಮ್ಮವರು ಉದ್ಯಮ ಮಾಡುತ್ತೇವೆಂದರೆ, ಆರ್ಥಿಕ ಸಹಾಯ ಮಾಡುತ್ತಾರೆ. ಇವರ ಈ ಅಂಶಗಳನ್ನು ಇಟ್ಟುಕೊಂಡು ಮುಂದೆ ಸಾಗುತ್ತೇವೆ. ವಿಪ್ರರ ಮೇಲೆ ಹಲವಾರು ವರ್ಷಗಳಿಂದ ಟಾರ್ಗೆಟ್ ಮಾಡಲಾಗುತ್ತದೆ. ಅದಕ್ಕೆ ನಾವು ವಿದ್ಯೆಯ ಮೂಲಕ ಉತ್ತರ ನೀಡಬೇಕು ಎಂದರು.

ತಮಿಳುನಾಡು ಸಚಿವ ಉದಯನಿಧಿ ಸ್ಟಾಲಿನ್ ಅವರ ಸನಾತನ ಧರ್ಮದ ವಿರುದ್ಧದ ಹೇಳಿಕೆಗೆ ಪ್ರತಿಕ್ರಿಯಿಸಿ, ಇಂದು ರಾಷ್ಟ್ರಮಟ್ಟದಲ್ಲಿ ಉದಯನಿಧಿ ಸ್ಟಾಲಿನ್‌ನ ಹೇಳಿಕೆಗೆ ಖಂಡನೆ ವ್ಯಕ್ತವಾಗುತ್ತಿದೆ. ಅವರ ಹೇಳಿಕೆಯಿಂದ ಶೇ.75 ಹಿಂದೂಗಳ ಮನಸಿಗೆ ನೋವುಂಟಾಗಿದೆ. ಸನಾತನ ಮತ್ತು ಹಿಂದೂ ಧರ್ಮ ಎರಡು ಒಂದೇ. ಈ ಬಗ್ಗೆ ಋಗ್ವೇದದಲ್ಲಿ ಉಲ್ಲೇಖವಿದೆ ಎಂದು ತಿಳಿಸಿದರು.

ಅಸಮಾನತೆ, ಭಿನ್ನಾಭಿಪ್ರಾಯಗಳು ಎಲ್ಲಾ ಸಮುದಾಯದಲ್ಲೂ ಇದೆ. ಹಾಗೇ ಎಲ್ಲಾ ಧರ್ಮದಲ್ಲಿಯೂ ತಾರತಮ್ಯವೂ ಇದೆ. ಆದರೆ, ಅಧಿಕಾರ ಸಿಕ್ಕಾಗ ಬೇಜವ್ದಾರಿ ಹೇಳಿಕೆ ನೀಡಬಾರದು. ಕರ್ನಾಟಕದಲ್ಲಿಯೂ ಸಚಿವ ಡಿ.ಸುಧಾಕರ್ ಅವರು ಹೇಳಿಕೆ ನೀಡಿದ್ದು, ಅವರ ವಿರುದ್ಧ ಸರ್ಕಾರ ಕ್ರಮ ತೆಗೆದುಕೊಂಡು ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಇಲ್ಲವೇ ಮುಖ್ಯಮಂತ್ರಿಗಳೇ ಇದರ ಹೊಣೆ ಹೊರಬೇಕಾಗುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ವಿಪ್ರ ಮುಖಂಡರಾದ ಬಿ.ಆರ್.ನಟರಾಜ್ ಜೋಯಿಸ್, ರಘುರಾವ್ ವಾಜಪೇಯಿ, ಪುಷ್ಪ ಅಯ್ಯಂಗಾರ್, ಎಸ್.ಶ್ರೀನಿವಾಸ್ ಮತ್ತು ರವೀಂದ್ರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ದಕ್ಷಿಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ಆಯೋಜಿಸಿದ್ದ ಪ್ರೌಢಶಾಲಾ ಹಾಗೂ ಪ್ರಾಥಮಿಕ ಶಾಲೆಗಳ ಅಂತರ ವಲಯ ಮಟ್ಟದ ಇಲಾಖಾ ಕ್ರೀಡಾಕೂಟದ ಗುಂಪು ಆಟಗಳಲ್ಲಿ ಮೈಸೂರಿನ ಜಾಕಿ ಕ್ವಾಟ್ರರ್ಸ್‌ನಲ್ಲಿರುವ ಸರ್ಕಾರಿ ಆದರ್ಶ ವಿದ್ಯಾಲಯದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಥ್ರೋ ಬಾಲ್ ತಂಡದ ಬಾಲಕ–ಬಾಲಕಿಯರ ತಂಡ ಪ್ರಥಮ ಸ್ಥಾನ ಹಾಗೂ ಶಾಲೆಯ ಬಾಲಕ ಬಾಲಕಿಯರ ಬಾಲ್ ಬ್ಯಾಡ್ಮಿಂಟನ್ ತಂಡ ಪ್ರಥಮ ಸ್ಥಾನ ಗಳಿಸುವುದರೊಂದಿಗೆ ಶಾಲೆಯ 68 ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮುಖ್ಯ ಶಿಕ್ಷಕ ಬೋರ್‌ರಾಜ್ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ರಾಮಚಂದ್ರ ಎಸ್.ಆರ್, ಜಯಶೀಲ, ಶಿಕ್ಷಕ ವರ್ಗ ಹಾಗೂ ಪೋಷಕ ವರ್ಗ ಅಭಿನಂದಿಸಿದೆ.

ಗಂಗಾ ಕಲ್ಯಾಣ: ಬಾಕಿ ಅರ್ಜಿಗಳನ್ನು ಎರಡು ತಿಂಗಳಲ್ಲಿ ಪೂರ್ಣಗೊಳಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ

ಬೆಂಗಳೂರು: ಗಂಗಾ ಕಲ್ಯಾಣ ಕೊಳವೆ ಬಾವಿ ವಿದ್ಯುದೀಕರಣಕ್ಕೆ 1948 ಅರ್ಜಿಗಳು ಬಾಕಿ ಉಳಿದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು ಇದನ್ನು ಇನ್ನು ಎರಡು ತಿಂಗಳಲ್ಲಿ ಪೂರ್ಣಗೊಳಿಸಿ ಎಂದು ಸ್ಪಷ್ಟ ಸೂಚನೆ ನೀಡಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಂದುವರೆದ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಈ ಸೂಚನೆ ನೀಡಿದರು. ಎಸ್ಕಾಂಗಳು ವಿದ್ಯುಚ್ಛಕ್ತಿ ಸಂಪರ್ಕ ಒದಗಿಸುವುದಕ್ಕೆ ಅನಗತ್ಯ ವಿಳಂಬ ಮಾಡಕೂಡದು. ಶುಲ್ಕ ಪಾವತಿಸಿಲ್ಲ ಎಂದು ಬಾಕಿ ಉಳಿಸಿಕೊಳ್ಳಬಾರದು. ಇದಕ್ಕೆ ಟ್ರಾನ್ಸ್‌ಫಾರ್ಮರ್‌ಗಳು ಇಲ್ಲ, ಕಂಬಗಳಿಲ್ಲ ಎಂಬ ನೆಪಗಳನ್ನು ಹೇಳಬಾರದು ಎಂದು ಇಂಧನ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಿಧನ



ಬಿ.ಪಿ.ಮೋಹನ್ ಮೊಣ್ಣಪ್ಪ

ಮೈಸೂರು, ಸೆ.13–ಮೈಸೂರಿನ ಗಾಯಿತ್ರಿಪುರಂ ಎರಡನೇ ಹಂತದ ನಿವಾಸಿ ಬಲ್ಯಾಟಂಡ ಪಿ.ಮೋಹನ್ ಮೊಣ್ಣಪ್ಪ(53) ಅವರು ಇಂದು ನಿಧನರಾದರು. ಮೃತರು ಪತ್ನಿ, ಪುತ್ರಿ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದು, ಅಂತ್ಯಕ್ರಿಯೆ ನಾಳೆ (ಸೆ.14) ಬೆಳಗ್ಗೆ 11.30ಕ್ಕೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಆರ್.ಎಸ್.ಶ್ರೀನಿವಾಸರಾವ್

ಮೈಸೂರು,ಸೆ.13–ಹಿರಿಯ ಸ್ವಾತಂತ್ರ್ಯ ಹೋರಾಟಗಾರರು, ವಿಪ್ರ ಮುಖಂಡರೂ ಆದ ರಾಮಸಮುದ್ರದ ಆರ್.ಎಸ್.ಶ್ರೀನಿವಾಸರಾವ್ (97) ಅವರು ಇಂದು ಮಧ್ಯಾಹ್ನ ಮೈಸೂರಿನ ಟಿ.ಕೆ.ಬಡಾವಣೆಯ ತಮ್ಮ ನಿವಾಸದಲ್ಲಿ ನಿಧನರಾದರು. ಶ್ರೀಯುತರು ನಾಲ್ವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು, ಅಪಾರ ಬಂಧುವರ್ಗ ಅಗಲಿದ್ದಾರೆ. ಇವರ ಅಪರಕರ್ಮ ನಾಳೆ (ಗುರುವಾರ) ಬೆಳಗ್ಗೆ 9.30ಕ್ಕೆ ಚಾಮುಂಡಿ ಬೆಟ್ಟದತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಮಾದಯ್ಯ

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಅವ್ವೇರಹಳ್ಳಿಯ ಗ್ರಾಮ ಪಂಚಾಯಿತಿ ಸದಸ್ಯರು, ಯಜಮಾನರೂ ಆದ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಎಂ.ನಾಗರಾಜು (ಎಂಎನ್‌ಆರ್) ಅವರ ತಂದೆ ಮಾದಯ್ಯ ಅವರು ಇಂದು ಸಂಜೆ ನಿಧನರಾದರು. ಇವರು ಐವರು ಪುತ್ರರು ಹಾಗೂ ಅಪಾರ ಬಂಧುವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಗುರುವಾರ) ಸಂಜೆ 4 ಗಂಟೆಗೆ ಅವ್ವೇರಹಳ್ಳಿಯ ತೋಟದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಹಾಜನ ಕಾಲೇಜಿನಲ್ಲಿ ಯಶಸ್ವಿ 'ಯೂತೋತ್ಸವ'



ಮೈಸೂರು, ಸೆ. 13– ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ಈ ವರ್ಷದ ಮೊದಲ ಕಾರ್ಯಕ್ರಮವಾಗಿ ಪ್ರತಿಭಾ ವೇದಿಕೆ, ಐಕ್ಯೂಎಸಿ ಹಾಗೂ 93.5 Red FM ಅವರ ಸಹಯೋಗದೊಂದಿಗೆ 'ಯೂತೋತ್ಸವ'ವನ್ನು ಆಯೋಜಿಸಲಾಗಿತ್ತು. ಕಾಲೇಜಿನ ಪ್ರಾಂಶುಪಾಲೆ ಡಾ. ಬಿ.ಆರ್. ಜಯಕುಮಾರಿ ಮಾತನಾಡುತ್ತಾ, ಈ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ಇರುವ ಸುಪ್ತ ಪ್ರತಿಭೆಗಳನ್ನು ಅನಾವರಣಗೊಳಿಸುವ ಈ ಕ್ಷಣ ತುಂಬಾ ಸಂತೋಷ ಹಾಗೂ ಸಂಭ್ರಮಪಡುವಂತಹದ್ದು. ವಿದ್ಯಾರ್ಥಿಗಳಲ್ಲಿರುವ ವೈವಿಧ್ಯಮಯವಾದ ಕಲೆಯನ್ನು ಪ್ರೋತ್ಸಾಹಿಸಲು ಈ ವೇದಿಕೆ ಅವಕಾಶ ಮಾಡಿಕೊಟ್ಟಿದೆ ವಿದ್ಯಾರ್ಥಿಗಳು ಇದರ ಸದುಪಯೋಗಪಡಿಸಿಕೊಂಡು ತಮ್ಮೊಳಗಿರುವ ಪ್ರತಿಭೆಯನ್ನು ಬಳಸಿಕೊಂಡು ಜೀವನದಲ್ಲಿ ಉತ್ತಮ ಕಲಾವಿದರಾಗುವಂತೆ ಹಾರೈಸಿದರು.

'ಜೀವನದಲ್ಲಿ ಒಳ್ಳೆಯ ನಡತೆ, ಜ್ಞಾನ, ಮೌಲ್ಯ ಮತ್ತು ಕೌಶಲ್ಯಗಳನ್ನು ಕಲಿಸಿ ಕೊಟ್ಟ ತಂದೆ, ತಾಯಿ ಹಾಗೂ ಗುರು ಹಿರಿಯರನ್ನು ಎಂದೆಂದಿಗೂ ಮರೆಯದಿರಿ. ಮರೆತರೆ ನೀವು ಎಂದಿಗೂ ನಿಮ್ಮ ಜೀವನದಲ್ಲಿ ಏಳ್ಗೆ ಕಾಣಲು ಸಾಧ್ಯವಿಲ್ಲ. ನೀವು ಯಾವ ವಿಷಯದಲ್ಲಿ ಓದುತ್ತಿದ್ದೀರಿ ಎಂಬುದು ಮುಖ್ಯವಲ್ಲ, ನಿಮ್ಮ ಕೌಶಲ್ಯಾಧಾರಿತ ಜ್ಞಾನ ಎಷ್ಟಿದೆ ಎಂಬುದನ್ನು ಅರಿತು, ಸಮಾಜಕ್ಕೆ ಏನಾದರೂ ಕೊಡುಗೆಗಳನ್ನು ನೀಡಬೇಕು. ವಿದ್ಯಾರ್ಥಿಗಳು ಬರೀ ಓದಿ, ಪದವಿಯನ್ನು ಗಳಿಸಿದರೆ ಸಾಲದು, ತಮ್ಮಲ್ಲಿ ಹುದುಗಿರುವ ಕೌಶಲ್ಯ, ಪ್ರತಿಭೆಯನ್ನು ಹೊರಹಾಕಿ, ಯಾವುದಾದರೊಂದು ಕ್ಷೇತ್ರದಲ್ಲಿ ಸಾಧನೆ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕರೆಕೊಟ್ಟರು.

ಶೈಕ್ಷಣಿಕ ಡೀನ್ ಡಾ. ಹೆಚ್. ಶ್ರೀಧರ ಮಾತನಾಡಿ, ಇಂದಿನ ಕಾರ್ಯಕ್ರಮ ತುಂಬಾ ಅರ್ಥಪೂರ್ಣವಾದದ್ದು. ಹೊಸ ಹೊಸ ಪ್ರತಿಭೆಗಳು ಮುನ್ನುಡಿಯನ್ನು ಬರೆಯಲಿ, ಕಲಾ ಜಗತ್ತಿಗೆ ವಿಭಿನ್ನ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಆಯೋಜಿಸಿರುವ ಈ ಅವಕಾಶವನ್ನು ಎಲ್ಲಾ ವಿದ್ಯಾರ್ಥಿಗಳು ಬಳಸಿಕೊಂಡು ಕಾಲೇಜಿಗೆ ಹಾಗೂ ಸಮಾಜಕ್ಕೆ ಕೀರ್ತಿ ತಂದುಕೊಡಬೇಕೆಂದು ಶುಭಹಾರೈಸಿದರು.

'ಯೂತೋತ್ಸವ'ದಲ್ಲಿ ಭಾವಗೀತೆ, ಚಲನಚಿತ್ರಗೀತೆ, ಸಮೂಹ ನೃತ್ಯ, ಮ್ಯಾಡ್‌ಆ್ಯಡ್ಸ್, ಏಕಪಾತ್ರಾಭಿನಯ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಭಾವಗೀತೆ ಮತ್ತು ಚಲನಚಿತ್ರಗೀತೆ ಸ್ಪರ್ಧೆಯಲ್ಲಿ ಪ್ರಥಮ ವರ್ಷದ ಬಿ.ಎಸ್ಸಿ ವಿದ್ಯಾರ್ಥಿ ಅಕ್ಷೋಭ್ಯ ಪ್ರಥಮ ಬಹುಮಾನ ಪಡೆದುಕೊಂಡರು. ದ್ವಿತೀಯ ವರ್ಷದ ಬಿ.ಎ. ವಿದ್ಯಾರ್ಥಿನಿ ಸಾಗರಿ ಪೊನ್ನಮ್ಮ ದ್ವಿತೀಯ ಬಹುಮಾನ ಪಡೆದರು. ಸಮೂಹ ನೃತ್ಯ ಸ್ಪರ್ಧೆಯಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳಾದ ಪ್ರಜ್ವಲ್ ಮತ್ತು ತಂಡದವರು ಪ್ರಥಮ ಬಹುಮಾನವನ್ನು ಪಡೆದರು. ಲಕ್ಷ್ಮೀ ಮತ್ತು ತಂಡದವರು ದ್ವಿತೀಯ ಬಹುಮಾನವನ್ನು ಪಡೆದರು. ಮ್ಯಾಡ್ ಆ್ಯಡ್ಸ್ ಮತ್ತು ಏಕಪಾತ್ರಾಭಿನಯ ಸ್ಪರ್ಧೆಯಲ್ಲಿ ಅಂತಿಮ ವರ್ಷದ ಬಿ.ಕಾಂ. ವಿದ್ಯಾರ್ಥಿನಿ ಹಂಸ ಎ.ಎಂ. ಪ್ರಥಮ ಬಹುಮಾನ ಪಡೆದರು. ಹಿರಿಯ ವಿದ್ಯಾರ್ಥಿನಿ ಹಾಗೂ ಡಿಕೆಡಿ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್‌ನಲ್ಲಿ ರನ್ನರ್ ಅಪ್ ಆಗಿದ್ದ ನೃತ್ಯಕಲಾವಿದೆ ಕು. ದಕ್ಷಿತ ಅವರು ನೃತ್ಯ ಪ್ರದರ್ಶನ ನೀಡಿದರು. ಅವರಿಗೆ ಗೌರವ ಕಾಣಿಕೆಯನ್ನು ನೀಡಲಾಯಿತು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ನಿಹಾರಿಕಾ ಹೆಗಡೆ, ಮೋಹನ್‌ರಾಜ್ ಬಿ, ಪಲ್ಲವಿ, ಸುಚಿತ್ರ ಮತ್ತು ತಂಡದ ಎಲ್ಲಾ ವಿದ್ಯಾರ್ಥಿಗಳಿಗೆ ರೆಡ್ ಎಫ್‌ಎಂ ಕಡೆಯವರಿಂದ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು. 'ಯೂತೋತ್ಸವ' ಸ್ಪರ್ಧೆಯ ತೀರ್ಪುಗಾರರಾಗಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಎಂ.ಎನ್. ವೆಂಕಟಲಕ್ಷ್ಮೀ, ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ವಿನೋದಮ್ಮ, ಇಂಗ್ಲಿಷ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಹಂಸವೇಣಿ, ಪ್ರತಿಭಾ ವೇದಿಕೆಯ ಸಂಚಾಲಕ ನಾಗೇಶ ಎಂ ಹಾಗೂ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಎಚ್.ಆರ್. ತಿಮ್ಮೇಗೌಡ ಉಪಸ್ಥಿತರಿದ್ದರು.



ಕೊಡಗಲ್ಲಿ ಬೀಡು ಬಿಟ್ಟಿದ್ದ 27 ಆನೆಗಳು ಕಾಡಿಗೆ

ತೋಟಗಳಲ್ಲಿ ತಿಂದು–ತೇಗಿ ಆತಂಕ ಸೃಷ್ಟಿಸಿದ್ದ ಕಾಡಾನೆಗಳು

ಅರಣ್ಯ ಇಲಾಖೆಯ ಸಿಬ್ಬಂದಿಗಳ ಕಾರ್ಯಾಚರಣೆ ಯಶಸ್ವಿ



ಸಿದ್ದಾಪುರ, ಸೆ.13– ಕಾಡಿನಿಂದ ನಾಡಿಗೆ ಬಂದು ಕಾಫಿ ತೋಟಗಳಲ್ಲಿ ಬೀಡು ಬಿಟ್ಟು, ಅಪಾರ ಪ್ರಮಾಣದ ಕೃಷಿ ಫಸಲುಗಳನ್ನು ತುಳಿದು, ತಿಂದು ನಾಶ ಮಾಡುವುದರೊಂದಿಗೆ ಕಾರ್ಮಿಕರು, ಬೆಳೆಗಾರರು ಹಾಗೂ ಶಾಲಾ ವಿದ್ಯಾರ್ಥಿಗಳಲ್ಲಿ ಆತಂಕ ಸೃಷ್ಟಿಸಿದ್ದ 27 ಕಾಡಾನೆಗಳನ್ನು ಕಾಡಿಗಟ್ಟುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗಳು ಯಶಸ್ವಿಯಾಗಿದ್ದಾರೆ.

ಮಾಲ್ದಾರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಡಗ ಬಾಣಂಗಾಲ, ತೂಬನಕೊಲ್ಲಿ, ಮಟ್ಟ, ಹುಂಡಿ, ಮೈಲಾಪುರ, ಮಾರ್ಗೊಲ್ಲಿ, ಘಟ್ಟದಳ ಸೇರಿದಂತೆ ಇತರ ಗ್ರಾಮಗಳ ಕಾಫಿ ತೋಟಗಳಲ್ಲಿ ಕಾಡಾನೆಗಳ ಹಿಂಡು ಬೀಡು ಬಿಟ್ಟು ಹಾಡಹಗಲಿನಲ್ಲೇ ರಾಜಾರೋಷವಾಗಿ ಓಡಾಡುತ್ತಿದ್ದವು.

ಕಾಫಿ ತೋಟದಲ್ಲಿ ಕಾಣಿಸಿಕೊಳ್ಳುತ್ತಿದ್ದ ಕಾಡಾನೆಗಳನ್ನು ಕಂಡು ಕಾರ್ಮಿಕರು ಕೆಲಸಕ್ಕೆ ತೆರಳಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾದರೆ ಶಾಲಾ ವಿದ್ಯಾರ್ಥಿಗಳು ಶಾಲೆಗೆ ತೆರಳಲು ಹಿಂದೇಟು ಹಾಕುತ್ತಿದ್ದರು. ಬಾಡಗ ಬಾಣಂಗಾಲ ಕಾಫಿ ತೋಟದಲ್ಲಿ ಪ್ರತ್ಯಕ್ಷಗೊಂಡ 30ಕ್ಕೂ ಹೆಚ್ಚು ಕಾಡಾನೆಗಳನ್ನು ಕಂಡು ಆತಂಕಗೊಂಡಿದ್ದ ಕಾರ್ಮಿಕರು ತೋಟದ ಕೆಲಸ ಬಿಟ್ಟು ಮನೆಗೆ ಹಿಂತಿರುಗಿದ್ದರು.

ಮಂಗಳವಾರ ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿಗಳು ಆನೆಗಳನ್ನು ಕಾಡಿಗಟ್ಟಲು ಹರಸಾಹಸ ಪಟ್ಟರು. ಆನೆಗಳ ಗುಂಪು ಒಂದು ತೋಟದಿಂದ ಮತ್ತೊಂದು ತೋಟಕ್ಕೆ ನುಸುಳಿ ಬೇರ್ಪಟ್ಟವು. ಸಂಜೆ ಯಾದ ಕಾರಣ ಕಾರ್ಯಾಚರಣೆ ಸ್ಥಗಿತ ಗೊಳಿಸಿ ಇಂದು ಬೆಳಗ್ಗೆ 10ಕ್ಕೂ ಹೆಚ್ಚು ಸಿಬ್ಬಂದಿಗಳು ಸುಮಾರು ಹದಿನೈದು ಕಿಲೋಮೀಟರ್‌ನಷ್ಟು ಕಾಫಿ ತೋಟಗಳಲ್ಲಿ ನಡೆದು ಮತ್ತೆ ಕಾರ್ಯಾಚರಣೆ ಮುಂದುವರಿಸಿ ಬೇರ್ಪಟ್ಟ ಆನೆಗಳನ್ನು ಹರಸಾಹಸದಿಂದ ಒಂದುಗೂಡಿಸುವಲ್ಲಿ ಯಶಸ್ವಿಯಾದರು.

ಗುಂಪಿನಲ್ಲಿದ್ದ 30ಕ್ಕೂ ಹೆಚ್ಚು ಆನೆಗಳ ಪೈಕಿ 27 ಆನೆಗಳನ್ನು ಮಾರ್ಗೊಲ್ಲಿ, ಚೌಡಿ ಕಾಡು, ಘಟ್ಟದಳ ಮಾರ್ಗವಾಗಿ ದುಬಾರೆ ಅರಣ್ಯಕ್ಕೆ ಓಡಿಸುವಲ್ಲಿ ಯಶಸ್ವಿಯಾದರು. ಇನ್ನುಳಿದ ಮೂರು ಆನೆಗಳು ಕಾರ್ಯಾಚರಣೆ ವೇಳೆ ಸಿಗದೆ ತಪ್ಪಿಸಿ ಕೊಂಡಿವೆ. ಎಸಿಎಫ್ ಗೋಪಾಲ್, ಆರ್‌ಎಫ್‌ಓ ತೀರ್ಥ ಮಾರ್ಗದರ್ಶನದಲ್ಲಿ ಡಿಆರ್‌ಎಫ್‌ಓ ಶ್ರೀನಿವಾಸ್ ಹಾಗೂ ಸಿಬ್ಬಂದಿಗಳಾದ ರೋಷನ್, ಧನು, ಸಚಿನ್, ಗುರು, ಶಂಕರ್, ಭಾರತ್, ಸುಂದರ್, ಮುತ್ತ, ತೀರ್ಥ ಸೇರಿದಂತೆ ಇತರ ಸಿಬ್ಬಂದಿಗಳು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ವಿರಾಜಪೇಟೆ ಸುತ್ತಮುತ್ತ ಕಾಡಾನೆ ಹಾವಳಿ



ವಿರಾಜಪೇಟೆ, ಸೆ.13– ಐಮಂಗಲ ಗ್ರಾಮದ ಸುತ್ತಮುತ್ತ ಕೆಲವು ದಿನಗಳಿಂದ ಕಾಡಾನೆಗಳು ಬೀಡು ಬಿಟ್ಟಿದ್ದು ರೈತರು ಬೆಳೆದ ಫಸಲುಗಳನ್ನು ತಿಂದು–ತುಳಿದು ನಾಶ ಮಾಡುತ್ತಿವೆ.

ಐಮಂಗಲ ನಿವಾಸಿ ಕುಂಡ್ರಂಡ ಪೊನ್ನಪ್ಪ ತಂದೆ ಚಂಗಪ್ಪ ಅವರ ಭತ್ತದ ಗದ್ದೆಗೆ ಮತ್ತು ಕಾಫಿ ತೋಟಕ್ಕೆ ದಾಳಿ ನಡೆಸಿದ ಕಾಡಾನೆಗಳು ಬಾಳೆ, ಅಡಕೆ ಗಿಡ, ಭತ್ತದ ಗದ್ದೆ ಮತ್ತು ಫಸಲಿಗೆ ಬಂದ ಕಾಫಿ ಗಿಡಗಳನ್ನು ಮುರಿದು ಅಪಾರ ನಷ್ಟ ಉಂಟುಮಾಡಿವೆ. ಸಂಜೆ 6 ಗಂಟೆ ವೇಳೆಗೆ ರಸ್ತೆ ಮತ್ತು ತೋಟಗಳಲ್ಲಿ ಓಡಾಡುತ್ತಿರುವುದರಿಂದ ಗ್ರಾಮಸ್ಥರು ಭಯಭೀತರಾಗಿದ್ದು ಅರಣ್ಯ ಇಲಾಖೆಯ ಅಧಿಕಾರಿಗಳು ಕೂಡಲೇ ಗ್ರಾಮದಲ್ಲಿರುವ ಆನೆಗಳನ್ನು ಕಾಡಿಗೆ ಅಟ್ಟುವಂತೆ, ನಷ್ಟವಾಗಿರುವ ಕೃಷಿಗೆ ಪರಿಹಾರ ನೀಡುವಂತೆ ಒತ್ತಾಯಿಸಿದ್ದಾರೆ.

ದೇವರಕಾಡಿನಲ್ಲಿ ವಿದ್ಯುತ್ ಸಬ್‌ಸ್ಟೇಷನ್ ಸ್ಥಾಪನೆಗೆ ಕೊಡಗು ರಕ್ಷಣಾ ವೇದಿಕೆ ವಿರೋಧ



ಮಡಿಕೇರಿ, ಸೆ.13– ಹೊಸ್ಕೇರಿ ಗ್ರಾಮ ವ್ಯಾಪ್ತಿಯಲ್ಲಿರುವ ದೇವರಕಾಡಿನಲ್ಲಿ ವಿದ್ಯುತ್ ಸಬ್ ಸ್ಟೇಷನ್ ಸ್ಥಾಪಿಸಲು ಚೆಸ್ಕಾಂ ಯೋಜನೆ ರೂಪಿಸಿದ್ದು, ಇದನ್ನು ತೀವ್ರವಾಗಿ ವಿರೋಧಿಸುವುದಾಗಿ ಕೊಡಗು ರಕ್ಷಣಾ ವೇದಿಕೆಯ ಅಧ್ಯಕ್ಷ ಅಚ್ಚಂಡೀರ ಪವನ್ ಪೆಮ್ಮಯ್ಯ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು ಈಗಾಗಲೇ ಹೊಸ್ಕೇರಿ ಮತ್ತು ಮರಗೋಡು ಗ್ರಾಮಸ್ಥರು ಯೋಜನೆಯನ್ನು ವಿರೋಧಿಸಿ ಶಾಸಕರುಗಳು, ಜಿಲ್ಲಾಡಳಿತ, ಅರಣ್ಯ ಇಲಾಖೆ, ಚೆಸ್ಕಾಂ ಸೇರಿದಂತೆ ಸಂಬಂಧಿಸಿದ ಎಲ್ಲಾ ಇಲಾಖಾ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಆದರೆ ಸೂಕ್ತ ಉತ್ತರ ದೊರೆಯದೆ ಇರುವುದರಿಂದ ಗ್ರಾಮಸ್ಥರು ಆತಂಕಗೊಂಡಿದ್ದಾರೆ ಎಂದು ಗಮನ ಸೆಳೆದಿದ್ದಾರೆ.

ತಲತಲಾಂತರಗಳಿಂದ ಗ್ರಾಮಸ್ಥರು ಪ್ರಕೃತಿಯನ್ನೇ ದೇವರೆಂದು ಭಾವಿಸಿ ಇಲ್ಲಿನ ಅರಣ್ಯವನ್ನು ನಾಶ ಮಾಡದೆ ಉಳಿಸಿಕೊಂಡು ಬಂದಿದ್ದಾರೆ. ಗ್ರಾಮ ದೇವತೆಗಳಾದ ಶ್ರೀ ಚಾಮುಂಡೇಶ್ವರಿ, ಶ್ರೀಅಯ್ಯಪ್ಪ ದೇವರು ಹಾಗೂ ನಾಗದೇವರ ಸಾನಿಧ್ಯ ಇಲ್ಲಿದೆ. ಸಬ್ ಸ್ಟೇಷನ್ ಯೋಜನೆ ಅನುಷ್ಠಾನದಿಂದ ದೇವರಕಾಡು ನಾಶವಾಗುವುದಲ್ಲದೆ ಪರಿಸರ ಮಾಲಿನ್ಯವಾಗಲಿದೆ ಮತ್ತು ಸುತ್ತಮುತ್ತಲ ಗ್ರಾಮಸ್ಥರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗಲಿದೆ ಎಂದು ಪವನ್ ಪೆಮ್ಮಯ್ಯ ಆತಂಕ ವ್ಯಕ್ತಪಡಿಸಿದ್ದಾರೆ. ದೇವರಕಾಡು ಮತ್ತು ಗ್ರಾಮಸ್ಥರ ಪರವಾಗಿ ಕೊಡಗು ರಕ್ಷಣಾ ವೇದಿಕೆ ಹೋರಾಟ ನಡೆಸಲಿದ್ದು, ಯಾವುದೇ ಕಾರಣಕ್ಕೂ ಸಬ್ ಸ್ಟೇಷನ್ ಸ್ಥಾಪನೆಗೆ ಅವಕಾಶ ನೀಡುವುದಿಲ್ಲ. ಸ್ಥಳೀಯರ ವಿರೋಧದ ನಡುವೆಯೂ ಯೋಜನೆಗೆ ಚಾಲನೆ ನೀಡಿದರೆ ಸಂಬಂಧಿಸಿದ ಇಲಾಖೆಗಳಿಗೆ ಗ್ರಾಮಸ್ಥರೊಂದಿಗೆ ಮುತ್ತಿಗೆ ಹಾಕುವುದಾಗಿ ಪವನ್ ಪೆಮ್ಮಯ್ಯ ಎಚ್ಚರಿಕೆ ನೀಡಿದ್ದಾರೆ.

ನಾಳೆ 'ವಿಶ್ವ ಆತ್ಮಹತ್ಯೆ ತಡೆಯುವ ದಿನ'

ಮಡಿಕೇರಿ, ಸೆ.13– ಜಿಲ್ಲಾಡಳಿತ, ಜಿಪಂ, ಕೊಡಗು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನವು ಸೆ.15 ರಂದು ಮಧ್ಯಾಹ್ನ 12 ಗಂಟೆಗೆ ವಿರಾಜಪೇಟೆಯ ಸಂತ ಅನ್ನಮ್ಮ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯಲಿದೆ.

ಸೆ.20, ಹುತಾತ್ಮ ಯೋಧರಿಗೆ ಶ್ರದ್ಧಾಂಜಲಿ

ವಿರಾಜಪೇಟೆ, ಸೆ.13– ಕೊಡಗು ಮಾಜಿ ಸೈನಿಕರ ಸಹಕಾರ ಸಂಘದ ವತಿಯಿಂದ ಸೆ,20 ರಂದು ವಿರಾಜಪೇಟೆ ಮಿನಿ ವಿಧಾನ ಸೌಧ ಬಳಿ ಇರುವ ಯೋಧರ ಸ್ಮಾರಕ ಸ್ತಂಭದ ಆವರಣದಲ್ಲಿ ಹುತಾತ್ಮ ಯೋಧರಿಗೆ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ತಿಳಿಸಿದ್ದಾರೆ.

ಮಾಜಿ ಸೈನಿಕರ ಸಂಘದ ವತಿಯಿಂದ ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ವರ್ಷವು ಕೂಡ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಸಲಾಗುತ್ತಿದೆ. ಅಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಸಶಸ್ತ್ರ ಪೊಲೀಸ್ ತುಕಡಿಯ ಗೌರವದೊಂದಿಗೆ ಸ್ಮಾರಕಕ್ಕೆ ಪುಷ್ಪಗುಚ್ಛ ಅರ್ಪಿಸಿ ಗೌರವ ಸಲ್ಲಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಸೈನಿಕರ ಸಹಕಾರ ಸಂಘದ ಉಪಾಧ್ಯಕ್ಷ ಬಿ.ಎಸ್.ಚಂದ್ರಶೇಖರ್ (ರಾಜ), ಕಾರ್ಯದರ್ಶಿ ಮುಗ್ಗೆರನಂದ, ಖಜಾಂಚಿ ತೋರೇರ ಪೂವಯ್ಯ, ಕಾನೂನು ಸಲಹೆಗಾರ ಚೇಂದ್ರಿಮಾಡ ಕೆ.ನಂಜಪ್ಪ ನಿರ್ದೇಶಕರಾದ ಅಣ್ಣಾಳಮಾಡ ಡಿ.ಸುಬ್ಬಯ್ಯ, ಬಾಳೆಕುಟ್ಟಿರ ಎ.ಬೋಪಯ್ಯ, ಪಟ್ರಪಂಡ ಚಂಗಪ್ಪ ಉಪಸ್ಥಿತರಿದ್ದರು.

ಲೋಕಾಯುಕ್ತ ಡಿವೈಎಸ್‌ಪಿ ಅವರಿಂದ ದೂರು ಸ್ವೀಕಾರ

ಮಡಿಕೇರಿ, ಸೆ.13– ಕರ್ನಾಟಕ ಲೋಕಾಯುಕ್ತ ಮಡಿಕೇರಿ ಕಚೇರಿಯ ಡಿವೈಎಸ್‌ಪಿ ಎಂ.ಎಸ್.ಪವನ್ ಕುಮಾರ್ ಅವರು ಕುಶಾಲನಗರ ತಾಲೂಕು ಕಚೇರಿಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಬುಧವಾರ ಸಾರ್ವಜನಿಕರ ಅಹವಾಲು ಸ್ವೀಕರಿಸಿ ಕುಂದುಕೊರತೆ ಆಲಿಸಿದರು. ಕಂದಾಯ ಇಲಾಖೆಗೆ ಸಂಬಂಧಿಸಿದಂತೆ 1, ಕುಶಾಲನಗರ ಪುರಸಭೆಗೆ ಸಂಬಂಧಿಸಿದಂತೆ 2, ಗ್ರಾ.ಪಂ.ಸಂಬಂಧಿಸಿದಂತೆ 2, ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ 1 ದೂರು ಅರ್ಜಿಗಳು ಸ್ವೀಕೃತವಾಗಿದ್ದು, ಸಂಬಂಧಪಟ್ಟ ಇಲಾಖೆಗೆ ಅರ್ಜಿಗಳನ್ನು ವಿಲೇವಾರಿ ಮಾಡಿ ವರದಿ ನೀಡುವಂತೆ ನಿರ್ದೇಶನ ನೀಡಲಾಗಿದೆ ಎಂದು ಲೋಕಾಯುಕ್ತ ಡಿವೈಎಸ್‌ಪಿ ಅವರು ತಿಳಿಸಿದ್ದಾರೆ.

ನಿಫಾ ವೈರಸ್ ಬಗ್ಗೆ ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ಅಗತ್ಯ



ಮಡಿಕೇರಿ, ಸೆ.13– ಇದೀಗ ನಿಫಾ ವೈರಸ್ ಕೇರಳ ರಾಜ್ಯದಲ್ಲಿ ವರದಿಯಾದ ಹಿನ್ನಲೆಯಲ್ಲಿ ಗಡಿ ಜಿಲ್ಲೆಯಾದ ಕೊಡಗು ಜಿಲ್ಲೆಯಲ್ಲೂ ಕೂಡ ಕಟ್ಟೆಚ್ಚರ ವಹಿಸುವಂತೆ ಕೊಡಗು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಸತೀಶ್ ಕುಮಾರ್ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

'ನಿಫಾ' ವೈರಸ್ 1998 ಮತ್ತು 1999 ನೇ ಇಸವಿಯಲ್ಲಿ, ಮಲೇಷಿಯಾ ಮತ್ತು ಸಿಂಗಪೂರ ದೇಶಗಳಲ್ಲಿನ ಮನೆಯಲ್ಲಿ ಸಾಕಿರುವ ಹಂದಿಗಳಲ್ಲಿ ಪತ್ತೆಯಾಗಿದೆ. ಮಲೇಷಿಯಾ ದೇಶದ ನಿಫಾ ಗ್ರಾಮದಲ್ಲಿ ಈ ವೈರಸ್ ಪ್ರಭೇದವನ್ನು ಪ್ರಪ್ರಥಮವಾಗಿ ಕಂಡು ಹಿಡಿಯಲಾಗಿದೆ. ಮನೆಯಲ್ಲಿ ಸಾಕುವ ನಾಯಿ, ಬೆಕ್ಕು, ಮೇಕೆ, ಕುದುರೆ ಮತ್ತು ಕೆಲವು ಸಂದರ್ಭದಲ್ಲಿ ಕುರಿಗಳಿಗಳೂ ಸಹ ಸೋಂಕಿಗೆ ತುತ್ತಾಗುವ ಸಂಭವವಿರುತ್ತದೆ.

ಈ ಕಾಯಿಲೆಯು 2001 ರಲ್ಲಿ ಪಶ್ಚಿಮ ಬಂಗಾಳದ ಸಿಲಿಗುರಿ ಗ್ರಾಮದಲ್ಲಿ ಈ ಮೊದಲು ಕಾಣಿಸಿಕೊಂಡಿತ್ತು ಅಲ್ಲದೆ ನೆರೆಯ ಬಾಂಗ್ಲಾ ದೇಶದಲ್ಲಿ 2003, 2004, 2005, 2007 ಹಾಗೂ 2008 ರಲ್ಲಿ ಕಾಣಿಸಿಕೊಂಡಿತ್ತು. ಒಟ್ಟಾರೆ ಮಲೇಷಿಯಾ, ಸಿಂಗಪೂರ್ ಬಾಂಗ್ಲಾದೇಶ ಮತ್ತು ಭಾರತದಲ್ಲಿ ಈವರೆಗೆ 477 ಖಚಿತ ಪ್ರಕರಣಗಳು ವರದಿಯಾಗಿದೆ.

ಅವುಗಳಲ್ಲಿ 248 ಸಾವುಗಳು ಸಂಭವಿಸಿದೆ. 2018 ರಲ್ಲಿ ಕೇರಳದಲ್ಲಿ 14 ಖಚಿತ ನಿಫಾ ಪ್ರಕರಣಗಳು ವರದಿಯಾಗಿದ್ದು, ಅವುಗಳಲ್ಲಿ 11 ಸಾವುಗಳು ಸಂಭವಿಸಿದೆ. 2021 ಕೇರಳ ರಾಜ್ಯದಲ್ಲಿ ಒಂದು ನಿಫಾ ವೈರಸ್ ರೋಗದ ಪ್ರಕರಣ ವರದಿಯಾಗಿದೆ. ಆ ದಿಸೆಯಲ್ಲಿ 2023 ರಲ್ಲಿ 04 ಸಂಶಯಾಸ್ಪದ ನಿಫಾ ವೈರಸ್ ರೋಗದ ಪ್ರಕರಣಗಳು ಕಂಡುಬಂದಿದೆ.

ನಿಫಾ ವೈರಸ್‌ಜ್ವರದ ರೋಗ ಲಕ್ಷಣಗಳು ಜ್ವರ, ತಲೆ ನೋವು, ವಾಂತಿ, ತಲೆ ಸುತ್ತುವಿಕೆ ಬರುವುದು. ಪ್ರಜ್ಞಾಹೀನತೆಗೆ ಒಳಗಾಗುವುದು. ಅತೀಯಾದ ಜ್ವರ ಮೆದುಳಿಗೆ ವ್ಯಾಪಿಸುವುದು. ಮಾತುಗಳಲ್ಲಿ ತೊದಲುವಿಕೆ ಹಾಗೂ ಅಪಸ್ವರದ ಲಕ್ಷಣಗಳು ಕಾಣಿಸಿಕೊಳ್ಳುವುದು. ಕೆಲವು ಬಾರಿ ಸೂಕ್ತ ಚಿಕಿತ್ಸೆ ಲಭಿಸದಿದ್ದರೆ ಸಾವು ಸಂಭವಿಸಬಹುದು. ಸೋಂಕಿತ ದಿನದಿಂದ 4 ರಿಂದ 18 ದಿನಗಳಲ್ಲಿ ನಿಫಾ ವೈರಸ್ ರೋಗದ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ.

ರೋಗ ನಿರ್ಧಾರ ಮಾಡುವ ವಿಧಾನ: ಸೋಂಕಿತ ವ್ಯಕ್ತಿಯ ಗಂಟಲಿನ ದ್ರವಗಳ ಮಾದರಿಯನ್ನು ಪಡೆದು, ಪ್ರಯೋಗಾಲಯದಲ್ಲಿ ಪರೀಕ್ಷಿಸಿ ದೃಢಪಡಿಸಬಹುದು. ಪ್ರಸ್ತುತ ಈ ಪರೀಕ್ಷೆಯನ್ನು ರಾಷ್ಟ್ರೀಯ ವೈರಾಣು ಸಂಸ್ಥೆ (NIV) ಪುಣೆ ಇಲ್ಲಿ ನಡೆಸಲಾಗುತ್ತದೆ.

ಮುಂಜಾಗ್ರತಾ ಕ್ರಮಗಳು ಯಾವುದೇ ರೀತಿಯ ಜ್ವರ ಕಂಡು ಬಂದಲ್ಲಿ ಉದಾಸೀನ ಮಾಡದೇ ಹಾಗೂ ನಿಪಾ ವೈರಸ್ ಲಕ್ಷಗಳಿರುವ ಜ್ವರಕಂಡು ಬಂದಲ್ಲಿ ತಕ್ಷಣ ವೈದ್ಯರ ಸಲಹೆ ಪಡೆಯುವುದು.

ಕೊಡಗು ಜಿಲ್ಲೆಯು ನೆರೆರಾಜ್ಯ ಕೇರಳಕ್ಕೆ ಹೊಂದಿಕೊಂಡಿರುವುದರಿಂದ ಜಿಲ್ಲೆಯಲ್ಲಿ ತೀವ್ರಾ ನಿಗಾವಣೆ ಮತ್ತು ಸಕ್ರಿಯ ಸಮೀಕ್ಷೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಈಗಾಗಲೇ ಸೂಚಿಸಲಾಗಿದೆ. ಈ ವೈರಸ್‌ಜ್ವರವು ನೇರ ಸಂಪರ್ಕದಿಂದ ಹರಡುವುದರಿಂದ ಸೋಂಕಿತ ವ್ಯಕ್ತಿ ಮತ್ತು ಪ್ರಾಣಿಗಳಿಂದ (ನಾಯಿ, ಬೆಕ್ಕು, ಮೇಕೆ, ಕುದುರೆ ಮತ್ತು ಕೆಲವು ಸಂದರ್ಭದಲ್ಲಿ ಕುರಿಗಳು) ದೂರವಿರುವುದು ಸೂಕ್ತವಾಗಿದೆ ಅಲ್ಲದೆ ಸಾರ್ವಜನಿಕರು ಅತಂಕಕ್ಕೆ ಒಳಗಾಗುವ ಅವಶ್ಯಕತೆ ಇರುವುದಿಲ್ಲ. ಯಾವುದೇ ಜ್ವರವಿರಲಿ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಸತೀಶ್ ಕುಮಾರ್ ಅವರು ಕೋರಿದ್ದಾರೆ.

ಕೊಡವರ ಬೇಡಿಕೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲು

ನಾಳೆ ಸಿಎನ್‌ಸಿಯಿಂದ ಪಾದಯಾತ್ರೆ ಆರಂಭ



ಮಡಿಕೇರಿ, ಸೆ.13– ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಸೇರಿದಂತೆ ಸಂವಿಧಾನದತ್ತವಾದ 9 ಬೇಡಿಕೆಗಳ ಕುರಿತು ಸರ್ಕಾರದ ಗಮನ ಸೆಳೆಯಲು ಖ್ಯಾತ ಅರ್ಥಶಾಸ್ತ್ರಜ್ಞ ಡಾ.ಸುಬ್ರಮಣಿಯನ್ ಸ್ವಾಮಿ ಅವರ ಜನ್ಮ ದಿನವಾದ ಸೆ.15ರಂದು ಕೊಡವರ ಪುಣ್ಯಕ್ಷೇತ್ರ ತಲಕಾವೇರಿಯಿಂದ ಪಾದಯಾತ್ರೆ ಆರಂಭಿಸಲಾಗುವುದು ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ.

ಕೊಡಗು ಜಿಲ್ಲೆಯ ವಿವಿಧೆಡೆ ಐದು ಹಂತಗಳಲ್ಲಿ ಪಾದಯಾತ್ರೆ ನಡೆಯಲಿದ್ದು, ಶುಕ್ರವಾರ ಬೆಳಗ್ಗೆ 8 ಗಂಟೆಗೆ ತಲಕಾವೇರಿಯಲ್ಲಿ ಡಾ.ಸುಬ್ರಮಣಿಯನ್ ಸ್ವಾಮಿ ಅವರ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಲಾಗುವುದು. ನಂತರ ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಬೇಡಿಕೆ ಪರ ಪ್ರಾರ್ಥನೆ ಸಲ್ಲಿಸಿ 9 ಗಂಟೆಗೆ ಪಾದಯಾತ್ರೆಯನ್ನು ಆರಂಭಿಸಲಾಗುವುದು ಎಂದು ಹೇಳಿದ್ದಾರೆ. ಸಿಎನ್‌ಸಿಯ ಪಾದಯಾತ್ರೆ ಸಂದರ್ಭ ಜನಜಾಗೃತಿ ಮೂಡಿಸಿ ಹಕ್ಕೊತ್ತಾಯ ಮಂಡಿಸಲಾಗುವುದು ಎಂದು ಹೇಳಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು ಬಿಡುವಂತೆ ಶಿಫಾರಸ್ಸು ಖಂಡಿಸಿ ಚಾ.ನಗರದಲ್ಲಿ ಪ್ರತಿಭಟನೆ

ಕಾವೇರಿ ನದಿ ನೀರು ನಿಯಂತ್ರಣ ಮಂಡಳಿ ಸತ್ತಿದೆ ಎಂದು ಕಡ್ಲೆಪುರಿ, ಬಿಡುಗಾಸು, ಹೂ ಎರಚಿ ಆಕ್ರೋಶ



ಚಾಮರಾಜನಗರ, ಸೆ. 13– ಕಾವೇರಿ ಕೊಳ್ಳದ ಜಲಾಶಯಗಳಿಂದ ತಮಿಳುನಾಡಿಗೆ ಮತ್ತೆ ನೀರು ಬಿಡುಗಡೆ ಮಾಡುವಂತೆ ಶಿಫಾರಸ್ಸು ಮಾಡಿರುವ ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ವಿರುದ್ಧ ಕರ್ನಾಟಕ ಸೇನಾ ಪಡೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾ ಪಡೆಯ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ರಸ್ತೆತಡೆ ನಡೆಸಿ, ಕಾವೇರಿ ನದಿ ನೀರು ನಿಯಂತ್ರಾ ಸಮಿತಿ ವಿರುದ್ಧ ಘೋಷಣೆ ಕೂಗಿ ಕಾವೇರಿ ನದಿ ನೀರು ನಿಯಂತ್ರಣ ಮಂಡಳಿ ಸತ್ತಿದೆ ಎಂದು ಆರೋಪಿಸಿ ಕಡ್ಲೆಪುರಿ, ಬಿಡುಗಾಸು, ಹೂ ಎರಚಿ ಅಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಚಾ.ರಂ. ಶ್ರೀನಿವಾಗೌಡ ಮಾತನಾಡಿ, ನವದೆಹಲಿಯಲ್ಲಿ ನಡೆದ ಕಾವೇರಿ ನದಿ ನೀರು ನಿಯಂತ್ರಾ ಸಮಿತಿ ಸಭೆಯಲ್ಲಿ ತಮಿಳುನಾಡಿಗೆ 15 ದಿನಗಳ ಕಾಲ ನಿರಂತರವಾಗಿ 5 ಸಾವಿರ ಕ್ಯುಸೆಕ್ ನೀರು ಬಿಡಬೇಕು ಎಂದು ಕರ್ನಾಟಕಕ್ಕೆ ಸೂಚಿಸಿರುವುದು ಅತ್ಯಂತ ಖಂಡನೀಯ. ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಯಾವಾಗಲೂ ತಮಿಳುನಾಡಿನ ಪರವಾಗಿದ್ದು ಪ್ರತಿ ಬಾರಿಯೂ ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿದರು.

ಕರ್ನಾಟಕ ರಾಜ್ಯದ ಪಾಲಿಗೆ ಕಾವೇರಿ ನದಿ ನೀರು ನಿಯಂತ್ರಣ ಮಂಡಳಿ ಸತ್ತಿದೆ ಎಂದು ಕಡ್ಲೆಪುರಿ, ಬಿಡುಗಾಸು, ಹೂ ಎರಚಿ ವಿನೂತನ ಪ್ರತಿಭಟನೆ ನಡೆಸಲಾಗಿದೆ ಎಂದರು. ರಾಜ್ಯದಲ್ಲಿ ಈಗಾಗಲೇ ಮಳೆ ಕೊರತೆಯಿಂದ ಬರಗಾಲ ಪರಿಸ್ಥಿತಿ ನಿರ್ಮಾಣವಾಗಿದೆ. ಕಾವೇರಿ ನದಿ ಕಟ್ಟಲಾಗಿರುವ ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ 21 ಸಾವಿರ ಟಿಎಂಸಿಗೆ ಇಳಿದಿದೆ. ಮತ್ತೆ 15 ದಿನಗಳ ಕಾಲ ನೀರು ಹರಿಸಿದರೆ ಜಲಾಶಯವೇ ಬರಿದಾಗಿ ರಾಜ್ಯದ ಜನತೆಗೆ ನೀರಿಗೆ ಪರಿತಪಿಸಬೇಕಾಗುತ್ತದೆ. ಆದ್ದರಿಂದ ತಮಿಳುನಾಡಿಗೆ ಮತ್ತೆ ಕರ್ನಾಟಕ ಸರ್ಕಾರ ನೀರು ಬಿಡಬಾರದು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರಳಿ, ಪಣ್ಯದಹುಂಡಿ ರಾಜು, ನಿಜಧ್ವನಿಗೋವಿಂದರಾಜು, ಮಹೇಶ್ ಗೌಡ, ಚಾ.ವೆಂ.ರಾಜ್ ಗೋಪಾಲ್, ರವಿಚಂದ್ರ ಪ್ರಸಾದ್ ಕಹಳೆ, ಚಾ.ಹ.ರಾಮು, ತಾಂಡವಮೂರ್ತಿ, ಚಾ.ಸಿ.ಸಿದ್ದರಾಜು, ಚಾ.ರಾ.ಕುಮಾರ್, ನಂಜುಂಡಸ್ವಾಮಿ, ಆಟೋ ನಾಗೇಶ್ ಇತರರು ಹಾಜರಿದ್ದರು.

ಕರ್ನಾಟಕ–ತಮಿಳುನಾಡು ಗಡಿ ಬಂದ್ ಚಳವಳಿ



ಚಾಮರಾಜನಗರ, ಸೆ.13– ತಮಿಳುನಾಡಿಗೆ ಪ್ರತಿದಿನ 5,000 ಕ್ಯುಸೆಕ್ ನೀರನ್ನು ಬಿಡಬೇಕೆಂದು ಕಾವೇರಿ ನೀರು ನಿರ್ವಹಣಾ ಮಂಡಳಿ ಆದೇಶಿಸಿರುವುದನ್ನು ಖಂಡಿಸಿ ತಾಲೂಕಿನ ತಮಿಳು ನಾಡು ಗಡಿಯ ಪುಣಜನೂರು ಗ್ರಾಮದಲ್ಲಿ ಬುಧವಾರ ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಕರ್ನಾಟಕ– ತಮಿಳುನಾಡು ಗಡಿ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಪುಣಜೂರಿನ ಕರ್ನಾಟಕ– ತಮಿಳುನಾಡು ಗಡಿಯ ಹತ್ತಿರ ಚೆಕ್‌ಪೋಸ್ಟ್‌ನಲ್ಲಿ ಸಂಘದ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ ಹಾಗೂ ಕಾವೇರಿ ನೀರು ನಿರ್ವಹಣ ಮಂಡಳಿ ವಿರುದ್ಧ ಘೋಷಣೆ ಕೂಗಿ ಗಡಿ ಬಂದ್ ಚಳವಳಿ ನಡೆಸಿದರು. ಈ ವೇಳೆ ಪೊಲೀಸರು ಪ್ರತಿಭಟನಾ ನಿರತ ರೈತರನ್ನು ಬಂಧಿಸಿ, ನಂತರ ಬಿಡುಗಡೆಗೊಳಿಸಿದರು.

ರಾಜ್ಯದಲ್ಲಿ ಕುಡಿಯುವ ನೀರಿಗೆ ಸಾಕಷ್ಟು ಸಮಸ್ಯೆ ಉಂಟಾಗುತ್ತಿದೆ. ಹೀಗಿದ್ದರೂ ತಮಿಳುನಾಡು ಸರ್ಕಾರವು ಮೂರನೇ ಬೆಳೆಗೆ ನೀರನ್ನು ಕೇಳುತ್ತಿದೆ. ಆದರೆ ರಾಜ್ಯದಲ್ಲಿ ಕೊಡುವಷ್ಟು ನೀರಿಲ್ಲ. ಕುಡಿಯಲು ಮಾತ್ರ ಅವಶ್ಯಕತೆ ಇರುವಷ್ಟು ನೀರು ಇದೆ. ನೀರಿನ ಸಂಗ್ರಹದಲ್ಲಿ ಸಾಕಷ್ಟು ಸಂಕಷ್ಟವಾಗಿದೆ. ಇದನ್ನು ಅರಿವು ಉಂಟು ಮಾಡುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಭಾಗ್ಯರಾಜ್ ದೂರಿದರು.

ತಮಿಳುನಾಡಿಗೆ ಮನವರಿಕೆಯನ್ನು ಮಾಡಿ ಕೇಂದ್ರ ಸರ್ಕಾರ ತಕ್ಷಣ ಮಧ್ಯ ಪ್ರವೇಶ ಮಾಡಬೇಕು. ರಾಜ್ಯದ 28 ಸಂಸದರು ಪಕ್ಷಬೇಧ ಮರೆತು ಕಾವೇರಿ ಕಬಿನಿ ಭಾಗದ ರೈತರನ್ನು ರಕ್ಷಿಸಲು ಮಾತನಾಡಬೇಕು. ತಮಿಳುನಾಡು ರಾಜಕಾರಣಕ್ಕೆ ರಾಜ್ಯದ ರೈತರನ್ನು ಆಡಳಿತ ಸರ್ಕಾರ ಬಲಿ ಕೊಡಬಾರದು ಎಂದು ತಿಳಿಸಿದರು.

ತಮಿಳುನಾಡಿಗೆ ಕನಿಷ್ಠ 5 ಲೀಟರ್ ನೀರನ್ನು ಕೊಡುವುದಿಲ್ಲ ಎಂಬ ಖಡಕ್ ನಿರ್ಧಾರಕ್ಕೆ ಸರ್ಕಾರ ಬರಬೇಕು. ರಾಜ್ಯದಲ್ಲಿ ಬರ ಪರಿಸ್ಥಿತಿ ತಾಂಡವವಾಡುತ್ತಿದ್ದು, ಮುಂದಿನ ದಿನಗಳಲ್ಲಿ ತಮಿಳುನಾಡು ಇದೇ ರೀತಿ ತಗಾದಿಯನ್ನು ಮುಂದುವರಿಸಿದರೆ ಕರ್ನಾಟಕದಿಂದ ತಮ್ಮ ರಾಜ್ಯದ ಜನರನ್ನು ವಾಪಸ್ ಕರೆಸಿಕೊಳ್ಳುವ ಅಭಿಯಾನವನ್ನು ರಾಜ್ಯದ ರೈತರು ಮಾಡಬೇಕಾಗುತ್ತದೆ. ತಮಿಳು ಚಲನಚಿತ್ರಗಳು, ತಮಿಳು ವಾಹನಗಳಿಗೆ ರಾಜ್ಯದಲ್ಲಿ ಪ್ರವೇಶಕ್ಕೆ ಅವಕಾಶ ನೀಡದೆ ಚಳುವಳಿ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಪಟೇಲ್ ಶಿವಮೂರ್ತಿ, ತಾಲೂಕು ಅಧ್ಯಕ್ಷರಾದ ಹಾಲಿನ ನಾಗರಾಜು, ಪ್ರಧಾನ ಕಾರ್ಯದರ್ಶಿ ಮಲಿಯೂರು ಹರ್ಷ, ಗ್ರಾಮ ಘಟಕದ ಅಧ್ಯಕ್ಷರಾದ ಅರಳಿಕಟ್ಟೆ ಕುಮಾರ್, ಪ್ರಭುಸ್ವಾಮಿ, ಉಡಿಗಾಲ ಗ್ರಾಮ ಘಟಕದ ಅಧ್ಯಕ್ಷ ಮಂಜುನಾಥ್, ಮಹದೇವ ಸ್ವಾಮಿ, ಮೂರ್ತಿ, ಸಿದ್ದಪ್ಪ, ಗುರುಮಲ್ಲಪ್ಪ, ಸುಧಾಕರ್, ರೇವಣ್ಣ, ಮಲಿಯೂರು ಗ್ರಾಮ ಘಟಕದ ಅಧ್ಯಕ್ಷ ಬಸವರಾಜಪ್ಪ, ಮಹೇಂದ್ರ, ಸತೀಶ್, ಮಂಜು, ಮಹೇಶ್ ಹಾಜರಿದ್ದರು.

ನಿಫಾ ವೈರಸ್ ಬಗ್ಗೆ ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ವಹಿಸಲು ಆರೋಗ್ಯ ಇಲಾಖೆ ಮನವಿ

ಚಾಮರಾಜನಗರ, ಸೆ.13– ಕೇರಳ ರಾಜ್ಯದಲ್ಲಿ ನಿಫಾ ಪ್ರಕರಣವು ವರದಿಯಾಗಿರುವ ಹಿನ್ನೆಲೆಯಲ್ಲಿ ಕೇರಳ ರಾಜ್ಯದ ಗಡಿ ಜಿಲ್ಲೆಯಾದ ಚಾಮರಾಜನಗರದಲ್ಲಿ ಆರೋಗ್ಯ ಇಲಾಖೆಯು ಪರಿಸ್ಥಿತಿ ಎದುರಿಸಲು ಸರ್ವ ಸನ್ನದ್ಧವಾಗಿದ್ದು, ಸಾರ್ವಜನಿಕರು ಯಾವುದೇ ಆತಂಕ ವದಂತಿಗಳಿಗೆ ಕಿವಿಗೊಡದೆ ರೋಗದ ವಿರುದ್ಧ ಅಗತ್ಯ ಮುನ್ನೆಚ್ಚರಿಕಾ ಕ್ರಮ ವಹಿಸು ವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮನವಿ ಮಾಡಿದೆ.


ಹಂದಿ, ಕುದುರೆ, ನಾಯಿ, ಬೆಕ್ಕುಗಳಂತಹ ಸೋಂಕಿತ ಜಾನುವಾರುಗಳು ಮಧ್ಯಂತರ ಮೂಲಗಳಾಗಿರುವುದರಿಂದ ಇವುಗಳನ್ನು ಪ್ರತ್ಯೇಕವಾಗಿಡಬೇಕು. ಶಂಕಿತ ಮನುಷ್ಯ ಪ್ರಕರಣಗಳನ್ನು ಸಹ ಪ್ರತ್ಯೇಕವಾಗಿಡಬೇಕು. ಶಂಕಿತ ಪ್ರಕರಣಗಳಲ್ಲಿ ಬಳಸುವ ಬಟ್ಟೆ, ಪಾತ್ರೆಗಳು, ಮುಖ್ಯವಾಗಿ ಸ್ನಾನ ಮತ್ತು ಶೌಚಾಲಯದಲ್ಲಿ ಬಳಸುವ ವಸ್ತುಗಳನ್ನು ಪ್ರತ್ಯೇಕವಾಗಿ ಶುಚಿಗೊಳಿಸಬೇಕು. ನೈರ್ಮಲ್ಯ ಕಾಪಾಡಬೇಕು.

ಹಸ್ತಲಾಘವ ಕೊಡುವುದನ್ನು ತಪ್ಪಿಸಿ, ಸೋಂಕಿತ ಜನರ ಸಂಪರ್ಕಕ್ಕೆ ಬಂದ ನಂತರ ಕೈಗಳನ್ನು ಸರಿಯಾಗಿ ತೊಳೆದುಕೊಳ್ಳಬೇಕು. ರೋಗಿಗಳನ್ನು ಉಪಚರಿಸುವಾಗ ಮಾಸ್ಕ್ ಮತ್ತು ಕೈಗವಸುಗಳನ್ನು (ಗ್ಲೌಸ್) ಧರಿಸಬೇಕು. ಎಲ್ಲ ರೀತಿಯ ಹಣ್ಣುಗಳನ್ನು ಚೆನ್ನಾಗಿ ತೊಳೆದು ಸಿಪ್ಪೆ ಸುಲಿದು ಅಥವಾ ಬೇಯಿಸಿ ತಿನ್ನಬೇಕು. ಫ್ಲೂ ರೀತಿಯ ಲಕ್ಷಣಗಳು ಕಂಡು ಬಂದರೆ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಬೇಕು. ನೆರವಿಗಾಗಿ 104ಕ್ಕೆ ಕರೆ ಮಾಡಬೇಕು.

ಪ್ರಾಣಿ, ಪಕ್ಷಿಗಳು ಕಚ್ಚಿರುವ ಹಣ್ಣುಗಳನ್ನು ತಿನ್ನಬಾರದು. ಬಾವಲಿಗಳು ಅತಿ ಹೆಚ್ಚಾಗಿ ಕಂಡು ಬರುವ ಪ್ರದೇಶಗಳಿಂದ ಸಂಗ್ರಹಿಸಿದ ನೀರಾ, ಸೇಂದಿ ಸೇವಿಸಬಾರದು. ಸೋಂಕಿತ ಪ್ರದೇಶಗಳಿಗೆ ಭೇಟಿ ನೀಡುವಾಗ ಪ್ರತಿಬಂಧಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ರೋಗಿಯ ಶರೀರ ಸ್ರಾವದೊಂದಿಗೆ (ಜೊಲ್ಲು, ಬೆವರು, ಮೂತ್ರ ಇತ್ಯಾದಿ) ಸಂಪರ್ಕ ತಪ್ಪಿಸಬೇಕು. ಹೋಟೆಲ್, ತಂಪು ಪಾನೀಯ ಅಂಗಡಿಗಳಲ್ಲಿ ಉಪಯೋಗಿಸುವ ಲೋಟ, ತಟ್ಟೆಗಳನ್ನು ಬಿಸಿ ನೀರಿನಲ್ಲಿ ತೊಳೆಯಬೇಕು. ಹಂದಿ ಸಾಕಾಣಿಕಾ ಕೇಂದ್ರಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಹಾಗೂ ಅಲ್ಲಿನ ಸಿಬ್ಬಂದಿಯ ವೈಯಕ್ತಿಕ ರಕ್ಷಣಾ ಕ್ರಮಗಳನ್ನು ಅನುಸರಿಸಬೇಕು. ಹಂದಿ ಸಾಕಾಣಿಕಾ ವ್ಯಾಪ್ತಿಯಲ್ಲಿ ಬಾವಲಿಗಳು ಹಂದಿಗಳ ಸಂಪರ್ಕಕ್ಕೆ ಬಾರದಂತೆ ಜಾಗ್ರತೆ ವಹಿಸಬೇಕು.

ಜಿಲ್ಲಾ ಜನತೆ ಈ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವ ಮೂಲಕ ರೋಗ ಹರಡದಂತೆ ಇಲಾಖೆಯೊಂದಿಗೆ ಸಹಕರಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕೆ.ಎಂ. ವಿಶ್ವೇಶ್ವರಯ್ಯ ಪ್ರಕಟಣೆಯಲ್ಲಿ ಕೋರಿದ್ದಾರೆ.

ಇ–ಶ್ರಮ್ ಕಾರ್ಡ್ ನೋಂದಣಿ ಅಭಿಯಾನಕ್ಕೆ ಚಾಲನೆ



ಚಾಮರಾಜನಗರ, ಸೆ.13– ಅಸಂಘಟಿತ ಕಾರ್ಮಿಕ ವಲಯದಲ್ಲಿರುವ ಇಎಸ್‌ಐ, ಪಿಎಫ್ ಸೌಲಭ್ಯಗಳು ಇಲ್ಲದ ಸವಿತಾ ಸಮಾಜದವರಿಗೆ ನಗರದ ರಾಮಸಮುದ್ರದಲ್ಲಿರುವ ಸವಿತಾ ಸಮಾಜದ ಸಮುದಾಯ ಭವನದಲ್ಲಿ ಇ–ಶ್ರಮ್ ಕಾರ್ಡ್ ನೋಂದಣಿ ಹಾಗೂ ವಿತರಣೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಜಿಲ್ಲಾ ಸವಿತಾ ಸಮಾಜ ಸಮುದಾಯದ ಸಂಘ ಹಾಗೂ ಕಾರ್ಮಿಕ ಇಲಾಖೆಯ ಸಹಯೋಗದಲ್ಲಿ ನಡೆದ ಇ–ಶ್ರಮ ಕಾರ್ಡ್ ನೋಂದಾಣಿ ಸಮಾರಂಭಕ್ಕೆ ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ.ಸವಿತಾ ಚಾಲನೆ ನೀಡಿದರು.

ಬಳಿಕ 50ಕ್ಕೂ ಹೆಚ್ಚು ಸಮುದಾಯದ ಜನರು ನೋಂದಾಯಿಸಿಕೊಂಡು ಇ–ಶ್ರಮ್ ಕಾರ್ಡ್‌ಗಳನ್ನು ಸ್ಥಳದಲ್ಲಿಯೇ ಪಡೆದು ಕೊಂಡರು. ಈ ವೇಳೆ ಜಿಲ್ಲಾ ಕಾರ್ಮಿಕ ಕಲ್ಯಾಣಾಧಿಕಾರಿ ಡಾ.ಸವಿತಾ ಮಾತನಾಡಿ, ಇಎಸ್‌ಐ ಹಾಗೂ ಪಿಎಫ್ ಸೌಲಭ್ಯಗಳನ್ನು ಪಡೆದುಕೊಳ್ಳದ ಸಮುದಾಯದ ಜನರಿಗೆ ಈ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ ಎಂದರು.

ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷರು ಹಾಗೂ ಸಂಘದವರ ಮನವಿಯ ಹಿನ್ನೆಲೆ ಯಲ್ಲಿ ಇ–ಶ್ರಮ್ ಕಾರ್ಡ್ ನೋಂದಣಿ ಮಾಡಿಸಲಾಗುತ್ತಿದೆ. ಇವರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸವಲತ್ತುಗಳನ್ನು ತಲುಪಿಸುವುದು ನಮ್ಮ ಜವಾಬ್ದಾರಿ ಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಮಿಕ ಹಿರಿಯ ನಿರೀಕ್ಷಕರಾದ ವೀಣಾ, ಜಿಲ್ಲಾ ಸವಿತಾ ಸಮಾಜ ಸಂಘದ ಗೌರವಾಧ್ಯಕ್ಷ ಮುದ್ದಮಾಧು, ಜಿಲ್ಲಾಧ್ಯಕ್ಷ ಕೆ.ವಿ. ವೆಂಕಟರಾಜ್, ತಾಲೂಕು ಅಧ್ಯಕ್ಷರು ಬಸವಣ್ಣ, ಜಿಲ್ಲಾ ಉಪಾಧ್ಯಕ್ಷ ರಂಗಸ್ವಾಮಿ, ಯಜಮಾನರಾದ ನಾಗರಾಜು, ಮಧು ಜ್ಯೋತಿಗೌಡನಪುರ, ಕೆಂಪಣ್ಣ ಬಿಸಲವಾಡಿ, ಶಿವಣ್ಣ ಹಾಗೂ ಸಮುದಾಯದ ಯುವಕರು ಮುಖಂಡರು ಹಾಜರಿದ್ದರು.

ನಾಳೆ ವಿದ್ಯುತ್ ಗ್ರಾಹಕರ ಜನ ಸಂಪರ್ಕ ಸಭೆ

ಚಾಮರಾಜನಗರ, ಸೆ.13– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು ನಿಗಮದ ಮೈಸೂರು ವಿಭಾಗದ ಅಧೀಕ್ಷಕ ಎಂಜಿನಿಯರ್ ಅವರ ಅಧ್ಯಕ್ಷತೆಯಲ್ಲಿ ಸೆ.15ರಂದು ಮಧ್ಯಾಹ್ನ 3 ಗಂಟೆಯಿಂದ 4 ಗಂಟೆಯವರೆಗೆ ಸಂತೇಮರಳ್ಳಿ ಉಪ ವಿಭಾಗದ ಕಚೇರಿಯಲ್ಲಿ ತ್ರೈಮಾಸಿಕ ಜನಸಂಪರ್ಕ ಸಭೆ ಏರ್ಪಡಿಸಿದೆ. ಸಾರ್ವಜನಿಕರು ಸಭೆಗೆ ಹಾಜರಾಗಿ ವಿದ್ಯುತ್ ಸಂಬಂಧಿತ ಕುಂದು ಕೊರತೆಗಳಿದ್ದಲ್ಲಿ ತಿಳಿಸಿ ಪರಿಹರಿಸಿಕೊಳ್ಳುವಂತೆ ನಿಗಮದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

ಸ್ವಯಂ ಉದ್ಯೋಗಕ್ಕೆ ಆದ್ಯತೆ ನೀಡಲು ಸಲಹೆ



ಚಾಮರಾಜನಗರ, ಸೆ.13– ಓದಿದ ವಿದ್ಯಾರ್ಥಿಗಳಿಗೆಲ್ಲ ಸರ್ಕಾರಿ ಕೆಲಸ ಸಿಗುವುದು ಕಷ್ಟ, ಆದ್ದರಿಂದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸ್ವಯಂ ಉದ್ಯೋಗಕ್ಕೆ ಹೆಚ್ಚಿನ ಗಮನ ನೀಡಬೇಕು ಎಂದು ನೆಹರು ಯುವ ಕೇಂದ್ರ ಅಧಿಕಾರಿ ಅಭಿಷೇಕ್ ಸಲಹೆ ನೀಡಿದರು.

ನಗರದಲ್ಲಿ ಪ್ರಗತಿ ಕೌಸಲ್ಯ ಅಕಾಡೆಮಿಯಿಂದ ನಡೆದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಿಕ್ಷಣದಿಂದ ದೇಶ ಪ್ರಗತಿ ಸಾಧ್ಯ. ನೆಹರು ಯುವ ಕೇಂದ್ರ ಸಂಘ–ಸಂಸ್ಥೆಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಹಲವಾರು ಯೋಜನೆಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಿದ ನೆಹರು ಯುವ ಕೇಂದ್ರ ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತ ಜಿ. ಬಂಗಾರು ಮಾತನಾಡಿ, ರಾಜ್ಯ ಹಾಗೂ ಕೇಂದ್ರ ಸರ್ಕಾರ ವಿದ್ಯಾರ್ಥಿಗಳಿಗೆ ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದೆ. ವಿದ್ಯಾರ್ಥಿಗಳ ಇದರ ಸದ್ಬಳಕೆ ಮಾಡಿಕೊಳ್ಳಬೇಕು. ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ಪ್ರತಿಯೊಬ್ಬರು ಶಿಕ್ಷಣವಂತರಾಗಬೇಕು. ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು. ಈ ವೇಳೆ ನೆಹರು ಯುವ ಕೇಂದ್ರ ಲೆಕ್ಕಾಧಿಕಾರಿ ಸತೀಶ್, ಸಹನಾ, ಪ್ರಗತಿ ಕೌಸಲ್ಯ ಅಕಾಡೆಮಿ ಹರ್ಷ, ರೇಣುಕಾ, ಸೀಮಾಬಾನು, ರವೀಂದ್ರ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ
0821–
2496522/23

ಶಿವಮ್ಮ ವಿ.ವಿ.ಮಹಾದೇವಪ್ಪ ಕಲ್ಯಾಣ ಮಂಟಪ
ಕೆ.ಆರ್.ರಸ್ತೆ, ಗೋಕುಲಂ, 4ನೇ ಹಂತ, ಮೈಸೂರು
Sep, Oct, Nov, Dec, Jan, Feb ಯಲ್ಲಿ ಕೆಲವು ದಿನಗಳು ಖಾಲಿ ಇದೆ ಮದುವೆ ಹಾಗೂ ಇತರ ಎಲ್ಲಾ ಶುಭ ಕಾರ್ಯಗಳಿಗೆ ಬಾಡಿಗೆಗೆ ದೊರೆಯುತ್ತದೆ
9342110670

ವೃದ್ಧಾಶ್ರಮ
ಹಿರಿಯ ಜೀವಗಳಿಗೆ, ಹಾಸಿಗೆ ಹಿಡಿದ ವೃದ್ಧರನ್ನು ಪ್ರಾಣ್ಯವಾಗಿ ಹೊತ್ತಿರುವ, ಹಾಗೂ ಕೈಲಾಗದ ವಯೋ ವೃದ್ಧರನ್ನು ಮನೆಯಂತೆಯೇ ನೋಡಿ ಕೊಳ್ಳುತ್ತಿರುವ ಸಂಸ್ಥೆ ನಮ್ಮ ಮೈಸೂರಿನಲ್ಲಿ ಊಟ, ವಸತಿಯೊಂದಿಗೆ ನರ್ಸಿಂಗ್ ಸೌಲಭ್ಯವಿದೆ. ಆಸಕ್ತಿಯುಳ್ಳವರು ಸಂಪರ್ಕಿಸಿ
9110455297|9591557126

ಮನೆ ಬಾಡಿಗೆಗಿದೆ (8K)
ಪೂರ್ವಕ್ಕೆ ಬಾಗಿಲು, ಗ್ರೌಂಡ್ ಫ್ಲೋರ್ ಕಾವೇರಿ ನೀರು, ಸೋಲಾರ್, ವಾರ್ಡ್ರೋಬ್ Vehicle Parking ವ್ಯವಸ್ಥೆಯಿದೆ Vidyaranyapuram
9611263045

ಬಾಡಿಗೆಗಿದೆ
ಮೈಸೂರು ನಗರದ ಚಾಮರಾಜ ಜೋಡಿ ರಸ್ತೆಯ ಸಹಕಾರ ಭವನದ ಮೈಸೂರು ಜಿಲ್ಲಾ ಸಹಕಾರ ಒಕ್ಕೂಟದ ಕಟ್ಟಡದ ಸೆಲ್ಲಾರ್‌ನ 2020 ಚದರಡಿ ಜಾಗವನ್ನು ಬಾಡಿಗೆ ನೀಡಲಾಗುತ್ತಿದ್ದು, ಅಗತ್ಯ ಇರುವವರು ಸಂಪರ್ಕಿಸಬೇಕಾಗಿ ಕೋರಿದೆ.
9611944599, 0821-4245255

WANTED
Computer, English and Maths teaching staff for reputed institution
Send your resume through WhatsApp/Message
8971577685
9980631121

WANTED
1) Security Supervisors - PUC - Pass/Fail
2) Security Guards - 10th Pass/Fail
3) Field Officer - Any Degree with 3 yrs experience.
Place: Mysore
97391-99355 / 98442-35981

Alpha School of Fashion Design, Mysore
Become a Fashion Designer
NCVTE New Govt approved courses
• 6 MONTHS CERTIFICATION COURSE
• 6 MONTHS DIPLOMA COURSE
• 1 YEAR ADVANCE DIPLOMA COURSE
ADMISSION OPEN
*HOSTEL AND PG AVAILABLE
782 993 7469



SITE FOR SALE
30'x40' size, Old Kesare Main Road, 7 kms from City, near to Bangalore-Mysore Road, Mysore.
Mob: 99003-75763

ಬ್ರಾಹ್ಮಣ ವರ ಬೇಕಾಗಿದೆ
49 ವರ್ಷದ ಮಹಿಳೆಗೆ (ವಿಧವೆ) ವರ ಬೇಕಾಗಿದೆ. ಹಣಕಾಸಿನಲ್ಲಿ ಸ್ಥಿತಿವಂತರಾಗಿರಬೇಕು. ಸರ್ಕಾರಿ ನೌಕರಿಯಲ್ಲಿ ಇರಬೇಕು. ನಿವೃತ್ತಿ ಹೊಂದಿರುವವರು ಕೂಡ ಆಸಕ್ತಿ ಇದ್ದರೆ ಸಂಪರ್ಕಿಸಿ:
8951189086

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

Remote Controlled ROLLING SHUTTERS



APPLICATION FOR
• INDUSTRY
• COMMERCIAL
• DOMESTIC
Contact : Gowrishankar. C.
Mob : 98456-01431 / 90369 03202
DIAMOND ROLLING SHUTTERS
Industrial Suburb, Vishweshwara Nagar, Mysore

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

HOUSE FOR LEASE
Newly Built 2BHK Independent House, Fully Furnished with Solar Ground Floor Only @ Lalithadri Nagar, Near Ring Road Behind Indian Oil Petrol Bunk
9964414484

9/11A ಹಾಗೂ 11B ಖಾತೆಗಳಿಗೆ ಲೋನ್ ಮಾಡಿಕೊಡಲಾಗುವುದು
ಶೀಟಿನ ಮನೆ, ಹೆಂಚಿನ ಮನೆ, ಆರ್‌ಸಿಸಿ ಮನೆ ಮೇಲೆ ಸಾಲ ಮತ್ತು ಮನೆ ಖರೀದಿಸಲು, ಮನೆ ನವೀಕರಣ ಮಾಡಲು ಬ್ಯಾಂಕ್ ಲೋನ್ ಮಾಡಿಕೊಡಲಾಗುವುದು
9008504456

WANTED
Female Graduates for Montessori Pre-School in Bogadi.
Mob: +91 91132-57683

HOTEL FOR RENT / LEASE
50 seats capacity located in good location Mysore.
Mob: 95356-01201

ITIಗೆ ಪ್ರವೇಶಾವಕಾಶ
2023–24 ನೇ ಸಾಲಿಗೆ ಎರಡು ವರ್ಷದ ITI ತರಬೇತಿಗೆ SSLC/PUC/Pass/Fail ಅಭ್ಯರ್ಥಿಗಳಿಗೆ ಪ್ರವೇಶಾವಕಾಶವಿರುತ್ತದೆ. NCVT ಭಾರತ ಸರ್ಕಾರದಿಂದ ಸಂಯೋಜನೆಗೊಂಡಿರುತ್ತದೆ.
ಬೆನಕ ಐ.ಟಿ.ಐ. ಕಾಲೇಜು
ಡಾ॥ ರಾಜ್‌ಕುಮಾರ್ ರಸ್ತೆ ಹತ್ತಿರ, ಕಾವೇರಿ ವೃತ್ತದ 4ನೇ ಕ್ರಾಸ್, ರಾಘವೇಂದ್ರ ನಗರ, ಮೈಸೂರು–29
9342123467
9141756695

ಮನೆ ಮಾರಾಟಕ್ಕಿದೆ
ಹುಣಸೂರು ಟೌನ್ ಮಂಜುನಾಥ ಬಡಾವಣೆಯಲ್ಲಿರುವ ಮನೆ ನಂ.30/31ರಲ್ಲಿ 50x30 ಅಳತೆಯು 1st Floor ಮತ್ತು IInd Floor ನಿರ್ಮಿತವಾಗಿರುವ ಎಲ್ಲಾ ಸೌಕರ್ಯವುಳ್ಳ ಮನೆ ಮಾರಾಟಕ್ಕಿದೆ ಆಸಕ್ತ ಯುಳ್ಳವರು ಸಂಪರ್ಕಿಸಬೇಕಾಗಿರುವ ಸಂಖ್ಯೆ:
8951845253

ಅಂಜನ ಶಾಸ್ತ್ರದ ಮೂಲಕ ಪರಿಹಾರ
ಶ್ರೀ ಅಂಜನ ದೇವಿ ಆರಾಧಕರು
ಪಂ॥ ಶ್ರೀನಿವಾಸ್ ಆಚಾರ್ಯ
ಮೈಸೂರಿನಲ್ಲಿ ಬಹು ವರ್ಷದಿಂದ ಖಾಯಂ ಆಗಿ ನೆಲೆಸಿರುತ್ತಾರೆ. ಅನೇಕ ಜನರು ಇವರಲ್ಲಿ ಪರಿಹಾರ ಪಡೆದಿರುತ್ತಾರೆ. ಇವರು ವಂಶ ಪಾರಂಪರ್ಯ ಜ್ಯೋತಿಷ್ಯರು ಇವರಲ್ಲಿ ಜ್ಯೋತಿಷ್ಯ ಕೇಳಿದರೆ ನಿರಾಶೆ ಆಗುವ ಮಾತೇ ಇಲ್ಲ. ಫೋನಿನ ಮೂಲಕ ಪರಿಹಾರ.
9663466548

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9902914891

40×60 SITE FOR SALE
MUDA APPROVED
East facing
Rajeev Nagar 2nd Stage
Near Gupta Store, MYSORE
Rs. 1 Crore
Call : 9845286583

ವಧು ಬೇಕಾಗಿದೆ
ನಾಯಕ ಜನಾಂಗದ ಉತ್ತಮ ನೌಕರಿಯಲ್ಲಿರುವ ಹುಡುಗನಿಗೆ 22 ರಿಂದ 27 ವರ್ಷದೊಳಗಿನ ಸ್ವಜಾತಿಯ ಉತ್ತಮ ಮನೆತನದ ವಿದ್ಯಾವಂತ ಅವಿವಾಹಿತ ವಧು ಬೇಕಾಗಿದೆ.
ಸಂಪರ್ಕಿಸಿ: ಲೋಕೇಶ್ ನಾಯಕ
9480887390
9901374694

JOB AVAILABLE
For Sales Boy's in Sports Shop from 10 am to 7 pm at Mysore City
Mob: 77601-09047
81053-68325



ಸ್ಕೂಲ್, ಕಾಲೇಜ್ ಯೂನಿಫಾರಂ
ಬ್ಲೇಜರ್ ರೂ.1300
ಲ್ಯಾಬ್ ಏಪ್ರಾನ್ ರೂ. 300
ಭಾವಸಾರ್ ಶ್ರೀಗಣೇಶ್
ಅಗ್ರಹಾರ, ಬಸವೇಶ್ವರ ರಸ್ತೆ 5ನೇ ಕ್ರಾಸ್, ಮೈಸೂರು

ಶಾದಿಗುರೂಜಿ.ಕಾಂ
ವಧು–ವರರನ್ನು ಹುಡುಕಲು ಸಹಾಯ ಬೇಕೆ? ನಮಗೆ ಕರೆ ಮಾಡಿ
6361740552

ಛತ್ರ ಖಾಲಿಯಿದೆ
ಈ ಕೆಳಕಂಡ ದಿನಗಳಲ್ಲಿ ಛತ್ರ ಖಾಲಿಯಿದೆ.
Oct, Nove, Dec-2023
ಸಂಪರ್ಕಿಸಿ: ಸಾಮ್ರಾಟ್ ಕಲ್ಯಾಣ ಭವನ, ನಂ.1, SMT, ಉದಯರವಿ ರಸ್ತೆ, ಕುವೆಂಪುನಗರ, ಮೈಸೂರು
9880911112, 9900461112
0821-2461061
7899382338

WANTED
Female Telecaller for a showroom
SALARY 15000-20000/-
Ph.9380142144

ಬೋಳು ತಲೆಯ ಸಮಸ್ಯೆಯೇ?



ಕಿಮೋತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

ಮೈಸೂರು ನಗರ ರಸ್ತೆ ಸಾರಿಗೆ ಸಂಸ್ಥೆ 2 ಮತ್ತು 3ನೇ ದರ್ಜೆ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ (ನಿ)
ನಂ.1516/17, 1ನೇ ಮಹಡಿ, 8ನೇ ಕ್ರಾಸ್, ತ್ಯಾಗರಾಜ ರಸ್ತೆ, ಮೈಸೂರು
ಪ್ರಕಟಣೆ
ನಮ್ಮ ಸಂಘದ ವಾರ್ಷಿಕ ಮಹಾಸಭೆಯನ್ನು ದಿನಾಂಕ: 24–09–2023ರ ಭಾನುವಾರ ಬೆಳಿಗ್ಗೆ 10.30ಕ್ಕೆ ಸಂಘದ ಕಛೇರಿಯಲ್ಲಿ ನಡೆಸಲಾಗುತ್ತದೆ. ಆಹ್ವಾನ ಪತ್ರಿಕೆ ತಲುಪದಿರುವವರು ಇದನ್ನೇ ಆಹ್ವಾನ ಪತ್ರಿಕೆ ಎಂದು ತಿಳಿದು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸ ಬೇಕೆಂದು ಪ್ರಾರ್ಥನೆ.
ಸಹಿ/– ಹೆಚ್.ಎಸ್.ಹೇಮಂತ್‌ಕುಮಾರ್, ಕಾರ್ಯದರ್ಶಿ

ಕೇರಳ ಶ್ರೀ ಆದಿಶಕ್ತಿ ಜ್ಯೋತಿಷ್ಯರು
ಪಂಡಿತ್ ಎಸ್.ಶಿವಪ್ರಸಾದ್ ತಂತ್ರಿ
ಮೊ: 9686525894
ಅಷ್ಟಮಂಗಳ ಪ್ರಶ್ನೆಯಿಂದ ವಿವಾಹ ದಾಂಪತ್ಯ, ಆರೋಗ್ಯ, ಸಾಲಬಾದೆ, ಸ್ತ್ರೀ–ಪುರುಷ, ಪ್ರೇಮ ವಿಚಾರ, ಶತ್ರುಬಾದೆ ಹಾಗೂ ಗುಪ್ತ ಸಮಸ್ಯೆಗಳಿಗೆ ಭಗವತಿ ಆದಿಶಕ್ತಿ ದೈವ ಶಕ್ತಿಯಿಂದ 3 ದಿನದಲ್ಲಿ ಶಾಶ್ವತ ಪರಿಹಾರ ಇಂದೇ ಕರೆಮಾಡಿ ಖಾಯಂ
ಮನೆ ವಿಳಾಸ: ಬ್ಯಾಂಕ್ ಆಫ್ ಬರೋಡ, ಅಕ್ಷಯ ಭಂಡಾರಹತ್ತಿರ, ಪಂಚಪತ್ರ ರಸ್ತೆ, ಕುವೆಂಪುನಗರ, ಮೈಸೂರು–23

ಸಂಪು ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಮನೆಯಿಂದಲೇ ಕೆಲಸ
ನಿಮ್ಮ ಮೊಬೈಲ್ ಫೋನ್ ಬಳಸಿ ಕನ್ನಡ, ಇಂಗ್ಲೀಷ್ ಟೈಪಿಂಗ್ ಕೆಲಸ ಗಳಿಸಿ 20000 ದಿಂದ 35000. ವಯಸ್ಸಿನ ಮಿತಿ ಇಲ್ಲ ಎಲ್ಲರಿಗೂ ಮುಕ್ತ ಅವಕಾಶ
7624843504

ಬರವಣಿಗೆಯ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಶೀಟ್‌ಗೆ 40 ರೂ.ಗಳನ್ನು ಪಡೆಯಿರಿ.
9731891409
ಮೈಸೂರು ಅಗ್ರಹಾರ.
9449774835
ಚಾಮರಾಜನಗರ

DTCP SITES FOR SALE
DTCP Sites
Rs. 699 per sq.ft.,
Near Jayapura,
H.D. Kote Road, Mysore.
9590491194,9606783264

FOR SALE
1) 30x40 site 16 lakhs including Registration Near New RT Nagar
2) 30x40 E Preethi layout Srirampura
3) 30x40 S/W Sky Top Layout Yelwala
4) 20x30 G+2 House RK Nagar and Dattagalli
5) 39x55 East old house Saraswathipuram
PRAKRUTHI PROPERTIES
95386 90359 / 90359 90359

ವೀಕೆಂಡ್ ಪ್ರವಾಸ
ದಿನಾಂಕ : 23 ಸೆಪ್ಟೆಂಬರ್ 2023, 02 ದಿನಗಳು ವೀಕ್ಷಿಸುವ ಸ್ಥಳಗಳು ನಿರ್ವಾಣ ಬೀಚ್ ಪ್ಯಾರಡೈಸ್ ಬೀಚ್ ಟ್ರೆಕಿಂಗ್ ಮಿರ್ಜಾನ್ ಕೋಟೆ ಯಾಣ ಗುಹೆಗಳು ಮುರುಡೇಶ್ವರ * ಊಟ ತಿಂಡಿ ಕಾಫೀ/ ಟೀ * ಪ್ರತ್ಯೇಕ ಬ್ಯಾಂಬೂ ಹಟ್ ಮತ್ತು ಟೆಂಟ್ ನಲ್ಲಿ ಸ್ಟೇ ಎಲ್ಲಾ ಸೇರಿ ಒಬ್ಬರಿಗೆ 5000 ಮತ್ತು 4000 ರೂಪಾಯಿಗಳು ಮಾತ್ರ
ಮೊಬೈಲ್: 70222 71023

ಬೇಕಾಗಿದ್ದಾರೆ
ವೈನ್ ಸ್ಟೋರ್‌ನಲ್ಲಿ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ.
ವಯೋಮಿತಿ: 35 ವರ್ಷ ಒಳಗೆ.
ಮೈಸೂರಿನವರಿಗೆ ಆದ್ಯತೆ.
Mob: 94485-63900

SITES FOR SALE
BMICAPA Approved near MIT College, Ready to Register Instalments Available
Contact:
Mob: 94833-58399



V-GUARD
V-GUARD GEYSER
BEST OFFER PRIZE
Solar Water Heater SALES & SERVICE
SUNZONE SOLAR SYSTEM
VM Double Road, Kuvempunagar, Mysuru
9845175443

SITE FOR SALE
Vijayanagar 4th Stage, MUDA Approved Layout Fully Developed
Contact:
Mob: 94833-58399

PART TIME JOBS
ಮನೆಯಲ್ಲೇ ಕುಳಿತು ನಾವು ಕೊಡುವ ಪುಸ್ತಕ ಬರೆಯುವ ಹಾಗೂ ಫಾರಂ ತುಂಬುವ ಮೂಲಕ ತಿಂಗಳಿಗೆ 15,000 ರಿಂದ 20,000 ಸಂಪಾದಿಸಿ. (ಕೋರಿಯರ್ ಸೌಲಭ್ಯವಿದೆ.)
8749098879

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
ತಾಯಿ ಚಾಮುಂಡೇಶ್ವರಿ ಕಾಣತೂರೆ ನಾಲ್ವರ ದೈವ ಚೌಡನ್ ಕರೆ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಃಸಿದ್ಧ. ಖಾಯಂ ವಿಳಾಸ: ಸಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರ ಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲೆಸಿದ್ದಾರೆ. ಹಳ್ಳಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.

ತಿರುಮಲ ಬ್ರಿಕ್ಸ್
Table Mould ಇಟ್ಟಿಗೆ ದೊರೆಯುತ್ತದೆ.
ಕಳಲವಾಡಿ, ಮೈಸೂರು
9880363856
9739737378

HOUSE FOR RENT
2 BHK - Ground Floor / 1st Floor, near Terisian College Circle, Dr. Rajkumar Road, Yaraganahalli, Mysore.
Mob: 96326-71049

ಬಾಡಿಗೆಗೆ
10x12ವುಳ್ಳ ಅಂಗಡಿ ಮಳಿಗೆ ಬಾಡಿಗೆಗೆ ದೊರೆಯುತ್ತದೆ. ಕಾಂತರಾಜು ಅರಸ್ ರೋಡ್, ಕೆ.ಜಿ.ಕೊಪ್ಪಲ್, ಮೈಸೂರು
9880363856

ಮಾಂತ್ರಿಕ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು
ಶ್ರೀ ಎಸ್.ಎಸ್.ಪ್ರಸಾದ್ ಪೊದುವಾಳ್
ಮೊ: 9731839596
ಇವರು ಕುಟ್ಟಿಚೇತನ್ ರುದ್ರಿಮಾರ್ತಾಂಡ ದೇವಿ ಭಗವತಿ ಮಳಯಾಳಿ ಮಾಂತ್ರಿಕ ಶಕ್ತಿಯಿಂದ ಸ್ತ್ರೀ ಪುರಷ, ಪ್ರೇಮ, ದಾಂಪತ್ಯ ಸಮಸ್ಯೆ, ಸಂತಾನ, ದುಷ್ಟಶಕ್ತಿ, ಶತ್ರುಭಾಧೇ, ವ್ಯಾಪಾರ, ಅತ್ತೆ ಸೊಸೆ ಕಿರಿಕಿರಿ, ಸಾಲಭಾಧೇ, ಆರೋಗ್ಯ, ಮಾನಸಿಕ ಚಿಂತೆ, ನಿಮ್ಮ ಯಾವುದೇ ಗುಪ್ತ ಸಮಸ್ಯೆಗಳಿಗೆ ತಕ್ಷಣದಲ್ಲಿ ಪರಿಹಾರ ಶತಃಸಿದ್ಧ. ಖಾಯಂ ಮನೆ ವಿಳಾಸ:– ಮನೆ ನಂ.68, ಸತ್ಯ ಮಾರ್ಗ ಗೀತಾ ಸ್ಕೂಲ್ ಹಿಂಭಾಗ, ಹೊಸ ಡಿ.ಸಿ ಆಫೀಸ್ ಎದುರು, ಸಿದ್ಧಾರ್ಥನಗರ, ಮೈಸೂರು.

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋಚರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು–1

ಸೈಟು ರಿಯಾಯಿತಿ ದರದಲ್ಲಿ ಮಾರಾಟಕ್ಕಿದೆ
ಮಂಡ್ಯದಲ್ಲಿ 25x40 ಹಾಗೂ 2 ಅಸಮಾನ ಅಳತೆಯ ಸೈಟುಗಳು ಮಾರಾಟಕ್ಕಿದೆ.
(ಡಿ.ಸಿ. ಅಲಿನೇಷನ್ ALN.303/08-09)
Mob: 99012-34073

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣತೂರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ ರಸ್ತೆ, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

ತಕ್ಷಣ ಬೇಕಾಗಿದ್ದಾರೆ
ಆಫೀಸ್ ಅಡ್ಮಿನ್-2 ಸಂ. (ಮಹಿಳೆ)
ಸೆಕ್ಯೂರಿಟಿ ಫೀಲ್ಡ್ ಆಫೀಸರ್-2 ಸಂ. (ಪುರುಷ)
ಸೆಕ್ಯೂರಿಟಿ ಸೂಪರ್‌ವೈಸರ್-5 ಸಂ. (ಪುರುಷ)
ಸೆಕ್ಯೂರಿಟಿ ಗಾರ್ಡ್ಸ್
ಸ್ಥಳ: ಮೈಸೂರು ಸುತ್ತ ಮುತ್ತ ಸಂಪರ್ಕಿಸಿ:
9164010202
9008380450

ಬೇಕಾಗಿದ್ದಾರೆ
P.G. ಯಲ್ಲಿ ಅಡುಗೆ ಭಟ್ಟ ಮತ್ತು ಸಹಾಯಕರು ಬೇಕಾಗಿದ್ದಾರೆ.
6366200865

ಅಡುಗೆ ಕೆಲಸಕ್ಕೆ ಬೇಕಾಗಿದ್ದಾರೆ
ವಿದ್ಯಾರಣ್ಯಪುರಂ ಮತ್ತು ಚಾಮುಂಡಿಪುರಂ ಹತ್ತಿರ ವಾಸಿಸುತ್ತಿರುವ ಬ್ರಾಹ್ಮಣ ಅಥವಾ ಆರ್ಯ ವೈಶ್ಯ ಸಮಾಜದವರಿಗೆ ಮಾತ್ರ ಅವಕಾಶ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9591641224
8762139455

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಕೆಲಸಕ್ಕೆ ಬೇಕಾಗಿದ್ದಾರೆ
ಬೆಂಗಳೂರಿನ ಕೆಂಗೇರಿ ರಸ್ತೆಯ ಅಂಬೇಡ್ಕರ್ ಕಾಲೇಜು ಹತ್ತಿರ ಇರುವ Fresh Juice & Chats Chainees ಗೆ ಕೆಲಸಗಾರರು ಬೇಕಾಗಿದ್ದಾರೆ. ಉತ್ತಮ ಸಂಬಳದೊಂದಿಗೆ ವಸತಿ ಸೌಲಭ್ಯ ಇರುತ್ತದೆ.
9844408700

100% NEEM WOOD PLYWOOD & DOORS
@ FACTORY DEPOT RATES
NEEMBOND PLATINUM ® 10yrs WARRANTY
ISO 9001:2015 Certified Depot
CALL 99012 91267
98454 26862

100% TEAK WOOD FACTORY FINISH DOORS
@ DEPOT RATES



10 YEARS WARRANTY
www.ssbuildmart.com
9901291267
9845426862

ಕಳೆದಿದೆ
ಮಹದೇವಮ್ಮ ಕೋಂ. ಸಿ.ಮಲ್ಲು ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕಿನ ಕುರುಬರ ಬೀದಿಯಲ್ಲಿ ವಾಸವಾಗಿರುವ ಇವರ ನಿವೇಶನದ ಶುದ್ಧ ಕ್ರಯ ಪತ್ರದ ದಸ್ತಾವೇಜು ಸಂಖ್ಯೆ 22/1994–1995 ದಿನಾಂಕ 16–06–1994 ಮತ್ತು ದಸ್ತಾವೇಜು ಸಂಖ್ಯೆ 912/2001–2002 ದಿನಾಂಕ: 06–10–2001 ಈ ಪತ್ರಗಳು ಕಳೆದಿರುತ್ತದೆ. ಸಿಕ್ಕಿದಲ್ಲಿ ಸಂಪರ್ಕಿಸಿ
8970269821,9483588985

ಜಮೀನು ಮಾರಾಟಕ್ಕಿದೆ
ಸ್ಥಳ: ಕೆಂಬಾಲ್ ಮೈಸೂರಿನಿಂದ 20ಕಿಮಿ. ಹುಲ್ಲಹಳ್ಳಿದಾರಿ 18 ಗುಂಟೆ, ಮುಳ್ಳುತಂತಿ ಬೇಲಿ ಇದೆ, ಒಂದು ಬೋರ್‌ವೆಲ್, ರಸ್ತೆ ಇದೆ.
9379943388

WANTED
SALES ASSISTANT for filling Petrol, Diesel & Gas for a Petrol Bunk.
CASHIER & HELPER preference PUC & above.
Salary as per qualification.
Contact:
99011-20389 / 98440-02226

ಭೋಗ್ಯಕ್ಕೆ ಮನೆ ಬೇಕಾಗಿದೆ
ವಿಜಯನಗರ 4ನೇ ಹಂತದಲ್ಲಿ 3 ಬೆಡ್ರೂಮ್ With Car Parking ಇರುವ ಮನೆ ಭೋಗ್ಯಕ್ಕೆ ಬೇಕಾಗಿದೆ.
6364322628

ಬೇಕಾಗಿದ್ದಾರೆ
P.G. ಯಲ್ಲಿ ಅಡುಗೆ ಮಾಡಿಕೊಡಲು ಗಂಡಸರು ಬೇಕಾಗಿದ್ದಾರೆ.
8970132554

2 ಬೆಡ್‌ರೂಮಿನ ಮನೆ ಬಾಡಿಗೆಗೆ ಇದೆ
2ನೇ ಮಹಡಿ, ಅಕ್ಷಯ ಭಂಡಾರ ಹತ್ತಿರ, ಸರಸ್ವತಿಪುರಂ.
9448653911

HOUSE FOR RENT
3rd Floor, Double bedroom upstair, single Room for Bachelor - Rent 4,000/- Advance 30,000 near 100 feet Road, 1st Cross, Mysore.
Mob: 94485-46024

WANTED
Cylinder Delivery Boys for Gas Agency
Contact:
Mob: 97429-34598
97393-79003

WANTED
Newly Opened Café/Restaurant
Kalidasa Road, Mysore
3 years experienced & others
Manager & Cashier
8088361007

WANTED
Lady Customer Care Executive
Age 27-42 years,
Any PUC/Degree/Diploma with computer knowledge must.
VANAJARAO MATRIMONY, Saraswathipuram.
Mob: 93431-75000

40x60 ಅಳತೆಯ DTCP 'ಎ' ಖಾತೆಯುಳ್ಳ ಸೈಟುಮಾರಾಟಕ್ಕಿದೆ. 24 ಲಕ್ಷಗಳು W/F ಬ್ಯಾಂಕ್ ಸಾಲ ದೊರೆಯುತ್ತದೆ. ನಂಜುಂಡೇಶ್ವರ ನಗರ, ಟಿ.ವಿ.ಎಸ್.ಫ್ಯಾಕ್ಟರಿ ಹತ್ತಿರ, ಮೈಸೂರು 20x30 ಅಳತೆಯ KHB ಸೈಟು ಮಾರಾಟಕ್ಕಿದೆ. N/F 9 ಲಕ್ಷಗಳು ಇಲವಾಲದ ಹತ್ತಿರ, ಮೈಸೂರು
9742198093

WANTED
FIELD OFFICER
Salary - 15,000/- + Petrol
FIELD SUPERVISOR
Salary - 13,000/- + Petrol
to work in Security Agency
Experience: At least 1 year
Mob: 97416-16826

URGENTLY REQUIRED
TEACHERS REQUIRED
for SRI JNANA BHARATHI SCHOOL, P. Hoshalli, KRS Road (3 kms from JK Tyres), Mysore
M.Sc / B.Sc B.Ed any Degree Contact
96201-24567 / 83102-45354
Interview Date & Time 17-9-2023 Timing 11 am

SITES FOR SALE
30x40, 20x40, 30x35 Sites, Bank Loan upto 80%, near Gurur Bus Stop, Ramabai nagar, Mysore. DTCP approved (Corpor-ation limits) 1.5 Kms from JP Nagar Ring Road. Contact:
8660105902

WANTED
SHE BOUTIQUE, Mysore
KD Circle, Vijayanagar 2nd Stage
Sales Girls & Zig Zag & False
Female - 2 Nos. Required
Age Limit: 18 to 40 years. Contact:
8088361007 / 9844446674

ತಕ್ಷಣ ಬೇಕಾಗಿದ್ದಾರೆ
ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ.
ವಯೋಮಿತಿ: 18 ರಿಂದ 35 ರ ಒಳಗೆ
ವಿದ್ಯಾರ್ಹತೆ: SSLC ಮೇಲ್ಪಟ್ಟು
ಉಚಿತ: ತಿಂಡಿ, ಊಟ ವೇತನ:
16000 (ESI+PF) & Bonus
ಸ್ಥಳ: ಆಲನಹಳ್ಳಿ Bus Stop Mysore.
Ph: 9686120629, 9845131848
9538886304, 9035269781

JOB VACANCY
1) ANM/GNM Staff - 2 No's
2) OT Technician - 2 No's
3) ICU/Emergency Staff - 2 No's
4) Duty Doctors (BAMS) - 2 No's
Work Experience - 3 yrs & above
Salary as Industry Norms
Accommodation Available
Mob: 73381-59688

ಕೆಲಸಕ್ಕೆ ಬೇಕಾಗಿದ್ದಾರೆ
CSC ಸೆಂಟರ್‌ಗೆ ಕಂಪ್ಯೂಟರ್ ತಿಳಿದವರು ಬೇಕಾಗಿದ್ದಾರೆ. (ವಿದ್ಯಾರಣ್ಯಪುರಂ)
ಮಾರ್ಕೆಟಿಂಗ್ ಮಾಡಲು ಹುಡುಗರು ಬೇಕಾಗಿದ್ದಾರೆ (ಸ್ಕೂಟರ್ ಉಳ್ಳ)
9886681313

ಮನೆ ಬೋಗ್ಯಕ್ಕೆ ಬೇಕಾಗಿದೆ
ಮೈಸೂರಿನ ವಿಜಯನಗರ, ಹೂಟಗಳ್ಳಿ, ಹೆಬ್ಬಾಳ, ಶಾರದದೇವಿನಗರ, ರಾಮಕೃಷ್ಣನಗರ, 30X40ಜಾಗದಲ್ಲಿ ಅಥವಾ 20X30 ಜಾಗದಲ್ಲಿ ಹೊಸದಾಗಿರುವ ಮನೆಯನ್ನು ಬೋಗ್ಯಕ್ಕೆ ಕೊಡಬೇಕೆನ್ನುವವರು ಸಂಪರ್ಕಿಸಿ
9206470833 ಸುರೇಶ್

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಕಾವೇರಿ ವಿವಾದದಲ್ಲಿ ಕೇಂದ್ರವೇ ಮಧ್ಯ ಪ್ರವೇಶಿಸಿ

ರಾಜ್ಯಕ್ಕೆ ನ್ಯಾಯ ಒದಗಿಸಲಿ

ಮೈಸೂರು,ಸೆ.13(ಎಂಟಿವೈ)– ಮಳೆ ಕೊರತೆಯಿಂದಾಗಿ ರಾಜ್ಯದ ಜಲಾಶಯಗಳಲ್ಲಿ ಸಂಗ್ರಹವಾಗಿರುವ ನೀರಿನ ಪ್ರಮಾಣ ಕ್ಷೀಣಿಸಿರುವುದರಿಂದ ಕೂಡಲೇ ಕೇಂದ್ರ ಸರ್ಕಾರ ಕರ್ನಾಟಕ–ತಮಿಳುನಾಡು ನಡುವಿನ ಕಾವೇರಿ ನೀರಿನ ವಿವಾದದಲ್ಲಿ ಮಧ್ಯ ಪ್ರವೇಶಿ, ರಾಜ್ಯದ ಜನರಿಗೆ ನ್ಯಾಯ ಒದಗಿಸಬೇಕು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಒತ್ತಾಯಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಳೆ ಮೈಸೂರು ಭಾಗದಲ್ಲಿ 125 ವರ್ಷಗಳಲ್ಲಿ ಈ ಬಾರಿ ಅತಿ ಕಡಿಮೆ ಮಳೆಯಾಗಿದೆ. ಇದರಿಂದ ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲ. ಕೆಆರ್‌ಎಸ್, ಕಬಿನಿ, ಹೇಮಾವತಿ ಹಾಗೂ ಹಾರಂಗಿ ಜಲಾಶಯಗಳಲ್ಲಿ ಒಟ್ಟು 46 ಟಿಎಂಸಿ ಮಾತ್ರ ನೀರು ಸಂಗ್ರಹವಾಗಿದೆ. ಇದರಲ್ಲಿ ಬೆಂಗಳೂರಿಗೆ ಕುಡಿಯುವ ನೀರಿಗಾಗಿ 24 ಟಿಎಂಸಿ ಬೇಕಾಗಿದೆ. ಕೊಡಗು, ಹಾಸನ, ಮೈಸೂರು, ದೇವನಹಳ್ಳಿಗೆ 25 ಟಿಎಂಸಿ ನೀರು ಅಗತ್ಯವಿದೆ ನೀರಾವರಿಗೆ 80 ಟಿಎಂಸಿ ನೀರು ಬೇಕು. ಪರಿಸ್ಥಿತಿ ಹೀಗಿರುವಾಗ ನಾವು ತಮಿಳುನಾಡಿಗೆ ಪ್ರತಿದಿನ 5 ಸಾವಿರ ಕ್ಯೂಸೆಕ್ ನೀರು ಬಿಡಲು ಹೇಗೆ ಸಾಧ್ಯ? ಕಾವೇರಿ ನೀರು ಪ್ರಾಧಿಕಾರದವರು ತಮ್ಮ ಇಂಜಿನಿಯರ್‌ಗಳನ್ನು ಕಳುಹಿಸಿ ನಮ್ಮ



ಡ್ಯಾಂನ್‌ಲ್ಲಿರುವ ನೀರಿನ ಪ್ರಮಾಣವನ್ನು ಪರಿಶೀಲಿಸಲಿ. ಜೊತೆಗೆ ತಮಿಳುನಾಡಿನ ನಾಲ್ಕು ಡ್ಯಾಂಗಳಲ್ಲಿ ಎಷ್ಟು ನೀರಿದೆ ಎಂಬುದನ್ನು ಪರಿಶೀಲಿಸಲಿ ಎಂದು ಆಗ್ರಹಿಸಿದರು. ವಿರೋಧ ಪಕ್ಷದ ನಾಯಕರುಗಳು, ರಾಜ್ಯ ಸರ್ಕಾರ ಕರೆದಿರುವ ಸಭೆಯಲ್ಲಿ ಭಾಗವಹಿಸಿ ಸಲಹೆಗಳನ್ನು ಕೊಡಲಿ. ಅದು ಬಿಟ್ಟು ಹೊರಗಡೆ ಕುಳಿತು ರಾಜಕೀಯ ಮಾಡುವುದು ಬೇಡ. ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಲು ಒತ್ತಾಯ ಮಾಡಬೇಕು ಎಂದು ಒತ್ತಾಯಿಸಿದರು.

ಮಂಡ್ಯ ಸಂಸದೆ ಸುಮಲತಾ ಅವರ ಗೆಲುವಿಗೆ ಕಾಂಗ್ರೆಸ್ ಪಕ್ಷ ಸಹಕಾರ ನೀಡಿದೆ. ಈ ಸಂದರ್ಭದಲ್ಲಿ ಬಿಜೆಪಿಯವರ ಜೊತೆ ಸೇರಿಕೊಂಡು ರಾಜಕೀಯ ಮಾಡಬಾರದು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರಧಾನಮಂತ್ರಿ ನರೇಂದ್ರ ಮೋದಿ ನಿಮಗೆ ಬಹಳ ಹತ್ತಿರವಿದ್ದಾರೆ. ಅವರೊಂದಿಗೆ ಮಾತುಕತೆ ನಡೆಸಿ ರಾಜ್ಯದ ನೀರಾವರಿಯ ವಸ್ತುಸ್ಥಿತಿ ಅರ್ಥಮಾಡಿಸಬೇಕು ಎಂದು ಹೇಳಿದರು.

ಬಿಜೆಪಿ–ಜೆಡಿಎಸ್ ಪಲ್ಟಿ: ಬಿಜೆಪಿ–ಜೆಡಿಎಸ್ ಮೈತ್ರಿಯಿಂದ ಈ ಬಾರಿ ಎರಡು ಪಕ್ಷಗಳು ಪಲ್ಟಿಹೊಡೆಯಲಿವೆ. ಬಿಜೆಪಿ–ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್ ಪಕ್ಷದ ಮತಗಳಿಕೆ ಪ್ರಮಾಣ ಮತ್ತಷ್ಟು ಹೆಚ್ಚಾಗಲಿದೆ. ಯಾಕೆಂದರೆ ಜೆಡಿಎಸ್ ಪಕ್ಷಕ್ಕೆ ಒಂದು ಸಮುದಾಯ ಮಾತ್ರ ಮತ ಹಾಕಲ್ಲ. ಅದರಲ್ಲಿ ಅಲ್ಪಸಂಖ್ಯಾತ, ದಲಿತ, ಮತ್ತು ಹಿಂದುಳಿದ ವರ್ಗಗಳು ಮತ ನೀಡಿವೆ. ಬಿಜೆಪಿಯೊಂದಿಗೆ ಇವರು ಮೈತ್ರಿ ಮಾಡಿಕೊಂಡರೆ ಆ ವರ್ಗದ ಮತಗಳು ಕಾಂಗ್ರೆಸ್ ಪಕ್ಷದ ಪರವಾಗಿ ಬರಲಿದೆ ಎಂದು ಹೇಳಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷ ಸಂಸದ ಪ್ರತಾಪ್ ಸಿಂಹ ವಿರುದ್ಧ ಮೂರು ಲಕ್ಷಗಳ ಮತ ಅಂತರದಲ್ಲಿ ಗೆಲುವು ಸಾಧಿಸಲಿದೆ. ಸಂಸದ ಪ್ರತಾಪ್ ಸಿಂಹ ತಿಪ್ಪರಲಾಗ ಹಾಕಿದರೂ ಗೆಲ್ಲಲ್ಲ. ಅವರ ಬಿಜೆಪಿ ಪಕ್ಷದ ಮುಖಂಡರುಗಳೇ ಅವರನ್ನು ಸೋಲಿಸಲು ಕಾದು ಕುಳಿತಿದ್ದಾರೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಜಿ.ಪಂ. ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಮಹೇಶ್, ಮುಖಂಡ ಗಿರೀಶ್ ಇದ್ದರು.



ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ "ನನ್ನ ಮಣ್ಣು, ನನ್ನ ದೇಶ" ಅಭಿಯಾನದಡಿ ಭಾರತೀಯ ಜನತಾ ಪಾರ್ಟಿ ವತಿಯಿಂದ ಮಣ್ಣಿನ ಸಂಗ್ರಹವನ್ನು ರಾಷ್ಟ್ರಕವಿ ಕುವೆಂಪು ಅವರ ಉದಯರವಿ ನಿವಾಸದಿಂದಲೇ ಕುವೆಂಪು ಅವರ ಪುತ್ರಿ ಶ್ರೀಮತಿ ತಾರಿಣಿ ಚಿದಾನಂದ ಹಾಗೂ ವಿಶ್ರಾಂತ ಕುಲಪತಿ ಚಿದಾನಂದಗೌಡರ ಸಮ್ಮುಖದಲ್ಲಿ ಮಾಡಲಾಯಿತು. ಈ ವೇಳೆ ಮಾಜಿ ಶಾಸಕ ಎಲ್.ನಾಗೇಂದ್ರ, ಮೈ.ವಿ. ರವಿಶಂಕರ್ ಮತ್ತಿತರರು ಉಪಸ್ಥಿತರಿದ್ದರು.

ಇಂದು, ನಾಳೆ 'ಹಾಯ್ ಲೈಫ್' ವಸ್ತುಪ್ರದರ್ಶನ



ಮೈಸೂರು, ಸೆ.13(ಜಿಎ)–ಗೌರಿ ಗಣೇಶ ಹಬ್ಬದ ಅಂಗವಾಗಿ ಹಾಯ್ ಲೈಫ್ ವಸ್ತುಪ್ರದರ್ಶನ ಮತ್ತು ಮಾರಾಟವನ್ನು ಸೆ.14 ಮತ್ತು 15 ರಂದು ಮೈಸೂರಲ್ಲಿ ಆಯೋಜಿಸಲಾಗಿದೆ ಎಂದು ಸಂಸ್ಥೆ ಸಹ ಆಯೋಜಕಿ ಶೋಮಿಕಾ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮೈಸೂರಿನ ರ್‍ಯಾಡಿಸನ್ ಬ್ಲೂ ಹೋಟೇಲ್‌ನಲ್ಲಿ ವಸ್ತುಪ್ರದರ್ಶನ ಆಯೋಜಿಸಿದ್ದು, ಬೆಳಗ್ಗೆ 10 ಗಂಟೆಯಿಂದ ರಾತ್ರಿ 8ರವರೆಗೂ ಅವಕಾಶವಿದೆ ಎಂದರು.

ಈ ವಸ್ತುಪ್ರದರ್ಶನದಲ್ಲಿ ನವೀನ ವಿನ್ಯಾಸಕರಿಂದ ಸಿದ್ಧವಾದ ವಧುವಿನ ವೇಷ ಭೂಷಣ, ಆಭರಣಗಳು, ಪರಿಕರಗಳು ಮತ್ತು ಹೆಚ್ಚಿನವುಗಳ ಶೈಲಿ, ವಿನ್ಯಾಸ ಮತ್ತು ಗಿಲ್ಸ್, ಟ್ಯಾಂಟಿಸಿಂಗ್ ಟ್ಯೂನಿಕ್ಸ್, ಚೆಕ್ ಕೇಪ್ ಗಳು, ಸಿಟ್ಟಿಂಗ್ ಸಿಟ್ಸ್‌ನಲ್ಲಿ ಸೆಲೆಬ್ರಿಟಿ ಸ್ಟೈಲ್ ಜಾಕೆಟ್‌ಗಳು ಮತ್ತು ಡ್ರೈವ್‌ಗಳು, ಸಮಕಾಲೀನ ಶರ್ಟ್‌ಗಳಲ್ಲಿ ಕ್ರಪ್, ನೀಲಿ ಬಣ್ಣದ ಪ್ರಿಂಟ್‌ಗಳು ಮತ್ತು ಮೋಡಿ ಮಾಡುವ ಕಸೂತಿ ಕಲೆಯ ಬಟ್ಟೆಗಳು ಲಭ್ಯವಿರಲಿದೆ ಎಂದು ತಿಳಿಸಿದರು. ಸುದ್ದಿ ಗೋಷ್ಠಿಯಲ್ಲಿ ಒನ್ ಪಾಯಿಂಟ್ ಸೆಲ್ಯೂಷನ್‌ನ ಶ್ರೀಕಾಂತ್ ಉಪಸ್ಥಿತರಿದ್ದರು.

ಶೋಕಾಸ್ ನೋಟಿಸ್ ಪ್ರತಿ ಸಿಕ್ಕ ನಂತರ ಉತ್ತರಿಸುತ್ತೇನೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಬಹಿರಂಗವಾಗಿ ವಾಗ್ದಾಳಿ ನಡೆಸಿದ್ದ ಕಾಂಗ್ರೆಸ್ ಎಂಎಲ್‌ಸಿ ಬಿ.ಕೆ ಹರಿಪ್ರಸಾದ್ ಅವರಿಗೆ ಎಐಸಿಸಿ ಶೋಕಾಸ್ ನೋಟಿಸ್ ನೀಡಿದೆ, ಪ್ರತಿ ಕೈಗೆ ಸಿಕ್ಕಿದ ನಂತರ ನಾನು ಉತ್ತರಿಸುತ್ತೇನೆ ಎಂದು ಹರಿಪ್ರಸಾದ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಐಸಿಸಿಯಿಂದ ಶೋಕಾಸ್ ನೋಟಿಸ್ ನೀಡಿರುವ ವಿಚಾರವನ್ನು ವಾಟ್ಸಾಪ್‌ನಲ್ಲಿ ನೋಡಿದ್ದೇನೆ. ನಾನು ಇಂದು ಪ್ರತಿಯನ್ನು ಪಡೆಯಬಹುದು. ನೋಟೀಸ್ ನನ್ನ ಮತ್ತು ಪಕ್ಷದ ನಡುವೆ ಇದೆ. ನನ್ನ ಕೈಗೆ ನೋಟಿಸ್ ಬಂದಾಗ ಉತ್ತರಿಸುತ್ತೇನೆ. ಅವರು ಉತ್ತರಿಸಲು 10 ದಿನಗಳ ಕಾಲಾವಕಾಶ ನೀಡಿದ್ದಾರೆ ಎಂದು ನನಗೆ ಗೊತ್ತಾಯಿತು. ಎಐಸಿಸಿಗೆ ವಿವರಿಸುತ್ತೇನೆ ಎಂದರು.

ಕಳೆದ ಶನಿವಾರ ಅತೀ ಹಿಂದುಳಿದ ವರ್ಗಗಳ ಸಮಾವೇಶದಲ್ಲಿ



ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧವೇ ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದರು. ದೇವರಾಜ ಅರಸು ಕಾರಿನಲ್ಲಿ ಹೋದಾಕ್ಷಣ ಅರಸು ಆಗುವುದಿಲ್ಲ ಎಂದು ತಿವಿದಿದ್ದರು. ಅಷ್ಟೇ ಅಲ್ಲ ಎಲ್.ಕೆ.ಅಡ್ವಾಣಿಯನ್ನು ಸಿದ್ದರಾಮಯ್ಯ ಭೇಟಿಯಾಗಿದ್ದರು ಅಂತಲೂ ಪರೋಕ್ಷವಾಗಿ ಹೇಳಿದ್ದರು. ಇನ್ನು ಬಿ.ಕೆ.ಹರಿಪ್ರಸಾದ್ ಹೇಳಿಕೆ ವಿರುದ್ಧ ಸಿದ್ದರಾಮಯ್ಯ ಆಪ್ತ ಬಣ ತಿರುಗೇಟು ನೀಡಿತ್ತು. ಸಚಿವ ಎಂ.ಬಿ. ಪಾಟೀಲ್, ಇಂಥಹ ಹೇಳಿಕೆ ಶೋಭೆ ತರುವುದಿಲ್ಲ. ಪಕ್ಷಕ್ಕಿಂತ ಯಾರು ದೊಡ್ಡವರಲ್ಲ ಎಂದು ಟಾಂಗ್ ಕೊಟ್ಟಿದ್ದರು.

ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ

ಭೋಪಾಲ್: ನಾನು ರಾಜಕೀಯ ಬಿಟ್ಟಿಲ್ಲ. ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ ಎಂದು ಬಿಜೆಪಿಯ ಹಿರಿಯ ನಾಯಕಿ ಮತ್ತು ಮಧ್ಯ ಪ್ರದೇಶದ ಮಾಜಿ ಮುಖ್ಯಮಂತ್ರಿ ಉಮಾ ಭಾರತಿ ಹೇಳಿದ್ದಾರೆ.



ಮಧ್ಯಪ್ರದೇಶದ ಬುಂದೇಲ್‌ಖಂಡ್ ಪ್ರದೇಶದ ಸಾಗರ್ ಜಿಲ್ಲೆಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಉಮಾ ಭಾರತಿ, ನಾನು ದೀರ್ಘಕಾಲದಿಂದ ರಾಜಕೀಯದಲ್ಲಿ ಕೆಲಸ ಮಾಡುತ್ತಿರುವುದರಿಂದ 5 ವರ್ಷಗಳ ಕಾಲ ವಿರಾಮ ತೆಗೆದುಕೊಂಡಿದ್ದೇನೆ ಎಂದು ಹೇಳಿದ್ದಾರೆ. ದೀರ್ಘ ಕಾಲದಿಂದ ರಾಜಕೀಯದಲ್ಲಿ ಕೆಲಸ ಮಾಡುತ್ತಿದ್ದರಿಂದ ಕಳೆದ ಬಾರಿ ಚುನಾವಣೆಗೆ ಸ್ಪರ್ಧಿಸಲು ನಿರಾಕರಿಸಿದ್ದೆ. 5 ವರ್ಷ ಬಿಡುವು ಮಾಡಿಕೊಳ್ಳಲು ಯೋಚಿಸಿದ್ದೆ. ಆದರೆ ರಾಜಕೀಯ ಬಿಟ್ಟಿದ್ದೇನೆ ಎಂದು ಜನ ಅಂದುಕೊಂಡಿದ್ದರು, ನಾನೇನು ರಾಜಕೀಯ ಬಿಟ್ಟಿಲ್ಲ. ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ ಎಂದಿದ್ದಾರೆ.

ಸೆ.15, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

ಮೈಸೂರು, ಸೆ.13– ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಸೆ. 15 ರಂದು ಬೆಳಗ್ಗೆ 10 ಗಂಟೆಗೆ ನಗರದ ಓವೆಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಚ್.ಡಿ ಪದವೀಧರರು



ಮೈಸೂರು, ಸೆ. 11– ಡಾ. ಅಪ್ಪಣ್ಣ ಎಂ. ಗಸ್ತಿ ಅವರ ಮಾರ್ಗದರ್ಶನದಲ್ಲಿ ಕುವೆಂಪು ವಿಶ್ವವಿದ್ಯಾಲಯದ ಎಂ.ಎಸ್. ಆನಂದ್ ಅವರು ದೈಹಿಕ ಶಿಕ್ಷಣ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕುವೆಂಪು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಉಚಿತ ಮಣ್ಣಿನ ಗಣೇಶ ಮೂರ್ತಿ ತಯಾರಿಕಾ ಕಾರ್ಯಾಗಾರ

ಮೈಸೂರು, ಸೆ. 13–ನಗರದ ಮೈಸೂರು ಧಾರ್ಮಿಕ ಪ್ರತಿಷ್ಠಾನ ಹಾಗೂ ಮೈಸೂರು ಕಲಾ ಪ್ರತಿಷ್ಠಾನಗಳ ಸಹಯೋಗದಲ್ಲಿ ಮೈಸೂರು ಗಣೇಶ ಉತ್ಸವದ ಅಂಗವಾಗಿ ಪರಿಸರ ಸ್ನೇಹಿ ಬೀಜದುಂಡೆಯ ಮಣ್ಣಿನ ಗಣೇಶ ಮೂರ್ತಿ ಉಚಿತ ತಯಾರಿಕಾ ಶಿಬಿರವನ್ನು ಶನಿವಾರ (ಸೆ.16) ರಂದು ಹಮ್ಮಿಕೊಳ್ಳಲಾಗಿದೆ.

ಅಂದು ಮಧ್ಯಾಹ್ನ 3 ಗಂಟೆಯಿಂದ ನಗರದ ಮಾಧವ ಕೃಪಾ, ಎಸ್‌ಡಿಎಂ ಕಾಲೇಜು ಹತ್ತಿರ, ಜೆಎಲ್‌ಬಿ ರಸ್ತೆಯಲ್ಲಿ ಈ ಶಿಬಿರ ನಡೆಯಲಿದೆ. ಮೂರ್ತಿ ತಯಾರಿಕೆಗೆ ಬೇಕಾಗುವ ಅಗತ್ಯ ಸಾಮಗ್ರಿಗಳನ್ನು ಕಾರ್ಯಕ್ರಮದ ಸ್ಥಳದಲ್ಲೇ ನೀಡಲಾಗುತ್ತದೆ. ಆಸಕ್ತರು https://s.id/1TIQT ಮೂಲಕ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು. ಪ್ರತಿ ನೋಂದಣಿಗೆ ಇಬ್ಬರಿಗೆ ಮಾತ್ರ ಪ್ರವೇಶ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಯಶಿಕಾ ಚಿನ್ನಪ್ಪ 8310944372, ಮಾನಸ 7483327390 ಸಂಪರ್ಕಿಸಬಹುದು.

ಕತ್ತು, ಸೊಂಟ ನೋವು ತೊಂದರೆಗಳಿಗೆ ತಪಾಸಣೆ, ಚಿಕಿತ್ಸೆ

ಮೈಸೂರು, ಸೆ. 13– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಸೆ.14 ರಿಂದ 20 ರವರೆಗೆ ಕತ್ತು ನೋವು, ಸೊಂಟ ನೋವು, ಭುಜದ ನೋವು ತೊಂದರೆಗಳಿಗೆ ವೈದ್ಯರಿಂದ ತಪಾಸಣೆ, ಸಲಹೆ ಮತ್ತು ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರವು ಬೆಳಗ್ಗೆ 9.30 ರಿಂದ 4.30 ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 9538367282, ದೂ. 0821–2548231 ಸಂಪರ್ಕಿಸಬಹುದು.



ಮೈಸೂರಿನ ಡಿ ಪೌಲ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಬಾಸ್ಕೆಟ್ ಬಾಲ್ ಪಂದ್ಯಾವಳಿಯಲ್ಲಿ ಜೆ.ಪಿ.ನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆ ಬಾಲಕರ ತಂಡ ಪ್ರಥಮ ಬಹುಮಾನ ಪಡೆದುಕೊಂಡಿತು. ತಂಡದ ಸದಸ್ಯರಾದ ಚಾಣಕ್ಯ (ನಾಯಕ), ಗಗನ್.ಎಂ, ಶಶಾಂಕ್.ವಿ, ಅಕ್ಷಯ್.ಎಸ್, ದಿಗಂತ್.ಸಿ.ಬಿ, ಮನೋಜ್.ಎಸ್, ಲೋಕರಂಜನ್.ಎಸ್, ಹರ್ಷಿತ್.ಬಿ,ಎಂ, ಸುಜನ್.ಎಂ ಸ್ವಾಮಿ, ಆದಿತ್ಯ.ಆರ್. ಹಾಗೂ ತರಬೇತುದಾರರಾದ ದೈಹಿಕ ಶಿಕ್ಷಕ ಎಸ್. ರಿತೇಶ್ ಎಸ್. ಅವರನ್ನು ಚಿತ್ರದಲ್ಲಿ ಕಾಣಬಹುದು.

ನಗರೀಕರಣ ಬೆಳೆದಂತೆಲ್ಲಾ ಹಸಿರೀಕರಣದ ಅನಿವಾರ್ಯತೆ ನೆನಪಾಗಬೇಕು

ಮಹದೇಶ್ವರ ಬಡಾವಣೆಯಲ್ಲಿ ಉದ್ಯಾನವನ ಉದ್ಘಾಟಿಸಿ ಮಹಾನಗರ ಪಾಲಿಕೆ ಸದಸ್ಯ ಕೆ.ವಿ.ಶ್ರೀಧರ್ ಅಭಿಮತ

ಮೈಸೂರು, ಸೆ.13(ಪಿಎಂ)– ಮಾನವನ ದುರಾಸೆಯ ಚಟುವಟಿಕೆಗಳಿಂದ ಜಾಗತಿಕ ತಾಪಮಾನ ಹೆಚ್ಚುತ್ತಿದ್ದು, ಇದು ನಮ್ಮ ಮುಂದಿನ ಪೀಳಿಗೆ ಮೇಲೆ ವ್ಯತಿರಿಕ್ತ ಪರಿಣಾಮ ಉಂಟು ಮಾಡಲಿದೆ. ನಗರೀಕರಣ ಬೆಳೆದಂತೆಲ್ಲಾ ಹಸಿರೀಕರಣದ ಅನಿವಾರ್ಯತೆ ನೆನಪಾಗಬೇಕು ಎಂದು ಮೈಸೂರು ಮಹಾನಗರ ಪಾಲಿಕೆ ಸದಸ್ಯ ಕೆ.ವಿ.ಶ್ರೀಧರ್ ಅಭಿಪ್ರಾಯಪಟ್ಟರು.

ಮೈಸೂರಿನ ಹೆಬ್ಬಾಳು ಮಹದೇಶ್ವರ ಬಡಾವಣೆ ಸಮೀಪದ ಮಹದೇಶ್ವರ ಬ್ಲಾಕ್‌ನಲ್ಲಿ ನೂತನವಾಗಿ ನಿರ್ಮಿಸಿರುವ ಉದ್ಯಾನವನ ಉದ್ಘಾಟಿಸಿ ಅವರು ಮಾತನಾಡಿದರು. ಮನುಷ್ಯ ತನ್ನ ದುರಾಸೆಯಿಂದ ವಾತಾವರಣದಲ್ಲಿ ಅಸಮತೋಲನ ಸೃಷ್ಟಿಯಾಗಿದ್ದು, ಇದು ನಮ್ಮ ಭವಿಷ್ಯದ ಮೇಲೆ ಕೆಟ್ಟ ಪರಿಣಾಮ ಬೀರಲಿದೆ. ದಶಕಗಳ ಹಿಂದೆ ಮನುಷ್ಯನ ಸಾವಿನ ವಯಸ್ಸು ನೂರರ ಗಡಿ ಹತ್ತಿರದಲ್ಲಿತ್ತು. ಆದರೆ ಇತ್ತೀಚೆಗಿನ ದಿನಗಳಲ್ಲಿ ಯಾವುದೇ ರೋಗ–ರುಜಿನಗಳಿಗೆ ತುತ್ತಾಗದೇ ಕೇವಲ 60 ವರ್ಷ ನೆಮ್ಮದಿಯ ಬದುಕು ಸಾಗಿಸಿದರೆ ಸಾಕು ಎಂದು ಕನವರಿಸುವವರ ಸಂಖ್ಯೆ ಹೆಚ್ಚಿದೆ ಎಂದರು.



ಬೃಹತ್ ಮೈಸೂರು ರಚಿಸಬೇಕು: ಪ್ರಕೃತಿಗೆ ಪೂರಕವಾದ ಕೆಲಸಕ್ಕೆ ನಾವೆಲ್ಲರೂ ಕೈಜೋಡಿಸಬೇಕಿದೆ. ಆ ಮೂಲಕ ಮುಂದಿನ ಪೀಳಿಗೆಗೆ ಆಸ್ತಿ, ಅಂತಸ್ತಿನ ಬದಲಾಗಿ ಒಳ್ಳೆಯ ಪರಿಸರ ನಿರ್ಮಿಸುವ ಸಂಕಲ್ಪ ಮಾಡಬೇಕಿದೆ. ಬೆಂಗಳೂರು ನಂತರದಲ್ಲಿ ಅತೀ ವೇಗವಾಗಿ ಮೈಸೂರು ಬೆಳೆಯುತ್ತಿರುವ ನಗರವಾಗಿದೆ. ಹೀಗಾಗಿ ಇದನ್ನು 'ಬೃಹತ್ ಮೈಸೂರು' ಮಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ವಹಿಸಬೇಕಿದೆ. ಮಾತ್ರವಲ್ಲದೆ ಜನಸಂಖ್ಯೆ ಹೆಚ್ಚುವ ಮುನ್ನವೇ ವ್ಯವಸ್ಥಿತ ಹಾಗೂ ಯೋಜನಾಬದ್ಧ ನಗರವನ್ನಾಗಿ ರೂಪಿಸಬೇಕಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ನಗರ ಪಾಲಿಕೆ ಜಂಟಿಯಾಗಿ ರೂಪುರೇಷೆ ಸಿದ್ಧಪಡಿಸಬೇಕಿದೆ ಎಂದು ಹೇಳಿದರು.

ಉದ್ಯಾನವನಗಳು ಬಡಾವಣೆಗಳ ಹೃದಯವಿದ್ದಂತೆ. ಸರ್ಕಾರ ಅಥವಾ ನಗರಪಾಲಿಕೆ ಉದ್ಯಾನವನ ರೂಪಿಸಿಕೊಡಬಹುದು. ಆದರೆ ಅದನ್ನು ರಕ್ಷಿಸಿಕೊಳ್ಳಬೇಕಾದ ಹೊಣೆ ಸಾರ್ವಜನಿಕರ ಮೇಲಿದೆ. ಇದು ನಿಮ್ಮ ಆಸ್ತಿ, ಹಾಗಾಗಿ ಎಲ್ಲರೂ ಇದರ ಮೇಲೆ ನಿಗಾ ವಹಿಸಿ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇಂದು ಹುಟ್ಟುಹಬ್ಬ ಆಚರಣೆ ಸರ್ವೇ ಸಾಮಾನ್ಯವಾಗಿದೆ. ಅದಕ್ಕಾಗಿ ಸಾವಿರಾರು ರೂ. ವ್ಯಯಿಸುವ ಬದಲಾಗಿ ನಿಮ್ಮ ಮನೆ ಮುಂದೆ, ರಸ್ತೆಬದಿ ಅಥವಾ ಉದ್ಯಾನವನಗಳಲ್ಲಿ ಜನ್ಮದಿನ ಆಚರಿಸಿಕೊಳ್ಳುವವರು ತಮ್ಮ ಹೆಸರಿನಲ್ಲಿ ಒಂದು ಹಣ್ಣಿನ ಅಥವಾ ಹೂವಿನ ಗಿಡ ನೆಡುವ ಕೆಲಸ ಮಾಡಬೇಕು. ಈ ಸಸ್ಯಗಳು ಬಿಡುವ ಹೂ ಪರಿಮಳ ಉಂಟು ಮಾಡಿದರೆ, ಹಣ್ಣುಗಳು ಪಕ್ಷಿಗಳಿಗೆ ಆಹಾರವಾಗಲಿವೆ. ಇಂತಹ ಪ್ರವೃತ್ತಿ ಮೂಲಕ ಪ್ರಕೃತಿಗೆ ನಾವು ಕೊಡುಗೆ ನೀಡಬೇಕಿದೆ ಎಂದು ಕಿವಿಮಾತು ಹೇಳಿದರು. ಸ್ಥಳೀಯ ಮುಖಂಡರಾದ ಶಂಕರೇಗೌಡ, ಗೀತಾ ರಾಘವೇಂದ್ರ ಸೇರಿದಂತೆ ಮಹದೇಶ್ವರ ನಗರ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು.

ಹುತಾತ್ಮ ರಾಮಸ್ವಾಮಿ ಸ್ಮರಣಾ ದಿನವನ್ನು ರಾಜ್ಯ ಸರ್ಕಾರದ ವತಿಯಿಂದಲೇ ಆಚರಿಸಲಿ: ಮಾಜಿ ಶಾಸಕ ಎಲ್.ನಾಗೇಂದ್ರ ಮನವಿ

ಮೈಸೂರು, ಸೆ. 13– ಭಾರತಕ್ಕೆ ಸ್ವಾತಂತ್ರ್ಯ ದೊರೆತ ನಂತರ ಮೈಸೂರು ರಾಜ್ಯಕ್ಕೆ ಸ್ವಾತಂತ್ರ್ಯ, ಪ್ರಜಾಪ್ರಭುತ್ವ ಆಳ್ವಿಕೆಗೆ ಆಗ್ರಹಿಸಿ ನಡೆದ ವಿದ್ಯಾರ್ಥಿ ಚಳವಳಿಯಲ್ಲಿ 1947ರ ಸೆ.13ರಂದು ಭಾರತದ ತ್ರಿವರ್ಣ ಧ್ವಜ ಹಾರಿಸಿ, ಮೈಸೂರು ರಾಜ್ಯದ ಕಮಿಷನರ್ ನಾಗರಾಜರಾಯರ ಗುಂಡೇಟಿನಿಂದ ಹುತಾತ್ಮರಾದ ರಾಮಸ್ವಾಮಿ ಅವರ 76ನೇ ವರ್ಷದ ಪುಣ್ಯಸ್ಮರಣೆಯನ್ನು ಯುವ ಭಾರತ್ ಸಂಘಟನೆ ವತಿಯಿಂದ ರಾಮಸ್ವಾಮಿ ವೃತ್ತದಲ್ಲಿ ಮಾಡಲಾಯಿತು.

ಈ ಸಂದರ್ಭದಲ್ಲಿ ವೀರ ಹುತಾತ್ಮ ರಾಮಸ್ವಾಮಿ ಅವರ ಸ್ಮಾರಕಕ್ಕೆ ಮೇಯರ್ ಶಿವಕುಮಾರ್ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಹಾರ್ಡ್ವಿಕ್ ಕಾಲೇಜಿನ 17ವರ್ಷದ ಯುವಕ ರಾಮಸ್ವಾಮಿ ತನ್ನ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳಲು ಸಿಹಿಪೊಟ್ಟಣದೊಂದಿಗೆ ಸಹಪಾಠಿಗಳನ್ನು ಭೇಟಿ ಮಾಡಲು ಬಂದಾಗ, ಅವರೆಲ್ಲಾ ವಿದ್ಯಾರ್ಥಿ ಚಳವಳಿಯಲ್ಲಿ ಭಾಗವಹಿಸಿದ್ದಾರೆಂಬ ವಿಷಯ ತಿಳಿದು, ಫೈವ್‌ಲೈಟ್ ವೃತ್ತಕ್ಕೆ ತೆರಳಿದರು.

ಮೈಸೂರು ರಾಜ್ಯಕ್ಕೆ ಸ್ವಾತಂತ್ರ್ಯ ಸಿಗಬೇಕೆಂದು ವೃತ್ತದ ಕಂಬವನ್ನೇರಿ ಪ್ರಪ್ರಥಮ ಬಾರಿಗೆ ಭಾರತದ ರಾಷ್ಟ್ರ ಧ್ವಜವನ್ನು ಹಾರಿಸಿ, ಜೈ ಹಿಂದ್ ಘೋಷಣೆ ಕೂಗುತ್ತಿರುವಾಗ ಮೈಸೂರು ರಾಜ್ಯದ ಕಮಿಷನರ್ ನಾಗರಾಜರಾಯರ ಗುಂಡೇಟಿನಿಂದ ಬಾಣಾವರದ ರಾಮಸ್ವಾಮಿ ಹುತಾತ್ಮರಾದರು. ರಾಮಸ್ವಾಮಿ ಸರ್ಕಲ್ ಎಲ್ಲರಿಗೂ ಚಿರಪರಿಚಿತ ಆದರೆ ರಾಮಸ್ವಾಮಿಯ ಬಲಿದಾನ, ತ್ಯಾಗ ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ. ಹಾಗಾಗಿ



ನಗರಪಾಲಿಕೆ ವತಿಯಿಂದ ಬಾಣಾವರದ ರಾಮಸ್ವಾಮಿಯವರ ಮಾಹಿತಿಯ ನಾಮಫಲಕಗಳನ್ನು ನಗರ ಪಾಲಿಕೆಯ ವತಿಯಿಂದ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು. ಖಾಸಗಿ ಪ್ರಾಯೋಜಕತ್ವದಲ್ಲಿ ರಾಮಸ್ವಾಮಿ ವೃತ್ತದ ಉದ್ಯಾನ ಅಭಿವೃದ್ಧಿಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಯೋಜನೆ ರೂಪಿಸಲಾಗುವುದು ಎಂದರು.

ಮಾಜಿ ಶಾಸಕ ಎಲ್. ನಾಗೇಂದ್ರ ಮಾತನಾಡಿ, ಭಾರತವನ್ನು ಒಗ್ಗೂಡಿಸಲು ಸರ್ದಾರ್ ವಲ್ಲಭಭಾಯಿ ಪಟೇಲರು ರಚಿಸಿದ ಭಾರತ ಒಕ್ಕೂಟಕ್ಕೆ ನಮ್ಮ ಮೈಸೂರು ಸಂಸ್ಥಾನದ ಮಹಾರಾಜರು ಮೊದಲು ಬೆಂಬಲ ವ್ಯಕ್ತಪಡಿಸಿದ್ದು ಎಂಬುದು ನಮ್ಮ ಮೈಸೂರಿಗರಿಗೆ ಹೆಮ್ಮೆಯ ವಿಚಾರ. ಮದ್ರಾಸ್ ಸರ್ಕಾರದ ಇಬ್ಬರು ಮಂತ್ರಿಗಳ ತಾರತಮ್ಯ, ವಿಳಂಬ ನೀತಿಯಿಂದಾಗಿ ನಮ್ಮ ಮೈಸೂರು ರಾಜ್ಯ ಭಾರತ ಒಕ್ಕೂಟಕ್ಕೆ ಸೇರುವುದು ವಿಳಂಬವಾಯಿತು. ಈ ಹಿನ್ನೆಲೆಯಲ್ಲಿ 70ದಿನಗಳು ನಡೆದ ಹೋರಾಟದಲ್ಲಿ ರಾಮಸ್ವಾಮಿ ಅವರೊಂದಿಗೆ ಕಡಕೊಳದ ತೋರನಾಯಕ ಮತ್ತು ರಂಗ ಸಹ ಹುತಾತ್ಮರಾಗಿದ್ದಾರೆ. ದೇಶದ ಸ್ವಾತಂತ್ರ್ಯಕ್ಕಾಗಿ ವಿದ್ಯಾರ್ಥಿ ಚಳಿವಳಿಯಲ್ಲಿ ಪ್ರಾಣತೆತ್ತ ಹುತಾತ್ಮರ ಸ್ಮರಿಸಬೇಕಿದೆ. ಹಾಗಾಗಿ ಮೈಸೂರು ರಾಜ್ಯ ಕರ್ನಾಟಕ ರಾಜ್ಯವಾಗಿ ರಚನೆಗೊಂಡು 50ರ ಸಂಭ್ರಮ ಸಮಾರಂಭದಲ್ಲಿ ರಾಮಸ್ವಾಮಿರವರ ಜೀವನಚರಿತ್ರೆ, ತ್ಯಾಗ, ಹೋರಾಟ ಸೇರಿದಂತೆ ಮೈಸೂರಿನ ಮಹಾತ್ಮರನ್ನು ಸ್ಮರಿಸುವ ಕಾರ್ಯಕ್ರಮಗಳನ್ನು ಕರ್ನಾಟಕ ಸರ್ಕಾರ ಆಯೋಜಿಸಲಿ ಎಂದು ಆಗ್ರಹಿಸಿದರು.

ಜೀವಧಾರ ರಕ್ತನಿಧಿ ಕೇಂದ್ರದ ಗಿರೀಶ್ ಮಾತನಾಡಿ, ರಾಮಸ್ವಾಮಿ ವೃತ್ತದ ಉದ್ಯಾನ ನಿರ್ವಹಣೆ ಮತ್ತು ರಾಮಸ್ವಾಮಿ ಭಾವಚಿತ್ರ ನಾಮಫಲಕ ಅನಾವರಣಕ್ಕೆ ನಗರಪಾಲಿಕೆಯೊಂದಿಗೆ ಸಹಕರಿಸಿ, ಪ್ರಾಯೋಜಕತ್ವವನ್ನು ಜೀವಧಾರ ಸಂಸ್ಥೆ ಪಡೆಯಲು ಉತ್ಸುಕವಾಗಿದೆ ಎಂದರು. ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ ರಾವ್, ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ನಗರಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಮಾಜಿ ಸದಸ್ಯರಾದ ಎಂ.ಡಿ.ಪಾರ್ಥಸಾರಥಿ, ಜಗದೀಶ್, ಸಾಹಿತಿ ಪುಷ್ಪಾ ಅಯ್ಯಂಗಾರ್, ಯುವ ಭಾರತ್ ಸಂಘಟನೆ ಸಂಚಾಲಕ ಅಜಯ್ ಶಾಸ್ತ್ರಿ, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಚರಣ್, ಕೆಆರ್‌ಎಸ್ ವಿಜಯ್ ಕುಮಾರ್, ವಿಘ್ನೇಶ್ವರ ಭಟ್, ವೆಂಕಟರಾಮ್, ಪ್ರಹ್ಲಾದ್ ರಾವ್, ಸುಚೀಂದ್ರ, ಶರತ್ ಭಂಡಾರಿ, ಭೈರತ್ತಿ ಲಿಂಗರಾಜು, ಸೂರಜ್, ಸದಾಶಿವ, ಚಂದ್ರು ಇನ್ನಿತರರು ಉಪಸ್ಥಿತರಿದ್ದರು.

ತಮಿಳುನಾಡಿಗೆ ನೀರು ಬಿಡುವಂತೆ ಆದೇಶ ವಿರೋಧಿಸಿ

ಮೈಸೂರು–ಮಳವಳ್ಳಿ ರಸ್ತೆ ತಡೆದು ರೈತರ ಪ್ರತಿಭಟನೆ



ಬನ್ನೂರು, ಸೆ.13– ತಮಿಳುನಾಡಿಗೆ ಮತ್ತೆ 15 ದಿನಗಳ ಕಾಲ 5 ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಕಾವೇರಿ ನಿರ್ವಹಣಾ ಸಮಿತಿ ನೀಡಿರುವ ತೀರ್ಮಾನವನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ(ಮೂಲ ಸಂಘಟನೆ)ದ ವತಿಯಿಂದ ಸಂತೇಮಾಳದ ಬಸವೇಶ್ವರ ವೃತ್ತದ ಬಳಿ ಮೈಸೂರು–ಮಳವಳ್ಳಿ ಮುಖ್ಯ ರಸ್ತೆಯಲ್ಲಿ ವಾಹನ ತಡೆದು ಮೇಣದ ಬತ್ತಿ ಹಿಡಿದು ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ(ಮೂಲ ಸಂಘಟನೆ)ದ ನಾರಾಯಣ್ ಮಾತನಾಡಿ, ಇದೀಗ ನೀರಿಲ್ಲದೇ ರಾಜ್ಯದ ರೈತಾಪಿ ವರ್ಗ ಬೆಳೆ ಬೆಳೆಯಲು ಮೀನಾ–ಮೇಷ ಎಣಿಸುವಂತಾಗಿದೆ ಕಾವೇರಿ ನಿರ್ವಹಣಾ ಸಮಿತಿ ನೀಡಿರುವ ತೀರ್ಮಾನ ಅವೈಜ್ಞಾನಿಕವಾಗಿದ್ದು, ರಾಜ್ಯದ ಜನರಿಗೆ ವಿಷಉಣಿಸಲು ಮುಂದಾಗಿದೆ ಎಂದರು.

ರಾಜ್ಯ ಸರ್ಕಾರ ಏನಾದರೂ ನೀರು ಬಿಡಲು ಮುಂದಾದಲ್ಲಿ ಮುಂದೆ ಆಗುವ ಅನಾಹುತಗಳಿಗೆ ರಾಜ್ಯ ಸರ್ಕಾರವೇ ನೇರ ಹೊಣೆಯಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈಗಾಗಲೇ ಅಣೆಕಟ್ಟೆಯಿಂದ ತಮಿಳುನಾಡಿಗೆ ನೀರನ್ನು ಬಿಡಲಾಗಿದೆ. ಕಾವೇರಿ ನೀರಿನ ಸಮಸ್ಯೆ ಮಂಡ್ಯ ಭಾಗದ ರೈತರಿಗೆ ಮಾತ್ರವೇ ಅಲ್ಲ. ಮೈಸೂರು ಬೆಂಗಳೂರಿನ ಜನಕ್ಕೂ ಕಾವೇರಿಯೇ ಮೂಲ. ಕಾವೇರಿ ಆಶ್ರಿತ ಜನರು ಇದನ್ನು ಪ್ರತಿಭಟಿಸಲು ಮುಂದಾಗದಿದ್ದರೆ ಮುಂದಿನ ದಿನಗಳಲ್ಲಿ ಸರ್ಕಾರ ಕೈ ಕಾಲು ಒರೆಸಿಕೊಳ್ಳಲು ಟಿಶ್ಯು ಪೇಪರ್ ನೀಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿ, ಕಾವೇರಿ ನಿರ್ವಹಣಾ ಸಮಿತಿ ವಿರುದ್ಧ ಧಿಕ್ಕಾರ ಕೂಗಿದರು.

ಕಾವೇರಿ ನಿರ್ವಹಣಾ ಸಮಿತಿ ರಾಜ್ಯದ ವಾಸ್ತವಾಂಶವನ್ನು ಪರಿಗಣಿಸುತ್ತಿಲ್ಲ. ರಾಜ್ಯ ಸರ್ಕಾರ ಕಾವೇರಿ ನಿರ್ವಹಣಾ ಸಮಿತಿಗೆ ಸಮರ್ಪಕವಾಗಿ ಮಾಹಿತಿಯನ್ನು ನೀಡುವಲ್ಲಿಯೂ ವಿಫಲವಾಗಿದೆ. ಕೂಡಲೇ ಸಮಿತಿಯು ವಾಸ್ತವಾಂಶವನ್ನು ಪರಿಗಣಿಸಿ ರಾಜ್ಯದ ಜನರಿಗೆ ಅನ್ಯಾಯ ಮಾಡುವ ಕೆಲಸವನ್ನು ಕೈಬಿಡಬೇಕೆಂದು ಆಗ್ರಹಿಸಿದರು. ಇಲ್ಲದೇ ಹೋದಲ್ಲಿ ಮುಂದಿನ ದಿನಗಳಲ್ಲಿ ಊರುಗಳನ್ನು ಬಂದ್ ಮಾಡಿ ರೈತರು ರಸ್ತೆಗಿಳಿದು ಉಗ್ರ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಅತ್ತಹಳ್ಳಿ ರಾಜು, ಎಂ.ವಿ.ಕೃಷ್ಣಪ್ಪ, ಕೃಷ್ಣೇಗೌಡ, ಪಾರ್ಥ, ವಾಲಿಯೂರು ರಾಜಣ್ಣ, ಚೇತನ್, ಚಿನ್ನಸ್ವಾಮಿ, ನಾಗರಾಜು, ಆನಂದ, ಚಾಮನಹಳ್ಳಿ ರಂಗಸ್ವಾಮಿ, ಮಾದೇವು, ಜಯರಾಂ, ಶ್ರೀನಿವಾಸ್, ಸತೀಶ್ ಸೇರಿದಂತೆ ಪ್ರಮುಖರು ಇದ್ದರು.

ನಾಳೆ ಹೆಚ್.ಡಿ.ಕೋಟೆಯ ಕೆಲವೆಡೆ ವಿದ್ಯುತ್ ವ್ಯತ್ಯಯ

ಹೆಚ್.ಡಿ.ಕೋಟೆ: ಹಂಪಾಪುರ ವಿದ್ಯುತ್ ವಿಸ್ತರಣಾ ಕೇಂದ್ರದ ಹಂಪಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ, ಹಂಪಾಪುರ, ಕಂಚಮಳ್ಳಿ, ಹೊಂಬರಗಳ್ಳಿ, ಮಾದಾಪುರ, ಕೆ.ಬೆಳತ್ತೂರು, ಮನಗನಹಳ್ಳಿ, ಬಾಚೇಗೌಡನಹಳ್ಳಿ, ಸುತ್ತಮುತ್ತಲಿನ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿ ಸೆ.15 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6ಗಂಟೆವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ ಎಂದು ಹೆಚ್.ಡಿ. ಕೋಟೆಯ ಚೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಚಂದುಕುಮಾರ್ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಡಯಾಂಡಹಳ್ಳಿ ಡೇರಿಗೆ 6.37 ಲಕ್ಷ ರೂ. ನಿವ್ವಳ ಲಾಭ



ತಿ.ನರಸೀಪುರ.ಸೆ.13– ತಲಕಾಡು ವಡಯಾಂಡಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘವು ಪ್ರಸಕ್ತ ಸಾಲಿನಲ್ಲಿ 6,37,463 ರೂ.ಗಳ ನಿವ್ವಳ ಲಾಭ ಗಳಿಸಿ ಯಶಸ್ವಿಯಾಗಿ ಮುನ್ನಡೆಯುತ್ತಿದೆ ಎಂದು ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘ ಒಕ್ಕೂಟದ ಹಿರಿಯ ಮಾರ್ಗ ವಿಸ್ತರಣಾಧಿಕಾರಿ ಆರ್. ಪ್ರಮೋದ್ ಹೇಳಿದರು.

ತಲಕಾಡಿನ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ಬುಧವಾರ ನಡೆದ 2022–23ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, 1992–93ರಲ್ಲಿ ಆರಂಭಗೊಂಡ ಸಹಕಾರ ಸಂಘವು 32 ವರ್ಷಗಳಷ್ಟು ಹಳೆಯ ಸಂಘವಾಗಿದ್ದು ಆರಂಭದಿಂದಲೂ ಲಾಭದಾಯಕವಾಗಿ ಮುನ್ನಡೆಯತ್ತಾ ಬಂದಿದೆ ಎಂದರು.

2022–23ನೇ ಸಾಲಿನಲ್ಲಿ ಸಹಕಾರ ಸಂಘವು ರೈತರಿಂದ 1,65,763 ರೂ.ಗಳ ಹಾಲನ್ನು ಖರೀದಿಸಿ ರೈತರಿಗೆ ಹಣ ಬಟವಾಡೆ ಮಾಡಿದೆ, ರೈತರಿಂದ ಖರೀದಿ ಮಾಡಿದ ಹಾಲನ್ನು 1,30,31,264 ರೂ.ಗಳಿಗೆ ಮಾರಾಟ ಮಾಡಲಾಗಿದೆ. ಸ್ಥಳೀಯವಾಗಿ ಮಾರಾಟ ಮಾಡಿದ ಹಾಲಿನ ಬಾಬ್ತು ಹಣ 18,34,723 ರೂ.ಗಳನ್ನು ಸಂಘದ ಲೆಕ್ಕಕ್ಕೆ ಜಮಾ ಮಾಡಲಾಗಿದೆ. ಸಂಘಕ್ಕೆ ಬಂದಿರುವ ನಿವ್ವಳ ಲಾಭದ ಪೈಕಿ 3,03,398 ರೂ.ಗಳನ್ನು ರೈತರಿಗೆ ಬೋನಸ್ ರೂಪದಲ್ಲಿ ನೀಡಲಾಗುತ್ತದೆ ಎಂದರು.

ಸಂಘದ ಅಧ್ಯಕ್ಷ ಟಿ.ಆರ್.ನರೇಂದ್ರ ಮಾತನಾಡಿದರು. ಇದೇ ವೇಳೆ ಸಂಘಕ್ಕೆ15,797 ಲೀಟರ್ ಹಾಲು ಸರಬರಾಜು ಮಾಡಿದ ಶಿವಬಸಪ್ಪ 10,853 ಲೀಟರ್ ಸರಬರಾಜು ಮಾಡಿದ ಆರ್.ಮಹೇಂದ್ರ ಹಾಗೂ 9721 ಲೀಟರ್ ಸರಬರಾಜು ಮಾಡಿದ ಹೂವಯ್ಯ ಅವರಿಗೆ ಬಹುಮಾನ ನೀಡಲಾಯಿತು.

ಸಂಘದ ಉಪಾಧ್ಯಕ್ಷ ವಿ.ಎಸ್.ಗಣೇಶ್, ನಿರ್ದೇಶಕರಾದ ಟಿ.ಆರ್.ರಂಗರಾಮು, ಎಂ.ಮಹದೇವು, ಟಿ.ವಿ.ಕೃಷ್ಣೇಗೌಡ, ಟಿ.ವಿ. ವೆಂಕಟೇಶ್, ಟಿ.ಸಿ.ಮಹದೇವ, ಬಸವಣ್ಣ (ಬಂಗಾರು), ಹೂವಯ್ಯ, ರತ್ನಮ್ಮ, ಕಮಲಮ್ಮ ಕಾರ್ಯ ನಿರ್ವಹಣಾಧಿಕಾರಿ ಟಿ.ಪಿ.ಕೃಷ್ಣ, ಪರಮೇಶ,ಜಿ.ಮಹೇಶ್ ಮತ್ತಿತರರಿದ್ದರು.

ಬಡವರ ಜಮೀನು ರಕ್ಷಿಸುವಂತೆ ಆಗ್ರಹಿಸಿ ದಸಂಸ ಪ್ರತಿಭಟನೆ



ಹುಣಸೂರು, ಸೆ.13– ಬಡವರ ಜಮೀನನ್ನು ಅತಿಕ್ರಮಿಸಿ ಮೋಸ ಮಾಡಲು ಹೊರಟಿರುವ ದುಷ್ಟರನ್ನು ಪೊಲೀಸರು ಬಂಧಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ತಾಲೂಕು ದಸಂಸ ವತಿಯಿಂದ ನಗರದ ಸಂವಿಧಾನ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು.

ದಸಂಸ ಕಾರ್ಯಕರ್ತರು ನಗರದ ಸಂವಿದಾನ ಸರ್ಕರ್‌ನಲ್ಲಿ ಸಮಾವೇಶಗೊಂಡು ಬಡವರಿಗೆ ಅನ್ಯಾಯ ಮಾಡಿ ಜಮೀನನು ಅತಿಕ್ರಮಿಸಿ ಅಟ್ಟಹಾಸಗೈಯುತ್ತಿರುವ ದುಷ್ಟರನ್ನು ಬಂಧಿಸಿ ಬಡವರಿಗೆ ನ್ಯಾಯ ನೀಡುವಂತೆ ಆಗ್ರಹಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ದಲಿತ ಮುಖಂಡ ಹೊಸಕೋಟೆ ಸೋಮಯ್ಯ, ತಾಲೂಕಿನ ಹನಗೋಡು ಹೋಬಳಿ ಚೆನ್ನಸೋಗೆ ಗ್ರಾಮ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ಬಡವರ ಆಸ್ತಿಯನ್ನು ಅತಿಕ್ರಮಣ ಮಾಡಿಕೊಂಡು ಲಪಟಾಯಿಸುತ್ತಿದ್ದಾರೆ. ಇವರ ಮೇಲೆ ಪೊಲೀಸರು ಪ್ರಕರಣ ದಾಖಲಿಸಿ, ಬಂಧಿಸಿ ನ್ಯಾಯ ಒದಗಿಸುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬೆಂಕಿ ಮಹದೇವ, ಸತೀಶ್, ದೇವರಾಜು, ಶ್ರೀನಿವಾಸ್, ಗಣೇಶ್, ತಾಯಮ್ಮ, ಸಿ.ಎನ್.ದೇವಮ್ಮ ಸೇರಿದಂತೆ ಅನೇಕರು ಭಾಗವಹಿಸಿದ್ದರು.

3.80 ಲಕ್ಷ ರೂ. ಲಾಭದಲ್ಲಿ ಹೆಮ್ಮರಗಾಲ ಕೃಷಿ ಸಹಕಾರ ಸಂಘ



ನಂಜನಗೂಡು, ಸೆ.13– ತಾಲೂಕಿನ ಹೆಮ್ಮರಗಾಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವು 3.80 ಲಕ್ಷ ರೂ.ಲಾಭದಲ್ಲಿ ಮುನ್ನಡೆಯುತ್ತಿದೆ ಎಂದು ಸಹಕಾರ ಸಂಘದ ಅಧ್ಯಕ್ಷ ಪುಟ್ಟರಾಜನಾಯಕ ಹೇಳಿದರು.

ತಾಲೂಕಿನ ಹೆಮ್ಮರಗಾಲ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘವು ಈಗಾಗಲೇ 1,180 ಸದಸ್ಯರನ್ನು ಹೊಂದುವ ಮೂಲಕ ರೈತರಿಗೆ ನೆರವಾಗುತ್ತಿದೆ, ಅಲ್ಲದೆ ರೈತರಿಗೆ 3 ಲಕ್ಷವರೆಗೆ ಬಡ್ಡಿ ರಹಿತ ಸಾಲ ನೀಡಿ ರೈತರ ಕೃಷಿ ಚಟುವಟಿಕೆಗಳಿಗೆ ನೆರವು ನೀಡುತ್ತಿದೆ, ಜೊತೆಗೆ ಮಹಿಳಾ ಸ್ವಸಹಾಯ ಸಂಘಗಳಿಗೆ ಸಾಲ ವಿತರಣೆ ಮಾಡುವ ಮೂಲಕ ಲಾಭದಲ್ಲಿ ಸಾಗಿದೆ. ಸಂಘದ ಸದಸ್ಯರಿಗೆ ಮತ್ತಷ್ಟು ನೆರವು ನೀಡುವ ಉದ್ದೇಶದಿಂದ ಮುಂದಿನ ವರ್ಷದಿಂದ ಪಶು ಸಂಗೋಪನೆಗೂ ಸಹ ಸಾಲ ವಿತರಣೆ ಮಾಡಲು ನಿರ್ಧರಿಸಲಾಗಿದೆ. ಅಲ್ಲದೆ ಈವರೆಗೆ ರೈತರಿಗೆ ನೀಡಲಾಗುತ್ತಿದ್ದ ಸಾಲವನ್ನು 3 ಲಕ್ಷದಿಂದ 5 ಲಕ್ಷಕ್ಕೆ ಏರಿಕೆ ಮಾಡಲಾಗಿದೆ ಎಂದರು.

ಮಾಜಿ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ಸೋಮಣ್ಣ ಮಾತನಾಡಿ, ರೈತರು ಸಕಾಲಕ್ಕೆ ಸಾಲ ಮರುಪಾವತಿ ಮಾಡಿದಲ್ಲಿ ಸಂಘಕ್ಕೆ ಬ್ಯಾಂಕ್ ಮೂಲಕ ಹೆಚ್ಚುವರಿ ಸಾಲ ದೊರಕಲಿದೆ. ಆದ್ದರಿಂದ ಸದಸ್ಯರು ಸಕಾಲಕ್ಕೆ ಸಾಲ ಮರುಪಾವತಿ ಮಾಡುವ ಮೂಲಕ ಸಂಘದೊಂದಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಉಪಾಧ್ಯಕ್ಷ ಪುಟ್ಟಮಾದಯ್ಯ, ವೃಷಭೇಂದ್ರಪ್ಪ, ಮೀನಾಕ್ಷಮ್ಮ, ನಾಗರಾಜು, ಕೃಷ್ಣ, ಮಹೇಶ್ ಕುಮಾರ್, ಶಿವನಾಗೇಗೌಡ, ಮಹದೇವು, ಪುಟ್ಟರಾಜು, ಕಾರ್ಯದರ್ಶಿ ಮುದ್ದುಮಾದಸ್ವಾಮಿ ಸೇರಿದಂತೆ ಹಲವಾರು ಪ್ರಮುಖರು ಇದ್ದರು.



ಕರ್ನಾಟಕ ಛಾಯಾಗ್ರಾಹಕರ ಸಂಘದ ವತಿಯಿಂದ ಬೆಂಗಳೂರಿನ ಅರಮನೆ ಮೈದಾನದಲ್ಲಿ ಇತ್ತೀಚೆಗೆ ನಡೆದ ವಸ್ತುಪ್ರದರ್ಶನದಲ್ಲಿ ಪಿರಿಯಾಪಟ್ಟಣ ತಾಲೂಕು ಛಾಯಾಗ್ರಾಹಕರ ಸಂಘದ ಹಿರಿಯ ಛಾಯಾಗ್ರಾಹಕರಾದ ಸುಜ್ಞಾನಮೂರ್ತಿ ಹಾಗೂ ಕೆ.ಎಸ್.ಲೋಕೇಶ್ ಅವರಿಗೆ 'ಗುರುವಂದನಾ ಪ್ರಶಸ್ತಿ' ನೀಡಿ ಗೌರವಿಸಲಾಯಿತು. ಸಂಘದ ಅಧ್ಯಕ್ಷ ಮೋಹನ್ ಮತ್ತು ಪದಾಧಿಕಾರಿಗಳು ಹಾಜರಿದ್ದರು.

ಸರ್ಕಾರಿ ಉಪಕರಣ, ತರಬೇತಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್

ಮಾಜಿ ಶಾಸಕರ ಮನವಿಗೆ ಸ್ಪಂದಿಸಿದ ಸಾರಿಗೆ ಸಚಿವರು

ಹುಣಸೂರು,ಸೆ.13– ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರಗಳಲ್ಲಿ ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಪಾಸ್ ನೀಡಲು ಸಾರಿಗೆ ಸಚಿವರು ಒಪ್ಪಿಗೆ ನೀಡಿ ಆದೇಶ ಹೊರಡಿಸಿದ್ದಾರೆ ಎಂದು ಮಾಜಿ ಶಾಸಕ ಎಚ್.ಪಿ.ಮಂಜುನಾಥ್ ತಿಳಿಸಿದರು.

ಮೈಸೂರು ಮತ್ತು ಹುಣಸೂರಿನ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರಗಳಲ್ಲಿ ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಅಡಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಎಚ್.ಪಿ.ಮಂಜುನಾಥ್ ಅವರನ್ನು ಕಳೆದ ಭಾನುವಾರ ಭೇಟಿ ಮಾಡಿ ನಮಗೆ ಸರ್ಕಾರದಿಂದ ಉಚಿತ ಅಥವಾ ರಿಯಾಯಿತಿ ದರದ ಬಸ್‌ಪಾಸ್ ಕೊಡಿಸಿಕೊಡಬೇಕೆಂದು ಮನವಿ ಪತ್ರ ಸಲ್ಲಿಸಿದ್ದರು.

ಎಚ್.ಪಿ.ಮಂಜುನಾಥ್ ಅವರು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಅವರನ್ನು ಭೇಟಿ ಮಾಡಿ ಮೈಸೂರು ಮತ್ತು ಹುಣಸೂರು ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರಗಳಲ್ಲಿ ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಅಡಿಯಲ್ಲಿ ನಿರ್ವಹಿಸುತ್ತಿರುವ ಡಿಪ್ಲೊಮೊ ಕೋರ್ಸ್‌ಗಳು, ವಿಟಿಯು ಮಾನ್ಯತೆ ಪಡೆದಿರುವ ಎಂ.ಟೆಕ್ ಕೋರ್ಸ್‌ಗಳು, ಮುಖ್ಯಮಂತ್ರಿಗಳ ಕೌಶಲಾಭಿವೃದ್ಧಿ ಯೋಜನೆಯಡಿಯಲ್ಲಿ ಬರುವ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ. ಪಿರಿಯಾಪಟ್ಟಣ, ಕೆ.ಆರ್. ನಗರ, ಎಚ್.ಡಿ.ಕೋಟೆ, ಸರಗೂರು, ಸಾಲಿಗ್ರಾಮ ತಾಲೂಕಿನ ಕಡುಬಡತನದ ಕೂಲಿ ಕಾರ್ಮಿಕರ ಮಕ್ಕಳು ತರಬೇತಿ ಪಡೆಯುತ್ತಿದ್ದು, ಅವರಿಗೆ ಉಚಿತ ಬಸ್ ಪಾಸ್ ನೀಡುವಂತೆ ಮನವಿ ಮಾಡಿದರು.

ಮನವಿಗೆ ಸ್ಪಂದಿಸಿದ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಅವರು, ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆಯೊಂದಿಗೆ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಲು ಲಿಖಿತ ಪತ್ರದ ಮೂಲಕ ಆದೇಶ ನೀಡಿದ್ದಾರೆಂದು ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ತಿಳಿಸಿದ್ದಾರೆ.

ಸ್ವಂತ ಕಟ್ಟಡದಲ್ಲಿ ಡೇರಿ ಕಾರ್ಯ ನಿರ್ವಹಣೆಗೆ ಕ್ರಮ



ಕಂಪಲಾಪುರ, ಸೆ.13– ಯಾವುದೇ ಸಹಕಾರ ಸಂಘಗಳು ಸ್ಥಾಪನೆಯಾಗುವುದು ಎಷ್ಟು ಮುಖ್ಯವೋ ಅವುಗಳನ್ನು ಮುನ್ನಡೆಸಿಕೊಂಡು ಹೋಗುವುದೂ ಅಷ್ಟೇ ಮುಖ್ಯ ಎಂದು ಸಲಹೆ ನೀಡಿದ ಕಂಪಲಾಪುರ ಕೊಪ್ಪಲು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಕೆ.ಎಂ.ಲಕ್ಷ್ಮಣ್, ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಸಂಘವನ್ನು ಸ್ವಂತ ಕಟ್ಟಡದಲ್ಲಿ ನಡೆಸಲು ಕ್ರಮಕೈಗೊಳ್ಳಲಾಗುವುದು ಎಂದರು.

ಸಂಘದ ಆವರಣದಲ್ಲಿ ನಡೆದ ವಾರ್ಷಿಕ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘದಲ್ಲಿ ಒಟ್ಟು 130 ಮಂದಿ ಷೇರುದಾರರಿದ್ದು 2022–23 ನೇ ಸಾಲಿಗೆ ಸಂಘವು 3.88 ರೂ. ಲಕ್ಷ ನಿವ್ವಳ ಲಾಭಗಳಿಸಿದೆ. ಹಾಗೆಯೇ ಹಲವು ವರ್ಷಗಳಿಂದ ಸಂಘವನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಿಕೊಂಡು ಬರಲಾಗುತ್ತಿದೆ. ಇದಕ್ಕೆ ವಾರ್ಷಿಕ 24 ಸಾವಿರ ಬಾಡಿಗೆ ನೀಡಲಾಗುತ್ತಿದೆ. ಆದ್ದರಿಂದ ಸ್ವಂತ ಕಟ್ಟಡ ಕಟ್ಟುವ ಗುರಿ ಇದ್ದು ಈಗಾಗಲೇ ಒಂದೂವರೆ ಗುಂಟೆ ಜಾಗವನ್ನು ಖರೀದಿ ಮಾಡುವ ಪ್ರಸ್ತಾವನೆಯಿದೆ ಎಂದರು.

ಪಿರಿಯಾಪಟ್ಟಣ ಟಿಪಿಸಿಎಂಎಸ್ ನಿರ್ದೇಶಕ ಕೆ.ಕುಮಾರ್ ಮಾತನಾಡಿದರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಲೋಕೇಶ್ ವಾರ್ಷಿಕ ವರದಿ ಮಂಡಿಸಿದರು. ಸಂಘದ ಮಾಜಿ ಅಧ್ಯಕ್ಷ ಗುರುಸಿದ್ದಪ್ಪ ಮಾತನಾಡಿ, ಕಳೆದ ವಾರ್ಷಿಕ ಸಭೆಯಲ್ಲಿ ಹೆಚ್ಚು ದುಂದುವೆಚ್ಚ ಮಾಡಿದ್ದೀರಿ, ಸಂಘ ಲಾಭಗಳಿಸಬೇಕಾದರೆ ಹಣ ಪೋಲು ಮಾಡಬಾರದು ಎಂದರು.

ಸಭೆಯಲ್ಲಿ ವಿಸ್ತರಣಾಧಿಕಾರಿ ನಂದಿನಿ, ಕಂಪಲಾಪುರ ಡೇರಿ ಅಧ್ಯಕ್ಷ ನಜೀಬ್, ಮಾಜಿ ಅಧ್ಯಕ್ಷ ಕೃಷ್ಣೇಗೌಡ, ಉಪಾಧ್ಯಕ್ಷೆ ಪುಟ್ಟಮ್ಮ, ನಿರ್ದೇಶಕರಾದ ಕೆ.ಗೋಪಾಲ್, ಗಿರೀಶ್, ಸಿದ್ದಪ್ಪ, ಚನ್ನಪ್ಪ, ಚಂದ್ರ, ಕುಮಾರ್, ದಿನೇಶ್, ಸದಾನಂದ, ಶೀಲಾ ಹಾಲು ಪರೀಕ್ಷಕ ಮಂಜು ಸೇರಿದಂತೆ ನೂರಾರು ಷೇರುದಾರರು ಇದ್ದರು.

ರಸ್ತೆ ಇಲ್ಲ, ವೈದ್ಯರಿಲ್ಲ, ಬಸ್ ತಂಗುದಾಣಗಳಿಲ್ಲ, ಶೌಚಾಲಯವೂ ಇಲ್ಲ

ಜನಸಂಪರ್ಕ ಸಭೆಯಲ್ಲಿ ಜನರ ಸಮಸ್ಯೆ ಆಲಿಸಿದ ಶಾಸಕ ದರ್ಶನ್ ಧ್ರುವನಾರಾಯಣ್



ಮಲ್ಲುಂಡಿ, ಸೆ13– ರಸ್ತೆಗಳಿಲ್ಲ, ಆಸ್ಪತ್ರೆಗಳಿಲ್ಲ, ವೈದ್ಯರ ಕೊರತೆ, ಬಸ್ ತಂಗುದಾಣಗಳಿಲ್ಲ, ಶೌಚಾಲಯಗಳಿಲ್ಲ, ಮೂಲಸೌಕರ್ಯಗಳು, ನಮ್ಮ ಕಷ್ಟ ಯಾರಿಗೆ ಹೇಳೋದು ಸ್ವಾಮಿ... ಹೀಗೆ ಶಾಸಕ ದರ್ಶನ್ ಧ್ರುವನಾರಾಯಣ್ ಬಳಿ ಅವರ ಸಮಸ್ಯೆ ಹೇಳಿಕೊಂಡು ಗ್ರಾಮಸ್ಥರು ಪ್ರಶ್ನಿಸಿದರು.

ಬುಧವಾರ ನಡೆದ ಜನಸಂಪರ್ಕ ಸಭೆಯಲ್ಲಿ ಸಮೀಪದ ಹುರ ಗ್ರಾಪಂ ವ್ಯಾಪ್ತಿಯ ಯಡಹಳ್ಳಿ, ಚನ್ನಪಟ್ಟಣ, ಸಿದ್ದೇಗೌಡನಹುಂಡಿ ಗ್ರಾಮಗಳ ಜನರ ಸಮಸ್ಯೆಯನ್ನು ಶಾಸಕ ದರ್ಶನ್ ಧ್ರುವನಾರಾಯಣ್ ಆಲಿಸಿದರು.

ಆರೋಗ್ಯ ಕೇಂದ್ರವಿದ್ದರೂ ವೈದ್ಯರ ಕೊರತೆ ಇದೆ. ರಸ್ತೆಗಳ ಅಭಿವೃದ್ಧಿ ಆಗಿಲ್ಲ. ಹುರ ಗ್ರಾಮವು ಹೋಬಳಿ ಮಟ್ಟಕ್ಕೆ ತಲುಪಿದರೂ ಪ್ರಯಾಣಿಕರಿಗೆ ಬಸ್ ತಂಗುದಾಣವಿಲ್ಲದೆ ಬಿಸಿಲು–ಮಳೆಗಾಗಿ ಅಂಗಡಿಗಳ ಮುಂಭಾಗ ನಿಲ್ಲುವ ಪರಿಸ್ಥಿತಿ ಇದೆ. ಶಾಲಾ ವಿದ್ಯಾರ್ಥಿಗಳು ಬಿಸಿಲಿನಲ್ಲೇ ನಿಲ್ಲುವ ಪರಿಸ್ಥಿತಿ ಇದೆ. ಮಹಿಳಾ ಪ್ರಯಾಣಿಕರಿಗೆ ಸೂಕ್ತವಾದ ಶೌಚಾಲಯಗಳು ಇಲ್ಲದೇ ಪರದಾಡುವಂತಾಗಿದೆ ಎಂದು ಭಿನ್ನವಿಸಿಕೊಂಡರು.

ಅಹವಾಲುಗಳನ್ನು ಆಲಿಸಿ ಮಾತನಾಡಿದ ಶಾಸಕ ದರ್ಶನ್ ಧ್ರುವನಾರಾಯಣ್, ಗ್ರಾಮೀಣ ಭಾಗದ ಜನರ ಸಮಸ್ಯೆಗಳು ಹೆಚ್ಚಾಗಿವೆ. ಅವರ ಸಮಸ್ಯೆಗಳನ್ನು ಆಲಿಸುವ ಜವಾಬ್ದಾರಿ ನಮ್ಮದಾಗಿದೆ ಎಂದರು.

ಈ ಭಾಗದಲ್ಲಿ ಹೆಚ್ಚು ಜನಸಂಖ್ಯೆ ಇದ್ದು ಗ್ರಾಮದಲ್ಲಿ ನನ್ನ ಅನುದಾನದಲ್ಲಿ ಹೈಟೆಕ್ ಬಸ್ ನಿಲ್ದಾಣವನ್ನು ನಿರ್ಮಾಣ ಮಾಡಲಾಗುವುದು. ಅದೇ ರೀತಿ ಗ್ರಾಪಂ ವತಿಯಿಂದ ಪುರುಷ ಹಾಗೂ ಮಹಿಳೆಯರ ಅನುಕೂಲಕ್ಕಾಗಿ ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಡಬೇಕು ಎಂದು ಪಂಚಾಯತಿ ಅಧಿಕಾರಿಗಳಿಗೆ ಸ್ಥಳದಲ್ಲೇ ಸೂಚನೆ ನೀಡಿದರು.

ಗ್ರಾಮೀಣ ಭಾಗದ ಜನತೆಯು ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಲು ಅಧಿಕಾರಿಗಳೊಡನೆ ಪ್ರತಿ ಗ್ರಾಮಗಳಲ್ಲಿ ಜನಸಂಪರ್ಕ ಸಭೆ ನಡೆಸಿ ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆಹರಿಸಲಾಗುವುದು. ಗ್ರಾಮೀಣ ಭಾಗಗಳಲ್ಲಿ ಹಲವು ಸಮಸ್ಯೆಗಳಿವೆ. ಅವುಗಳನ್ನು ಹಂತ ಹಂತವಾಗಿ ಪರಿಹರಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದರಲ್ಲದೆ, ಚುನಾವಣೆ ಸಂದರ್ಭದಲ್ಲಿ ರಾಜ್ಯದ ಜನತೆಗೆ ನೀಡಿದ 5 ಗ್ಯಾರಂಟಿಗಳನ್ನು ಈಗಾಗಲೇ ಜಾರಿಗೆ ತರಲಾಗಿದೆ. ನಮ್ಮ ಸರ್ಕಾರ ನುಡಿದಂತೆ ನಡೆದಿದೆ ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಗ್ರಾಪಂ ಅಧ್ಯಕ್ಷೆ ತಾಯಮ್ಮ, ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠನಾಯಕ, ನಂಜನಗೂಡು ಬ್ಲಾಕ್ ಅಧ್ಯಕ್ಷ ಕುರಹಟ್ಟಿ ಕೆ.ಜಿ.ಮಹೇಶ್, ತಾಪಂ ಮಾಜಿ ಅಧ್ಯಕ್ಷನಾಗೇಶ್ ರಾಜ್, ಹಿಂದುಳಿದ ವರ್ಗದ ಜಿಲ್ಲಾಧ್ಯಕ್ಷ ಕೆಮಾರುತಿ, ಗ್ರಾಪಂ ಉಪಾಧ್ಯಕ್ಷಮಹದೇವಸ್ವಾಮಿ, ಇಒ ರಾಜೇಶ್, ಪಿಡಿಒ ನಿರ್ಮಲ, ಬಿಲ್ ಕಲೆಕ್ಟರ್ ವಿಜಯ್, ಗ್ರಾಪಂ ಮಾಜಿ ಅಧ್ಯಕ್ಷ ಶಿವಣ್ಣ, ಶಿವಪ್ಪದೇವರು, ವೀರಭದ್ರಸ್ವಾಮಿ, ದೊರೆಸ್ವಾಮಿನಾಯಕ, ಜಯರಾಂ, ಕಗ್ಗಲಿಹುಂಡಿ ಮಹದೇವು, ಸೇರಿದಂತೆ ತಾಲೂಕಿನ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಕಿಕ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೈಲರ್(ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಜವಾನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಥಾ ಚಿತ್ರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಪ್ತಸಾಗರದಾಚೆ ಎಲ್ಲೋ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಜವಾನ್ (ಹಿ)	4 ಪ್ರದರ್ಶನಗಳು
ಸಂಗಂ	
ಜವಾನ್ (ಹಿ)	4 ಪ್ರದರ್ಶನಗಳು
ಲಿಡೋ	
ಖುಷಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜವಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಸಪ್ತಸಾಗರದಾಚೆ ಎಲ್ಲೋ (ಕ): ಬೆ.10.20ಕ್ಕೆ, ಮ.1.10ಕ್ಕೆ, ರಾ.7.15ಕ್ಕೆ, ರಾ.10.05ಕ್ಕೆ, ಜವಾನ್ (ಹಿಂ): ಸಂ.4ಕ್ಕೆ.
ಸ್ಕ್ರೀನ್ 2	ಲೂಸಿಯಾ (ಕ): ಬೆ.10.05ಕ್ಕೆ, ಜೈಲರ್ (ಕ): ಮ.12.45ಕ್ಕೆ, ಜೈಲರ್ (ತ): ಮ.3.55ಕ್ಕೆ, ಖುಷಿ (ತೆ): ರಾ.7.10ಕ್ಕೆ, ಜವಾನ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 3	ದಿ ನನ್ 2 (ಇಂ): ಬೆ.10.55ಕ್ಕೆ, ರಾ.10.10ಕ್ಕೆ, ಟೋಬಿ (ಕ): ಮ.1.10ಕ್ಕೆ, ಸಪ್ತಸಾಗರದಾಚೆ ಎಲ್ಲೋ (ಕ): ಸಂ.4.05ಕ್ಕೆ, ಜವಾನ್ (ಹಿಂ): ರಾ.7ಕ್ಕೆ
ಸ್ಕ್ರೀನ್ 4	ಜವಾನ್ (ಹಿಂ): ಬೆ.9.45ಕ್ಕೆ, ಮ.1ಕ್ಕೆ, ಸಂ.6.55ಕ್ಕೆ, ರಾ.10.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.4.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ.
ಸ್ಕ್ರೀನ್ 3	ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ರೇಸುಗಳು

3ನೇ ದಿನ, ಗುರುವಾರ 14–9–2023

ಇಂದಿನ ರೇಸಿಗೆ ನಮ್ಮ ಆಯ್ಕೆ

(ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ)

I. ಸ್ಕ್ಯಾಂಡರರ್ ಪ್ಲೇಟ್ ಡಿ2–1100 ಮೀ. ರೇಟೆಡ್ 00 ರಿಂದ 25. ಮ.2.00ಕ್ಕೆ

1. ಆ್ಯನಿ ಬೊಲೆನ್ 2. ಸ್ಕೈಪ್ರಿನ್ಸಸ್ 3. ಮಾಸ್ಟರ್ ಮೈಂಡ್

II. ಸ್ಕ್ಯಾಂಡರರ್ ಪ್ಲೇಟ್ ಡಿ1–1100 ಮೀ. ರೇಟೆಡ್ 00 ರಿಂದ 25. ಮ.2.30ಕ್ಕೆ

1. ಟ್ರೆಷರ್ ಚೆಸ್ಟ್ 2. ಮೇಗಾನ್ 3. ಡಾನ್ ರೈಸಿಂಗ್

III. ರೀಜೆನ್ಸಿ ಗೋಲ್ಡ್ ಪ್ಲೇಟ್ ಡಿ2–1200 ಮೀ. ರೇಟೆಡ್ 20 ರಿಂದ 45.(NO WHIP) ಮ.3.00ಕ್ಕೆ

1 ಶೀರ್ ಬ್ಲಿಸ್ 2. ಅವಿಸಿನಾ 3 ಪೋಲರ್ ಕ್ವೀನ್

IV. ಎಂ.ಸುರೇಶ್ ಮೆಮೋರಿಯಲ್ ಟ್ರೋಫಿ–1400 ಮೀ. ರೇಟೆಡ್ 40 ರಿಂದ 65. ಮ.3.30ಕ್ಕೆ

1. ಮಾಝಿಲ್ ಟೊವ್ 2. ಐರನ್ ಕ್ಲಾಡ್ 3. ಮಿಲ್‌ಬ್ರೂಕ್

V. ಡೆನ್ನಿಸ್ ಅಂಡ್ ವೈ ಒನ್ನಿ ಜಾರ್ವಿಸ್ ಮೆಮೋರಿಯಲ್ ಕಪ್– 1600 ಮೀ. ರೇಟೆಡ್ 60 ಮತ್ತು ಮೇಲ್ವರ್ಗ ಸಂ.4.00ಕ್ಕೆ

1. ಕಿಂಗ್ ಲೂಯಿಸ್ 2. ಶುಂಭಾಂಕರ್ 3. ಪ್ರಾಮಿಸ್ ಕೆಪ್ಟ್

VI. ತಲಕಾಡು ಪ್ಲೇಟ್–1400 ಮೀ. ರೇಟೆಡ್ 20 ರಿಂದ 45. (ಮೈಸೂರ್ ಬೇಸ್ಡ್ ಹಾರ್ಸ್) ಸಂ.4.30ಕ್ಕೆ

1 ಕೂರ್ಗ್ ಜನರಲ್ 2 ನ್ಯಾಚುರಲ್ ಒನ್ 3. ಪರ್ಸಿವೇಲ್

VII. ರೀಜೆನ್ಸಿ ಗೋಲ್ಡ್ ಪ್ಲೇಟ್ ಡಿ1–1200 ಮೀ. ರೇಟೆಡ್ 20 ರಿಂದ 45.(NO WHIP) ಸಂ.5.00ಕ್ಕೆ

1. ಉಲಲಾ 2. ಮಿಚಿಲಿ ಪ್ರೈಡ್ 3. ಕೊಅಲಾ

ದಿನದ ಅತ್ಯುತ್ತಮ............................	: ಟ್ರೆಷರ್ ಚೆಸ್ಟ್
ಡಬ್ಬಲ್.......................................	: ಶೀರ್ ಬ್ಲಿಸ್, ಕಿಂಗ್ ಲೂಯಿಸ್
ಜಾಕ್‌ಪಾಟ್......................................	: 3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್..............................	: 4, 5, 6 ಮತ್ತು 7
I ಟ್ರಿಬಲ್..	: 2, 3 ಮತ್ತು 4
II ಟ್ರಿಬಲ್.......................................	: 5, 6 ಮತ್ತು 7
ಎಕ್ಸ್‌ಆಕ್ಟ್.......................................	: 1 ರಿಂದ 7

ಟಿಪ್‌ಸ್ಟರ್ ಪಿಜಿಸಿ

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀಮಾನ್ ಪ್ರೀತಮ್ ಕೆ.ಆರ್.
ನಿಧನ: 06.09.2023

ಇವರು ದಿ.05.09.2023 ರಂದು ದೈವಾಧೀನರಾಗಿದ್ದು ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಕಾರ್ಯವನ್ನು ದಿ. 15.09.2023 ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ನಮ್ಮ ಸ್ವಗೃಹ ಟಿ.ನರಸೀಪುರ ತಾ. ಸೋಸಲೆ ಹೋಬಳಿ, ಕುಳ್ಳನಕೊಪ್ಪಲು ಗ್ರಾಮ ಇಲ್ಲಿ ಏರ್ಪಡಿಸಲಾಗಿದೆ. ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ

ದುಃಖಿತಪ್ತರು: ಕುಟುಂಬವರ್ಗದವರು ಹಾಗೂ ಸ್ನೇಹಿತರು

3ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇದಿಗೆ ಮೂರು ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿ ಸದಾ ಹಸಿರಾಗಿದೆ.

ರಾಜು ಬಿ

—ಕುಟುಂಬವರ್ಗ

ಹಸಿರು ನಮ್ಮ ಉಸಿರು

ದಿ, ಮಾಡೆಲ್ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ (ನಿ)

ನಂ. 59/ಎ, ಚಾಮುಂಡಿವನಂ, ಮೈಸೂರು–08

ಪ್ರಕಟಣೆ

ದಿ, ಮಾಡೆಲ್ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ (ನಿ) ನಂ. 59/ಎ, ಚಾಮುಂಡಿವನಂ, ಮೈಸೂರು–08 ಇಲ್ಲಿನ 2022–23ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಆಡಳಿತ ಮಂಡಳಿ ಅಪ್ಪಣೆ ಮೇರೆಗೆ ದಿನಾಂಕ 17–09–2023ನೇ ಭಾನುವಾರ ಬೆಳಿಗ್ಗೆ 11.00 ಘಂಟೆಗೆ, ಮೈಸೂರು ಸಿಟಿ, ದೇವರಾಜ ಮೊಹಲ್ಲಾ, ಕೃಷ್ಣ ವಿಲಾಸ್ ರಸ್ತೆ (ಜಗನ್‌ಮೋಹನ್ ಪ್ಯಾಲೇಸ್ ಹತ್ತಿರ) ಮೈಸೂರು ಇಲ್ಲಿರುವ ಪರಿಮಳ ಹೋಟೇಲ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಈ ಸಂಘದ ಸದಸ್ಯರು ದಯಮಾಡಿ ಸಕಾಲದಲ್ಲಿ ಸಭೆಗೆ ಹಾಜರಾಗಲು ಸಂಘದ ಕಾರ್ಯದರ್ಶಿಯವರಾದ ಶ್ರೀ ಜಿ.ಎಂ. ನಿಶಾಂತ್ ರವರು ವಿನಂತಿಸಿರುತ್ತಾರೆ.

MISSING Name: Oggy



Male Dog, 3 yrs, Beagle Breed, missing since 10.9.23, 11.30am from Kuvempu Nagar C & D Block. Finders will be rewarded by Rs. 10000/-

Please Contact: 9880987889

ಕರ್ನಾಟಕ ಸರ್ಕಾರ
ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಾಸನ ಜಿಲ್ಲೆ, ಹಾಸನ

ph No:08172-239781 E-mail ID: diet.hassan@gmail.com

ಸಿ3. KPS.ಟೆಂಡರ್:02/2022–23 ದಿನಾಂಕ 13–09–2023

" ಪ್ರಕಟಣೆಗಾಗಿ "

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ತವರಪೇವರ ಕೊಪ್ಪಲು ಹಾಸನ ಇವರ ವತಿಯಿಂದ 2022–23 ನೇ ಸಾಲಿನಲ್ಲಿ ಹಾಸನ ಜಿಲ್ಲೆಯ 10 KPS ಶಾಲೆಗಳಿಗೆ ICT Digital ಉಪಕರಣಗಳನ್ನು ಸರಬರಾಜು ಮಾಡುವ ಕುರಿತು (2ನೇ ಕರೆ) ಅಲ್ಪಾವಧಿ ಇ–ಟೆಂಡರ್ ಕರೆಯಲಾಗಿದೆ. (ಟೆ.ಸಂಖ್ಯೆ:DPI/2023-24/IND0057) ಟೆಂಡರ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 20–09–2023. ಆಸಕ್ತರು ಟೆಂಡರ್‌ನಲ್ಲಿ ಭಾಗವಹಿಸಲು ಕೋರಿದೆ. ಹೆಚ್ಚಿನ ವಿವರಗಳನ್ನು (Kppp.karnataka.gov.in) ನಲ್ಲಿ ಪಡೆಯುವುದು. ಮಾಹಿತಿಗಾಗಿ ಸಂಪರ್ಕಿಸಬೇಕಾದ ಸಂಖ್ಯೆ–9448999371

ಸಹಿ/–ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ), ಡಯಟ್ ಹಾಸನ ಜಿಲ್ಲೆ, ಹಾಸನ,

ನಕಲಿಯ ಬಗ್ಗೆ ಎಚ್ಚರಿಕೆ



ಸಾರ್ವಜನಿಕ ಎಚ್ಚರಿಕೆಯ ಸೂಚನೆ

ಮಂಗಳೂರು ಗಣೇಶ ಬೀಡಿ ವರ್ಕ್ಸ್ ನ ಜನಪ್ರಿಯತೆಯನ್ನು ಬಳಸಿಕೊಂಡು ಕೆಲವು ಘಟಕಗಳು ಮತ್ತು ವ್ಯಕ್ತಿಗಳು ನಮ್ಮ ನೊಂದಾಯಿತ ಟ್ರೇಡ್‌ಮಾರ್ಕ್ ಮತ್ತು ಹಕ್ಕು ಸ್ವಾಮ್ಯವನ್ನು ಬಳಸಿಕೊಂಡು, ನಕಲಿ ಕವರ್ ಮತ್ತು ಲೇಬಲ್‌ಗಳನ್ನು ಮುದ್ರಿಸಿ, ಕಳಪೆ ಮಟ್ಟದ ಬೀಡಿಗಳನ್ನು ತಯಾರಿಸಿ ವಿತರಿಸುವುದು ಮತ್ತು ಮಾರಾಟ ಮಾಡುತ್ತಿರುವುದು ನಮ್ಮ ಗಮನಕ್ಕೆ ಬಂದಿದ್ದು, ಇದರ ಮೂಲಕ ನಮ್ಮ ಘನತೆ ಗೌರವವನ್ನು ಮಾರುಕಟ್ಟೆಯಲ್ಲಿ ಕೆಳಮಟ್ಟಕ್ಕೆ ತರುವ ಪ್ರಯತ್ನ ಇದಾಗಿದೆ. ಅಂತಹವರು ಯಾರೇ ಇದ್ದರೂ ಈ ಕೆಳಗಿನ ಕಾಯಿದೆ ಅಡಿಯಲ್ಲಿ ಕಾನೂನು ಕ್ರಮಕ್ಕೆ ಒಳಪಡುತ್ತಾರೆ.

1. **ಟ್ರೇಡ್ ಮಾರ್ಕ್ ಕಾಯಿದೆ 1999** ರ ಸೆಕ್ಷನ್ 103–108 ನ ಅಡಿಯಲ್ಲಿ ಜೈಲುವಾಸ ಹಾಗೂ ದಂಡ ವಿಧಿಸಬಹುದಾಗಿದೆ.
2. **ಕಾಪಿರೈಟ್ ಕಾನೂನು 1957** ರ ಸೆಕ್ಷನ್ 63–69 ನ ಅಡಿಯಲ್ಲಿ 6 ತಿಂಗಳ ಜೈಲುವಾಸ (ವಿಸ್ತರಿಸಬಹುದಾಗಿದೆ) ಹಾಗೂ ದಂಡ ವಿಧಿಸಬಹುದಾಗಿದೆ.
3. **IPC ಸೆಕ್ಷನ್ 420** ರ ಅಡಿಯಲ್ಲಿ 7 ವರ್ಷಗಳ ಜೈಲುವಾಸ ಹಾಗೂ ದಂಡ ವಿಧಿಸಬಹುದಾಗಿದೆ.
4. **ನಾಗರೀಕ ಕಾಯಿದೆ** ಅಡಿ ದಾವಾ ಹೂಡಿ ನಷ್ಟ ಭರ್ತಿ ವಸೂಲು ಮಾಡಬಹುದಾಗಿದೆ.

ನಮ್ಮ ನೊಂದಾಯಿತ ಟ್ರೇಡ್‌ಮಾರ್ಕ್ ಮತ್ತು ಹಕ್ಕು ಸ್ವಾಮ್ಯವನ್ನು ಉಲ್ಲಂಘನೆ ಮಾಡುವವರು ಮೇಲಿನ ಕಾಯಿದೆ ಅಡಿಯಲ್ಲಿ ಕಾನೂನು ಕ್ರಮಕ್ಕೆ ಒಳಪಡುತ್ತಾರೆ.



ತಂಬಾಕು ವೇದನಾಜನಕ ಮರಣಕ್ಕೆ ಕಾರಣವಾಗುತ್ತದೆ

11ನೇ ವರ್ಷದ ಪುಣ್ಯಸ್ಮರಣೆ



ನಿಧನ. 14.9.2012

ನೀವು ನಮ್ಮನ್ನಗಲಿ 11 ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಾಳದಲ್ಲಿ ಹಸಿರಾಗಿದೆ. ನಿಮ್ಮ ಆತ್ಮಕ್ಕೆ ಚಿರಶಾಂತಿ ಕೋರುವ

ಶತಾಯುಷಿ ಶ್ರೀಮತಿ ಶಂಭಯ್ಯ ಕೆಂಚಮ್ಮರವರು

ಎಸ್. ನಿಂಗಯ್ಯ, ಯಶೋಧ, ರಾಹುಲ್, ಶಂಭು ಹಾಗೂ ಇತರರು
ಶಂಭು ನಿಧಿ ಫಾರ್ಮ್ ಹೌಸ್,
ಶ್ರೀರಂಗರಾಜಪುರ, ಟಿ. ನರಸೀಪುರ ತಾ.